

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಜನವರಿ 12 ಗುರುವಾರ 2023

ಸಂಪುಟ: 43 | ಸಂಚಿಕೆ: 266 | ಪುಟಗಳು: 10

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4



ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಪ್ರತಿ ಮನೆಗೆ

200 ಯೂನಿಟ್ ವಿದ್ಯುತ್ ಉಚಿತ

- ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಭರವಸೆ
- ಬೆಲೆ ಏರಿಕೆಯಿಂದ ತತ್ತರಿಸಿರುವ ಜನತೆಗೆ ಕಾಂಗ್ರೆಸ್‌ನ ಕೊಡುಗೆ





ಬೆಂಗಳೂರು, ಜ.11(ಕೆಎಂಶಿ) – ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಪ್ರತಿ ಮನೆಗೆ 200 ಯೂನಿಟ್ ವಿದ್ಯುತ್ ಉಚಿತವಾಗಿ ನೀಡಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಘೋಷಿಸಿದ್ದಾರೆ.


ವಿಧಾನಸಭೆಯ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಜೊತೆಗೂಡಿ ಪ್ರಜಾಧ್ವನಿ (ಬಸ್) ಯಾತ್ರೆ ಪ್ರಾರಂಭಿಸಿ ಮಾತನಾಡಿದ ಶಿವಕುಮಾರ್, ಮೊದಲ ಚುನಾವಣಾ ಭಾಷಣದಲ್ಲೇ ಮತದಾರರ ಓಲೈಕೆಗೆ ದೊಡ್ಡ ಭರವಸೆಯನ್ನೇ ಇತ್ತಿದ್ದಾರೆ.

ದೆಹಲಿ ಹಾಗೂ ಪಂಜಾಬ್ ವಿಧಾನಸಭಾ ಚುನಾವಣೆಯಲ್ಲಿ ಆಮ್ ಆದ್ಮಿ ಪಕ್ಷ ಚುನಾವಣಾ ಪೂರ್ವ ಮತದಾರರಿಗೆ ನೀಡಿದ ಭರವಸೆಯಂತೆ ಕಾಂಗ್ರೆಸ್ ನಾಲ್ಕು ಭರವಸೆಗಳನ್ನು ನೀಡಿ ಅಧಿಕಾರಕ್ಕೆ ಬರಲು ಮುಂದಾಗಿದೆ. ಅದರ ಮೊದಲ ಭಾಗವಾಗಿ ಪ್ರತಿ ಮನೆಗೂ 200 ಯೂನಿಟ್ ವಿದ್ಯುತ್ ಅನ್ನು ಉಚಿತವಾಗಿ ನೀಡುವುದಾಗಿ ಘೋಷಣೆ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷ ಇಂದು ಆರಂಭಿಸಿದ ಪ್ರಜಾಧ್ವನಿ ಯಾತ್ರೆ ನಿಮಿತ್ತ ಚಿಕ್ಕೋಡಿಯಲ್ಲಿ ಇಂದು ನಡೆದ ಸಮಾವೇಶದಲ್ಲಿ ಮಾತನಾಡಿದ ಶಿವಕುಮಾರ್, ಬೆಲೆ ಏರಿಕೆಯಿಂದ ತತ್ತರಿಸಿರುವ ರಾಜ್ಯದ ಜನರ ಬದುಕಿನಲ್ಲಿ ಮತ್ತೆ ಬೆಳಕು ತರುವ ದೃಷ್ಟಿಯಿಂದ ಪಕ್ಷ ಈ ನಿರ್ಧಾರಕ್ಕೆ ಬಂದಿದೆ ಎಂದರು. 'ಇದೊಂದು ಐತಿಹಾಸಿಕ ದಿನ.

▶ 6ನೇ ಪುಟಕ್ಕೆ

ಹುಬ್ಬಳ್ಳಿ–ಧಾರವಾಡದಲ್ಲಿ ಇಂದು ರಾಷ್ಟ್ರೀಯ ಯುವಜನೋತ್ಸವ: ಪ್ರಧಾನಿ ಮೋದಿ ಚಾಲನೆ






ಹುಬ್ಬಳ್ಳಿ, ಜ.11– ಹುಬ್ಬಳ್ಳಿ–ಧಾರವಾಡ ಅವಳಿನಗರದಲ್ಲಿ ಐದು ದಿನ ನಡೆಯಲಿರುವ 26ನೇ ರಾಷ್ಟ್ರೀಯ ಯುವಜನೋತ್ಸವಕ್ಕೆ ನಗರದ ರೈಲ್ವೆ ಮೈದಾನದಲ್ಲಿ ಗುರುವಾರ ಸಂಜೆ 4ಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಲಿದ್ದಾರೆ. ದೆಹಲಿಯಿಂದ ವಿಶೇಷ ವಿಮಾನದಲ್ಲಿ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಗುರುವಾರ ಮಧ್ಯಾಹ್ನ 3.40ಕ್ಕೆ ಆಗಮಿಸಲಿರುವ ಪ್ರಧಾನಿ ಮೋದಿ, ಏಳು ಕಿ.ಮೀ. ದೂರದಲ್ಲಿರುವ ರೈಲ್ವೆ ಮೈದಾನಕ್ಕೆ ಝಡ್‌ಪ್ಲಸ್ ಭದ್ರತೆಯೊಂದಿಗೆ ತೆರಳಲಿದ್ದಾರೆ. ಸಂಜೆ 4ಕ್ಕೆ ವೇದಿಕೆ ಕಾರ್ಯಕ್ರಮ ಆರಂಭವಾಗಿ ಸಂಜೆ 5.15ಕ್ಕೆ ಮುಕ್ತಾಯವಾಗಲಿದ್ದು, ಪ್ರಧಾನಿಯವರು ಅರ್ಧ ಗಂಟೆ ಭಾಷಣ ಮಾಡಲಿದ್ದಾರೆ. ಕಾರ್ಯಕ್ರಮದ ಹಿನ್ನೆಲೆಯಲ್ಲಿ ಕಲಾವಿದರ ತಾಲೀಮು ನಡೆಯಿತು.

ರಾಜ್ಯಪಾಲ ಥಾವರಚಂದ್ ಗೆಹ್ಲೋತ್, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ, ಅನುರಾಗ್ ಠಾಕೂರ್, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಚಿವರಾದ ಡಾ. ನಾರಾಯಣ ಗೌಡ, ಶಂಕರಪಾಟೀಲ ಮುನೇನಕೊಪ್ಪ, ಮೇಯರ್ ಈರೇಶ ಅಂಚಟಗೇರಿ ಹಾಗೂ ಸ್ಥಳೀಯ ಶಾಸಕರು, ವಿಧಾನಪರಿಷತ್ ಸದಸ್ಯರು ಸೇರಿ ವೇದಿಕೆ ಮೇಲೆ 25 ಗಣ್ಯರಿಗೆ ಆಸನಗಳ ವ್ಯವಸ್ಥೆ ಮಾಡಲಾಗಿದೆ. ಹಾವೇರಿಯಲ್ಲಿ ಸಿದ್ಧಪಡಿಸುವ 'ಏಲಕ್ಕಿ ಹಾರ' ಮತ್ತು 'ಏಲಕ್ಕಿ ಪೇಟ' ಹಾಕಿ, ಕಸೂತಿ ಕಲೆಯ ಹ್ಯಾಂಡ್‌ಲೂಮ್ ಶಾಲು ಹೊದಿಸಿ, ಬೀದರ್‌ನ ಬಿದರಿ ಕಲೆಯ ಸ್ವಾಮಿ ವಿವೇಕಾನಂದರ ಮೂರ್ತಿ ಹಾಗೂ ತೇಗದ ಚೌಕಟ್ಟಿನಲ್ಲಿ ವಿನ್ಯಾಸಗೊಳಿಸಲಾದ ಧಾರವಾಡ ಜಿಲ್ಲೆಯ ಗರಗ ಹಾಗೂ ಬೆಂಗೇರಿಯಲ್ಲಿ ತಯಾರಾದ ರಾಷ್ಟ್ರಧ್ವಜವನ್ನು ಪ್ರಧಾನಿಗೆ ನೀಡಿ ಜಿಲ್ಲಾಡಳಿತ ಸನ್ಮಾನಿಸಲಿದೆ. ಮುಂಜಾಗ್ರತಾ ಕ್ರಮವಾಗಿ ನಗರದಾದ್ಯಂತ ಪೊಲೀಸ್ ಬಿಗಿ ಬಂದೋಬಸ್ತ್ ಮಾಡಲಾಗಿದ್ದು, ನಗರದ ಎಲ್ಲ ಶಾಲೆಗಳಿಗೆ ಗುರುವಾರ ರಜೆ ಘೋಷಿಸಲಾಗಿದೆ.

ಜೆಡಿಎಸ್ ಅಧಿಕಾರಕ್ಕೆ ಬಂದರೆ

ಮತ್ತೆ ರೈತರ ಸಾಲ ಮನ್ನಾ

- ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಭರವಸೆ
- ಕಾಂಗ್ರೆಸ್‌ನ 200 ಯೂನಿಟ್ ಉಚಿತ ವಿದ್ಯುತ್ ಆಶ್ವಾಸನೆ ಬೆನ್ನಲ್ಲೇ ಸಾಲ ಮನ್ನಾ ಪುನರುಚ್ಚಾರ





ಬೆಂಗಳೂರು, ಜ.11(ಕೆಎಂಶಿ)–ಜಾತ್ಯಾತೀತ ಜನತಾ ದಳ ಅಧಿಕಾರದ ಚುಕ್ಕಾಣಿ ಹಿಡಿದರೆ ಮತ್ತೆ ರೈತರ ಸಾಲ ಮನ್ನಾ ಮಾಡುವುದಾಗಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಘೋಷಣೆ ಮಾಡಿದ್ದಾರೆ.

ಕಾಂಗ್ರೆಸ್ ನಾಯಕರು ಪ್ರತಿ ಮನೆಗೆ 200 ಯೂನಿಟ್ ವಿದ್ಯುತ್ ನೀಡುವ ಭರವಸೆ ಜನತೆಗೆ ನೀಡುತ್ತಿದ್ದಂತೆ ಮತ್ತೊಂದೆಡೆ ಪಂಚರತ್ನ ಯಾತ್ರೆಯಲ್ಲಿ ಭಾಗವಹಿಸಿರುವ ಕುಮಾರಸ್ವಾಮಿ ಇನ್ನು ನಾಲ್ಕು ತಿಂಗಳ ಕಾಲ ತಡೆದುಕೊಳ್ಳಿ, ಸಾಲದಿಂದ ಹೊರೆ ಹೊತ್ತು ಆತ್ಮಹತ್ಯೆ ಮಾಡಿಕೊಳ್ಳಬೇಡಿ ಎಂದು ರೈತರಲ್ಲಿ ಮನವಿ ಮಾಡಿದ್ದಾರೆ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ರೈತರಿಗೆ ನೀಡಿದ ಭರವಸೆ ಈಡೇರಿಸಿದ್ದೇನೆ. ನನಗೆ ಪೂರ್ಣ ಬಹುಮತದ ಸರ್ಕಾರ ದೊರಕದಿದ್ದರೂ ಮೈತ್ರಿ ಸರ್ಕಾರದಲ್ಲಿ ಇದ್ದ ಇತಿಮಿತಿಯಲ್ಲೇ ರೈತರ ಪೂರ್ಣ ಕೃಷಿ ಸಾಲ ಮನ್ನಾ ಮಾಡಿದ್ದೇನೆ. ಸಾಲಕ್ಕೆ ಭಯ ಪಟ್ಟು ಕುತ್ತಿಗೆಯನ್ನು ನೇಣಿಗೆ ಕೊಡಬೇಡಿ. ನಿಮ್ಮ ಜೊತೆ ನಾನಿದ್ದೇನೆ. ನೀಡಿದ ಭರವಸೆಯನ್ನು ಈಡೇರಿಸುತ್ತೇನೆ. ನಮಗೆ ಒಮ್ಮೆ ಬಹುಮತದ ಸರ್ಕಾರ ನೀಡಿ ಎಂದು ಮನವಿ ಮಾಡಿಕೊಂಡಿದ್ದಾರೆ. ಇತ್ತೀಚೆಗೆ ಸಾಲ ತೀರಿಸಲಾಗದೆ ರೈತರು ಆತ್ಮಹತ್ಯೆಗೆ ಮೊರೆ ಹೋಗುತ್ತಿದ್ದಾರೆ. ಇತ್ತ ಬಿಜೆಪಿಯ ಡಬ್ಬಲ್ ಇಂಜಿನ್ ಸರ್ಕಾರ ಗಮನ ಹರಿಸುತ್ತಿಲ್ಲ. ರೈತರಿಗೆ ಈ ಸರ್ಕಾರದಲ್ಲಿ ಪರಿಹಾರ ದೊರೆಯುತ್ತಿಲ್ಲ. ರೈತರು ಮೂರು ನಾಲ್ಕು ತಿಂಗಳು ಧೈರ್ಯದಿಂದ ಕಾಲ ತಳ್ಳಿ. ನನಗೆ ವಿಶ್ವಾಸವಿದೆ. ನಿಮ್ಮ ಕಷ್ಟವನ್ನು ಬಗೆಹರಿಸುತ್ತೇನೆ. ನಿಮ್ಮ ಬದುಕಿಗೆ ಉತ್ತಮ ವಾತಾವರಣ ಕಲ್ಪಿಸಿಕೊಡುತ್ತೇನೆ. 193 ಕೋಟಿ ಬೆಳೆ ವಿಮೆ ಹಣವನ್ನು ರೈತರು ಕಟ್ಟಿದ್ದಾರೆ. ಆದರೆ ವಿಮಾ ಕಂಪನಿಗಳು ನಿಮಗೆ ನೀಡಿರುವುದು ಕೇವಲ 28 ಕೋಟಿ ರೂ ಮಾತ್ರ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಹೆಸರಲ್ಲಿ ಸರ್ಕಾರ ರೈತರಿಗೆ ವಂಚನೆ ಮಾಡುತ್ತಿದೆ. ನಿಮ್ಮೆಲ್ಲ ಕಷ್ಟ–ಸುಖಗಳನ್ನು ಬಗೆಹರಿಸಲು ಮತ್ತೆ ಅಧಿಕಾರಕ್ಕೆ ಬಂದೇ ಬರುತ್ತೇನೆ ಎಂಬ ವಿಶ್ವಾಸ ತಮಗಿದೆ ಎಂದರು.

▶ 6ನೇ ಪುಟಕ್ಕೆ

ಬಿಜೆಪಿ ಕೇಸರಿ ಬಟ್ಟೆಯ ಪಾವಿತ್ರ್ಯತೆ ಹಾಳು ಮಾಡಿದೆ

ಕಲಬುರಗಿ: ಬಿಜೆಪಿ ಪಕ್ಷದವರು ಪವಿತ್ರವಾದ ಕೇಸರಿ ಬಟ್ಟೆಯನ್ನು ಇಟ್ಟುಕೊಂಡು ರಾಜಕಾರಣ ಮಾಡುತ್ತಿರುವುದು ನಿಜಕ್ಕೂ ನಾಚಿಕೆಗೇಡಿನ ವಿಷಯ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ. ಬುಧವಾರ ಜಿಲ್ಲೆಯ ಸೇಡಂ ತಾಲೂಕಿನ ನಿಡಗುಂದಾ ಗ್ರಾಮದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಹೆಚ್‌ಡಿಕೆ, ಬಿಜೆಪಿಯವರು ಪವಿತ್ರ ಕೇಸರಿ ಬಟ್ಟೆ ಹಾಕಿ, ಅದರ ಪಾವಿತ್ರ್ಯತೆಯನ್ನು ಹಾಳು ಮಾಡುತ್ತಿದ್ದಾರೆ. ಇಂತಹವರು ದೇಶಕ್ಕೆ ಉಪದೇಶ ಮಾಡಲು ಹೊರಟಿದ್ದಾರೆ ಎಂದು ಕಿಡಿಕಾರಿದ್ದಾರೆ.

ಸ್ಯಾಂಟ್ರೊ ರವಿ ಬಂಧನ?



ಮೈಸೂರು, ಜ. 11– ಕಳೆದ ಒಂಭತ್ತು ದಿನದಿಂದ ಪೊಲೀಸರಿಗೆ ಚಳ್ಳೆಹಣ್ಣು ತಿನ್ನಿಸಿ, ತಲೆಮರೆಸಿಕೊಂಡಿದ್ದ ವೇಶ್ಯಾವಾಟಿಕೆ ದಂಧೆಯ ಕಿಂಗ್‌ಪಿನ್ ಸ್ಯಾಂಟ್ರೊ ರವಿಯನ್ನು ಮೈಸೂರು ಪೊಲೀಸರ ವಿಶೇಷ ತಂಡ ಬೆಂಗಳೂರು ಬಳಿ ಬಂಧಿಸಿದೆ ಎಂದು ನಂಬಲರ್ಹ ಮೂಲಗಳಿಂದ ತಿಳಿದುಬಂದಿದೆ.


ಪೊಲೀಸ್ ಅಧಿಕಾರಿಗಳ ವರ್ಗಾವಣೆ ದಂಧೆಯನ್ನೂ ಈತ ನಡೆಸುತ್ತಿದ್ದ ಎಂದು ಹೇಳಲಾಗಿದ್ದು, ವರ್ಗಾವಣೆ ಸಂಬಂಧ ಪೊಲೀಸ್ ಅಧಿಕಾರಿಗಳೊಂದಿಗೆ ಈತ ನಡೆಸಿದ್ದ ಸಂಭಾಷಣೆಯ ಆಡಿಯೋ ತುಣುಕುಗಳು ವೈರಲ್ ಆಗಿತ್ತು. ಈ ಹಿನ್ನೆಲೆಯಲ್ಲಿ ಸ್ಯಾಂಟ್ರೋ ರವಿಯನ್ನು ಬಂಧಿಸಲು ಪೊಲೀಸರು ಹಿಂದೇಟು ಹಾಕುತ್ತಿದ್ದಾರೆ ಹಾಗೂ ಈತ ಗೃಹ ಸಚಿವರು ಸೇರಿದಂತೆ ಹಲವಾರು ಸಚಿವರೊಂದಿಗೆ ನಿಕಟ ಸಂಬಂಧ ಹೊಂದಿದ್ದರಿಂದ ಆತನನ್ನು ಬಂಧಿಸದಿರುವಂತೆ ರಾಜಕೀಯ ಪ್ರಭಾವ ಬೀರಲಾಗುತ್ತಿದೆ ಎಂದು ಸಾರ್ವಜನಿಕವಾಗಿ

▶ 6ನೇ ಪುಟಕ್ಕೆ

ಮೇಕೆದಾಟು ಯೋಜನೆಯಲ್ಲಿ ಸುಪ್ರೀಂಕೋರ್ಟ್ ಆದೇಶ ಪಾಲನೆ: ಕಾವೇರಿ ಪ್ರಾಧಿಕಾರ


ಕಾರೈಕಲ್, ಜ.11–ಮೇಕೆದಾಟು ಯೋಜನೆ ಸಂಬಂಧ ಸುಪ್ರೀಂಕೋರ್ಟ್ ಆದೇಶದಂತೆ ನಡೆಯುತ್ತೇವೆಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರವು (ಸಿಡಬ್ಲ್ಯುಎಂಎ) ಮಂಗಳವಾರ ಹೇಳಿದೆ.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ತಂಡವು ನಿನ್ನೆಯಷ್ಟೇ ಪುದುಚೇರಿ ಮತ್ತು ತಮಿಳುನಾಡಿನ ಪಿಡಬ್ಲ್ಯುಡಿ ಅಧಿಕಾರಿಗಳ ಜೊತೆಯಲ್ಲಿ ಕಾರೈಕಲ್ ಮತ್ತು ತಮಿಳುನಾಡು ನಡುವಿನ ಗಡಿಯಲ್ಲಿರುವ ನದಿಗಳ ಕೇಂದ್ರ ಜಲ ಆಯೋಗದ ಗೇಜಿಂಗ್ ಸ್ಟೇಷನ್ ಮತ್ತು ಇತರೆ ಪ್ರದೇಶಗಳನ್ನು ಪರಿಶೀಲನೆ ನಡೆಸಿತು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ಸೌಮಿತ್ರ ಕುಮಾರ್ ಹಾಲ್ದಾರ್ ಅವರು, ಕರ್ನಾಟಕ ಸರ್ಕಾರವು ಅಣೆಕಟ್ಟು ನಿರ್ಮಿಸಲು ಪ್ರಸ್ತಾಪವನ್ನು ಮುಂದಿಟ್ಟಿದೆ. ತಮಿಳುನಾಡು ಸರ್ಕಾರವು ಅದರ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಮೊರೆ



▶ 6ನೇ ಪುಟಕ್ಕೆ

ನನ್ನ ರಕ್ತನೇ ಕಾಂಗ್ರೆಸ್; ಮತ್ತೆ 'ಕೈ' ಹಿಡಿಯುತ್ತೇನೆ...



ರಾಯಚೂರು: ನನ್ನ ರಕ್ತನೇ ಕಾಂಗ್ರೆಸ್, ಹೌದು ನಾನು ಕಾಂಗ್ರೆಸ್ ಸೇರುತ್ತೇನೆ. ಉತ್ತರಾಯಣ ಪುಣ್ಯ ಕಾಲಕ್ಕೆ ಮುಂಚೆ ಬಂದು ಮಂತ್ರಾಲಯದಲ್ಲಿ ರಾಯರ ದರ್ಶನ ಪಡೆದಿದ್ದೇನೆ. ಪಥ ಬದಲಿಸುವ ಕಾಲಕ್ಕೆ ದೇವರ ದರ್ಶನ ಮಾಡುತ್ತಿದ್ದೇನೆ ಎಂದು ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಹೇಳಿದ್ದಾರೆ. ರಾಯಚೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ, ನಾನು ಒಟ್ಟಿಗೆ ಬೆಳೆದವರು. ಲಾ ಕೂಡ ಒಟ್ಟಿಗೆ ಮಾಡಿದ್ದೇವೆ. ರಾಜಕೀಯದಲ್ಲಿ ಸಿದ್ದರಾಮಯ್ಯಗಿಂತ ನಾನು ಹಿರಿಯ. ರಾಜಕಾರಣ ಒಂದು ಕುಟುಂಬ. ಅಣ್ಣ, ತಮ್ಮ ಮುನಿಸಿಕೊಂಡು ಹೊರಹೋಗ್ತಾರೆ, ವಾಪಸ್ ಬರ್ತಾರೆ. ಪ್ರತಾಪ್‌ಗೌಡ ಪಾಟೀಲ್ ಹಾಗೂ ನನಗೆ ಬಿಜೆಪಿಯಿಂದ ಅನ್ಯಾಯವಾಗಿದೆ. ನನ್ನ ಸೋಲಿಗೆ ವಿಜಯೇಂದ್ರ ಬಹಳಷ್ಟು ಶ್ರಮಿಸಿದ್ದಾರೆ ಎಂದು ಕಿಡಿಕಾರಿದ್ದಾರೆ. ನಾನು ಸಾಹಿತ್ಯ ಕ್ಷೇತ್ರದ ಎಂಎಲ್‌ಸಿ, ಬಿಜೆಪಿ ಎಂಎಲ್‌ಸಿ ಅಲ್ಲ. ರಾಜ್ಯಪಾಲರು ಬಿಜೆಪಿಯಿಂದ ರಾಜೀನಾಮೆ ಪಡೆದ ಬಳಿಕ ನಾಮಿನೇಟ್ ಮಾಡಿದ್ದಾರೆ. ಬಹಳ ಜನರಿಗೆ ಇದು ಗೊತ್ತಿಲ್ಲ! ನಾನು ಯಾವ ಪಕ್ಷದಲ್ಲಿಲ್ಲ, ಸ್ವತಂತ್ರ ವ್ಯಕ್ತಿ. ಬಾಂಬೆ ಬಾಯ್ಸ್‌ನಲ್ಲಿ ಏನಿದೆ ಅನ್ನೋದು ಪುಸ್ತಕ ಬಿಡುಗಡೆಯಾದ ಮೇಲೆ ಗೊತ್ತಾಗುತ್ತೆ.

ಕುಮಾರಸ್ವಾಮಿ ಹಿಟ್ ಅಂಡ್ ರನ್: ಸ್ಯಾಂಟ್ರೋ ರವಿ ಯಾರೂ ಅನ್ನೋದು ನನಗೆ ಗೊತ್ತಿಲ್ಲ. ಕುಮಾರಸ್ವಾಮಿ ಸುಮ್ನೆ ಗಾಳಿಪಟ ಬಿಟ್ಟಿದ್ದಾರೆ. ಅವರಿಗೆ ಅವನು ಚೆನ್ನಾಗಿ ಗೊತ್ತು. ಕುಮಾರಸ್ವಾಮಿ ರಾಜಕೀಯಕ್ಕೂ ಮೊದಲು ಸಿನೆಮಾ ಫೀಲ್ಡ್‌ನಲ್ಲಿದ್ದರು. ಎರಡು ಬಾರಿ ಸಿಎಂ ಆಗಿದ್ದವರು. ಅನುಭವಿಗಳು, ಈ ರೀತಿಯ ವಿಚಾರಗಳನ್ನು ಹರಿಬಿಡುವುದು ಶೋಭೆಯಲ್ಲ. ಪ್ರತ್ಯಕ್ಷದರ್ಶಿ ತರಹ ಹೇಳುವವರು ಸಾಕ್ಷಿಗಳಿದ್ದರೆ ಇಂದೇ ತೋರಿಸಲಿ. ಕುಮಾರಸ್ವಾಮಿ ಹಿಟ್ ಅಂಡ್ ರನ್ ಬಿಡಬೇಕು ಎಂದು ವಿಶ್ವನಾಥ್ ಹೇಳಿದ್ದಾರೆ.

ಭೂಮಿ ಅಲಭ್ಯ: ಫುಡ್‌ಪಾರ್ಕ್ ನನೆಗುದಿಗೆ

ಬೆಂಗಳೂರು, ಜ.11– ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಪ್ರತಿ ಜಿಲ್ಲೆಗಳಲ್ಲಿ ಫುಡ್ ಪಾರ್ಕ್ ಸ್ಥಾಪಿಸುವ ಯೋಜನೆಗೆ ಭೂಮಿ ಅಲಭ್ಯವಾಗಿದ್ದು, ಪರಿಣಾಮ ಯೋಜನೆಗೆ ಹಿನ್ನಡೆಯುಂಟಾಗಿದೆ. ಪ್ರತಿ ಜಿಲ್ಲೆಯಲ್ಲಿ 20–50 ಎಕರೆ ಪ್ರದೇಶದಲ್ಲಿ ಫುಡ್ ಪಾರ್ಕ್ ಸ್ಥಾಪಿಸುವುದಾಗಿ 2022ರಲ್ಲಿ ರಾಜ್ಯ ಸರ್ಕಾರ ಘೋಷಿಸಿತ್ತು. ಭೂಮಿ ಅಲಭ್ಯ ಹಿನ್ನೆಲೆಯಲ್ಲಿ ಯೋಜನೆಯ ಪ್ರದೇಶವನ್ನು 10 ಎಕರೆಗೆ ಇಳಿಸಲಾಗಿತ್ತು. ಆದರೂ ಭೂಮಿ ಪಡೆದುಕೊಳ್ಳುವಲ್ಲಿ ಕೃಷಿ ಇಲಾಖೆಗೆ ಹಿನ್ನಡೆಯುಂಟಾಗಿದೆ ಎಂದು ತಿಳಿದುಬಂದಿದೆ.

ಫುಡ್‌ಪಾರ್ಕ್‌ಗಳು ಒಮ್ಮೆ ಸ್ಥಾಪಿತಗೊಂಡಿದ್ದೇ ಆದರೆ, ಇವು, ಸಂಸ್ಕರಣೆ, ಶೀತಲ ಶೇಖರಣಾ ಘಟಕಗಳು, ಗೋದಾಮುಗಳು, ತೂಕದ ಸೇತುವೆಗಳಂತಹ ಸೌಲಭ್ಯಗಳನ್ನು ಒದಗಿಸಲಿವೆ. ಈ ಉದ್ಯಾನಗಳಲ್ಲಿ ಘಟಕ ಸ್ಥಾಪಿಸಲು ಆಸಕ್ತಿ ತೋರುವವರಿಗೆ ವಿದ್ಯುತ್ ಸಂಪರ್ಕ, ನೀರು ಪೂರೈಕೆ ಸೇರಿದಂತೆ ಎಲ್ಲ ಮೂಲ ಸೌಕರ್ಯಗಳನ್ನು ಸರ್ಕಾರ ಒದಗಿಸಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮೈಸೂರಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ

ಮುಡಾ ಅಧ್ಯಕ್ಷರು, ಆಯುಕ್ತರಿಂದ ಸ್ಥಳ ಪರಿಶೀಲನೆ

- ಪ್ರದೇಶದಲ್ಲಿ ಬೆಳೆದಿರುವ ಗಿಡಗಂಟಿ ತೆರವಿಗೆ 14 ಲಕ್ಷ ರೂ. ಕಾಮಗಾರಿಗೆ ಟೆಂಡರ್
- ಕ್ರಿಕೆಟ್ ಸ್ಟೇಡಿಯಂನಿಂದ ಸುತ್ತಲಿನ ಪ್ರದೇಶದಲ್ಲಿ ರಿಯಲ್ ಎಸ್ಟೇಟ್ ಉದ್ಯಮ ಚೇತರಿಕೆ
- ಸ್ಥಳೀಯ ಕ್ರೀಡಾ ಪ್ರತಿಭೆಗಳಿಗೆ ಉತ್ತೇಜನ; ಅಂತರರಾಷ್ಟ್ರೀಯ ಮಟ್ಟದಲ್ಲಿ ಅವಕಾಶ



ಮೈಸೂರಿನ ಹಂಚ್ಯಾ–ಸಾತಗಳ್ಳಿ ಬಳಿ ರಿಂಗ್ ರಸ್ತೆಗೆ ಹೊಂದಿಕೊಂಡಂತಿರುವ ಉದ್ದೇಶಿತ ಅಂತರಾಷ್ಟ್ರೀಯ ಕ್ರೀಡಾಂಗಣದ ಜಾಗ.

ಮೈಸೂರು, ಜ.11(ಆರ್‌ಕೆ)– ಮೈಸೂರಿನ ಹಂಚ್ಯಾ–ಸಾತಗಳ್ಳಿ ಬಳಿ ನಿರ್ಮಿಸಲು ಉದ್ದೇಶಿಸಿರುವ ಅಂತರರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣಕ್ಕೆಂದು ಗುರ್ತಿಸಿರುವ 20.08 ಎಕರೆ ಜಾಗವನ್ನು ಮುಡಾ ಅಧ್ಯಕ್ಷ ಯಶಸ್ವಿ ಎಸ್. ಸೋಮಶೇಖರ್, ಆಯುಕ್ತ ಜಿ.ಟಿ. ದಿನೇಶ್‌ಕುಮಾರ್ ಇಂದು ಸ್ಥಳ ಪರಿಶೀಲನೆ ನಡೆಸಿದರು. ಕರ್ನಾಟಕ ರಾಜ್ಯ ಕ್ರಿಕೆಟ್ ಸಂಘ (ಕೆಎಸ್‌ಸಿಎ)ವು ಅಂತರಾಷ್ಟ್ರೀಯ ಗುಣಮಟ್ಟದ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಲು ಮುಂದಾಗಿದ್ದು, ಸದರಿ ಉದ್ದೇಶಕ್ಕೆ ಹಂಚ್ಯಾ–ಸಾತಗಳ್ಳಿ ಸಮೀಪ ರಿಂಗ್ ರಸ್ತೆಗೆ ಹೊಂದಿಕೊಂಡಂತೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ (ವಿಟಿಯು) ಪ್ರಾದೇಶಿಕ ಕೇಂದ್ರದ ಪಕ್ಕದಲ್ಲಿರುವ 20 ಎಕರೆ 8 ಗುಂಟೆ ಜಾಗವನ್ನು ಮಂಜೂರು ಮಾಡಲು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ನಿರ್ಧರಿಸಿದೆ.

ಕ್ರಿಕೆಟ್ ಸಂಘಕ್ಕೆ ಸಿಎ ನಿವೇಶನಗಳ ಮಾದರಿಯಲ್ಲಿ ದರ ನಿಗದಿಗೊಳಿಸಿ 30 ವರ್ಷಗಳ ಅವಧಿಗೆ ಗುತ್ತಿಗೆ ಆಧಾರದಲ್ಲಿ ಸುಮಾರು



18 ಕೋಟಿ ರೂ. ಪಾವತಿಸಿಕೊಂಡು ಸದರಿ ಜಾಗವನ್ನು ಮಂಜೂರು ಮಾಡಲು ಪ್ರಾಧಿಕಾರದ ಸಭೆಯಲ್ಲಿ ನಿರ್ಣಯಗೊಂಡಿರುವಂತೆ ಆಸ್ತಿ ಹಸ್ತಾಂತರಿಸಲು ಅನುಮತಿ ಕೋರಿ 2022ರ ನವೆಂಬರ್ 3ರಂದು ನಗರಾಭಿವೃದ್ಧಿ ಇಲಾಖೆಗೆ ಪ್ರಸ್ತಾಪ ಸಲ್ಲಿಸಲಾಗಿದೆ ಎಂದು ಮುಡಾ ಅಧ್ಯಕ್ಷ ಯಶಸ್ವಿ ಎಸ್.ಸೋಮಶೇಖರ್ ತಿಳಿಸಿದ್ದಾರೆ. ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಲು ಮೈಸೂರಿನ ಸೂಕ್ತ ಸ್ಥಳದಲ್ಲಿ ನಿವೇಶನ ಮಂಜೂರು ಮಾಡಿಕೊಡುವಂತೆ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಘದ ಮೈಸೂರು ವಲಯದ ಪದಾಧಿಕಾರಿಗಳು ಕಳೆದ 8 ವರ್ಷಗಳ ಹಿಂದೆ ಮುಡಾಗೆ ಮನವಿ ಮಾಡಿಕೊಂಡಿದ್ದರು. ಬೆಂಗಳೂರು, ಕೊಡಗು, ಕೇರಳ, ಚಾಮರಾಜನಗರ, ತಮಿಳುನಾಡು ರಾಜ್ಯಕ್ಕೆ ಉತ್ತಮ ಸಾರಿಗೆ ಸಂಪರ್ಕ ಕಲ್ಪಿಸುವ ಸಾತಗಳ್ಳಿ ಬಳಿ ರಿಂಗ್ ರಸ್ತೆಗೆ ಹೊಂದಿಕೊಂಡಂತಿರುವ ಖಾಲಿ ಜಾಗವನ್ನೇ ಮಂಜೂರು ಮಾಡಿಕೊಡುವಂತೆಯೂ ಅವರು ಪ್ರಸ್ತಾವನೆಯಲ್ಲಿ ಕೋರಿಕೊಂಡಿದ್ದರು ಎಂದು ಅವರು ತಿಳಿಸಿದರು. ಸಾತಗಳ್ಳಿ 'ಬಿ' ವಲಯಕ್ಕೆ ಬರುವ ವಿವಿಧ ಸರ್ವೆ ನಂಬರ್‌ಗಳ ಒಟ್ಟು 20.08 ಎಕರೆ

▶ 6ನೇ ಪುಟಕ್ಕೆ



SDJ GOLD

ನೀವು ಗಿರವಿ ಇಟ್ಟು ಬಿಡಿಸಿಕೊಳ್ಳಲಾಗದ ಚಿನ್ನವನ್ನು ನಾವೇ ಹಣಕೊಟ್ಟು ಬಿಡಿಸಿ ಉಳಿದ ಹಣ ತಕ್ಷಣ ಕೊಡುತ್ತೇವೆ.

ಒಂದು ಗ್ರಾಂ ಚಿನ್ನಕ್ಕೆ 5650

8884304444

ಮಹಾರಾಣಿ ಕಾಲೇಜಿನಲ್ಲಿ ಸಾಂಸ್ಕೃತಿಕ ಚಟುವಟಿಕೆಗೆ ಚಾಲನೆ



ಮೈಸೂರು,ಜ.11(ಎಂಕೆ)– ನಗರದ ಮಹಾರಾಣಿ ಮಹಿಳಾ ಕಲಾ ಕಾಲೇಜಿನಲ್ಲಿ ಸಾಂಸ್ಕೃತಿಕ ಚಟುವಟಿಕೆಗಳಿಗೆ ಶಾಸಕ ಎಲ್.ನಾಗೇಂದ್ರ ಬುಧವಾರ ಚಾಲನೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ ಮೇಯರ್ ಶಿವಕುಮಾರ್ ಮಾತನಾಡಿ, ನೂರು ವರ್ಷಗಳ ಇತಿಹಾಸವುಳ್ಳ ಮಹಾರಾಣಿ ಕಾಲೇಜಿನಲ್ಲಿ ವಿದ್ಯಾಭ್ಯಾಸ ಪಡೆಯುವುದೇ ಪುಣ್ಯ. ಈ ಕಾಲೇಜಿನಲ್ಲಿ ಓದಿದ ಹಲವರು ಉನ್ನತ ಹುದ್ದೆಗಳನ್ನು ಪಡೆದಿದ್ದಾರೆ ಎಂದರು.

ವಿದ್ಯಾರ್ಥಿನಿಯರು ಅಧ್ಯಯನದ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದರಿಂದ ಒತ್ತಡ ಕಡಿಮೆಯಾಗುವುದರ ಜೊತೆಗೆ ತಮ್ಮಲ್ಲಿರುವ ಪ್ರತಿಭೆ ಅನಾವರಣವಾಗುತ್ತದೆ. ಪ್ರಧಾನಿ ನರೇಂದ್ರ ಮೋದಿಯವರು ಹೇಳಿದಂತೆ ಹೆಣ್ಣು ಮಕ್ಕಳು ದೈಹಿಕ ಮತ್ತು ಮಾನಸಿಕವಾಗಿ ಸದೃಢರಾಗಬೇಕಾದರೆ ನಿರಂತರವಾಗಿ ಯೋಗ ಮತ್ತು ಧ್ಯಾನ ಮಾಡಬೇಕು ಎಂದು ತಿಳಿಸಿದರು.

ಯೋಗದಿಂದ ದೈಹಿಕವಾಗಿ ಸದೃಢರಾದರೆ, ಧ್ಯಾನದಿಂದ ಮಾನಸಿಕವಾಗಿ ಗಟ್ಟಿಯಾಗುತ್ತೀರಿ. ಓದಿನಲ್ಲಿ ಏಕಾಗ್ರತೆ ಹೆಚ್ಚಾಗುತ್ತದೆ. ಕಲಿತ ವಿಚಾರಗಳು ಹೆಚ್ಚಿನ ದಿನಗಳು ನೆನಪಿನಲ್ಲಿರುತ್ತವೆ. ಆದ್ದರಿಂದ ಪ್ರತಿನಿತ್ಯ ಅಧ್ಯಯನದ ಜೊತೆಗೆ ಯೋಗಾಭ್ಯಾಸ ಮಾಡಿ ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಕಾಲೇಜು ಪ್ರಾಂಶುಪಾಲ ಶ್ರೀನಿವಾಸ್, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

ಯಾರದೋ ಕಾಫಿ ತೋಟ ತೋರಿಸಿ ಫಸಲು ಮಾರಾಟ ಮಾಡುವುದಾಗಿ ಹೇಳಿ ಮುಂಗಡ ಪಡೆದು ವಂಚನೆ

ವಿರಾಜಪೇಟೆ, ಜ.11–ಯಾರದೋ ಕಾಫಿ ತೋಟದ ಬೆಳೆಯನ್ನು ಕಾಫಿ ವ್ಯಾಪಾರಿಗೆ ಮಾರಾಟ ಮಾಡಲು ಒಪ್ಪಂದ ಮಾಡಿಕೊಂಡು 3 ಲಕ್ಷ ರೂ. ವಂಚಿಸಿರುವ ಘಟನೆ ತಾಲೂಕಿನ ಚೆಂಬೆ ಬೆಳ್ಳೂರಿನಲ್ಲಿ ನಡೆದಿದೆ.

ವಿರಾಜಪೇಟೆ ತಾಲೂಕು ಬಾಳುಗೋಡು ಗ್ರಾಮದ ಕಾಫಿ ವ್ಯಾಪಾರಿ ಎಸ್.ಎಂ.ಖಾದರ್(44) ವಂಚನೆಗೊಳಗಾದವರಾಗಿದ್ದು, ಇವರು 2022–23ನೇ ಸಾಲಿನ ಕಾಫಿ ಫಸಲು ಖರೀದಿಸುವ ಪ್ರಯತ್ನದಲ್ಲಿದ್ದಾಗ ಸಿದ್ದಾಪುರದ ಜಬಲ ಎಸ್ಟೇಟ್‌ನಲ್ಲಿ ಸೆಕ್ಯೂರಿಟಿಯಾಗಿದ್ದ ತುಳಸಿ ರೈ ಎಂಬಾತ ಇವರನ್ನು ಸಂಪರ್ಕಿಸಿ ಬೆಂಗಳೂರಿನಲ್ಲಿ ವಾಸವಾಗಿರುವ ಚೆಂಬೆ ಬೆಳ್ಳೂರಿನ ಬೋಪಣ್ಣ ಎಂಬುವರು 18.36 ಎಕರೆ ವಿಸ್ತೀರ್ಣದಲ್ಲಿ ಬೆಳೆದಿರುವ ಕಾಫಿ ಫಸಲು ಮಾರಾಟ ಮಾಡಲಿದ್ದಾರೆ ಎಂದು ತಿಳಿಸಿ ಖಾದರ್ ಅವರನ್ನು ಕಾಫಿ ತೋಟಕ್ಕೆ ಕರೆದೊಯ್ದಿದ್ದಾನೆ. ಅಲ್ಲಿದ್ದ ವ್ಯಕ್ತಿ ತನ್ನನ್ನು ಬೋಪಣ್ಣ ಎಂದು ಪರಿಚಯಿಸಿಕೊಂಡು ಫಸಲಿಗೆ 7.65 ಲಕ್ಷ ರೂ. ದರ ನಿಗದಿ ಮಾಡಿ 2022ರ ಅ.1ರಂದು 3 ಲಕ್ಷ ರೂ.ಗಳನ್ನು ಮುಂಗಡವಾಗಿ ಪಡೆದಿದ್ದಾನೆ.

ಇದೀಗ ಕಾಫಿ ಕೊಯ್ಲಿಗೆ ಬಂದಿದ್ದು, ಖಾದರ್ ಅವರು ಜ.10ರಂದು ಚೆಂಬೆ ಬೆಳ್ಳೂರಿಗೆ ತೆರಳಿ ತೋಟದ ಕಾಫಿ ಗಿಡಗಳನ್ನು ಪರಿಶೀಲಿಸುತ್ತಿದ್ದ ವೇಳೆ ಅಲ್ಲಿದ್ದವರು ಇವರನ್ನು ಪ್ರಶ್ನಿಸಿದ್ದಾರೆ. ಆಗ ಖಾದರ್ ಅವರು ತಾವು ಬೋಪಣ್ಣ ಅವರಿಗೆ ಮುಂಗಡ ಹಣ ನೀಡಿದ್ದು, ಫಸಲು ಖರೀದಿಸಿರುವುದಾಗಿ ತಿಳಿಸಿದಾಗ ತೋಟದಲ್ಲಿದ್ದ ವ್ಯಕ್ತಿ ನಾನೇ ಬೋಪಣ್ಣ ಎಂದು ತಿಳಿಸಿದ್ದಾರೆ. ಆ ವೇಳೆ ತಾನು ಹಣ ಪಡೆದ ವ್ಯಕ್ತಿಯ ಫೋಟೋ ವನ್ನು ತೋರಿಸಿದಾಗ ಈತ ಬೋಪಣ್ಣ ಅಲ್ಲ, ತೋಟ ಈತನಿಗೆ ಸೇರಿದ್ದೂ ಅಲ್ಲ. ಇವನ ಹೆಸರು ಮಂಡೇಪಂಡ ರಾಜೇಶ್ ಎಂದು ತೋಟದ ಮಾಲೀಕ ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಕಾಫಿ ವ್ಯಾಪಾರಿ ಖಾದರ್ ನೀಡಿದ ದೂರಿನನ್ವಯ ತುಳಸಿ ರೈ ಮತ್ತು ಮಂಡೇಪಂಡ ರಾಜೇಶ್ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುವ ವಿರಾಜಪೇಟೆ ಗ್ರಾಮಾಂತರ ಠಾಣೆ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ಬಿದಿರು ಚಾಪೆ ಸರಬರಾಜು ಮಾಡದ ಲಾರಿ ಮಾಲೀಕ, ಚಾಲಕನ ವಿರುದ್ಧ ಪ್ರಕರಣ ದಾಖಲು

ಮದ್ದೂರು, ಜ.11–ಅಸ್ಸಾಂನಿಂದ ಕಳುಹಿಸಿದ್ದ ಬಿದಿರು ಚಾಪೆಗಳನ್ನು ಸರಬರಾಜು ಮಾಡದೆ ರಾಜಸ್ತಾನದ ಲಾರಿ ಮಾಲೀಕ ಮತ್ತು ಚಾಲಕ ಮದ್ದೂರಿನ ಬಿದಿರು ಚಾಪೆ ವ್ಯಾಪಾರಿಗೆ 6 ಲಕ್ಷ ರೂ. ವಂಚಿಸಿರುವ ಬಗ್ಗೆ ಪ್ರಕರಣ ದಾಖಲಾಗಿದೆ.

ಮದ್ದೂರಿನ ಕೊಲ್ಲಿ ಸರ್ಕಲ್‌ನಲ್ಲಿ ಫೈಯರ್ ಬಾಲ್ ಬ್ರಿಕೆಡ್ ಎಂಬ ಹೆಸರಿನಲ್ಲಿ ಅಂಗಡಿ ಇಟ್ಟುಕೊಂಡು ಬಿದಿರು ಚಾಪೆ ಹಾಗೂ ಬಿದಿರು ವಸ್ತುಗಳ ವ್ಯಾಪಾರ ಮಾಡುತ್ತಿರುವ ಮಹಮ್ಮದ್ ಖಾದೀರ್ ಬೇಗ್(42) ವಂಚನೆಗೊಳಗಾದವರಾಗಿದ್ದು, ಇವರು ಅಸ್ಸಾಂನ ನಾಗೋನ್ ಜಿಲ್ಲೆಯ ಸಾಲೋನಾ ಗ್ರಾಮದಲ್ಲಿರುವ ರಜೀಬ್ ಮ್ಯಾಟ್ಸ್ ಮಾಲೀಕ ಅಜೀಬ್ ಅಲಿ ಅವರಿಗೆ 5 ಸಾವಿರ ಬಿದಿರು ಚಾಪೆಗಳನ್ನು ಕಳುಹಿಸುವಂತೆ 5 ಲಕ್ಷ ರೂ.ಗಳನ್ನು ಗೂಗಲ್ ಪೇ ಮೂಲಕ ವರ್ಗಾಯಿಸಿದ್ದರು. ಅದೇ ರೀತಿ ಚಾಪೆಗಳನ್ನು ಅಸ್ಸಾಂನಿಂದ ಮದ್ದೂರಿಗೆ ಸಾಗಿಸಲು ರಾಜಸ್ತಾನದ ಸಿಪಿರ್ ಪಟ್ಟಣದ ಲಾರಿ ಮಾಲೀಕ ರಾಂ ಕರಣ್ ಜಿಯಾರವರ ಬ್ಯಾಂಕ್ ಖಾತೆಗೆ 70 ಸಾವಿರ ರೂ.ಗಳನ್ನು ಆನ್‌ಲೈನ್ ಮೂಲಕ 2022ರ ನ.23ರಂದು ರವಾನಿಸಿದ್ದರು.

ನಂತರ ಅಜೀಬ್ ಅಲಿಯವರು ರಾಂ ಕರಣ್‌ನ ಲಾರಿಯಲ್ಲಿ (ಆರ್‌ಜೆ 14 ಡಿಜಿ 3053) ಚಾಪೆಗಳನ್ನು ಲೋಡ್ ಮಾಡಿ ಕಳುಹಿಸಿರುವುದಾಗಿ ರಸೀದಿಯನ್ನು ವಾಟ್ಸಾಪ್ ಮೂಲಕ ರವಾನಿಸಿದ್ದರು. 10 ದಿನ ಕಳೆದರೂ ಚಾಪೆಗಳು ಬಾರದ ಕಾರಣ ಖಾದರ್ ಅವರು ರಾಂ ಕರಣ್‌ಗೆ ಕರೆ ಮಾಡಿದಾಗ ತಮ್ಮ ಲಾರಿ ರಿಪೇರಿಯಾಗಿರುವುದಾಗಿಯೂ, 30 ಸಾವಿರ ರೂ. ವರ್ಗಾವಣೆ ಮಾಡಿದರೆ ಲಾರಿ ರಿಪೇರಿ ಮಾಡಿಸಿಕೊಂಡು ಬರುವುದಾಗಿ ತಿಳಿಸಿದ್ದಾರೆ. ಅದರಂತೆ ಖಾದರ್ ಮತ್ತೆ 30 ಸಾವಿರ ರೂ. ವರ್ಗಾವಣೆ ಮಾಡಿದ್ದಾರೆ. ನಂತರವೂ ಸಬೂಬು ಹೇಳುತ್ತಿದ್ದ ರಾಂ ಕರಣ್, ನಂತರ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡಿದ್ದಾನೆ. ಈ ಸಂಬಂಧ ಬನ್ನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಸ್ ಡಿಕ್ಕಿ: ರೈತ ಸಾವು

ಬನ್ನೂರು, ಜ.11–ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದು ರೈತ ಸಾವನ್ನಪ್ಪಿದ ಘಟನೆ ಇಲ್ಲಿಗೆ ಸಮೀಪದ ಬಸವನಹಳ್ಳಿ ಗ್ರಾಮದಲ್ಲಿ ಸಂಭವಿಸಿದೆ.

ಗ್ರಾಮದ ರೈತ ಗಟ್ಟಿಗೌಡ ಅಲಿಯಾಸ್ ಕರಗಪ್ಪ(70) ಅಪಘಾತದಲ್ಲಿ ಮೃತಪಟ್ಟವನಾಗಿದ್ದು, ಈತನಿಗೆ ಡಿಕ್ಕಿ ಹೊಡೆದ ಬಸ್ (ಕೆಎ–11 ಎಫ್ 0232) ಈತನನ್ನು ಸುಮಾರು 30 ಮೀಟರ್ ದೂರ ಎಳೆದೊಯ್ದಿದೆ.

ಗ್ರಾಮದ ಮೈಸೂರು–ಮಳವಳ್ಳಿ ಮುಖ್ಯ ರಸ್ತೆಯಲ್ಲಿರುವ ಮುದ್ದೇಗೌಡ ಎಂಬುವರ ಟೀ ಅಂಗಡಿಯಲ್ಲಿ ಟೀ ಸೇವಿಸಿ ಮನೆಗೆ ತೆರಳುತ್ತಿದ್ದ ಕರಗಪ್ಪನಿಗೆ ಮೈಸೂರು ಕಡೆಯಿಂದ ಮಳವಳ್ಳಿ ಕಡೆ ಚಲಿಸುತ್ತಿದ್ದ ಬಸ್ ಡಿಕ್ಕಿ ಹೊಡೆದ ನಂತರ ಎಳೆದೊಯ್ದಿದೆ. ಇದನ್ನು ಕಂಡ ಗ್ರಾಮಸ್ಥರು ಕೂಗಿಕೊಂಡಾಗ ಅಪಘಾತದ ಅರಿವಾಗಿ ಸಾರಿಗೆ ಬಸ್ ಚಾಲಕ ನಿಲ್ಲಿಸಿದ್ದಾನೆ. ಕರಗಪ್ಪ ಸ್ಥಳದಲ್ಲೇ ಮೃತಪಟ್ಟಿದ್ದು, ಈ ಸಂಬಂಧ ಬನ್ನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೈಕ್ ಟ್ಯಾಂಕ್ ಕವರ್‌ನಲ್ಲಿದ್ದ 50 ಸಾವಿರ ನಗದು ಕಳವು

ತಿ.ನರಸೀಪುರ, ಜ.11– ಬೈಕ್ ಟ್ಯಾಂಕ್ ಮೇಲಿನ ಕವರ್‌ನಲ್ಲಿಟ್ಟಿದ್ದ 50 ಸಾವಿರ ರೂ. ಕಳುವಾಗಿರುವ ಬಗ್ಗೆ ನಂಜನಗೂಡು ತಾಲೂಕು ಕಲ್ಕುಂದ ಗ್ರಾಮದ ಕೆ.ದೇವರಾಜು(64) ಟಿ.ನರಸೀಪುರ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಇವರು ತಿ.ನರಸೀಪುರದ ಕೆನರಾ ಬ್ಯಾಂಕ್‌ನಲ್ಲಿ ಜ.9ರಂದು ಮಧ್ಯಾಹ್ನ 50 ಸಾವಿರ ರೂ. ಡ್ರಾ ಮಾಡಿಕೊಂಡು, ಅದನ್ನು ಬೈಕ್ ಟ್ಯಾಂಕ್ ಮೇಲಿನ ಕವರ್‌ನಲ್ಲಿಟ್ಟು, ಶಿವ ವೈನ್ಸ್‌ಗೆ ತೆರಳಿ ಹಿಂತಿರುಗುವಷ್ಟರಲ್ಲಿ ವೈನ್ ಸ್ಟೋರ್ ಮುಂದೆ ನಿಲ್ಲಿಸಿದ್ದ ಬೈಕ್ ಕವರ್‌ನಲ್ಲಿದ್ದ ಹಣವನ್ನು ಕಳವು ಮಾಡಲಾಗಿದೆ.

ಕೊಟ್ಟಿಗೆ ಬೀಗ ಮುರಿದು ಆಡು, ಕುರಿ ಕಳವು

ಬೈಲುಕುಪ್ಪೆ, ಜ.11–ಕೊಟ್ಟಿಗೆಯಲ್ಲಿ ಕಟ್ಟಿದ್ದ 15 ಆಡು ಹಾಗೂ ಒಂದು ಕುರಿಯನ್ನು ಪಿರಿಯಾಪಟ್ಟಣ ತಾಲೂಕು ನವಿಲೂರು ಗ್ರಾಮದಲ್ಲಿ ಕಳವು ಮಾಡಲಾಗಿದೆ.

ಗ್ರಾಮದ ರೈತ ವೆಂಕಟೇಶ(49) ಎಂಬುವರ ಕೊಟ್ಟಿಗೆಯಲ್ಲಿ ಜ.9ರಂದು ಸಂಜೆ ಈ ಆಡುಗಳನ್ನು ಕಟ್ಟಿ ಬೀಗ ಹಾಕಲಾಗಿತ್ತು. ಮರುದಿನ ಬೆಳಗ್ಗೆ 4 ಗಂಟೆಗೆ ಬಂದು ನೋಡಿದಾಗ ಖದೀಮರು ಕೊಟ್ಟಿಗೆ ಬೀಗ ಮುರಿದು ಆಡುಗಳನ್ನು ಕಳವು ಮಾಡಿರುವುದು ಗೊತ್ತಾಗಿದೆ. ಈ ಸಂಬಂಧ ಬೈಲುಕುಪ್ಪೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

'ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆ-2021' ರದ್ದಿಗೆ ಒತ್ತಾಯ

ಬೈಕ್ ಟ್ಯಾಕ್ಸಿ ವಿರೋಧಿಸಿ ಆಟೋ ಚಾಲಕರ ಪ್ರತಿಭಟನೆ



ಮೈಸೂರು,ಜ.11(ಪಿಎಂ)– 'ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆ–2021' ರದ್ದುಗೊಳಿಸುವಂತೆ ಹಾಗೂ ವೈಟ್ ಬೋರ್ಡ್ ಬೈಕ್ ಟ್ಯಾಕ್ಸಿಗೆ ಅನುಮತಿ ನೀಡದಂತೆ ಒತ್ತಾಯಿಸಿ ಕರ್ನಾಟಕ ಆಟೋ ರಿಕ್ಷಾ ಚಾಲಕರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಆಟೋ ಚಾಲಕರು ಬುಧವಾರ ಪ್ರತಿಭಟನೆ ನಡೆಸಿದರು.

ಮೈಸೂರು ಜಿಲ್ಲಾಧಿಕಾರಿ ಕಚೇರಿ ಎದುರು ಆಟೋಗಳೊಂದಿಗೆ ಜಮಾಯಿಸಿದ ಪ್ರತಿಭಟನಾಕಾರರು, ರಾಜ್ಯದ ಪ್ರಮುಖ ನಗರಗಳಲ್ಲಿ ಪ್ರತಿದಿನ 50 ಲಕ್ಷಕ್ಕೂ ಹೆಚ್ಚು ಪ್ರಯಾಣಿಕರಿಗೆ ಆಟೋರಿಕ್ಷಾ ವಲಯ ಸಾರಿಗೆ ಸೌಲಭ್ಯ ನೀಡುತ್ತಿದೆ. ಇದು ಬಹುದೊಡ್ಡ ಕ್ಷೇತ್ರವಾಗಿದ್ದು, 15 ಲಕ್ಷಕ್ಕೂ ಹೆಚ್ಚು ಮಂದಿಗೆ ಉದ್ಯೋಗ ಕಲ್ಪಿಸಿದೆ. ಆದರೆ ಈಗ ಸರ್ಕಾರ ಇಂತಹ ವ್ಯವಸ್ಥೆಯನ್ನು ದುಸ್ಥಿತಿಗೆ ತಳ್ಳಲು ಹೊರಟಿದೆ ಎಂದು ದೂರಿದರು.

ಚಾಲನಾ ಪತ್ರ ನವೀಕರಣ, ಜೀವಿತಾವಧಿ ತೆರಿಗೆ, ಫಿಟ್‌ನೆಸ್ ಸರ್ಟಿಫಿಕೇಟ್, ಇನ್ಶೂರೆನ್ಸ್, ರಹದಾರಿ ನವೀಕರಣ ಮಾತ್ರವಲ್ಲದೆ, ದಂಡದ ರೂಪದಲ್ಲಿ ನೇರ ತೆರಿಗೆ ಪಾವತಿ ಮೂಲಕ ಆಟೋ ಚಾಲಕರು, ಸರ್ಕಾರದ ಆರ್ಥಿಕತೆಗೆ ಕೊಡುಗೆ ನೀಡುತ್ತಿದ್ದೇವೆ. ಸರ್ಕಾರದ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆಯಿಂದ ಆಟೋರಿಕ್ಷಾ ಚಾಲಕರಿಗೆ ಅನ್ಯಾಯವಾಗಲಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹೊಸ ಆಟೋಗಳ ಖರೀದಿ, ಬಳಸುವ ಇಂಧನ, ಬಿಡಿಭಾಗಗಳ ಖರೀದಿ ಸೇರಿದಂತೆ ಇತರೆ ತೆರಿಗೆ ಪಾವತಿ ಮೂಲಕವೂ ಸರ್ಕಾರದ ಆರ್ಥಿಕತೆಗೆ ಕೊಡುಗೆ ನೀಡುತ್ತಿದ್ದೇವೆ. ಆದರೆ ಈಗ ಆನ್‌ಲೈನ್ ಆ್ಯಪ್ ಆಧಾರಿತ ಅಗ್ರಿಗ್ರೇಟರ್ ಕಂಪನಿಗಳು ಆಟೋ ಚಾಲಕರ ದುಡಿಮೆಯನ್ನು ಕಿತ್ತುಕೊಳ್ಳುತ್ತಿವೆ. ಅಲ್ಲದೆ, ಅನಧಿಕೃತ ವೈಟ್ ಬೋರ್ಡ್ ಬೈಕ್ ಟ್ಯಾಕ್ಸಿಗಳ ಹಾವಳಿ ರಾಜ್ಯದ ಪ್ರಮುಖ ನಗರಗಳಲ್ಲಿ ಸಾರಿಗೆ ಇಲಾಖೆ ಕಣ್ಗಾವಲಿನಲ್ಲಿಯೇ ಅಕ್ರಮವಾಗಿ ನಡೆಯುತ್ತಿದ್ದು, ಇದರಿಂದ ಆಟೋ ಚಾಲಕರಿಗೆ ಸಂಪಾದನೆ ಇಲ್ಲದಂತಾಗಿದೆ ಎಂದು ಪ್ರತಿಭಟನಾಕಾರರು ಕಿಡಿಕಾರಿದರು.

ಉದ್ಯೋಗ ಸೃಷ್ಟಿ, ಹೊಸ ಸಾರಿಗೆ ವ್ಯವಸ್ಥೆ ಹೆಸರಿನಲ್ಲಿ ಸರ್ಕಾರ ಬೃಹತ್ ಶ್ರಮಿಕ ವರ್ಗವನ್ನು ನಿರ್ನಾಮ ಮಾಡಲು ಹೊರಟಿದೆ. ಆ ಮೂಲಕ ಆಟೋ ಚಾಲಕರು ಮಾತ್ರವಲ್ಲದೆ, ಅವರ ಅವಲಂಬಿತ ಖಾಸಗಿ ಫೈನಾನ್ಸ್ ಕಂಪನಿಗಳು, ರಾಷ್ಟ್ರೀಕೃತ ಬ್ಯಾಂಕುಗಳು, ಮೆಕ್ಯಾನಿಕ್‌ಗಳು ಸೇರಿದಂತೆ ಮೊದಲಾದ ವ್ಯವಸ್ಥೆಗಳನ್ನು ಅಸ್ಥಿರಗೊಳಿಸಲು ಮುಂದಾಗಿದೆ ಎಂದು ಆರೋಪಿಸಿದರು.

ಬೈಕ್ ಟ್ಯಾಕ್ಸಿಯಲ್ಲಿ ಮಹಿಳಾ ಪ್ರಯಾಣಿಕರಿಗೆ ಲೈಂಗಿಕ ದೌರ್ಜನ್ಯ ನಡೆದಿರುವ ಪ್ರಕರಣಗಳು ವರದಿಯಾಗಿವೆ. ಹಾಗಾಗಿ ಸರ್ಕಾರ ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆ–2021 ಅನ್ನು ರದ್ದುಗೊಳಿಸಬೇಕು. ಜೊತೆಗೆ ವೈಟ್‌ಬೋರ್ಡ್ ಟ್ಯಾಕ್ಸಿ ಯೋಜನೆಗಳಿಗೆ ಅನುಮತಿ ನೀಡಬಾರದು. ಇದರ ಬದಲು ಆಟೋರಿಕ್ಷಾ ಚಾಲಕರಿಗೆ ಅನುಕೂಲವಾಗುವಂತೆ ಎಲೆಕ್ಟ್ರಿಕ್ ಆಟೋ ರಿಕ್ಷಾಗಳಿಗೆ ಶೇ.50ರಷ್ಟು ಸಹಾಯಧನ (ಸಬ್ಸಿಡಿ) ನೀಡಬೇಕೆಂದು ಒತ್ತಾಯಿಸಿದರು.

ಸರ್ಕಾರ ನಮ್ಮ ಬೇಡಿಕೆಗಳನ್ನು ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸಬೇಕಾಗುತ್ತದೆ. ಅಲ್ಲದೆ, ಮುಂಬರುವ ಚುನಾವಣೆಗಳಲ್ಲಿ ಆಡಳಿತರೂಢ ಬಿಜೆಪಿಗೆ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಒಕ್ಕೂಟದ ಸಂಚಾಲಕರಾದ ಎಂ.ಮಂಜುನಾಥ್, ರಘು ನಾರಾಯಣಗೌಡ, ಆಟೋ ಚಾಲಕಿ ಸೌಮ್ಯ, ಫೆಡರೇಷನ್ ಆಫ್ ಕರ್ನಾಟಕ ಆಟೋರಿಕ್ಷಾ ಡ್ರೈವರ್ಸ್ ಯೂನಿಯನ್ (ಸಿಐಟಿಯು) ರಾಜ್ಯಾಧ್ಯಕ್ಷ ರಾಘವೇಂದ್ರ, ಸಂಯುಕ್ತ ಕರ್ನಾಟಕ ಆಟೋ ರಿಕ್ಷಾ ಚಾಲಕರ ಮತ್ತು ಮಾಲೀಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಶ್ರೀನಿವಾಸ ಮಿತ್ರ, ಮೈಸೂರು ಆಟೋರಿಕ್ಷಾ ಮಾಲೀಕರ ಮತ್ತು ಚಾಲಕರ ವಿವಿಧೋದ್ದೇಶ ಸೊಸೈಟಿ ಅಧ್ಯಕ್ಷ ರಾಮಸ್ವಾಮಿ ಸೇರಿದಂತೆ ಆಟೋ ಚಾಲಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಜ.25ರಿಂದ 29ರವರೆಗೆ ಮೈಸೂರಲ್ಲಿ ರಾಜ್ಯ ಮಟ್ಟದ ವಾಲಿಬಾಲ್ ಪಂದ್ಯಾವಳಿ



ಮೈಸೂರು,ಜ.11(ಪಿಎಂ)– ಕರ್ನಾಟಕ ರಾಜ್ಯ ವಾಲಿಬಾಲ್ ಅಸೋಸಿಯೇಷನ್ ಮತ್ತು ಮೈಸೂರು ಜಿಲ್ಲಾ ವಾಲಿಬಾಲ್ ಅಸೋಸಿಯೇಷನ್ ವತಿಯಿಂದ ಜ.25ರಿಂದ 29ರವರೆಗೆ ಮೈಸೂರು ವಿವಿ ಸ್ಪೋರ್ಟ್ಸ್ ಪೆವಿಲಿಯನ್ ಮೈದಾನದಲ್ಲಿ 25ನೇ ರಾಜ್ಯ ಮಟ್ಟದ ಅಂತರ ಜಿಲ್ಲಾ ಹೊನಲು ಬೆಳಕಿನ ವಾಲಿಬಾಲ್ ಚಾಂಪಿಯನ್‌ಶಿಪ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಜಿಲ್ಲಾ ವಾಲಿಬಾಲ್ ಅಸೋಸಿಯೇಷನ್ ಕಾರ್ಯಕಾರಿಣಿ ಅಧ್ಯಕ್ಷ ಪ್ರೊ.ಎಂ.ಚಂದ್ರಕುಮಾರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಮೈಸೂರಲ್ಲಿ ವಾಲಿಬಾಲ್ ಸಂಭ್ರಮ' ಶೀರ್ಷಿಕೆಯಡಿ ಪುರುಷರು ಮತ್ತು ಮಹಿಳೆಯರಿಗೆ ಪ್ರತ್ಯೇಕ ಪಂದ್ಯಾವಳಿ ನಡೆಯಲಿದೆ. ಪ್ರತಿ ಜಿಲ್ಲೆಯಿಂದ ಒಂದು ತಂಡ ಪಾಲ್ಗೊಳ್ಳಲು ಅವಕಾಶವಿದ್ದು, ಪುರುಷರ 30 ತಂಡಗಳು ಮತ್ತು ಮಹಿಳೆಯರ 20 ತಂಡಗಳು ಭಾಗವಹಿಸಲಿವೆ. ಸುಮಾರು ಸಾವಿರ ಪಟುಗಳು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ. ಪ್ರಥಮ, ದ್ವಿತೀಯ, ತೃತೀಯ ಮತ್ತು ನಾಲ್ಕನೇ ಸ್ಥಾನಗಳನ್ನು ಪಡೆಯುವ ತಂಡಗಳಿಗೆ ಟ್ರೋಫಿ ಮತ್ತು ಪ್ರಮಾಣ ಪತ್ರ ನೀಡಲಾಗುವುದು ಎಂದರು.

ಪಂದ್ಯಾವಳಿಯಲ್ಲಿ ಉತ್ತಮ ಪ್ರದರ್ಶನ ನೀಡುವ 16ರಿಂದ 20 ಆಟಗಾರರನ್ನು ರಾಷ್ಟ್ರೀಯ ವಾಲಿಬಾಲ್ ಚಾಂಪಿಯನ್‌ಶಿಪ್‌ನಲ್ಲಿ ರಾಜ್ಯ ತಂಡ ಪ್ರತಿನಿಧಿಸಲು ಆಯ್ಕೆ ಪ್ರಕ್ರಿಯೆಯೂ ಇದೇ ವೇಳೆ ನಡೆಯಲಿದೆ. ಪುರುಷರು ಮತ್ತು ಮಹಿಳೆಯರ ತಂಡಗಳಿಗೆ ಕರ್ನಾಟಕ ರಾಜ್ಯ ವಾಲಿಬಾಲ್ ಅಸೋಸಿಯೇಷನ್‌ನ ಪದಾಧಿಕಾರಿಗಳು ಹಾಗೂ ಆಯ್ಕೆ ಸಮಿತಿ ಸದಸ್ಯರು ಆಯ್ಕೆ ಪ್ರಕ್ರಿಯೆ ನಡೆಸಲಿದ್ದಾರೆ ಎಂದು ತಿಳಿಸಿದರು. ಜಿಲ್ಲಾ ವಾಲಿಬಾಲ್ ಅಸೋಸಿಯೇಷನ್ ಅಧ್ಯಕ್ಷ ಟಿ.ಶಿವಪ್ರಕಾಶ್, ಉಪಾಧ್ಯಕ್ಷ ಅರುಣ್‌ಕುಮಾರ್, ಕಾರ್ಯದರ್ಶಿ ಎಸ್.ಗಿರೀಶ್ ಸುದ್ದಿಗೋಷ್ಠಿಯಲ್ಲಿದ್ದರು.

ವಿವಿಧ ಸೌಲಭ್ಯಗಳಿಗೆ ಅರ್ಜಿ ಆಹ್ವಾನ

ಮೈಸೂರು, ಜ.11– ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಕಾರ್ಯಾಲಯದ ವತಿಯಿಂದ ಪಂಚಾಯಿತಿ ವ್ಯಾಪ್ತಿಯ ಸಾರ್ವಜನಿಕರಿಗೆ 2021–22 ಮತ್ತು 2022–23ನೇ ಸಾಲಿನ ಮುಖ್ಯಮಂತ್ರಿಗಳ ಅಮೃತ್ ನಗರೋತ್ಥಾನ (ಮುನ್ಸಿಪಾಲಿಟಿ) ಯೋಜನೆ, ಎಸ್‌ಎಫ್‌ಸಿ ಮತ್ತು ಪಟ್ಟಣ ಪಂಚಾಯಿತಿ ನಿಧಿಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ಜನರ ಮತ್ತು ವಿಶೇಷಚೇತನರ ಕಲ್ಯಾಣಕ್ಕಾಗಿ ವಿವಿಧ ವೈಯಕ್ತಿಕ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವವರು ರಮ್ಮನಹಳ್ಳಿ ಪಟ್ಟಣ ಪಂಚಾಯಿತಿಯ ನಿವಾಸಿಯಾಗಿರಬೇಕು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಡಿತರ ಚೀಟಿ, ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿಗಳ ಸ್ವಯಂ ದೃಢೀಕೃತ ನಕಲು ಪ್ರತಿ, ಇತ್ತೀಚಿನ ಮೂರು ಭಾವಚಿತ್ರ, ಇನ್ನಿತರೆ ಅಗತ್ಯ ದಾಖಲೆಗಳೊಂದಿಗೆ ಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಸಂಬಂಧಪಟ್ಟ ಸಿಬ್ಬಂದಿಯನ್ನು ಸಂಪರ್ಕಿಸಬಹುದಾಗಿದೆ.

ಅರ್ಥಪೂರ್ಣ ಗಣರಾಜ್ಯೋತ್ಸವ ಆಚರಣೆ ಸಿದ್ಧತೆಗೆ ಎಡಿಸಿ ಸಲಹೆ



ಮೈಸೂರು,ಜ.11(ಎಂಕೆ)–ಜಿಲ್ಲಾಡಳಿತದ ವತಿಯಿಂದ ಜ.26ರಂದು ಬೆಳಿಗ್ಗೆ 9 ಗಂಟೆಗೆ 74ನೇ ಗಣರಾಜ್ಯೋತ್ಸವವನ್ನು ಬನ್ನಿಮಂಟಪ ಪಂಜಿನ ಕವಾಯತು ಮೈದಾನದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ (ಎಡಿಸಿ) ಲೋಕನಾಥ್ ಹೇಳಿದರು.

ಡಿಸಿ ಕಚೇರಿ ಸಭಾಂಗಣದಲ್ಲಿ ಬುಧವಾರ ಗಣರಾಜ್ಯೋತ್ಸವ ಆಚರಣೆ ಸಂಬಂಧ ಪೂರ್ವಭಾವಿ ಸಿದ್ಧತಾ ಸಭೆ ನಡೆಸಿದ ಅವರು, ಅಧಿಕಾರಿಗಳು ಗಣರಾಜ್ಯೋತ್ಸವವನ್ನು ಅರ್ಥ ಪೂರ್ಣವಾಗಿ ಆಚರಿಸಲು ಬೇಕಾದ ಎಲ್ಲಾ ರೀತಿಯ ಪೂರಕ ವ್ಯವಸ್ಥೆ ಮಾಡಿಕೊಳ್ಳಿ ಎಂದರು.

ಹಾಜರಾತಿ ಕಡ್ಡಾಯ: ಗಣರಾಜ್ಯೋತ್ಸವ ದಿನದಂದು ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಿ, ಸಂದೇಶ ನೀಡಲಿದ್ದಾರೆ. ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ತಮ್ಮ ಕಚೇರಿಯಲ್ಲಿ ಬೆಳಿಗ್ಗೆ 8 ಗಂಟೆಗೆ ಧ್ವಜಾರೋಹಣ ನೆರ ವೇರಿಸಿ, 9 ಗಂಟೆಗೆ ಕವಾಯತು ಮೈದಾನದಲ್ಲಿ ನಡೆಯುವ ಧ್ವಜಾರೋಹಣ ಕಾರ್ಯಕ್ರಮಕ್ಕೆ ತಮ್ಮ ಸಿಬ್ಬಂದಿಗಳೊಂದಿಗೆ ಕಡ್ಡಾಯವಾಗಿ ಹಾಜರಾಗಬೇಕು ಎಂದರು.

ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಬೇಕು. ರಾಷ್ಟ್ರಗೀತೆ, ನಾಡಗೀತೆ ಹಾಗೂ ರೈತಗೀತೆ ವ್ಯವಸ್ಥೆ ಮಾಡಿಕೊಳ್ಳಿ. ಎನ್‌ಎಸ್‌ಎಸ್, ಎನ್‌ಸಿಸಿ, ಪೊಲೀಸ್ ಇಲಾಖೆ ಹಾಗೂ ಅಬಕಾರಿ ಇಲಾಖೆ ವತಿಯಿಂದ ಪಥ ಸಂಚಲನ ನಡೆಸಲು ಪೂರ್ವ ಅಭ್ಯಾಸ ನಡೆಸಲು ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮವಹಿಸಬೇಕು ಎಂದು ಸೂಚಿಸಿದರು.

ಗಣರಾಜ್ಯೋತ್ಸವ ಆಚರಣೆಯ ವ್ಯವಸ್ಥಿತ ನಿರ್ವಹಣೆಗಾಗಿ ತಮಗೆ ವಹಿಸಿರುವ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಸರ್ಕಾರಿ ಕಚೇರಿಗಳಲ್ಲಿ ವಿದ್ಯುತ್ ದೀಪಾಲಂಕಾರ ಮಾಡಲು ಸಂಬಂಧಿಸಿದ ಕಚೇರಿಯ ಮುಖ್ಯಸ್ಥರು ಅಗತ್ಯ ಕ್ರಮ ವಹಿಸಬೇಕು. ಕಾರ್ಯಕ್ರಮದ ಸ್ಥಳದಲ್ಲಿ ಸ್ವಚ್ಛತೆ ಬಗ್ಗೆ ಪಾಲಿಕೆ ಅಧಿಕಾರಿಗಳು ಕ್ರಮವಹಿಸಬೇಕು ಹಾಗೂ ಆರೋಗ್ಯ ಇಲಾಖೆಯಿಂದ ಆಂಬುಲೆನ್ಸ್ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಪ್ರೇಮ್ ಕುಮಾರ್, ಅಪರ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಎಸ್.ನಂದಿನಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

12.1.2023 ಗುರುವಾರ, ಮಳೆ ನಕ್ಷತ್ರ: ಉತ್ತರಾಷಾಢ, 11.01.2022ರಿಂದ 23.01.2023 ಶ್ರೀ ಶುಭಕೃತ ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಪುಷ್ಯ ಮಾಸ, ಕೃಷ್ಣ ಪಕ್ಷ, ತಿಥಿ: ಪಂಚಮಿ, ನಕ್ಷತ್ರ: ಪುಬ್ಬ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಹಾಗೂ ಸಂಜೆ 5.00ಕ್ಕೆ "ಒಂದೇ ಕಥೆ" ವಿವಿಧ ಮುಖ– ಬಾನುಲಿ ಸರಣೀ, ಪ್ರಸ್ತುತಿ–ಪ್ರಭುಸ್ವಾಮಿ ಮಳಿಮಠ, 6.40 ಅರಿವಿನ ಶಿಖರ–ಗಾಯನ–ಪಿ.ಸುರಭೀ, ಜಿ.ಪುಷ್ಪಲತಾ, ವ್ಯಾಖ್ಯಾನ–ಡಾ.ಕಬ್ಬಿನಾಲೆ ವಸಂತ ಭಾರದ್ವಾಜ್, 8.30 ಹಾಡು ಹೇಳಿದ ಕಥೆ, ಪ್ರಸ್ತುತಿ–ಡಾ.ಮೈಸೂರು ಉಮೇಶ್, 10.00 ಈ ಗಾಯತ್ರಿ–ವೀಣಾವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ. **ಮಧ್ಯಾಹ್ನ:** 12.30 ದೇವರನಾಮ, 1.20 ಭಾವಗೀತೆಗಳು, 4.00 ಜನಪದ ಸಂಗೀತ–ಚಿಕ್ಕತಾಯಮ್ಮ ಮತ್ತು ತಂಡ, 6.50 ಕೃಷಿರಂಗ 'ಕಿಸಾನ್‌ವಾಣಿ' ಚರ್ಚೆ "ಸಂಸ್ಕೃತ ಪತ್ರಿಕೆಗಳು" ಭಾಗವಹಿಸುವವರು–ಕೆ.ಎಸ್.ಜಯಲಕ್ಷ್ಮಿ, ಟಿ.ಎನ್.ಪ್ರಭಾಕರ್, ಶ್ರೀನಿವಾಸ್ ಸಿದ್ಧಾಂತಿ, ನಡೆಸಿಕೊಡುವವರು–ದಿವಾಕರ ಹೆಗಡೆ, 8.00 ಯುವವಾಣಿ–"ದೂಪದ ಮಕ್ಕಳು" ಕೃತಿಗೆ 2020ನೇ ಸಾಲಿನ ಕೇಂದ್ರ ಸಾಹಿತ್ಯ ಅಕಾಡೆಮಿಯ ಯುವ ಪುರಸ್ಕಾರ ಪ್ರಶಸ್ತಿ ಪಡೆದ ಸ್ವಾಮಿ ಪೊನ್ನಾಚಿ ಅವರೊಂದಿಗೆ ಸಂದರ್ಶನ, 9.30 ಕನ್ನಡ ಭಾರತಿ, 10.00 ನಾಟಕ 10.30 ಸವಿನೆನಪು.

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ ಅಭಯದಾಯಕ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನಂ:** ಧನುರ್ಮಾಸದ ವಿಶೇಷ ಪೂಜೆ, ಲಕ್ಷಾರ್ಚನೆ ಮತ್ತು ವಾರ್ಷಿಕ ಕುಂಭಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾನಿವೇದನೆ, ಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನಂ ಆವರಣ, ರಾಘವೇಂದ್ರನಗರ, ಬೆಳಗ್ಗೆಯಿಂದ.

■ **ಟೆರೇಷಿಯನ್ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ದೈಹಿಕ ಶಿಕ್ಷಣ ವಿಭಾಗ :** ನಗರ ಅಂತರ ಕಾಲೇಜು ಮಹಿಳೆಯರ ಮತ್ತು ಪುರುಷರ ಬ್ಯಾಡ್‌ಮಿಂಟನ್ ಪಂದ್ಯಾವಳಿ, ಉದ್ಘಾಟನೆ: ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ, ಮುಖ್ಯ ಅತಿಥಿಗಳು: ನಿವೃತ್ತ ಪ್ರಾಧ್ಯಾಪಕ ಪ್ರೊ.ಬಸವಲಿಂಗು, ಅಧ್ಯಕ್ಷತೆ: ಮೈಸೂರು ವಿವಿ ಕುಲಪತಿ ಪ್ರೊ.ಹೆಚ್.ರಾಜಶೇಖರ್, ಸ್ಥಳ: ಮೈಸೂರು ವಿವಿ ಜಿಮ್ನಾಷಿಯಂ ಹಾಲ್, ಬೆಳಗ್ಗೆ 8.30ಕ್ಕೆ.

■ **ಶೇಷಾದ್ರಿಪುರಂ ಪದವಿ ಕಾಲೇಜು :** ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಮತ್ತು ರಾಷ್ಟ್ರೀಯ ಯುವ ದಿನಾಚರಣೆ, ಮುಖ್ಯ ಅತಿಥಿಗಳು : ರಾಮಕೃಷ್ಣ ನೈತಿಕ ಮತ್ತು ಅಧ್ಯಾತ್ಮಿಕ ಶಿಕ್ಷಣ ಸಂಸ್ಥೆಯ ಸ್ವಾಮಿ ಮಹಾ ಮೇಧಾನಂದ, ಅಧ್ಯಕ್ಷತೆ : ನಾಡೋಜ ಡಾ. ವೂಡೇ ಪಿ. ಕೃಷ್ಣ, ಗೌರವ ಅತಿಥಿಗಳು : ಭಾರತೀಯ ರೆಡ್ ಕ್ರಾಸ್ ಸೊಸೈಟಿ ಸಮನ್ವಯಾಧಿಕಾರಿ ರಾಜು ಚಂದ್ರಶೇಖರ್, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 9.30 ರಿಂದ.

■ **ಶಾರದಾ ವಿಲಾಸ ಕಾಲೇಜು :** ರಾಷ್ಟ್ರೀಯ ಯುವ ದಿನ ಆಚರಣೆ, ಮುಖ್ಯ ಅತಿಥಿಗಳು : ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ. ಜಿ. ಹೇಮಂತಕುಮಾರ್, ಗೌರವ ಅತಿಥಿಗಳು : ಸ್ವಾಮಿ ಮಹಾಮೇದಾನಂದ, ಡಾ. ಲಕ್ಷ್ಮೀನಾರಾಯಣ ಶೆಣೈ, ಕೆ.ಸಿ. ವಿನಯ್, ಬಿ.ಎಸ್. ರಾಘವೇಂದ್ರ, ಎಸ್‌ವಿಇಐ ಅಧ್ಯಕ್ಷ ಡಾ. ಬಿ.ಎಂ. ಸುಬ್ರಾಯ, ಕಾರ್ಯದರ್ಶಿ ಎನ್. ಚಂದ್ರಶೇಖರ್, ಅಧ್ಯಕ್ಷತೆ : ಶಾರದಾ ವಿಲಾಸ ಕಾಲೇಜು ಪ್ರಿನ್ಸಿಪಾಲ್ ಡಾ. ಎಂ. ದೇವಿಕಾ, ಸ್ಥಳ: ಶತಮಾನೋತ್ಸವ ಸಭಾಂಗಣ, ಎಸ್‌ವಿಇಐ, ಮಧ್ಯಾಹ್ನ 12.15 ರಿಂದ.

■ **ಬೇಡನ್ ಪೊವೆಲ್ ಪಬ್ಲಿಕ್ ಸ್ಕೂಲ್ :** ಶಾಲಾ ವಾರ್ಷಿಕೋತ್ಸವ, ಮುಖ್ಯ ಅತಿಥಿಗಳು : ಸಾರ್ವಜನಿಕ ಶಿಕ್ಷಣ ಇಲಾಖೆ ಸಹಾಯಕ ನಿರ್ದೇಶಕ ರಾಮಚಂದ್ರರಾಜೇ ಅರಸ್, ಅಧ್ಯಕ್ಷತೆ : ಶಾಲೆ ಅಧ್ಯಕ್ಷ ಪಿ. ವಿಶ್ವನಾಥ್, ಸ್ಥಳ: ಕಲಾಮಂದಿರ, ಸಂಜೆ 4ಕ್ಕೆ.

■ **ಗಣಪತಿ ಮಿತ್ರ ಮಂಡಳಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ:** ಗಂಡನ ಮನೆ ಸಾಮಾಜಿಕ ನಾಟಕ, ಸಾನ್ನಿಧ್ಯ: ವಂಗೀಪುರ ಮಠದ ಶ್ರೀ ಇಳೈ ಆಳ್ವಾರ್ ಸ್ವಾಮೀಜಿ, ಉದ್ಘಾಟನೆ: ಮುಡಾ ಅಧ್ಯಕ್ಷ ಯಶಸ್ವಿ ಎಸ್.ಸೋಮಶೇಖರ್, ಮುಖ್ಯ ಅತಿಥಿಗಳು: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಂ.ಡಿ.ಸುದರ್ಶನ್, ಗಣಪತಿ ಮಿತ್ರ ಮಂಡಳಿ ಗೌರವಾಧ್ಯಕ್ಷ ಸಿ.ಎಂ.ಮಹಾಲಿಂಗು, ಪಾಲಿಕೆ ಸದಸ್ಯ ಮಾ.ವಿ. ರಾಮಪ್ರಸಾದ್, ಸ್ಥಳ: ತಗಡೂರು ರಾಮಚಂದ್ರರಾವ್ ಉದ್ಯಾನವನ, ಚಾಮುಂಡಿಪುರಂ, ಸಂಜೆ 6ಕ್ಕೆ.

■ **ಕನ್ನಡ ಸಾಹಿತ್ಯ ಕಲಾಕೂಟ, ಸಂವಹನ : ಪ್ರಕಾಶಕರು, ಸಪ್ನ ಬುಕ್ ಹೌಸ್, ಬೆಂಗಳೂರು:** ಸಾಹಿತಿ ಡಾ. ಸಿ.ಸೋಮಶೇಖರ ಅವರ ಆತ್ಮಕಥನ 'ನೀನೊಲಿದ ಬದುಕು' ಕೃತಿ ಲೋಕಾರ್ಪಣೆ, ಸಾನ್ನಿಧ್ಯ: ಶ್ರೀ ರಾಮಕೃಷ್ಣ ಆಶ್ರಮದ ಅಧ್ಯಕ್ಷ ಸ್ವಾಮಿ ಮುಕ್ತಿದಾನಂದಜಿ ಮಹಾರಾಜ್, ಅಧ್ಯಕ್ಷತೆ: ಶ್ರೀ ಹೊಸಮಠದ ಶ್ರೀ ಚಿದಾನಂದ ಸ್ವಾಮೀಜಿ, ಕೃತಿ ಬಿಡುಗಡೆ: ಹಿರಿಯ ವಿದ್ವಾಂಸ ನಾಡೋಜ ಡಾ.ಹಂಪನಾ, ಕೃತಿ ಕುರಿತು ಮಾತನಾಡುವವರು: ಡಾ.ಸಿ.ನಾಗಣ್ಣ, ಮುಖ್ಯ ಅತಿಥಿಗಳು: ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಕವಯತ್ರಿ ಡಾ.ಲತಾ ರಾಜಶೇಖರ್, ಪ್ರಾಸ್ತಾವಿಕ ನುಡಿ: ಕನ್ನಡ ಸಾಹಿತ್ಯ ಕಲಾ ಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಸಂವಹನ ಪ್ರಕಾಶಕ ಡಿ.ಎನ್.ಲೋಕಪ್ಪ, ಸಪ್ನ ಬುಕ್ ಹೌಸ್‌ನ ನಿತಿನ್ ಷಾ, ಸ್ಥಳ: ಶಿವರಾತ್ರಿ ರಾಜೇಂದ್ರ ಭವನ, ಸಂಜೆ 6ಕ್ಕೆ.

■ **ಸಂಚಲನ ಮೈಸೂರು, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ (ಬೆಂಗಳೂರು) :** ರಾಜ್ಯ ಮಟ್ಟದ ಸಂಚಲನ, ಮಕ್ಕಳ ನಾಟಕೋತ್ಸವ ಮತ್ತು ಜಾನಪದ ಉತ್ಸವ, ಸಭಾ ಕಾರ್ಯಕ್ರಮ, ಉಪಸ್ಥಿತರು : ಚಲನಚಿತ್ರ ನಟ ಮಂಡ್ಯ ರಮೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ಎನ್.ಎ. ಮಲ್ಲೇಶ್ವರಿ, ಪಾಲಿಕೆ ಸದಸ್ಯೆ ಸವಿತಾ ಸುರೇಶ್, ದಿ ಸಿಟಿ ಕೋ ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಶಿವು, ಗುರೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಂದ ಬೆಟ್ಟದ ಇಲಿಗಳ ಕಥೆ... ನಾಟಕ ಪ್ರದರ್ಶನ, ರಚನೆ : ಜಿ.ಕೆ. ನಂದಕುಮಾರ್, ಸಂಗೀತ : ಉದಯ ನುಸ್ರತ್ ಸಾಬ್ರಿ, ನಿರ್ದೇಶನ : ಎಸ್. ಶ್ರೀಕಾಂತ್, ಚಾ.ನಗರ ರಂಗ ಪ್ರಯೋಗ ಶಾಲೆಯ ಮಕ್ಕಳಿಂದ ಕುಣಿ ಕುಣಿ ನವಿಲೇ ನಾಟಕ ಪ್ರದರ್ಶನ, ರಚನೆ : ಎಚ್.ಎಸ್. ವೆಂಕಟೇಶ್‌ಮೂರ್ತಿ, ನಿರ್ದೇಶನ : ಕಿರಣ್ ಗಿರ್ಗಿ, ಸ್ಥಳ: ಕಿರುರಂಗ ಮಂದಿರ, ಸಂಜೆ 6ರಿಂದ.

■ **ಚಿನ್ಮಯ ಮಿಷನ್ :** ಕೃಷ್ಣರಾವ್ ಪ್ರಕಾಶ್ ಅವರಿಂದ ಪ್ರಾತಃಸ್ಮರಣಂ ಕುರಿತು ಉಪನ್ಯಾಸ, ಸ್ಥಳ: ಶ್ರೀ ಚಿನ್ಮಯ ಮಿಷನ್, ಮೈಸೂರು ಆಶ್ರಮದ ದತ್ತ ಸನ್ನಿಧಿ, ಯಜ್ಞಶಾಲೆ, ಸಂಜೆ 6ಕ್ಕೆ.

■ **ಶ್ರೀ ಅಂಡಾಳ್ ಮಂದಿರಂ :** ಧನುರ್ಮಾಸ ಪೂಜೆ, ವಿದ್ವಾನ್ ಎಂ.ಕೆ. ಶೆಲ್ವನಾರಾಯಣ ಅವರಿಂದ ತಿರುಪ್ಪಾವೈ ಪ್ರವಚನ, ಸ್ಥಳ: ಅಂಡಾಳ್ ಮಂದಿರಂ ಆವರಣ, ವಿ.ವಿ.ಮೊಹಲ್ಲಾ, ಸಂಜೆ 6ರಿಂದ 7.30 ರವರೆಗೆ.

■ **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ :** ವಿದುಷಿ ಬಿ.ಕೆ. ಸೀತಾಲಕ್ಷ್ಮೀ ಅವರಿಂದ ತಿರುಪ್ಪಾವೈ ಪ್ರವಚನ, ಸ್ಥಳ: ದೇವಸ್ಥಾನದ ಆವರಣ, ತ್ಯಾಗರಾಜ ರಸ್ತೆ, ಸಂಜೆ 6 ಗಂಟೆಗೆ.

■ **ಇನ್‌ಸ್ಟಿಟ್ಯೂಟ್ಯಷನ್ ಆಫ್ ಇಂಜಿನಿಯರ್ಸ್ :** ಕಲಿಕೆ–ಅವಶ್ಯಕತೆಗಳು ಮತ್ತು ಸವಾಲುಗಳು ಕುರಿತು ಡಾ. ಮೊಹಮದ್ ಕೈಸರ್ ಅವರಿಂದ ತಾಂತ್ರಿಕ ಉಪನ್ಯಾಸ, ಅಧ್ಯಕ್ಷತೆ : ಇನ್‌ಸ್ಟಿಟ್ಯೂಷನ್ ಅಫ್ ಇಂಜಿನಿಯರ್ಸ್ ಅಧ್ಯಕ್ಷ ಬಿ.ಎಸ್. ಪ್ರಭಾಕರ, ಸ್ಥಳ: ಎಸ್.ಪಿ. ಭಟ್ ಹಾಲ್, ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಅಧ್ಯಾತ್ಮ ರಾಮಾಯಣ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ, ಕೆ.ಆರ್. ವನಂ :** ಡಾ. ಎನ್.ಕೆ. ರಾಮಶೇಷನ್ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಡಾ. ಕಮಲಾ ರಾಮನ್ ಅವರ ಮಂದಿರ, ಅಂಬೇಡ್ಕರ್ ರಸ್ತೆ, ಸಂಜೆ 6.15ರಿಂದ.

■ **ಕದಂಬ ರಂಗ ವೇದಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ನಾಟಕ ಕದಂಬ ಉತ್ಸವ, ಚಾಲನೆ : ಚಿತ್ರನಟ ಶಂಕರ್ ಅಶ್ವತ್ಥ್, ಮುಖ್ಯ ಅತಿಥಿಗಳು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಕದಂಬ ರಂಗ ವೇದಿಕೆಯಿಂದ ನೀಲಾಂಬಿಕೆ ನಾಟಕ ಪ್ರದರ್ಶನ, ರಚನೆ : ಸನ್ನಿಧಿ, ನಿರ್ದೇಶನ : ರಾಜಶೇಖರ ಕದಂಬ, ಸ್ಥಳ: ರಮಾಗೋವಿಂದ ರಂಗಮಂದಿರ, ರಾಮಕೃಷ್ಣನಗರ, ಸಂಜೆ 6.30ಕ್ಕೆ.

■ **ಜ್ಞಾನಸರೋವರ ಇಂಟರ್‌ನ್ಯಾಷನಲ್ ರೆಸಿಡೆನ್ಸಿಯಲ್ ಸ್ಕೂಲ್ :** ಸಂಸ್ಥಾಪಕರ ದಿನಾಚರಣೆ – ಸಾಮರಸ್ಯ, ಮುಖ್ಯ ಅತಿಥಿಗಳು : ಮೇಯರ್ ಶಿವಕುಮಾರ್, ಅಧ್ಯಕ್ಷತೆ : ಸ್ಕೂಲ್ ಅಧ್ಯಕ್ಷ ಸುಧಾಕರ್ ಎಸ್.ಶೆಟ್ಟಿ, ಕಾರ್ಯದರ್ಶಿ ಸುಖಲತಾ ಶೆಟ್ಟಿ, ಸ್ಥಳ: ಅಭಿನಯ, ಆಂಫಿ ಥಿಯೇಟರ್, ಸಂಜೆ 6.30ಕ್ಕೆ.

ಸ್ಯಾಂಟ್ರೋ ರವಿ ಲೈಂಗಿಕ ದೌರ್ಜನ್ಯ ಪ್ರಕರಣ

ಸಂತ್ರಸ್ತೆ, ಆಕೆ ಸಹೋದರಿಯೊಂದಿಗೆ ಪೊಲೀಸರಿಂದ ಸ್ಥಳ ಮಹಜರು

ಮೈಸೂರು,ಜ.11(ಆರ್‌ಕೆ)–ರಾಜ್ಯ ರಾಜಕಾರಣದಲ್ಲಿ ತಲ್ಲಣ ಉಂಟು ಮಾಡಿರುವ ಸ್ಯಾಂಟ್ರೋ ರವಿ ಲೈಂಗಿಕ ದೌರ್ಜನ್ಯ ಹಾಗೂ ವೇಶ್ಯಾವಾಟಿಕೆ ದಂಧೆ ಪ್ರಕರಣ ಸಂಬಂಧ ದೂರುದಾರರಾದ ಸಂತ್ರಸ್ತೆ ಮತ್ತು ಆಕೆಯ ಸಹೋದರಿಯನ್ನು ಕರೆದೊಯ್ದು ಪೊಲೀಸರು, ಕೃತ್ಯ ನಡೆದಿದೆ ಎನ್ನಲಾದ ಸ್ಥಳಗಳಲ್ಲಿ ಇಂದು ಮಹಜರು ನಡೆಸಿದರು.



ಸ್ಯಾಂಟ್ರೋ ರವಿ

ನಿನ್ನೆ (ಮಂಗಳವಾರ)ಯಷ್ಟೇ ಕಾನೂನು–ಸುವ್ಯವಸ್ಥೆ ಎಡಿಜಿಪಿ ಅಲೋಕ್‌ಕುಮಾರ್ ಅವರು ಮೈಸೂರಿಗೆ ಬಂದು ಪ್ರಕರಣ ಸಂಬಂಧ ಸಂತ್ರಸ್ತೆ ಮತ್ತು ಸಹೋದರಿಯನ್ನು ವಿಚಾರಣೆ ನಡೆಸಿದ ಬೆನ್ನಲ್ಲೇ ಇಂದು ತನಿಖಾಧಿಕಾರಿಗಳು ಅವರನ್ನು ಮೈಸೂರಿನ ಕುವೆಂಪುನಗರದ ಅಪಾರ್ಟ್‌ಮೆಂಟ್, ವಿಜಯನಗರ 3ನೇ ಹಂತದ ಸ್ಯಾಂಟ್ರೋ ರವಿ ಕಚೇರಿ, ಶ್ರೀರಾಂಪುರದ ವಕೀಲರೊಬ್ಬರ ಮನೆಗಳಿಗೆ ಕರೆದೊಯ್ದು ಸ್ಥಳ ಮಹಜರು ನಡೆಸಿದರು.

ವಾಸ ಮಾಡುತ್ತಿದ್ದ ದಟ್ಟಗಳ್ಳಿ ಮನೆ ಮತ್ತು ಕುವೆಂಪುನಗರದ ಅಪಾರ್ಟ್‌ಮೆಂಟ್, ಲೈಂಗಿಕ ದೌರ್ಜನ್ಯವೆಸಗಿದ ಎನ್ನಲಾದ ವಿಜಯನಗರ 3ನೇ ಹಂತದ ಆತನ ಕಚೇರಿ ಹಾಗೂ ತನ್ನನ್ನು ಮದುವೆಯಾದ ಎಂದು ಹೇಳಿರುವ ಶ್ರೀರಾಂಪುರದ ವಕೀಲರೊಬ್ಬರ ಮನೆಗೆ ಕರೆದೊಯ್ದು ಪೊಲೀಸರು ಸ್ಥಳ ಮಹಜರು ನಡೆಸಿ, ಹೇಳಿಕೆ ದಾಖಲು ಮಾಡಿಕೊಂಡರಲ್ಲದೆ, ವೀಡಿಯೋ ರೆಕಾರ್ಡ್ ಮಾಡಿದರು.

ಅದೇ ರೀತಿ ಸಂತ್ರಸ್ತೆ ಸಹೋದರಿಯನ್ನು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಮುಂದೆ ಹಾಜರುಪಡಿಸಿ 164 ರೀತ್ಯಾ ಹೇಳಿಕೆ ದಾಖಲು ಮಾಡಿಸಿದರು ಎಂದು ಮೂಲಗಳು ತಿಳಿಸಿವೆ. ಅತ್ತ ತಲೆಮರೆಸಿಕೊಂಡಿರುವ ಸ್ಯಾಂಟ್ರೋ ರವಿ ಪತ್ತೆಗೆ ರಚಿಸಿರುವ ತನಿಖಾ ತಂಡಗಳ ಪೊಲೀಸರು, ಬೆಂಗಳೂರು, ಹಾಸನ ಹಾಗೂ ಇನ್ನಿತರ ನಗರಗಳಲ್ಲಿ ಶೋಧ ಕಾರ್ಯ ಮುಂದುವರಿಸಿದ್ದರಾದರೂ, ಇನ್ನೂ ಫಲಪ್ರದವಾಗಿಲ್ಲ.

ಮೈಸೂರಿನ ಎನ್.ಆರ್.ಉಪವಿಭಾಗದ ಎಸಿಪಿ ಎಂ.ಶಿವಶಂಕರ್, ಸಿಸಿಬಿ ಎಸಿಪಿ ಸಿ.ಕೆ.ಅಶ್ವತ್ಥನಾರಾಯಣ ಸೇರಿದಂತೆ ಐವರು ಇನ್ಸ್‌ಪೆಕ್ಟರ್ ಒಳಗೊಂಡ ತನಿಖಾ ತಂಡದ ಪೊಲೀಸರು ಸುಳಿವಿನ ಜಾಡು ಹಿಡಿದು ಸ್ಯಾಂಟ್ರೋ ರವಿ ಪತ್ತೆಗೆ ಹೆಡೆಮುರಿ ಕಟ್ಟಿದ್ದಾರೆ.

ಸ್ಯಾಂಟ್ರೋ ರವಿ ಎಲ್ಲಿಯೇ ಇದ್ದರೂ ಪೊಲೀಸರು ಎಳೆದು ತರ್ತಾರೆ...!

ಬೆಂಗಳೂರು, ಜ.11– ಸ್ಯಾಂಟ್ರೋ ರವಿಯ ಬಂಧನ ಆಗಿಯೇ ಆಗುತ್ತೆ, ಆತ ಎಲ್ಲೇ ಇದ್ದರೂ ಎಳೆದುಕೊಂಡು ಬಂದೇ ಬರ್ತಾರೆ ಎಂದು ಗೃಹ ಸಚಿವ ಆರಗ ಜ್ಞಾನೇಂದ್ರ ಹೇಳಿದರು. ವಿಕಾಸಸೌಧದಲ್ಲಿ ಮಾತನಾಡಿದ ಅವರು, ಈಗಾಗಲೇ ಸ್ಯಾಂಟ್ರೋ ರವಿ ಬಗ್ಗೆ ಎಲ್ಲ ಮಾಹಿತಿ ಕಲೆ ಹಾಕಲಾಗಿದೆ. ಅವನ ಓಡಾಟ ಎಲ್ಲೆಲ್ಲಿ ಇತ್ತೋ ಅಲ್ಲೆಲ್ಲ ಕಡೆ ಪೊಲೀಸ್‌ನವರು ಸರ್ಚ್ ಮಾಡಿದ್ದಾರೆ. ಸ್ಯಾಂಟ್ರೋ ರವಿ ಬಂಧನಕ್ಕೆ ಎಲ್ಲ ರೀತಿ ಟೀಮ್ ಮಾಡಿ ಮೈಸೂರು ಪೊಲೀಸರು ಸರ್ಚ್ ಮಾಡುತ್ತಿದ್ದಾರೆ. ಉಳಿದುಕೊಂಡಿದ್ದ ಲಾಡ್ಜ್ ಎಲ್ಲ ಚೆಕ್ ಮಾಡುತ್ತಿದ್ದಾರೆ. ಫೋನ್ ಸ್ವಿಚ್ಡ್ ಆಫ್ ಮಾಡಿಕೊಂಡಿದ್ದಾನೆ, ಹಾಗಾಗಿ ಹುಡುಕೋದು ಕಷ್ಟವಾಗಿದೆ ಎಂದು ಮಾಹಿತಿ ನೀಡಿದರು.



ನಾನು ನಿಮ್ಮೆಲ್ಲರಿಗೂ ಗೊತ್ತು, ಯಾರು ಬೇಕಾದರೂ ನನ್ನ ಬಂದು ಭೇಟಿ ಮಾಡಬಹುದು. ನನ್ನ ಮನೆಗೆ ಬರುವಾಗ ಪೊಲೀಸ್ ಸರ್ಟಿಫಿಕೇಟ್ ತಗೊಂಡು ಬಾ ಅನ್ನೋಕಾಗಲ್ಲ. ಅನೇಕರು ಬಂದಾಗ ಫೋಟೋ ತೆಗೆಸಿಕೊಳ್ಳುತ್ತಾರೆ. ಬಂದ್ರು, ಫೋಟೋ ತೆಗೆಸಿಕೊಂಡ್ರು ಅನ್ನೋ ಕಾರಣಕ್ಕೆ ನಾವು ಅವರ ಜೊತೆ ಇರಲ್ಲ ಎಂದು ಸ್ಪಷ್ಟನೆ ನೀಡಿದರು.

ರವಿಯಿಂದ ವರ್ಗಾವಣೆ ದಂಧೆ ನಡೆಯುತ್ತಿತ್ತು ಎಂಬ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಸಬ್ ಇನ್ಸ್‌ಪೆಕ್ಟರ್ ಸ್ಕ್ಯಾಮ್‌ನಲ್ಲಿ ಯಾರನ್ನ ಬಿಟ್ಟಿದ್ದೇವೆ ಹೇಳಿ. ಇದೇ ರವಿ ಸಿಗಲಿ, ಯಾರೇ ಇದ್ದರೂ ವಿಚಾರಣೆ ಮಾಡಿ ಕ್ರಮ ಕೈಗೊಳ್ಳುತ್ತೇವೆ. ಮೇಲ್ನೋಟಕ್ಕೆ ಏನನ್ನೂ ಹೇಳಲು ಆಗಲ್ಲ, ವಿಚಾರಣೆ ಹೊರಗೆ ಬರಲಿ ನೋಡೋಣ ಎಂದರು. ಈ ನಡುವೆ ಕಾಂಗ್ರೆಸ್ ಆರೋಪ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಏನೇ ಆರೋಪ ಮಾಡೋದಕ್ಕೂ ಹೇಸುವುದಿಲ್ಲ. ಕಾಂಗ್ರೆಸ್ ಕಾಲದಲ್ಲೇ ಆತ ಬೆಳೆಯಲು ಕಾರಣ. ಆತನನ್ನು ನಾವು ಮಟ್ಟ ಹಾಕುತ್ತೇವೆ. ಯಾರೇ ಆಗಿದ್ರೂ ಬಿಡೋದಿಲ್ಲ, ಬಂಧನ ಮಾಡಿಯೇ ಮಾಡುತ್ತೇವೆ. ನಾವು ಯಾರ ಕರೆ ಬಂದರೂ ಪ್ರತಿಕ್ರಿಯೆ ಮಾಡಲೇಬೇಕು, ಆಗ ಇಂತಹವರೂ ಕೂಡ ಕರೆ ಮಾಡುತ್ತಾರೆ ಎಂದು ಸ್ಪಷ್ಟನೆ ನೀಡಿದರು.



ಮೈಸೂರಿನ ಬಿಬಿ ಕೇರಿ ವ್ಯಾಪ್ತಿಯ ಸಿವಿ ರಸ್ತೆಯಲ್ಲಿ ವಿವಿಧ ಪಕ್ಷದ ಯುವ ಮುಖಂಡರು ಶಾಸಕ ಎಲ್.ನಾಗೇಂದ್ರ ಸಮ್ಮುಖದಲ್ಲಿ ಬಿಜೆಪಿ ಸೇರ್ಪಡೆಗೊಂಡರು. ಈ ವೇಳೆ ನಗರ ಘಟಕದ ಅಧ್ಯಕ್ಷ ಎಂ.ಜೆ.ಕಿರಣ್‌ಗೌಡ, ಪಾಲಿಕೆ ಸದಸ್ಯರಾದ ರಂಗಸ್ವಾಮಿ, ಚಿಕ್ಕ ವೆಂಕಟು, ಚಾಮರಾಜ ಕ್ಷೇತ್ರದ ಅಧ್ಯಕ್ಷ ಸಚಿನ್‌ಗೌಡ, ಉಪಾಧ್ಯಕ್ಷರಾದ ಕಾರ್ತಿಕ್, ಮರಿಯಪ್ಪ, ಸಚಿನ್‌ಕುಮಾರ್, ಪ್ರಧಾನ ಕಾರ್ಯದರ್ಶಿ ಭರತ್‌ಕುಮಾರ್, ವಾರ್ಡಿನ ಅಧ್ಯಕ್ಷ ಗಂಗಣ್ಣ ಕೇಬಲ್, ಮುಖಂಡರಾದ ತನ್ವೀರ್, ತನುಜಾ ಮಹೇಶ್, ವಿಜಿ, ಗಿರೀಶ್, ಯೋಗಿ ಪ್ರಜ್ವಲ್, ಅರ್ಜುನ್‌ಕುಮಾರ್, ಬಡಾವಣೆಯ ನಿವಾಸಿಗಳು ಇದ್ದರು.

ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿಗೆ ನ್ಯಾಕ್‌ನಿಂದ ಬಿ++ ಗ್ರೇಡ್

ಮೈಸೂರು, ಜ.11– ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಭೈರಾಪುರ, ತಿ.ನರಸೀಪುರಕ್ಕೆ ನ್ಯಾಷನಲ್ ಅಸೆಸ್ಮೆಂಟ್ ಮತ್ತು ಅಕ್ರೆಡಿಟೇಶನ್ ಕೌನ್ಸಿಲ್ (NAAC) ನಿಂದ ಬಿ++ ಗ್ರೇಡ್ ಲಭಿಸಿದೆ. ಐದು ವರ್ಷಗಳವರೆಗೆ 4–ಪಾಯಿಂಟ್ ಸ್ಕೇಲ್‌ನಲ್ಲಿ 2.82 ರ ಸಂಚಿತ ಗ್ರೇಡ್ ಪಾಯಿಂಟ್ ಸರಾಸರಿ (CGPA) ಜೊತೆಗೆ, ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬೈರಾಪುರ, ತನ್ನ ಮೊದಲ ಸುತ್ತಿನಲ್ಲೇ ನ್ಯಾಕ್‌ನಿಂದ ಬಿ++ ಗ್ರೇಡ್‌ನೊಂದಿಗೆ ಮಾನ್ಯತೆ ಪಡೆದ ಕೆಲವೇ ಕಾಲೇಜುಗಳ ಪಟ್ಟಿಗೆ ಸೇರಿಕೊಂಡಿದೆ.

NAAC ಪೀರ್ ತಂಡವು 2022ರ ಡಿ.28 ಮತ್ತು 29ರಂದು ಕಾಲೇಜಿಗೆ ಭೇಟಿ ನೀಡಿ, ಕಾಲೇಜನ್ನು ಬಹು ನಿಯತಾಂಕಗಳ ಮೇಲೆ ಕಟ್ಟುನಿಟ್ಟಾಗಿ ಮೌಲ್ಯಮಾಪನ ಮಾಡಿದೆ. ಭೇಟಿಯ ಸಂದರ್ಭದಲ್ಲಿ ಕಾಲೇಜಿನಲ್ಲಿ ಅಳವಡಿಸಿಕೊಂಡಿರುವ ಮೂಲ ಸೌಕರ್ಯ, ನಿರ್ವಹಣೆ, ಅಧ್ಯಾಪಕರು, ವಿದ್ಯಾರ್ಥಿಗಳ ಕೊಡುಗೆಗಳು, ಬೋಧನೆ–ಕಲಿಕೆ ಪ್ರಕ್ರಿಯೆ, ಸಾಂಸ್ಥಿಕ ಮೌಲ್ಯಗಳು ಮತ್ತು ಉತ್ತಮ ಅಭ್ಯಾಸಗಳನ್ನು ಪೀರ್ ತಂಡವು ಶ್ಲಾಘಿಸಿತು. ಭೇಟಿಯ ಮೊದಲು, ಕಟ್ಟುನಿಟ್ಟಾದ ಪ್ರಕ್ರಿಯೆಯನ್ನು ಅನುಸರಿಸಿ ಕಾಲೇಜು ಸಲ್ಲಿಸಿದ ಡೇಟಾದ ಆಧಾರದ ಮೇಲೆ ಮೂರನೇ ವ್ಯಕ್ತಿ ನೆಲೆಯಿಂದ ಮೌಲ್ಯಮಾಪನ ಮಾಡಿ ಬಿ++ ಗೆ ಪ್ರತಿಶತವನ್ನು ಅಂಕವನ್ನು ಪಡೆಯಿತು.

ಕಾಲೇಜು ಪ್ರಾರಂಭವಾಗಿ 9 ವರ್ಷಗಳನ್ನು ಪೂರ್ಣಗೊಳಿಸಿದೆ ಮತ್ತು ಪ್ರಸ್ತುತ ಕ್ಯಾಂಪಸ್‌ನಲ್ಲಿ 578 ವಿದ್ಯಾರ್ಥಿಗಳನ್ನು ಹೊಂದಿದೆ. ಕಾಲೇಜು 4 ಮಹಡಿಗಳ 2 ಬ್ಲಾಕ್‌ಗಳ ಬೃಹತ್ ಕಾಲೇಜು ಕಟ್ಟಡವನ್ನು ಹೊಂದಿದೆ, ಒಟ್ಟು ರೂ.25.50 ಕೋಟಿ ವೆಚ್ಚದಲ್ಲಿ 42 ತರಗತಿ ಕೊಠಡಿಗಳು, 10 ಪ್ರಯೋಗಾಲಯಗಳು ಮತ್ತು ಇತರ ಸೌಲಭ್ಯಗಳನ್ನು ನಿರ್ಮಿಸಲಾಗಿದೆ. ಕಾಲೇಜು ಗುಣಮಟ್ಟದ ಶಿಕ್ಷಣ ನೀಡಲು ಬದ್ಧವಾಗಿದೆ. ಕಾಲೇಜು ನಡೆಸಿದ ಕಠಿಣ ಪರಿಶ್ರಮವು ಈ ಮನ್ನಣೆಯನ್ನು ಪಡೆಯಲು ಕಾರಣವಾಗಿದೆ. ಕಾಲೇಜು ಪ್ರಾರಂಭದಿಂದಲೂ ಅಭ್ಯಾಸ ಮಾಡುತ್ತಿರುವ ಶೈಕ್ಷಣಿಕ ಚೌಕಟ್ಟು ಮತ್ತು ನೀತಿಗಳನ್ನು ಅನುಮೋದಿಸಿದೆ.

ನೂತನ ಅಪರ ಜಿಲ್ಲಾಧಿಕಾರಿಗೆ ಅಭಿನಂದನೆ



ಮೈಸೂರು,ಜ.11–ಮೈಸೂರಿನ ನೂತನ ಅಪರ ಜಿಲ್ಲಾಧಿಕಾರಿ ಎನ್.ಲೋಕನಾಥ್ ಅವರನ್ನು ಕರ್ನಾಟಕ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಜೆ.ಗೋವಿಂದರಾಜು ಅಧ್ಯಕ್ಷತೆಯಲ್ಲಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಎ.ಎಲ್.ಉಮೇಶ್, ಜಿಲ್ಲಾ ಕಾರ್ಯದರ್ಶಿ ರೇವಣ್ಣ, ರಾಜ್ಯ ಪರಿಷತ್ ಸದಸ್ಯ ಎಂ.ಎಲ್. ವಿಶ್ವನಾಥ್, ಸಂಘಟನೆ ಕಾರ್ಯದರ್ಶಿ ಭಾಸ್ಕರ್, ಜಂಟಿ ಕಾರ್ಯದರ್ಶಿ ರೇವಣ್ಣ ಕಾರ್ಯಕಾರಿ ಸಮಿತಿ ಸದಸ್ಯ ಲೋಕೇಶ್, ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕಾಂಗ್ರೆಸ್ ಪಕ್ಷಕ್ಕೆ ಕಾರ್ಯಕರ್ತರೇ ದೊಡ್ಡ ಆಸ್ತಿ

● ಚಾಮುಂಡೇಶ್ವರಿ ಕ್ಷೇತ್ರದ ಕಾಂಗ್ರೆಸ್ ಮುಖಂಡ ಕೆ.ಮರೀಗೌಡ ● ಜ.20ರಂದು ಕ್ಷೇತ್ರದಲ್ಲಿ ಕಾಂಗ್ರೆಸ್ ಬೃಹತ್ ಸಮಾವೇಶ

ಮೈಸೂರು, ಜ.11(ಪಿಎಂ)– ಕಾಂಗ್ರೆಸ್ ಪಕ್ಷಕ್ಕೆ ಕಾರ್ಯಕರ್ತರೇ ದೊಡ್ಡ ಆಸ್ತಿ. ಜ.20ರಂದು ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಪಕ್ಷದ ಬೃಹತ್ ಸಮಾವೇಶ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಪಾಲ್ಗೊಂಡು ಸಮಾವೇಶ ಯಶಸ್ವಿಗೊಳಿಸಬೇಕೆಂದು ಕ್ಷೇತ್ರದ ಕಾಂಗ್ರೆಸ್ ಮುಖಂಡ ಕೆ.ಮರೀಗೌಡ ಮನವಿ ಮಾಡಿದರು.

ಶ್ರೀರಾಂಪುರ ಪಂಚಾಯಿತಿ ವ್ಯಾಪ್ತಿಯ ರಮಾಬಾಯಿ ನಗರದ ಅಂಬೇಡ್ಕರ್ ಸಮುದಾಯ ಭವನದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರ ಸಭೆಯಲ್ಲಿ ಅವರು ಮಾತನಾಡಿದರು.



ಕ್ಷೇತ್ರದಲ್ಲಿ ಅಂದು ನಡೆಯಲಿರುವ ಬೃಹತ್ ಸಮಾವೇಶದಲ್ಲಿ ವಿವಿಧ ಪಕ್ಷಗಳ ಮುಖಂಡರು, ಕಾರ್ಯಕರ್ತರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಲಿದ್ದಾರೆ. ಕಾಂಗ್ರೆಸ್ ಈ ದೇಶದ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದೆ. ಎಲ್ಲಾ ವರ್ಗಗಳಿಗೆ ಸಾಮಾಜಿಕ ನ್ಯಾಯ ನೀಡಿದೆ. ಎಲ್ಲಾ ವರ್ಗಗಳಲ್ಲಿ ನಾಯಕರನ್ನೂ ಪಕ್ಷ ಹುಟ್ಟು ಹಾಕಿದೆ. ಇಂತಹ ಪಕ್ಷದಲ್ಲಿ ಕೆಲಸ ಮಾಡುವುದೇ ನಮ್ಮೆಲ್ಲರ ಸೌಭಾಗ್ಯ ಎಂದು ತಿಳಿಸಿದರು.

ಕಾಂಗ್ರೆಸ್ ಕಾರ್ಯಕರ್ತರು ಪಕ್ಷದ ಸಿದ್ಧಾಂತಗಳನ್ನು ಅರ್ಥೈಸಿಕೊಂಡು ಒಗ್ಗಟ್ಟಿನಿಂದ ಪಕ್ಷ ಸಂಘಟಿಸಿದರೆ ಪಕ್ಷ ಮಾತ್ರವಲ್ಲ, ದೇಶವೂ ಸದೃಢವಾಗಲಿದೆ. ಜೊತೆಗೆ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಕೂಡ ಸಾಧ್ಯವಾಗಲಿದೆ. ನಮ್ಮ ನಾಯಕ ರಾಹುಲ್ ಗಾಂಧಿಯವರು ಐಕ್ಯತಾ ಪಾದಯಾತ್ರೆ ಮೂಲಕ ಇಡೀ ದೇಶದ ಜನತೆಯ ಭಾವನೆಗೆ ಸ್ಪಂದಿಸಿದ್ದಾರೆ. ಇದು ಪಕ್ಷಕ್ಕೆ ಹೊಸ ಚೈತನ್ಯ ತಂದು ಕೊಟ್ಟಿದೆ. ರಾಜ್ಯದ ಮಲ್ಲಿಕಾರ್ಜುನ ಖರ್ಗೆಯವರು ಎಐಸಿಸಿ ಅಧ್ಯಕ್ಷರಾಗಿರುವುದೂ ಪಕ್ಷಕ್ಕೆ ಮತ್ತಷ್ಟು ಬಲ ತಂದಿದೆ ಎಂದು ಹೇಳಿದರು.

ಪ್ರಸ್ತುತ ಕೇಂದ್ರ ಮತ್ತು ರಾಜ್ಯ ಬಿಜೆಪಿ ಸರ್ಕಾರಗಳ ಆಡಳಿತದಿಂದ ಜನ ಬೇಸತ್ತಿದ್ದಾರೆ. ಹಾಗಾಗಿ ಮುಂಬರುವ ಚುನಾವಣೆಯಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರ ಹಿಡಿಯುವುದು ನಿಶ್ಚಿತವಾಗಿದೆ. ಅಲ್ಲದೆ, ಕ್ಷೇತ್ರದಲ್ಲಿ ಕಳೆದ 10 ವರ್ಷಗಳಲ್ಲಿ ಹಾಲಿ ಶಾಸಕರ ಅವಧಿಯಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ಸಮರ್ಪಕವಾಗಿ ಆಗದ ಕಾರಣ ಕ್ಷೇತ್ರದ ಜನತೆಯೂ ಬೇಸತ್ತಿದ್ದಾರೆ. ಹಾಗಾಗಿ ಕಾರ್ಯಕರ್ತರು, ಮುಖಂಡರು ತಮ್ಮಲ್ಲಿರುವ ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ಒಗ್ಗಟ್ಟಿನಿಂದ ಕೆಲಸ ಮಾಡಿದರೆ ಕ್ಷೇತ್ರದಲ್ಲೂ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಆಗಿ ಸಿದ್ದರಾಮಯ್ಯ ಐದು ವರ್ಷಗಳ ಪೂರ್ಣ ಅವಧಿಯಲ್ಲಿ ಜನಪರ ಆಡಳಿತ ನೀಡಿದರು. ಅವರ ಆಡಳಿತಾವಧಿಯ ಜನಪರ ಯೋಜನೆಗಳನ್ನು ಮನೆ ಮನೆಗೆ ಭೇಟಿ ನೀಡಿ ತಿಳಿಸಬೇಕು. ಆ ಮೂಲಕ ಕಾಂಗ್ರೆಸ್ ಪಕ್ಷ ಬೆಂಬಲಿಸಲು ಮನವಿ ಮಾಡಬೇಕು ಎಂದು ಕಾರ್ಯಕರ್ತರಲ್ಲಿ ಕೋರಿದರು.

ಬಳಿಕ ಮುಖಂಡರಾದ ಲಕ್ಷ್ಮಣ್, ಪ್ರಭು, ನಾರಾಯಣಸ್ವಾಮಿ, ಶಿವಕುಮಾರ್, ಚುಡಾಮಣಿ ಮಾತನಾಡಿದರು. ಪಕ್ಷದ ಮುಖಂಡರಾದ ಜೆ.ಸತೀಶ್ ಕುಮಾರ್, ಸಿದ್ದರಾಜು, ಮಲ್ಲಳ್ಳಿ ಮಹದೇವಸ್ವಾಮಿ, ಕೃಷ್ಣಕುಮಾರ್, ಬಿ.ರವಿ, ರಾಜೇಂದ್ರಪ್ರಸಾದ, ಲಕ್ಷ್ಮಯ್ಯ, ನಂಜುಂಡ, ವೆಂಕಟಸ್ವಾಮಿ, ಮಂಗರಾಜು, ನಾಗರಾಜು, ಕೃಷ್ಣಪ್ಪ, ವೆಂಕಟೇಶ, ಚಿನ್ನಸ್ವಾಮಿ, ಮಲ್ಲೇಶ, ಪ್ರಶಾಂತ, ಶ್ರೀಕಂಠಮೂರ್ತಿ, ಲಿಂಗಮಣಿ, ವಿದ್ಯಾಮಣಿಯಮ್ಮ, ಗೌರಮ್ಮ ಮತ್ತಿತರರು ಹಾಜರಿದ್ದರು.

ನೇರ ಪಾವತಿ ಬದಲು ಸಂಪೂರ್ಣ ಖಾಯಂಗೆ ಪೌರಕಾರ್ಮಿಕರ ಒತ್ತಾಯ

ಬಜೆಟ್‌ನಲ್ಲಿ ಪೌರಕಾರ್ಮಿಕರ ಕಲ್ಯಾಣ ಮಂಡಳಿ ಸ್ಥಾಪನೆ ಘೋಷಿಸಲೂ ಆಗ್ರಹ



ಗುತ್ತಿಗೆ ಪೌರ ಕಾರ್ಮಿಕರ ಮಹಾಸಂಘದ ಉನ್ನತ ಸಮಿತಿ ಅಧ್ಯಕ್ಷ ಎನ್.ಮಾರ ಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು,ಜ.11(ಪಿಎಂ)– ರಾಜ್ಯದ ಪಾಲಿಕೆಗಳ ಪೌರ ಕಾರ್ಮಿಕರ ನೇಮಕಾತಿ ಸಂಬಂಧ ನಿಯಮಾವಳಿಗಳಿಗೆ ತಿದ್ದುಪಡಿ ತರುವ ಮೂಲಕ ಮಂಜೂರಾದ ಎಲ್ಲಾ ಹುದ್ದೆಗಳನ್ನು ಖಾಯಂ ಆಗಿ ನೇಮಕ ಮಾಡಲು ರಾಜ್ಯ ಸರ್ಕಾರ ಕ್ರಮ ವಹಿಸಬೇಕೆಂದು ಮೈಸೂರು ನಗರ ಪಾಲಿಕೆ ಖಾಯಂ ಪೌರ ಕಾರ್ಮಿಕರ ಹಾಗೂ ಗುತ್ತಿಗೆ ಪೌರಕಾರ್ಮಿಕರ ಮಹಾಸಂಘದ ಉನ್ನತ ಸಮಿತಿ ಅಧ್ಯಕ್ಷ ಎನ್.ಮಾರ ಒತ್ತಾಯಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಗುತ್ತಿಗೆ ಪೌರಕಾರ್ಮಿಕ ಪದ್ಧತಿ ರದ್ದುಗೊಳಿಸಿದ್ದರೂ ಪೌರಕಾರ್ಮಿಕರ ನೇಮಕಾತಿ ನಿಯಮಾವಳಿಗೆ ಸೂಕ್ತ ತಿದ್ದುಪಡಿ ತರದ ಹಿನ್ನೆಲೆಯಲ್ಲಿ ಮಂಜೂರಾದ ಹುದ್ದೆಗಳಲ್ಲಿ ಶೇ.50ರಷ್ಟು ಮಾತ್ರ ಖಾಯಂ ಮಾಡುತ್ತಿದ್ದು, ಉಳಿದ ಶೇ.50ರಷ್ಟು ಹುದ್ದೆಗಳನ್ನು ನೇರಪಾವತಿಯಡಿ ನೇಮಕ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಪೌರಕಾರ್ಮಿಕರ ನೇಮಕಾತಿಯ 'ಸಿ ಅಂಡ್ ಆರ್ ರೂಲ್ಸ್'ನಲ್ಲಿ ಶೇ.50ರಷ್ಟು ಹುದ್ದೆಗಳನ್ನು ಖಾಯಂ ಆಗಿ ಮತ್ತು ಶೇ.50ರಷ್ಟು ಹುದ್ದೆಗಳನ್ನು ಗುತ್ತಿಗೆಯಡಿ ಭರ್ತಿ ಮಾಡಬೇಕು ಎಂದಿದೆ. ಗುತ್ತಿಗೆ ಪೌರಕಾರ್ಮಿಕ ಪದ್ಧತಿ ರದ್ದುಗೊಂಡ ಬಳಿಕ ಶೇ.50ರಷ್ಟು ಹುದ್ದೆಗಳನ್ನು ಗುತ್ತಿಗೆ ಬದಲು ನೇರಪಾವತಿಯಡಿ ನೇಮಕ ಮಾಡಲಾಗುತ್ತಿದೆ. ನೇರಪಾವತಿ ಕೈಬಿಟ್ಟು, ಶೇ.100ರಷ್ಟು ಖಾಯಂ ನೇಮಕಾತಿ ಮಾಡಬೇಕು. ಖಾಯಂ ಪೌರಕಾರ್ಮಿಕರಿಗೆ 25 ಸಾವಿರ ರೂ. ವೇತನ ಇದ್ದರೆ ನೇರಪಾವತಿಗೆ 15 ಸಾವಿರ ರೂ. ವೇತನ ಇದ್ದು, ಈ ತಾರತಮ್ಯ ಹೋಗಲಾಡಿಸಬೇಕು ಎಂದು ಆಗ್ರಹಿಸಿದರು.

ಮನೆ ಮನೆ ಕಸ ಸಂಗ್ರಹ ಮಾಡುವ ವಾಹನ ಚಾಲಕರನ್ನೂ ಪೌರಕಾರ್ಮಿಕರೆಂದು ಪರಿಗಣಿಸಬೇಕು. ಮೈಸೂರು ಮಹಾನಗರ ಪಾಲಿಕೆಯಲ್ಲಿ ನೇರಪಾವತಿ, ಹೆಚ್ಚುವರಿ ಪೌರಕಾರ್ಮಿಕರಾಗಿ ಸೇವೆ ಸಲ್ಲಿಸುವ ಅವಧಿಯಲ್ಲಿ ಮರಣ ಹೊಂದಿದ 60 ಪೌರಕಾರ್ಮಿಕರ ಕುಟುಂಬಗಳಿಗೆ ಅನುಕಂಪದ ಆಧಾರದಲ್ಲಿ ಕೆಲಸ ನೀಡಬೇಕು. ಜೊತೆಗೆ 10 ಲಕ್ಷ ರೂ. ಪರಿಹಾರ ನೀಡಬೇಕು. 2022–23ನೇ ಬಜೆಟ್‌ನಲ್ಲಿ ಘೋಷಿಸಿದಂತೆ ಪೌರಕಾರ್ಮಿಕರಿಗೆ ಮಾಸಿಕ ಎರಡು ಸಾವಿರ ರೂ. ಸಂಕಷ್ಟ ಭತ್ಯೆ ನೀಡಬೇಕು ಎಂದು ಒತ್ತಾಯಿಸಿದರು.

ಪೌರಕಾರ್ಮಿಕ ಶ್ರೇಯೋಭಿವೃದ್ಧಿಯ ಮೇಲ್ವಿಚಾರಣೆಗೆ ಪೌರಕಾರ್ಮಿಕರ ಕಲ್ಯಾಣ ಮಂಡಳಿ ಸ್ಥಾಪನೆ ಮಾಡಬೇಕು. ಮುಂಬರುವ ಬಜೆಟ್‌ನಲ್ಲಿ ಮಂಡಳಿ ಸ್ಥಾಪನೆಯನ್ನು ರಾಜ್ಯ ಸರ್ಕಾರ ಘೋಷಣೆ ಮಾಡಬೇಕು ಎಂದು ಆಗ್ರಹಿಸಿದರು. ಸಂಘದ ಉನ್ನತ ಸಮಿತಿ ಕಾರ್ಯದರ್ಶಿ ಟಿ.ಶ್ರೀನಿವಾಸ್, ಅಧ್ಯಕ್ಷ ಎನ್.ಮೋಹನ್‌ಕುಮಾರ್, ಪ್ರಧಾನ ಕಾರ್ಯದರ್ಶಿ ಸಿ.ಆರ್.ರಾಚಯ್ಯ, ಮೈಸೂರು ಮಹಾನಗರ ಪಾಲಿಕೆ ವಾಹನ ಚಾಲಕರ ಸಂಘದ ಅಧ್ಯಕ್ಷ ಎಸ್.ಮುರುಗೇಶ್, ಪ್ರಧಾನ ಕಾರ್ಯದರ್ಶಿ ಶೇಷಣ್ಣ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಕಾಂಗ್ರೆಸ್ ಯುವ ಮುಖಂಡ ಎಂ.ಎಸ್.ದರ್ಶನ್ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ರಕ್ತದಾನ ಶಿಬಿರ



ಯಾದವಗಿರಿಯ ಕಾಂಗ್ರೆಸ್ ಯುವ ಮುಖಂಡ ಎಂ.ಎಸ್.ದರ್ಶನ್ ಅವರ 32ನೇ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ದರ್ಶನ್ ಸ್ನೇಹ ಬಳಗದ ವತಿಯಿಂದ ರಕ್ತದಾನ ಶಿಬಿರ ಏರ್ಪಡಿಸಲಾಗಿತ್ತು. ಚಾಮರಾಜ ಕ್ಷೇತ್ರದ ಕೆಪಿಸಿಸಿ ಸದಸ್ಯ ಕೆ.ಹರೀಶ್‌ಗೌಡ ರಕ್ತದಾನಿಗಳಿಗೆ ಹಣ್ಣು ಹಂಪಲು, ಪಾನೀಯ ನೀಡುವ ಮೂಲಕ ಶಿಬಿರಕ್ಕೆ ಚಾಲನೆ ನೀಡಿದರು. ಈ ವೇಳೆ ಮುಖಂಡರಾದ ಗೋಕುಲಂ ಮಂಜು, ಮಂಜುನಾಥಪುರದ ಯಜಮಾನರಾದ ಮಲ್ಲಿಕಾರ್ಜುನ್, ದ್ವಾರಕೀಶ್, ಶಿವರಾಜ್, ನಾಗರಾಜು, ದರ್ಶನ್ ಸ್ನೇಹ ಬಳಗದ ಸ್ನೇಹಿತರು, ಹಿತೈಷಿಗಳು ಎಂ.ಎಸ್.ದರ್ಶನ್ ಅವರಿಗೆ ಹುಟ್ಟುಹಬ್ಬದ ಶುಭ ಕೋರಿದರು.

ಸಿದ್ದರಾಮಯ್ಯ ವಿರುದ್ಧ ವರ್ತೂರು ಪ್ರಕಾಶ್ ಹೇಳಿಕೆಗೆ ಖಂಡನೆ

ಮೈಸೂರು,ಜ.11(ಪಿಎಂ)–ಮಾಜಿ ಸಿಎಂ ಸಿದ್ದರಾಮಯ್ಯ ವಿರುದ್ಧ ಬಿಜೆಪಿ ಮುಖಂಡ ವರ್ತೂರು ಪ್ರಕಾಶ್ ಟೀಕಾಪ್ರಹಾರ ನಡೆಸಿದ್ದನ್ನು ಪ್ರದೇಶ ಕಾಂಗ್ರೆಸ್‌ನ ಇತರೆ ಹಿಂದುಳಿದ ವರ್ಗಗಳ ವಿಭಾಗದ ಪ್ರಧಾನ ಕಾರ್ಯದರ್ಶಿ ಸಿ.ಮಹದೇವು ಕೋಟೆಹುಂಡಿ ಖಂಡಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಕೋಲಾರ ಕ್ಷೇತ್ರದಿಂದ ಸ್ಪರ್ಧಿಸುವುದಾಗಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಘೋಷಿಸಿದ ಬೆನ್ನಲ್ಲೇ ಕ್ಷೇತ್ರದ ಬಿಜೆಪಿ ಟಿಕೆಟ್ ಆಕಾಂಕ್ಷಿ ವರ್ತೂರು ಪ್ರಕಾಶ್, ಅವರ ವಿರುದ್ಧ ಟೀಕಾಪ್ರಹಾರ ನಡೆಸಿದ್ದಾರೆ. ಇದು ಖಂಡನೀಯ. ಸಿದ್ದರಾಮಯ್ಯನವರನ್ನು ಕುರುಬ ಸಮುದಾಯದ ನಾಯಕರಲ್ಲ ಮತ್ತು ಅಹಿಂದ ನಾಯಕರೂ ಅಲ್ಲ ಎಂದು ಟೀಕಿಸಿದ್ದು, ಇವರು ತಾವು ಸಿದ್ದರಾಮಯ್ಯನವರ ಆಶ್ರಯದಲ್ಲಿ ಬೆಳೆದಿದ್ದನ್ನು ಮರೆತಿದ್ದಾರೆ ಎಂದು ಟೀಕಿಸಿದರು.

ವರ್ತೂರು ಪ್ರಕಾಶ್ ಇದೇ ರೀತಿ ತಮ್ಮ ವರ್ತನೆ ಮುಂದುವರೆಸಿದರೆ ಇಡೀ ಹಿಂದುಳಿದ ವರ್ಗಗಳು ಸಿಡಿದೇಳಬೇಕಾಗುತ್ತದೆ. ಕೋಲಾರದ ನಿಮ್ಮ ಮನೆ ಎದುರು ಭಾರೀ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ವರ್ತೂರು ಪ್ರಕಾಶ್ ಅವರಿಗೆ ಎಚ್ಚರಿಸಿದರು. ವಿಭಾಗದ ಕಾರ್ಯಕಾರಿ ಸಮಿತಿ ಸದಸ್ಯ ಆರ್.ಜಿ.ಶಂಕರ್, ಮುಖಂಡರಾದ ಆರ್.ಸೋಮಶೇಖರ್, ಮೈಸೂರು ಬಸವಣ್ಣ, ಮಹದೇವ್, ಲೋಕೇಶ್ ಗೋಷ್ಠಿಯಲ್ಲಿದ್ದರು.

ಸಂವಹನ ಪ್ರಕಾಶನದ ಕ್ಯಾಲೆಂಡರ್ ಬಿಡುಗಡೆ



ಮೈಸೂರು,ಜ.11(ಎಂಟಿವೈ)–ಮನೋವಿಕಾಸಕ್ಕಾಗಿ ಓದುವ ಹವ್ಯಾಸ ರೂಢಿಸಿಕೊಳ್ಳುವುದು ಉತ್ತಮ ಎಂದು ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಶ್ರೀ ರಾಜೇಂದ್ರ ಪ್ರಿಂಟರ್ಸ್ ಮತ್ತು ಪಬ್ಲಿಷರ್ಸ್, ಸಂವಹನ ಪ್ರಕಾಶಕರು ಹೊರತಂದಿರುವ ಕನ್ನಡ ಅಂಕಿಗಳ ದಿನದರ್ಶಿಕೆಯನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಪುಸ್ತಕ ಇಲ್ಲದಿದ್ದರೆ ಜೀವನವೇ ಇಲ್ಲ. ಅರಿವು, ಸಂಸ್ಕಾರಕ್ಕೆ ಪುಸ್ತಕಗಳು ಕಾರಣವಾಗಿವೆ. ಓದಿನಿಂದ ಅರಿವಿನ ವಿಸ್ತಾರವಾಗುತ್ತದೆ. ಜಗತ್ತಿನಲ್ಲಿ ಏನೇ ಪತನವಾದರೂ ಸಾಹಿತ್ಯ ಮಾತ್ರ ಶಾಶ್ವತವಾಗಿ ಉಳಿಯುತ್ತದೆ. ಮುಂದಿನ ತಲೆಮಾರಿಗೆ ದಾಟಿಸುವ ಜೀವಂತ ಮಾಧ್ಯಮವೇ ಪುಸ್ತಕಗಳಾಗಿವೆ ಎಂದರು.

ಈ ಕ್ಯಾಲೆಂಡರ್‌ನಲ್ಲಿ ಮುಖ್ಯವಾಗಿ ಕನ್ನಡ ಅಂಕಿಗಳ ಬಳಕೆ ಮಾತ್ರವಲ್ಲದೆ, ಕನ್ನಡ ಭಾಷೆ ಶ್ರೀಮಂತಗೊಳಿಸಿದ ಮಹನೀಯರ ಮಾತುಗಳನ್ನು ಉಲ್ಲೇಖಿಸಲಾಗಿದೆ. ಹೀಗಾಗಿ ಮಕ್ಕಳೂ ಸೇರಿದಂತೆ ಯುವಜನರಲ್ಲಿ ಕನ್ನಡ ಭಾಷೆ, ಕನ್ನಡ ಸಾಹಿತ್ಯ ಪ್ರೇಮ ಮೂಡಿಸುತ್ತದೆ. ಹೊಸ ವರ್ಷದಲ್ಲಿ ಎಲ್ಲರೂ ದಿನದರ್ಶಿಕೆ ಪ್ರಕಟಿಸುತ್ತಾರೆ. ಆದರೆ ಈ ದಿನದರ್ಶಿಕೆಯಲ್ಲಿ ಪುಸ್ತಕ ಹಾಗೂ ಗ್ರಂಥಾಲಯಗಳ ಬಗ್ಗೆ ಪ್ರೊ.ದೇಜಗೌ, ಪ್ರೊ.ಸಿಪಿಕೆ, ಪ್ರೊ.ಹಾಮಾನಾ, ಡಿ.ಎಲ್.ನರಸಿಂಹಾಚಾರ್, ಪ್ರೊ.ಜಿ.ಎಸ್.ಶಿವರುದ್ರಪ್ಪ ಇನ್ನಿತರ ವಿದ್ವಾಂಸರ ಅಭಿಪ್ರಾಯಗಳಿವೆ. ಸಿದ್ದಪ್ಪ ಕಂಬಳಿ, ಜಯದೇವಿತಾಯಿ ಲಿಗಾಡೆ, ಶಿ.ಶಿ.ಬಸವನಾಳ ಅವರ ಪರಿಚಯವಿದೆ. ಮಹಾತ್ಮಗಾಂಧೀಜಿ ಅವರ ಮೇಲೆ ಪುಸ್ತಕಗಳ ಪ್ರಭಾವ, ಫರ್ಡಿನಾಂಡ್ ಕಿಟಲ್ ಹಾಗೂ ಬಿ.ಎಲ್. ರೈಸ್ ಅವರು ಕನ್ನಡ ಭಾಷೆ ಶ್ರೀಮಂತಗೊಳಿಸಲು ನೀಡಿದ ಕೊಡುಗೆಯ ಉಲ್ಲೇಖವಿದೆ ಎಂದು ಅವರು ಹೇಳಿದರು.

ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಾಧ್ಯಕ್ಷರಾಗಿದ್ದ ಏಳು ಮಂದಿಯ ಪರಿಚಯ ಕೂಡ ಈ ದಿನದರ್ಶಿಕೆಯಲ್ಲಿ ಇದೆ. ಸಾಹಿತ್ಯ ಮತ್ತು ಪುಸ್ತಕ ಸಂಸ್ಕೃತಿಯನ್ನು ಪ್ರಚಾರ ಮಾಡುವಲ್ಲಿ ಇದು ಸಹಕಾರಿಯಾಗಿದೆ ಎಂದರು. ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಶಾರದಾವಿಲಾಸ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಪ್ರೊ.ನಟರಾಜ್, ಹಿರಿಯ ಕಲಾವಿದ ಎಲ್.ಶಿವಲಿಂಗಪ್ಪ, ವಕೀಲ ಲಕ್ಷ್ಮೀಗೌಡ, ಗುರುಮಲ್ಲಪ್ಪ, ಮೈಕ್ ಪ್ರಕಾಶ್ ಇದ್ದರು. ಸಂವಹನ ಪ್ರಕಾಶನದ ಡಿ.ಎನ್.ಲೋಕಪ್ಪ ವಂದಿಸಿದರು.

ಆಸ್ಪತ್ರೆಯಿಂದ ಸೋನಿಯಾ ಗಾಂಧಿ ಡಿಸ್ಚಾರ್ಜ್



ನವದೆಹಲಿ: ಉಸಿರಾಟದ ವೈರಲ್ ಸೋಂಕಿನ ಚಿಕಿತ್ಸೆಗಾಗಿ ದೆಹಲಿಯ ಗಂಗಾರಾಮ್ ಆಸ್ಪತ್ರೆಗೆ ದಾಖಲಾಗಿದ್ದ ಕಾಂಗ್ರೆಸ್ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಅವರ ಆರೋಗ್ಯ ಸ್ಥಿತಿ ಸ್ಥಿರವಾಗಿರುವ ಹಿನ್ನೆಲೆಯಲ್ಲಿ ಅವರನ್ನು ಬಿಡುಗಡೆ ಮಾಡಲಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಗಂಗಾ ರಾಮ್ ಆಸ್ಪತ್ರೆ ಅಧ್ಯಕ್ಷ ಡಾ.ಅಜಯ್ ಸ್ವರೂಪ್ ಮಾತನಾಡಿ, ಸೋನಿಯಾ ಗಾಂಧಿ ಅವರು ಜ.10ರಂದು ಮಧ್ಯಾಹ್ನ 3 ಗಂಟೆಗೆ ಸ್ಥಿರ ಮತ್ತು ತೃಪ್ತಿಕರ ಸ್ಥಿತಿಯಲ್ಲಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ' ಎಂದರು. ಉಸಿರಾಟದ ಸೋಂಕಿನಿಂದ ಬಳಲುತ್ತಿದ್ದ ಅವರನ್ನು ಜನವರಿ 4 ರಂದು ಸರ್ ಗಂಗಾರಾಮ್ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಮುಕ್ತ ವಿವಿಯಲ್ಲಿ 'ಪರಂಪರೆ ಕೂಟ' ಸ್ಥಾಪನೆ

ಪುರಾತತ್ವ ವಸ್ತುಸಂಗ್ರಹಾಲಯ, ಪರಂಪರೆ ಇಲಾಖೆ ಸಹಯೋಗದಲ್ಲಿ ಐತಿಹಾಸಿಕ ಕಾರ್ಯಕ್ಕೆ ನಾಂದಿ

ಮೈಸೂರು, ಜ.11(ಎಂಕೆ)– ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ(ಕೆಎಸ್‌ಒಯು)ದ ನಳ ಸಭಾಂಗಣದಲ್ಲಿ ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಪುರಾತತ್ವ ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಸಹಯೋಗದಲ್ಲಿ 'ಪರಂಪರೆ ಕೂಟ' ಏರ್ಪಡಿಸಲಾಗಿತ್ತು.



ಈ ಸಂಬಂಧಿತ ಕಾರ್ಯಕ್ರಮವನ್ನು ಉದ್ಘಾಟಿಸಿದ ಕೆಎಸ್‌ಒಯು ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಮಾತನಾಡಿ, ಪರಂಪರೆ ಕೂಟಗಳನ್ನು ಸಾಮಾನ್ಯವಾಗಿ ಕಾಲೇಜುಗಳಲ್ಲಿ ಸ್ಥಾಪಿಸಲಾಗಿದೆ. ಆದರೆ ಇದೇ ಮೊದಲ ಬಾರಿಗೆ ಮುಕ್ತ ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಿರುವುದು ಶ್ಲಾಘನೀಯ ಹಾಗೂ ಐತಿಹಾಸಿಕ ಕಾರ್ಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕುಲಸಚಿವ ಪ್ರೊ.ಕೆ.ಎಲ್.ಎನ್ ಮೂರ್ತಿ ಮಾತನಾಡಿ, ಪರಂಪರೆ ಕೂಟವನ್ನು ನಮ್ಮ ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಿರುವುದು ಸಾಧನೆಯಾಗಿದೆ. ಮುಂದಿನ ದಿನಗಳಲ್ಲಿ ಒಂದು ದೊಡ್ಡ ವಸ್ತುಸಂಗ್ರಹಾಲಯ ಸ್ಥಾಪಿಸಲು ಕ್ರಮ ಕೈಗೊಳ್ಳುತ್ತೇವೆ ಎಂದು ತಿಳಿಸಿದರು.

ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥ ಡಾ.ಶೆಲ್ವಪಿಳ್ಳೆ ಐಯ್ಯಂಗಾರ್ ಮಾತನಾಡಿ, ಈ ಪರಂಪರೆ ಕೂಟದ ಮೂಲಕ ನಮ್ಮ ಪರಂಪರೆ, ಇತಿಹಾಸ, ಸ್ಮಾರಕಗಳನ್ನು ರಕ್ಷಿಸುವ, ಇದರ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತದೆ. ವರ್ಷಪೂರ್ತಿ ಈ ರೀತಿಯ ಚಟುವಟಿಕೆಗಳನ್ನು ಮಾಡಲಾಗುತ್ತದೆ ಎಂದರಲ್ಲದೆ ಈ ಪರಂಪರೆ ಕೂಟಕ್ಕೆ 50 ಮಂದಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಅವರಿಗೆ ಸೋಮನಾಥಪುರದ ಸ್ಮಾರಕಗಳ ಪರಿಚಯ ಮಾಡಿಸಲಾಗುತ್ತದೆ ಎಂದರು.

ಬಳಿಕ ಪರಂಪರೆ ಕೂಟದ ಸ್ಮಾರಕ ಪ್ರವಾಸದ ಬಸ್‌ಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಲಾಯಿತು. ಕುಲಸಚಿವ(ಪರೀಕ್ಷಾಂಗ) ಪ್ರೊ.ಕೆ.ಬಿ.ಪ್ರವೀಣ್, ಹಣಕಾಸು ಅಧಿಕಾರಿ ಡಾ.ಎ.ಖಾದರ್ ಪಾಷಾ, ಡೀನ್‌ಗಳಾದ ಪ್ರೊ.ಕಾಂಬ್ಳೆ ಅಶೋಕ್, ಪ್ರೊ.ರಾಮನಾಥನ್ ನಾಯ್ಡು, ಪುರಾತತ್ವ, ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಉಪನಿರ್ದೇಶಕ ಡಾ.ಸಿ.ಎನ್. ಮಂಜುಳ, ಸಂಪನ್ಮೂಲ ವ್ಯಕ್ತಿಗಳಾಗಿ ಡಾ.ಲ.ನ.ಸ್ವಾಮಿ, ಗೌತಮ್ ಜಂತಕಲ್, ಡಾ.ಅಂಜನಾಮೂರ್ತಿ, ಡಾ.ರವಿಪ್ರಸಾದ್, ಮುನಿಸ್ವಾಮಿ, ಶಿವಶಂಕರ್ ಮತ್ತಿತರರಿದ್ದರು.

ಗ್ರಂಥಾಲಯಗಳಿಗೆ ಪುಸ್ತಕ ಆಹ್ವಾನ

ಮೈಸೂರು,ಜ.11–ನಿರ್ದೇಶಕರು ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ವತಿಯಿಂದ ಸಾರ್ವಜನಿಕ ಗ್ರಂಥಾಲಯ ಇಲಾಖೆ ಗ್ರಂಥಾಲಯಗಳಿಗೆ 2022ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಣೆಯಾದ ಸಾಹಿತ್ಯ, ಕಲೆ, ವಿಜ್ಞಾನ, ಸ್ಪರ್ಧಾತ್ಮಕ, ಪಠ್ಯ, ಪಠ್ಯಪುಸ್ತಕ, ಸಾಂದರ್ಭಿಕ, ಮಕ್ಕಳ ಸಾಹಿತ್ಯ, ವೃತ್ತಿ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಆದಾಯ ಉತ್ಪಾದನಾ ಯೋಜನೆ ಇತ್ಯಾದಿ ವಿಷಯಗಳ ಕನ್ನಡ, ಆಂಗ್ಲ ಹಾಗೂ ಇತರೆ ಭಾರತೀಯ ಭಾಷೆಯ ಗ್ರಂಥಗಳ ಆಯ್ಕೆಗೆ ಲೇಖಕ, ಲೇಖಕ ಪ್ರಕಾಶಕ, ಪ್ರಕಾಶಕರ ಹಾಗೂ ಪ್ರಕಟ ಸಂಸ್ಥೆಗಳಿಂದ ಪುಸ್ತಕಗಳನ್ನು ಆಹ್ವಾನಿಸಲಾಗಿದೆ. ಅರ್ಜಿಯೊಂದಿಗೆ ಗ್ರಂಥಸ್ವಾಮ್ಯ ವಿಭಾಗ, ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು, ಇಲ್ಲಿ ಕಾಪಿರೈಟ್ ಮಾಡಿಸಿರುವ ಪುಸ್ತಕದ ಪ್ರತಿಯನ್ನು ನೋಂದಣಿ ಪತ್ರದ ಪ್ರತಿಯೊಂದಿಗೆ ಜ.31ರ ಸಂಜೆ 5ರೊಳಗಾಗಿ ನಿರ್ದೇಶಕರ ಕಚೇರಿಗೆ ಸಲ್ಲಿಸಬಹುದು. ಮಾಹಿತಿಗೆ ನಗರ ಕೇಂದ್ರ ಗ್ರಂಥಾಲಯವನ್ನು ಸಂಪರ್ಕಿಸಬಹುದು.

ನಕ್ಕರೆ ಅದೇ ಸ್ವರ್ಗ

ಪತಿ : ತಮಾಷೆ ಮಾಡುವ ನಿಮ್ಮ ತಂದೆಯವರ ಸ್ವಭಾವ ಬದಲಾದಂತೆ ತೋರುತ್ತಿಲ್ಲ
ಪತ್ನಿ : ಏಕೆ ಹಾಗೆ ಹೇಳುವಿರಿ?
ಪತಿ : ಏಕೆಂದರೆ ನನ್ನ ಮಗಳನ್ನು ಮದುವೆಯಾಗಿ ನೀನು ಸುಖವಾಗಿದ್ದೀಯಾ ಎಂದು ಕೇಳುತ್ತಾರಲ್ಲಾ!'

ಮೈಸೂರು ಮಿತ್ರ

ಗುರುವಾರ, 12 ಜನವರಿ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಸುಖ ನಮ್ಮಲ್ಲಿನ ಕೆಟ್ಟದ್ದನ್ನು, ಹೊರತಂದರೆ, ಕಷ್ಟ ನಮ್ಮಲ್ಲಿನ ಒಳ್ಳೆಯದನ್ನು ಹೊರ ತರುತ್ತದೆ. – ಫ್ರಾನ್ಸಿಸ್ ಬೇಕನ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಬಲೆಗೆ ಸಿಕ್ಕದ್ದು ಕೋಲಿಗೆ ಸಿಕ್ಕೀತೆ?

ನಿಮ್ಮ ಪತ್ರಗಳು

ವಾಹನಗಳ ಸಂಚಾರಕ್ಕೆ ಸಂಚಕಾರ ತಂದ ರಸ್ತೆ!

ಮಾನ್ಯರೆ,

ಮೈಸೂರು ನಗರದ ವಾರ್ಡ್ ನಂ 61, ವಿದ್ಯಾರಣ್ಯಪುರಂನ ನಾಲ್ಕನೇ ಮುಖ್ಯ ರಸ್ತೆ, 9ನೇ ಕ್ರಾಸ್, ಈ ರಸ್ತೆಯನ್ನು ಕಳೆದ ಎರಡು ವರ್ಷಗಳಿಂದ ಯುಜಿಡಿ ಲೈನ್‌ಗಳ ಅವೈಜ್ಞಾನಿಕ ರಿಪೇರಿಗಾಗಿ ನಾಲ್ಕು ಬಾರಿ ಅಗೆದು ಸಾರ್ವಜನಿಕರಿಗೆ ಸುಗಮವಾಗಿ ಸಂಚರಿಸಲು ಯೋಗ್ಯವಿಲ್ಲದಂತೆ ಮಾಡಲಾಗಿದೆ. ರಸ್ತೆಯ ತುಂಬೆಲ್ಲಾ ಮಣ್ಣಿನ ರಾಶಿಯೇ ಬಿದ್ದಿದೆ. ಈ ರಾಶಿಯನ್ನು ಮಟ್ಟ ಮಾಡದೆ, ಅರ್ಧಂಬರ್ಧ ಕಾಮಗಾರಿ ಮಾಡಲಾಗಿದೆ. ವಾಹನಗಳು ಸಂಚರಿಸಲು ಹರಸಾಹಸ ಪಡಬೇಕಾಗಿದೆ. ನಡೆದುಕೊಂಡು ಓಡಾಡುವುದಕ್ಕೂ ತುಂಬಾ ತೊಂದರೆಯಾಗಿದೆ. ಮುಖ್ಯ ರಸ್ತೆಯ ಮಧ್ಯದಲ್ಲೇ ಬ್ಯಾರಿಕೇಡ್‌ಗಳನ್ನು ಹಾಕಿದ್ದು, ಒಂದು ತಿಂಗಳು ಕಳೆದರೂ ಅದನ್ನು ತೆರವುಗೊಳಿಸಿಲ್ಲ. ಈ ರಸ್ತೆ ತುಂಬಾ ಮಣ್ಣಿನ ರಾಶಿ ಬಿದ್ದಿದ್ದು, ಗುಂಡಿಮಯವಾಗಿದೆ. ಈ ಧೂಳಿನಿಂದ ಅನೇಕ ಜನರಿಗೆ ಉಸಿರಾಟದ ತೊಂದರೆಯುಂಟಾಗಿ ಅನಾರೋಗ್ಯಕ್ಕೆ ತುತ್ತಾಗಿದ್ದಾರೆ. ಈ ರಸ್ತೆಯು ಅಗೆದು! ಅಗೆದು! ಹದಗೆಟ್ಟಿದ್ದು, ಈ ರಸ್ತೆ ಡಾಂಬರೀಕರಣವೇ ಕಾಣುತ್ತಿಲ್ಲ. ಅಷ್ಟರಮಟ್ಟಿಗೆ ಅವೈಜ್ಞಾನಿಕ ಮತ್ತು ಪ್ಲಾನ್ ಇಲ್ಲದೆ ಯುಜಿಡಿ ಕಾಮಗಾರಿ ನಡೆದಿದೆ. ಈ ಅಸ್ತವ್ಯಸ್ತ, ಗುಂಡಿಗಳ ರಸ್ತೆಯಿಂದ ಈ ಭಾಗದ ನಿವಾಸಿಗಳ ನೆಮ್ಮದಿಗೆ ಭಂಗ ತಂದಿದ್ದು, ಪ್ರತಿನಿತ್ಯ ನರಕಯಾತನೆ ಅನುಭವಿಸುತ್ತಿದ್ದಾರೆ. ನಗರಪಾಲಿಕೆಗೆ ಹಿಡಿಶಾಪ ಹಾಕುತ್ತಿದ್ದಾರೆ. ಇನ್ನಾದರೂ ಎಚ್ಚೆತ್ತುಕೊಂಡು ಅನಾಹುತಗಳಾಗುವುದಕ್ಕೂ ಮುಂಚೆ ಈ ರಸ್ತೆಯನ್ನು ಸಂಬಂಧಪಟ್ಟ ಜನ ಪ್ರತಿನಿಧಿಗಳಾಗಲೀ, ಅಧಿಕಾರಿ ವರ್ಗದವರಾಗಲೀ ಸರಿಪಡಿಸಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಮನವಿ.



–ಪರಶಿವಮೂರ್ತಿ ಎನ್.ಪಿ, ನಂಜೀಪುರ, ಸರಗೂರು ತಾ.

ಕರ್ನಾಟಕದ ಸ್ತಬ್ಧಚಿತ್ರ ನಿರಾಕರಣೆ ಸರಿಯಲ್ಲ

ಮಾನ್ಯರೆ,

ಕರ್ನಾಟಕ ಸ್ತಬ್ಧ ಚಿತ್ರ ನಿರಾಕರಣೆ ಸಲ್ಲ? ಗಣರಾಜ್ಯೋತ್ಸವ ದಿನದಂದು ನಡೆಯುವ ಪರೇಡ್ ಪ್ರದರ್ಶನ ಜಗತ್ತಿಗೆ ಭಾರತೀಯ ಸಂಸ್ಕೃತಿ ಅನಾವರಣಗೊಳಿಸುವ ವೇದಿಕೆ ಅಂದರೆ ತಪ್ಪಾಗಲಾರದು. ಕರ್ನಾಟಕ ಜಗತ್ ಪ್ರಸಿದ್ಧ ಪ್ರವಾಸಿ ತಾಣ. ಅದರಲ್ಲಿ ಬೇರೆ ಮಾತಿಲ್ಲ. ಸಾಂಸ್ಕೃತಿಕ ನಗರಿ, ಸಿಲಿಕಾನ್ ನಗರ ಕೋಟೆ, ನಾಡು ಅಂತೆಲ್ಲಾ ಪ್ರಸಿದ್ಧಿ ಪಡೆದ ರಾಜ್ಯ. ಇಂತಹ ಸಂದರ್ಭದಲ್ಲಿ ಕಳೆದ ಬಾರಿ 2ನೇ ಸ್ಥಾನ ಪಡೆದಿದ್ದ ಕರ್ನಾಟಕವನ್ನು ಈ ಬಾರಿ ಪರೇಡ್ ಪ್ರದರ್ಶನಕ್ಕೆ ನಿರಾಕರಣೆ ಮಾಡಿದ್ದು ಹಾಗೂ ಅದಕ್ಕೆ ಸಮರ್ಥನೀಯ ಉತ್ತರ ನೀಡಿದ್ದು ತಪ್ಪು. ಭವ್ಯ ಭಾರತದಲ್ಲಿ ಇರುವ ಎಲ್ಲಾ ರಾಜ್ಯಗಳಿಗೂ ಕೇಂದ್ರಾಡಳಿತ ಪ್ರದೇಶಕ್ಕೂ ಮುಕ್ತ ಅವಕಾಶ ನೀಡಿ ಗೌರವಿಸುವ ಪ್ರಯತ್ನ ಸರ್ಕಾರ ಮಾಡಲಿ. ಕರ್ನಾಟಕ ಜೊತೆಗೆ ಇತರೆ ರಾಜ್ಯಗಳ ಸಂಸ್ಕೃತಿ ಜಗತ್ತು ವಿಸ್ತರಿಸುವ ವೇದಿಕೆ ನಿರ್ಮಾಣ ಮಾಡಲಿ. ಸರ್ಕಾರವು ಹಾಗೂ ಜನರು ಈ ಧೋರಣೆ ವಿರೋಧಿಸುವ ಹಾಗೂ ಜಾರಿ ಮಾಡುವಂತೆ ಒತ್ತಡ ಹೇರುವ ಪ್ರಯತ್ನ ಮಾಡಲಿ. **–ಮನು. ಎಸ್, ಚಾಮರಾಜನಗರ**

ಬಿಎಸ್‌ಎನ್‌ಎಲ್‌ಗೆ ಕಾಯಕಲ್ಪ ನೀಡಿ!

ಮಾನ್ಯರೆ,

ಸಾರ್ವಜನಿಕ ವಲಯದ ದೂರಸಂಪರ್ಕ ಸಂಸ್ಥೆಯಾದ ಬಿಎಸ್‌ಎನ್‌ಎಲ್‌ನ ಭವಿಷ್ಯದ ಸ್ಥಿತಿಗತಿಯ ಬಗ್ಗೆ ಸರಕಾರ ಚಿಂತನೆ ನಡೆಸಬೇಕಿದೆ. ಮಾರುಕಟ್ಟೆಯ ಸ್ಪರ್ಧೆ ಬಿಎಸ್‌ಎನ್‌ಎಲ್‌ಗೆ ದೊಡ್ಡ ಸಮಸ್ಯೆಯಾಗಿದ್ದು, ಈ ಬಗ್ಗೆ ಸರ್ಕಾರ ಬಿಎಸ್‌ಎನ್‌ಎಲ್ ಬಗ್ಗೆ ಹೆಚ್ಚಿನ ಆಸಕ್ತಿಯನ್ನು ವಹಿಸಿ ತುರ್ತು ಕ್ರಮ ಕೈಗೊಳ್ಳುವುದು ಅವಶ್ಯಕವಾಗಿದೆ.

ಪ್ರಸ್ತುತ ಬಿಎಸ್‌ಎನ್‌ಎಲ್ ಕಂಪನಿಯ ನಷ್ಟಕ್ಕೆ ಕಾರಣಗಳು ಹಲವಾರಿವೆ. ಕೇಂದ್ರ ಸರಕಾರ 5ಜಿ ತರಂಗಗಳ ಹರಾಜು ಪ್ರಕ್ರಿಯೆಯನ್ನು ಈಗಾಗಲೇ ಮಾಡಿ ಮುಗಿಸಿದ್ದರೂ, ಬಿಎಸ್ಸೆನ್ನೆಲ್ ಇನ್ನೂ 4ಜಿಯನ್ನೇ ಹೊಂದಿಲ್ಲ! ಇದರಿಂದ ಬಿಎಸ್‌ಎನ್‌ಎಲ್ ಚಂದಾದಾರರ ಸಂಖ್ಯೆಯ ಬೆಳವಣಿಗೆ ತೀವ್ರ ಮಂದಗತಿಯಲ್ಲಿದೆ. ನಗರ ಹಾಗೂ ತುಂಬಾ ಕುಗ್ರಾಮ ಅನಿಸುವಂತಹ ಗ್ರಾಮೀಣ ಪ್ರದೇಶಗಳಲ್ಲಿ ಬಿಎಸ್‌ಎನ್‌ಎಲ್‌ನ ನೆಟ್‌ವರ್ಕ್ ಜಾಲ ತುಂಬಾ ಸಮರ್ಥವಾಗಿದ್ದು, ಈಗಲೂ ಕೂಡ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅಧಿಕಾರಿ ಹಾಗೂ ನೌಕರವರ್ಗ ಸೇರಿದಂತೆ ಲಕ್ಷಾಂತರ ಚಂದಾದಾರರು ಬಿಎಸ್‌ಎನ್‌ಎಲ್ ಅನ್ನು ಆಶ್ರಯಿಸಿದ್ದಾರೆ. ಹೀಗೆ ಬಿಎಸ್ಸೆನ್ನೆಲ್ ಹೆಚ್ಚು ಜನಸ್ನೇಹಿಯಾಗಿದ್ದರೂ ಮಾರುಕಟ್ಟೆಯ ತೀವ್ರ ಸ್ಪರ್ಧೆಯಿಂದ ಹಾಗೂ ಅದರ ದಕ್ಷ ನಿರ್ವಹಣೆಯ ಕೊರತೆಯಿಂದ ನಷ್ಟದತ್ತ ಸಾಗಿದೆ. ಕೇಂದ್ರಸರ್ಕಾರದಿಂದ ತುರ್ತು ನೆರವು ಇಲ್ಲದೇ ಬಿಎಸ್‌ಎನ್‌ಎಲ್ ನಿರ್ವಹಿಸುವುದು ಕಷ್ಟಸಾಧ್ಯವಾಗಿರುವ ಈ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಯಾವುದೇ ಕಾರಣಕ್ಕೂ ಬಿಎಸ್‌ಎನ್‌ಎಲ್ ಅನ್ನು ಮುಚ್ಚಲು ಬಿಡದೇ ಬದಲಾಗಿ ಬಿಎಸ್‌ಎನ್‌ಎಲ್‌ಗೆ ಕಾಯಕಲ್ಪ ನೀಡಿ, ಬಿಎಸ್‌ಎನ್‌ಎಲ್ 4ಜಿ ಸೇವೆಯನ್ನು ದೇಶದಾದ್ಯಂತ ತುರ್ತಾಗಿ ಆರಂಭಿಸುವುದು ಅಗತ್ಯ ಹಾಗೂ ಅವಶ್ಯಕವಾಗಿದೆ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

ರಾಜಪ್ರಭುತ್ವ, ಪ್ರಜಾಪ್ರಭುತ್ವ

ಮಾನ್ಯರೆ,

ರಾಜ ಪ್ರಭುತ್ವ : ಹಿಂದೆ ರಾಜರ ಆಡಳಿತವಿತ್ತು, ಆಗ ರಾಜನೇ ಸರ್ವಾಧಿಕಾರಿ, ಆದರೂ ರಾಜರು ಪ್ರಜೆಗಳನ್ನು ತಮ್ಮ ಮಕ್ಕಳಂತೆ ಪೋಷಿಸುತ್ತಿದ್ದರು.. ಪ್ರಜೆಗಳಿಗಾಗಿ ತಮ್ಮ ಪ್ರಾಣವನ್ನು ಲೆಕ್ಕಿಸುತ್ತಿರಲಿಲ್ಲ. ಪ್ರಜೆಗಳಿಗೆ, ಪ್ರಜೆಗಳಿಗೋಸ್ಕರ ಪ್ರಜೆಗಳಿಗಾಗಿ ರಾಜ್ಯಭಾರ ಮಾಡುತ್ತಿದ್ದರು. ಪ್ರಜೆಗಳ ಯೋಗಕ್ಷೇಮ ವಿಚಾರಿಸಲು, ಪ್ರಜೆಗಳ ಸ್ಥಿತಿಗತಿ ತಿಳಿಯಲು ತಾವೇ ಮಾರುವೇಷದಿಂದ ಊರಿನ ಬೀದಿ ಬೀದಿಗಳನ್ನು ಸುತ್ತುತ್ತಿದ್ದರು. ತಾವೇ ಸ್ವತಃ ಪ್ರಜೆಗಳ ಅಹವಾಲನ್ನು ಆಲಿಸಿ ಪರಿಹರಿಸುತ್ತಿದ್ದರು.

ಪ್ರಜಾಪ್ರಭುತ್ವ: ಪ್ರಜಾಪ್ರಭುತ್ವದ ಕಲ್ಪನೆ, ಆಶಯ, ಉದ್ದೇಶ ಪ್ರಜೆಗಳಿಗಾಗಿ ಪ್ರಜೆಗಳಿಗೋಸ್ಕರ ಸರ್ಕಾರ ಆಡಳಿತ ನಿರ್ವಹಿಸಬೇಕು. ಆದರೆ, ಚುನಾವಣೆ ಸಮಯದಲ್ಲಿ ಮಾತ್ರ ವೋಟಿಗಾಗಿ ಮಾರುವೇಷ ಧರಿಸಿ ಪ್ರಜೆಗಳ ಬಳಿಗೆ ಬರುವ ಆಧುನಿಕ ರಾಜರು!! ತಮ್ಮ ಮನ ಧನ ಪ್ರಾಣಗಳಿಗೆ ಹೆಚ್ಚು ಪ್ರಾಮುಖ್ಯತೆ ಕೊಡುವ ಆಧುನಿಕ ರಾಜರು!!

ರಾಜ ಪ್ರಭುತ್ವದಲ್ಲಿ ಪ್ರಜೆಗಳು ಪ್ರಭುವೋ.. ಪ್ರಜಾಪ್ರಭುತ್ವದಲ್ಲಿ ಪ್ರಜೆಗಳು ಪ್ರಭುವೋ...

–ಪುಷ್ಪಲತಾ ಫಣಿರಾಜ್, ಅಗ್ರಹಾರ, ಮೈಸೂರು.



ಪ್ರೊ. ಆರ್. ಇಂದಿರಾ
ಸಮಾಜಶಾಸ್ತ್ರಜ್ಞೆ
ramaraoindira@gmail.com

ಸಮಾಜಮುಖಿ

ಮರೀಚಿಕೆಯಾದ ಮಹಿಳಾ ಪ್ರಾತಿನಿಧ್ಯ

ಚುನಾವಣೆಗಳಲ್ಲಿ ಸ್ಪರ್ಧಿಸಲು ರಾಜಕೀಯ ಪಕ್ಷಗಳು ಮಹಿಳೆಯರಿಗೆ ಟಿಕೆಟ್ಟುಗಳನ್ನು ನೀಡುತ್ತಿಲ್ಲ ಎನ್ನುವುದೇ ರಾಜಕೀಯ ಅಧಿಕಾರದ ಮರು–ಹಂಚಿಕೆಯಾದರೆ ತಾನು ಕಳೆದುಕೊಳ್ಳಲಿರುವ ಸಾಮಾಜಿಕ, ಆರ್ಥಿಕ ಅನುಕೂಲಗಳ ಬಗ್ಗೆ ಪುರುಷ ಪ್ರಧಾನ ಮೌಲ್ಯಚರಣೆಗಳಿಂದ ಆವೃತವಾಗಿರುವ ರಾಜಕೀಯ ವ್ಯವಸ್ಥೆಗೆ ಇರುವ ಭಯವೇ ಅಥವಾ ಪಕ್ಷಗಳ ಮಹಿಳಾಪರ ಕಾಳಜಿಗಳು ರಾಜಕೀಯ ದಾಳಗಳಾಗಿ ಉಳಿದುಕೊಂಡಿದ್ದು ಅವುಗಳು ತಮ್ಮ ಅರ್ಥವನ್ನು ಕಳೆದುಕೊಂಡು ಬಿಟ್ಟಿವೆಯೇ. ಈ ಎಲ್ಲ ಪ್ರಶ್ನೆಗಳ ಬಗ್ಗೆ ಚರ್ಚೆ–ಸಂವಾದಗಳಲ್ಲಿ ತೊಡಗುವುದಕ್ಕಿಂತ ಮುಂದೆ ಹೋಗಿ ಈ ಬಾರಿಯಾದರೂ ಮಹಿಳಾ ಪ್ರಾತಿನಿಧ್ಯ ಗಮನಾರ್ಹವಾಗಿ ಹೆಚ್ಚುವಂತಾಗಲು ಯಾವ ಕ್ರಮಗಳನ್ನು ಕೈಗೊಳ್ಳಬೇಕು ಎಂಬುದರತ್ತ ಗಮನಹರಿಸಬೇಕು.



ದೇಶಕ್ಕೆ ಸ್ವಾತಂತ್ರ್ಯ ಬಂದಾಗಿನಿಂದ ರಾಜ್ಯದಲ್ಲಿ 15 ಬಾರಿ ವಿಧಾನಸಭಾ ಚುನಾವಣೆಗಳು ನಡೆದಿವೆ. ಆದರೆ ಯಾವ ಬಾರಿಯೂ ಮಹಿಳಾ ಸದಸ್ಯರ ಪ್ರಮಾಣ ಶೇ.10ರ ಹತ್ತಿರವೂ ತಲುಪಿಲ್ಲ. ತೀರಾ ಆತಂಕಕಾರಿ ವಿಚಾರವೆಂದರೆ 1952ರಲ್ಲಿ, ಎಂದರೆ 70 ವರ್ಷಗಳ ಹಿಂದೆ ರಾಜ್ಯದ ಪ್ರಥಮ ವಿಧಾನಸಭಾ ಚುನಾವಣೆ ನಡೆದಾಗ ಶೇಕಡಾ 2ರಷ್ಟಿದ್ದ ಮಹಿಳಾ ಪ್ರಾತಿನಿಧ್ಯ, ಇಂದಿಗೂ ಅಂದರೆ, 15ನೇ ವಿಧಾನಸಭೆಯಲ್ಲಿಯೂ ಶೇ.4ರಷ್ಟಕ್ಕೆ ಮಾತ್ರ ಏರಿಕೆಯಾಗಿದೆ ಎನ್ನುವುದು. ಹಾಗೆ ನೋಡಿದರೆ 1962ರಲ್ಲಿ ಆಯ್ಕೆಯಾದ 3ನೇ ವಿಧಾನಸಭೆಯನ್ನು ಹೊರತುಪಡಿಸಿದರೆ, ಪ್ರತಿ ಬಾರಿಯೂ ಮಹಿಳಾ ಪ್ರತಿನಿಧಿಗಳ ಸಂಖ್ಯೆ ಕಡಿಮೆಯಾಗುತ್ತಲೇ ಹೋಗುತ್ತಿದೆಯೇ ಹೊರತು ಹೆಚ್ಚಾಗುವ ಸೂಚನೆಗಳೇ ಇಲ್ಲ.. ರಾಜ್ಯದ 3ನೇ ವಿಧಾನಸಭೆಗೆ ಆಯ್ಕೆಯಾಗಿದ್ದ ಮಹಿಳಾ ಸದಸ್ಯರ ಪ್ರಮಾಣ ಶೇ.7ರಷ್ಟು ಆದರೆ ಇನ್ನೇನು 5 ವರ್ಷಗಳನ್ನು ಪೂರೈಸಿ 16ನೇ ಬಾರಿ ಚುನಾವಣೆಗೆ ಸಿದ್ಧತೆಯನ್ನು ನಡೆಸುತ್ತಿರುವ 2018ರಲ್ಲಿ ಆಯ್ಕೆಯಾದ ಈಗಿನ ವಿಧಾನಸಭೆಯಲ್ಲಿ ಕೇವಲ 8 ಮಹಿಳೆಯರು ಇದ್ದಾರೆ (4% ಮಾತ್ರ) ಎನ್ನುವುದು, ರಾಜ್ಯದ ರಾಜಕೀಯ ಪಕ್ಷಗಳ ಲಿಂಗ ಸಮಾನತಾ ಘೋಷಣೆಗಳು ಎಷ್ಟು ಪೊಳ್ಳು ಎಂಬುದಕ್ಕೆ ಪ್ರತ್ಯಕ್ಷ ಸಾಕ್ಷಿಯಾಗಿದೆ (ಲಭ್ಯವಿರುವ ಕೆಲವೇ ಮಾಹಿತಿ ಮೂಲಗಳಲ್ಲಿಯೂ ವ್ಯತ್ಯಾಸಗಳು ಕಂಡು ಬರುತ್ತಿರುವುದರಿಂದ ಕೆಲವೊಮ್ಮೆ ಸಂಖ್ಯೆಗಳಲ್ಲಿ, ಶೇಕಡಾವಾರುಗಳಲ್ಲಿ ಸ್ವಲ್ಪ ವ್ಯತ್ಯಾಸಗಳು ಇರುವ ಸಾಧ್ಯತೆ ಇದೆ.).

ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ನೀಡುವ ವಿಚಾರದಲ್ಲಿ ದೇಶಕ್ಕೇ ಮಾದರಿಯಾದ ಹೆಗ್ಗಳಿಕೆ ಕರ್ನಾಟಕಕ್ಕೆ ಇದೆ. ಮಹಿಳೆಯರಿಗೆ ಸ್ಥಳೀಯ ಸಂಸ್ಥೆಗಳಲ್ಲಿ ಶೇ.33ರಷ್ಟು ಮೀಸಲಾತಿಯನ್ನು ನೀಡುವ 73 ಮತ್ತು 74 ಸಂವಿಧಾನಾತ್ಮಕ ತಿದ್ದುಪಡಿಗಳು ಜಾರಿಗೆ ಬರುವ ಮುನ್ನವೇ ಎಂದರೆ 1987ರಲ್ಲಿಯೇ ಜಾರಿಗೆ ಬಂದ ಪಂಚಾಯತ್ ರಾಜ್ ಕಾಯಿದೆಯ ಅನ್ವಯ ಪಂಚಾಯತಿಗಳಲ್ಲಿ ಶೇ.25ರಷ್ಟು ಮೀಸಲಾತಿಯನ್ನು ನೀಡಿದ ರಾಜ್ಯ ನಮ್ಮದು. ಇಡೀ ದೇಶದಲ್ಲಿಯೇ ಮಹಿಳೆಯರಿಗೆ ರಾಜಕೀಯ ಮೀಸಲಾತಿಯನ್ನು ನೀಡುವ ಪರಿಕಲ್ಪನೆಯನ್ನು ಆಚರಣೆಯನ್ನಾಗಿಸಲು ಪ್ರಥಮ ಹೆಜ್ಜೆಗಳನ್ನು ಇಟ್ಟ ಕರ್ನಾಟಕದಲ್ಲಿ ತೀರಾ ಶೋಚನೀಯ ಎನ್ನುವಷ್ಟು ಮಟ್ಟಿಗೆ ರಾಜ್ಯ ರಾಜಕಾರಣದಲ್ಲಿ ಮಹಿಳಾ ಪ್ರಾತಿನಿಧ್ಯ ಇದೆ ಎಂದರೆ ಇದಕ್ಕೆ ಕಾರಣಗಳಾದರೂ ಏನು. ಚುನಾವಣೆಗಳಲ್ಲಿ ಸ್ಪರ್ಧಿಸಲು ರಾಜಕೀಯ ಪಕ್ಷಗಳು ಮಹಿಳೆಯರಿಗೆ ಟಿಕೆಟ್ಟುಗಳನ್ನು ನೀಡುತ್ತಿಲ್ಲ ಎನ್ನುವುದೇ ರಾಜಕೀಯ ಅಧಿಕಾರದ ಮರು– ಹಂಚಿಕೆಯಾದರೆ ತಾನು ಕಳೆದುಕೊಳ್ಳಲಿರುವ ಸಾಮಾಜಿಕ, ಆರ್ಥಿಕ ಅನುಕೂಲಗಳ ಬಗ್ಗೆ ಪುರುಷ ಪ್ರಧಾನ ಮೌಲ್ಯಚರಣೆಗಳಿಂದ ಆವೃತವಾಗಿರುವ ರಾಜಕೀಯ ವ್ಯವಸ್ಥೆಗೆ ಇರುವ ಭಯವೇ ಅಥವಾ ಪಕ್ಷಗಳ ಮಹಿಳಾಪರ ಕಾಳಜಿಗಳು ರಾಜಕೀಯ ದಾಳಗಳಾಗಿ ಉಳಿದುಕೊಂಡಿದ್ದು ಅವುಗಳು ತಮ್ಮ ಅರ್ಥವನ್ನು ಕಳೆದುಕೊಂಡು ಬಿಟ್ಟಿವೆಯೇ. ಈ ಎಲ್ಲ ಪ್ರಶ್ನೆಗಳ ಬಗ್ಗೆ ಚರ್ಚೆ–ಸಂವಾದಗಳಲ್ಲಿ ತೊಡಗುವುದಕ್ಕಿಂತ ಮುಂದೆ ಹೋಗಿ ಈ ಬಾರಿಯಾದರೂ ಮಹಿಳಾ ಪ್ರಾತಿನಿಧ್ಯ ಗಮನಾರ್ಹವಾಗಿ ಹೆಚ್ಚುವಂತಾಗಲು ಯಾವ ಕ್ರಮಗಳನ್ನು ಕೈಗೊಳ್ಳಬೇಕು ಎಂಬುದರತ್ತ ಗಮನ ಹರಿಸಬೇಕು.

ಮಹಿಳೆಯರಿಗೆ ಅವಕಾಶಗಳನ್ನು ನೀಡಬೇಕೆಂಬ ಮನಸ್ಸು ಪಕ್ಷಗಳಿಗೆ ಇದ್ದಿದ್ದರೆ 70 ವರ್ಷಗಳ ಕರ್ನಾಟಕದ ವಿಧಾನಸಭಾ ಚುನಾವಣಾ ಇತಿಹಾಸದಲ್ಲಿ ಕೇವಲ 100ರಷ್ಟು ಮಹಿಳೆಯರು ಮಾತ್ರ ಸದಸ್ಯತ್ವವನ್ನು ಪಡೆಯಲು ಸಾಧ್ಯವಾಗಿರುವಂಥ ಪರಿಸ್ಥಿತಿ ಉದ್ಭವವಾಗುತ್ತಿರಲಿಲ್ಲ 2018ರ ಚುನಾವಣೆಯಲ್ಲಿ ಸ್ಪರ್ಧಿಸಿದ್ದ 138 ಮಹಿಳೆಯರಲ್ಲಿ ಹೆಚ್ಚಿನವರು ಸ್ವತಂತ್ರ ಅಭ್ಯರ್ಥಿಗಳಾಗಿ ಚುನಾವಣಾ ಕಣವನ್ನು ಪ್ರವೇಶಿಸಿದ್ದಾರೆಯೇ ಹೊರತು ಪಕ್ಷ ಬೆಂಬಲಿತ ಅಭ್ಯರ್ಥಿಗಳಾಗಿ ಅಲ್ಲ. ರಾಜಕೀಯ ಪಕ್ಷಗಳ ಬೆಂಬಲವಿಲ್ಲದಿದ್ದರೆ ಬಹುತೇಕ ಮಹಿಳೆಯರಿಗೆ, ಪಂಚಾಯಿತಿಯ ಮಟ್ಟದಿಂದ ಹಿಡಿದು ರಾಷ್ಟ್ರ ರಾಜಕಾರಣದವರೆಗೂ ಚುನಾವಣಾ ಕನಸುಗಳನ್ನು ಕಾಣಲು ಸಾಧ್ಯವಿಲ್ಲ ಎನ್ನುವುದು ಎಲ್ಲರಿಗೂ ತಿಳಿದಿರುವ ವಿಚಾರವೇ.

ಮಹಿಳೆಯರು ರಾಜಕೀಯ ಪಕ್ಷಗಳಿಂದ ಪ್ರಾಯೋಜಿತ ಅಭ್ಯರ್ಥಿಗಳಾಗಬೇಕಾದರೆ ಸಾಮಾನ್ಯವಾಗಿ ಪ್ರಬಲ ರಾಜಕೀಯ ಕೌಟುಂಬಿಕ ಹಿನ್ನೆಲೆ ಇರಬೇಕು. ಅವರ ಪುರುಷ ಬಂಧುಗಳು ಅಧಿಕಾರದಲ್ಲಿರುವಾಗ ಅಪಘಾತ ಅಥವಾ ಅನಾರೋಗ್ಯ ನಿಮಿತ್ತ ಕಾಲವಾಗಿರಬೇಕು ಅಥವಾ ಕೆಲ ಸಂದರ್ಭಗಳಲ್ಲಿ ಪುರುಷ ಅಧಿಕಾರವನ್ನು ಬಿಡಲೇಬೇಕಾದ ಪರಿಸ್ಥಿತಿ ಬಂದರೆ ತನ್ನ ಪತ್ನಿ ಅಥವಾ ಮಗಳಿಗೆ ಆ ಸ್ಥಾನವನ್ನು ನೀಡಬೇಕೆಂಬ ಷರತ್ತು ಹಾಕಿರಬೇಕು. ಇದಕ್ಕೆ ಹೊರತಾಗಿ ತಮ್ಮ ಸ್ವ ಸಾಮರ್ಥ್ಯದಿಂದ ರಾಜಕೀಯ ಪ್ರವೇಶ ಮಾಡಿದ ಮಹಿಳೆಯರು ಇಲ್ಲವೇ? ಇಲ್ಲವೆಂದಲ್ಲ. ಕರ್ನಾಟಕದ ರಾಜಕಾರಣದಲ್ಲೂ ಅಂತ ಮಹಿಳೆಯರ ನಿದರ್ಶನಗಳು ನಮ್ಮ ಮುಂದಿವೆ. ಆದರೆ ಅವರ ಸಂಖ್ಯೆ ವಿರಳ. ಮತ್ತೆ, ಕೌಟುಂಬಿಕ ಸಂಬಂಧಗಳು ಪುರುಷರ ಆಯ್ಕೆಯಲ್ಲಿ ಪ್ರಭಾವ ಬೀರುವುದಿಲ್ಲವೆಂದಲ್ಲ ಅಲ್ಲೂ ಅನುವಂಶೀಯ ಅಂಶಗಳು ತಮ್ಮ ಪಾತ್ರವನ್ನು ವಹಿಸುತ್ತವೆ. ಈ ಪರಿಸ್ಥಿತಿ ಯಾವುದೇ ಒಂದು ರಾಜ್ಯಕ್ಕೆ ಅಥವಾ ಒಂದು ಪಕ್ಷಕ್ಕೆ ಸೀಮಿತವಲ್ಲ, ದೇಶದೆಲ್ಲೆಡೆ ಪಕ್ಷಗಳ ಧೋರಣೆಗಳು ಹೆಚ್ಚು– ಕಡಿಮೆ ಒಂದೇ ಸ್ಥಿತಿಯಲ್ಲಿವೆ.

ನಾನು ಎತ್ತಿದ ಎರಡನೇ ಪ್ರಶ್ನೆ ಅಧಿಕಾರದ ಮರುಹಂಚಿಕೆಗೆ ಸಂಬಂಧಿಸಿದ್ದು. ಶತಮಾನಗಳಿಂದ ಎಲ್ಲ ಸಾಮಾಜಿಕ ಸಂಸ್ಥೆಗಳಲ್ಲಿ, ಅದರಲ್ಲೂ ವಿಶೇಷವಾಗಿ ರಾಜಕೀಯ ಸಂಸ್ಥೆಗಳಲ್ಲಿ ಅಧಿಕಾರವನ್ನು ತನ್ನ ಕೈಯ್ಯಲ್ಲಿಯೇ ಇಟ್ಟುಕೊಂಡಿದ್ದ ಪುರುಷ ಪ್ರಧಾನ ವ್ಯವಸ್ಥೆ ಈ ಅಧಿಕಾರವನ್ನು ಮಹಿಳೆಯರಿಗೆ, ಭಾಗಶಃ ಅಥವಾ ಪೂರ್ಣವಾಗಿ ಬಿಟ್ಟು ಕೊಡಲಾಗಲೀ ಅವರೊಡನೆ ಹಂಚಿಕೊಳ್ಳಲಾಗಲೀ ಸಿದ್ಧವಿಲ್ಲ. ಇದು ಕೇವಲ ಮಹಿಳೆಯರ ವಿಚಾರಕ್ಕೆ ಸೀಮಿತವಾಗಿಲ್ಲ. ಜಾತಿ, ವರ್ಗ, ಲಿಂಗ, ಭಾಷೆ, ಪ್ರದೇಶ–ಅಸಮಾನತೆಯ ಆಧಾರ ಯಾವುದೇ ಆಗಿರಲಿ ಅದನ್ನು ಸರಿಪಡಿಸುವ ಪ್ರಯತ್ನಕ್ಕೆ ಮೊದಲು ಅಡ್ಡಿ ಬರುವುದೇ ಈ ವ್ಯವಸ್ಥೆಯಿಂದ ಅಧಿಕಾರವನ್ನು ಪಡೆದು, ಪೋಷಿಸಿಕೊಂಡು ಬಂದಿರುವ ವ್ಯಕ್ತಿಗಳಿಂದ. ಅಧಿಕಾರ ತಮ್ಮಿಂದ ಬೇರೆಡೆಗೆ ವರ್ಗಾವಣೆಯಾದಾಗ ತಾವು ಅನುಭವಿಸುತ್ತಿರುವ ಅನುಕೂಲಗಳೆಲ್ಲವನ್ನೂ ಎಲ್ಲಿ ಕಳೆದುಕೊಳ್ಳಬೇಕಾಗುತ್ತದೆಯೋ ಎಂಬ ಭಯವೇ ಅವರು ಅಧಿಕಾರದ ಮರು ಹಂಚಿಕೆಯ ಪ್ರಕ್ರಿಯೆಗೆ ಅಡ್ಡಿ ಹಾಕಲು ಮೂಲ ಕಾರಣ. ರಾಜ್ಯವಿಧಾನಸಭೆಗಳಲ್ಲಿ ಮತ್ತು ಸಂಸತ್ತಿನಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿಯನ್ನು ನೀಡಬೇಕೆಂದು ಮಸೂದೆ ಮೊದಲ ಬಾರಿಗೆ ಮಂಡನೆಯಾಗಿದ್ದು 1996ರಲ್ಲಿ, ಎಂದರೆ ಕಾಲು ಶತಮಾನದ ಹಿಂದೆ. ಅಂದಿನಿಂದ ಇಂದಿನವರೆಗೂ ಒಂದಲ್ಲ ಒಂದು ನೆಪವೊಡ್ಡಿ ಅದಕ್ಕೆ ಅಡ್ಡಿಯನ್ನು ತರುತ್ತಿರುವ ಉದ್ದೇಶವೇ ಅಧಿಕಾರವನ್ನು, ಅದು ತರುವ ಅನೇಕ ಅನುಕೂಲಗಳನ್ನು ಕಳೆದುಕೊಳ್ಳುವ ಅಂಜಿಕೆ.

ರಾಜ್ಯ ರಾಜಕಾರಣದಲ್ಲಿ ಮಹಿಳಾ ಪ್ರಾತಿನಿಧ್ಯ ತೀರಾ ಗೌಣವಾಗಿರುವುದಕ್ಕೆ ಮತ್ತೊಂದು ಕಾರಣವೆಂದರೆ ರಾಜಕೀಯ ಪಕ್ಷಗಳಿಗೆ ಮಹಿಳಾ ವಿಚಾರಗಳು, ಅವರ ಬದುಕಿನ ವಾಸ್ತವಗಳು ಹಾಗೂ ಅವರ ಜೀವನದ ಪ್ರಾಧಾನ್ಯತೆಗಳು ಎಂದಿಗೂ ಪಕ್ಷಗಳ ಕಾರ್ಯಸೂಚಿಯಲ್ಲಿ ಒಂದು ನಿಜವಾದ ಅರ್ಥದಲ್ಲಿ ಸೇರ್ಪಡೆಯಾಗಿಲ್ಲ ಎನ್ನುವುದು. ಪ್ರತಿ ಬಾರಿಯೂ ಚುನಾವಣೆಗಳು ಸನ್ನಿಹಿತವಾದಾಗ ಮಹಿಳೆಯರಿಗೆ ಪ್ರಾಧಾನ್ಯತೆ ನೀಡುವ ವಿಚಾರ ಆಗಾಗ್ಗೆ ಬಂದು ಹೋಗುತ್ತದೆ. ದುರಂತವೆಂದರೆ ಪ್ರತಿ ಪಕ್ಷದಲ್ಲೂ ಇರುವ ಮಹಿಳಾ ಘಟಕಗಳಾಗಲೀ, ಪ್ರಭಾವಿ ಮಹಿಳಾ ಸದಸ್ಯರಾಗಲೀ, ಹಾಲಿ ಅಧಿಕಾರಾರೂಢ ಮಹಿಳಾ ಮಂತ್ರಿಗಳಾಗಲೀ ಪ್ರಬಲ ಒತ್ತಡ ಗುಂಪುಗಳಾಗಿ ಟಿಕೆಟುಗಳನ್ನು ಕೇಳುತ್ತಿಲ್ಲ. ಎಲ್ಲೋ ಕೆಲ ಧ್ವನಿಗಳು ಕೇಳಿ ಬರುತ್ತವೆಯೇ ಹೊರತು ಅದೊಂದು ಆಂತರಿಕ ಚಳವಳಿಯಾಗಿ ಯಾವುದೇ ರಾಜಕೀಯ ಪಕ್ಷದಲ್ಲಿ ಹೊರಹೊಮ್ಮಿಲ್ಲ. ಮಹಿಳೆಯರನ್ನು ಸೋಲುವ ಅಭ್ಯರ್ಥಿಗಳು, ಅನನುಭವಿಗಳು, ಆರ್ಥಿಕ ಸದೃಢತೆ ಇಲ್ಲದವರು ಎಂದು ಬಿಂಬಿಸಿ ಅವರಿಗೆ ಅವಕಾಶಗಳನ್ನು ನಿರಾಕರಿಸುವ ಪ್ರವೃತ್ತಿಗಳಿಗೆ ಪ್ರಬಲ ವಿರೋಧ ಮೂಡಿ ಬಂದಿಲ್ಲ.

ಇನ್ನು ಮುಂದಾದರೂ ಕರ್ನಾಟಕದ ವಿಧಾನ ಸಭೆಯಲ್ಲಿ ಕಳೆದ 70 ವರ್ಷಗಳಲ್ಲಿ ಒಟ್ಟು (ಎಂದರೆ 15 ವಿಧಾನ ಸಭೆಗಳೂ ಸೇರಿದಂತೆ) ನೂರನ್ನು ದಾಟದ ಮಹಿಳಾ ಪ್ರಾತಿನಿಧ್ಯದ ಪ್ರಮಾಣದಲ್ಲಿ ಗಮನಾರ್ಹವಾದ ಸಕಾರಾತ್ಮಕ ಹೆಚ್ಚಳವಾಗಬೇಕೆಂದರೆ ಎಲ್ಲ ಮಹಿಳೆಯರೂ ಪಕ್ಷಾತೀತವಾಗಿ ತಮ್ಮ ಪಾಲನ್ನು ಕೇಳಲು–ಪಡೆಯಲು ಒಟ್ಟಾಗಿ ಸೇರಬೇಕು. ಇದು ಕೇವಲ ರಾಜಕೀಯ ಪಕ್ಷಗಳ ಜವಾಬ್ದಾರಿಯಲ್ಲ. ಮಹಿಳೆಯರನ್ನು ತನ್ನ ಅರ್ಧದಷ್ಟು ಜನಸಂಖ್ಯೆಯಾಗಿ ಹೊಂದಿರುವ ನಾಗರಿಕ ಸಮಾಜಕ್ಕೂ ಅಷ್ಟೇ ಹೊಣೆಗಾರಿಕೆಯಿದೆ. ಭವಿಷ್ಯದ ನಾಯಕಿಯರನ್ನು ಗುರುತಿಸಿ, ಅವರಿಗೆ ಪ್ರಜಾಪ್ರತಿನಿಧಿಗಳಾಗಿ ಕಾರ್ಯ ನಿರ್ವಹಿಸಲು ಅವಶ್ಯವಾದ ತರಬೇತಿಯನ್ನು ನೀಡಿ, ಅವರಿಗೆ ಚುನಾವಣಾ ಹೋರಾಟಕ್ಕೆ ಸಜ್ಜಾಗಲು ಅಗತ್ಯವಾದ ಆರ್ಥಿಕ. ಭಾವನಾತ್ಮಕ ಬೆಂಬಲವನ್ನು ನೀಡುವ ಪ್ರಯತ್ನದಲ್ಲಿ ಸರ್ಕಾರಿ ಮತ್ತು ಸ್ವಯಂ ಸೇವಾ ಸಂಸ್ಥೆಗಳೆರಡೂ ಒಟ್ಟಿಗೆ ಕೈ ಜೋಡಿಸಬೇಕು.

ರಾಜ್ಯಪಾಲರ ಹುದ್ದೆ ಮರು ಚಿಂತನೆ ಅಗತ್ಯ

ತಮಿಳುನಾಡಿನ ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಹಾಗೂ ರಾಜ್ಯಪಾಲ ಆರ್.ಎನ್.ರವಿಯವರ ನಡುವೆ ನಡೆಯುತ್ತಿದ್ದ ಶೀತಲ ಸಮರ ಈಗ ಆ ರಾಜ್ಯವನ್ನು ಸಾಂವಿಧಾನಿಕ ಬಿಕ್ಕಟ್ಟಿನತ್ತ ದೂಡಿದೆ. ರಾಜ್ಯ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ನೇತೃತ್ವದ ಸಚಿವ ಸಂಪುಟ ಸಿದ್ಧಪಡಿಸಿದ್ದ ಸಾಂಪ್ರದಾಯಿಕ ಭಾಷಣವನ್ನು ಯಥಾ ರೀತಿ ಓದಲು ನಿರಾಕರಿಸಿ, ವಿಧಾನಸಭೆಯ ಕಲಾಪದಿಂದ ನಿರ್ಗಮಿಸಿದ ರಾಜ್ಯಪಾಲರು, ಹಿಂದೆಂದೂ ಕಂಡರಿಯದ ಬಿಕ್ಕಟ್ಟಿಗೆ ಕಾರಣರಾಗಿದ್ದಾರೆ. ಪ್ರತಿವರ್ಷದ ಮೊದಲ ಅಧಿವೇಶನದಲ್ಲಿ ರಾಜ್ಯಪಾಲರು ವಿಧಾನಮಂಡಲದ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾತನಾಡುವುದು ಒಂದು ಸಾಂವಿಧಾನಿಕ ಕಟ್ಟುಪಾಡು ಹಾಗೂ ಹೊಣೆಗಾರಿಕೆಯಾಗಿದೆ. ಸಾಮಾನ್ಯವಾಗಿ ಈ ಭಾಷಣವನ್ನು ರಾಜ್ಯ ಸಚಿವ ಸಂಪುಟ ಸಿದ್ಧಪಡಿಸುತ್ತದೆ.

ರಾಜ್ಯ ಸರ್ಕಾರದ ಧ್ಯೇಯ ಧೋರಣೆಗಳನ್ನು ಹಾಗೂ ಸಾಧನೆಗಳನ್ನು ಈ ಭಾಷಣ ಪ್ರತಿಬಿಂಬಿಸುತ್ತದೆ. ರಾಜ್ಯಪಾಲರು ಸಾಂವಿಧಾನಿಕ ಮುಖ್ಯಸ್ಥರಾಗಿರುವುದರಿಂದ ಅವರು ಸಾಮಾನ್ಯವಾಗಿ ಸಚಿವ ಸಂಪುಟ ಸಿದ್ಧಪಡಿಸುವ ಭಾಷಣವನ್ನು ಓದುವ ಪರಿಪಾಠ ಎಲ್ಲಾ ರಾಜ್ಯಗಳಲ್ಲಿಯೂ ನಡೆದುಕೊಂಡು ಬಂದಿದೆ. ಆದರೆ ಇತ್ತೀಚಿನ ದಿನಗಳಲ್ಲಿ ರಾಜ್ಯದ ರಾಜ್ಯಪಾಲರಾದ ಆರ್.ಎನ್.ರವಿ ಮತ್ತು ಮುಖ್ಯಮಂತ್ರಿ ಸ್ಟಾಲಿನ್ ನಡುವಿನ ಸಂಬಂಧ ಹಳಸಿದ್ದರಿಂದ ಮುಖ್ಯಮಂತ್ರಿ ಮತ್ತು ರಾಜ್ಯಪಾಲರ ನಡುವೆ ಬಿಕ್ಕಟ್ಟು ಉಂಟಾಗಿದೆ. ಈ ಹಿಂದೆ ಬಿಹಾರ ಮತ್ತು ಜಾರ್ಖಂಡ್ ರಾಜ್ಯಗಳ ರಾಜ್ಯಪಾಲರಾಗಿದ್ದ ದಿವಂಗತ ಜಸ್ಟೀಸ್ ರಾಮ ಜೋಯಿಸ್ ಸಹ ರಾಜ್ಯ ಸರ್ಕಾರ ಸಿದ್ಧಪಡಿಸಿದ್ದ ಭಾಷಣವನ್ನು ಓದಲು ನಿರಾಕರಿಸಿದ್ದರು. ಕೇರಳ, ತಮಿಳುನಾಡು, ಪಶ್ಚಿಮಬಂಗಾಳ ಮುಂತಾದ ರಾಜ್ಯಗಳಲ್ಲಿ ಅಲ್ಲಿನ ರಾಜ್ಯಪಾಲರು ನಡೆದುಕೊಳ್ಳುತ್ತಿರುವ ರೀತಿ ಚರ್ಚಾಸ್ಪದವಾಗುತ್ತಿದೆ. ಕೇರಳದಲ್ಲಿ ವಿಶ್ವ ವಿದ್ಯಾನಿಲಯಗಳ ಮೇಲಿನ ನಿಯಂತ್ರಣವನ್ನು ರಾಜ್ಯಪಾಲರಿಂದ ಹಿಂದಕ್ಕೆ ಪಡೆಯಲಾಗಿದ್ದು, ಅಲ್ಲಿನ ವಿಶ್ವವಿದ್ಯಾನಿಲಯಗಳ ಕುಲಪತಿಗಳ ನೇಮಕಾತಿಯಲ್ಲಿ ಗೊಂದಲ ಸೃಷ್ಟಿಯಾಗಿದೆ.

ಕುತೂಹಲಕಾರಿ ಅಂಶ ಎಂದರೆ, ವಿರೋಧ ಪಕ್ಷಗಳು ಅಧಿಕಾರ ನಡೆಸುತ್ತಿರುವ ರಾಜ್ಯಗಳಲ್ಲಿ ಮಾತ್ರ ಇಂತಹ ಪರಿಸ್ಥಿತಿ ತಲೆದೋರಿದ್ದು, ರಾಜ್ಯಪಾಲರ ಹುದ್ದೆಯನ್ನೇ ರದ್ದುಗೊಳಿಸಲು, ಎಡಪಕ್ಷಗಳು ಸೇರಿದಂತೆ ಕೆಲವು ವಿರೋಧ ಪಕ್ಷಗಳು ಆಗ್ರಹಿಸಿವೆ. ಈ ಹಿನ್ನೆಲೆಯಲ್ಲಿ ರಾಜ್ಯಪಾಲರ ಹುದ್ದೆಯ ಬಗ್ಗೆ ಚರ್ಚಿಸುವುದು ಪ್ರಸ್ತುತವೆನಿಸುತ್ತದೆ.

1969ರವರೆಗೂ ದೇಶ ಮತ್ತು ಬಹುತೇಕ ರಾಜ್ಯಗಳಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿತ್ತು. ಆದರೆ ನಂತರದ ವರ್ಷಗಳಲ್ಲಿ ಅಂದರೆ ಭಾರತ ರಾಷ್ಟ್ರೀಯ ಕಾಂಗ್ರೆಸ್ ವಿಧ್ಯುಕ್ತವಾಗಿ ವಿಭಜನೆಗೊಂಡ ನಂತರ, ಬೇರೆ ಬೇರೆ ರಾಜಕೀಯ ಪಕ್ಷಗಳು ವಿವಿಧ ರಾಜ್ಯಗಳಲ್ಲಿ ಅಧಿಕಾರಕ್ಕೆ ಬರತೊಡಗಿದಾಗ, ರಾಜ್ಯಪಾಲರ ಪಾತ್ರ ಸಾಕಷ್ಟು ಟೀಕೆ ಮತ್ತು ವಿಮರ್ಶೆಗೆ ಗುರಿಯಾಗಲು ಪ್ರಾರಂಭವಾಯಿತು. ರಾಜ್ಯಪಾಲರು ಕೇಂದ್ರ ಸರ್ಕಾರದ ಏಜೆಂಟರಂತೆ ನಡೆದುಕೊಂಡು ಪ್ರಜಾಪ್ರಭುತ್ವದ ರೀತಿಯಲ್ಲಿ ಆಯ್ಕೆಗೊಂಡ ಸರ್ಕಾರಗಳನ್ನು ವಜಾಗೊಳಿಸಿದ ಸಾಕಷ್ಟು ಉದಾಹರಣೆಗಳು ನಮ್ಮ ಮುಂದಿವೆ. ಇಂತಹ ಹಲವಾರು ಪ್ರಕರಣಗಳ ಪೈಕಿ ಸಾಂಕೇತಿಕವಾಗಿ ಎರಡು ಉದಾಹರಣೆಗಳನ್ನು ಮಾತ್ರ ಇಲ್ಲಿ ಪ್ರಸ್ತಾಪಿಸುತ್ತಿದ್ದೇನೆ.

1984ರಲ್ಲಿ ಆಂಧ್ರಪ್ರದೇಶದ ಮುಖ್ಯಮಂತ್ರಿಯಾಗಿದ್ದ ಎನ್.ಟಿ.ರಾಮರಾವ್ ಅವರನ್ನು ಅಂದಿನ ಆಂಧ್ರಪ್ರದೇಶದ ರಾಜ್ಯಪಾಲರಾಗಿದ್ದ ರಾಮಲಾಲ್ ವಜಾಗೊಳಿಸಿದರು. ಇದರ ವಿರುದ್ಧ ತಿರುಗಿಬಿದ್ದ ರಾಮರಾವ್, ಅಂದಿನ ರಾಷ್ಟ್ರಪತಿ ಗ್ಯಾನಿ ಜೇಲ್ ಸಿಂಗ್‌ರವರನ್ನು ಖುದ್ದಾಗಿ ಭೇಟಿಯಾಗಿ ತಮ್ಮನ್ನು ಬೆಂಬಲಿಸುವ ಶಾಸಕರನ್ನು ಅವರ ಮುಂದೆ ಪರೇಡ್ ಮಾಡಿಸಿದರು. ನಂತರ, ಡಾ.ಶಂಕರ ದಯಾಳ ಶರ್ಮಾ ಅವರನ್ನು ಆಂಧ್ರಪ್ರದೇಶದ ನೂತನ ರಾಜ್ಯಪಾಲರಾಗಿ ನೇಮಿಸಲಾಯಿತು. ನೂತನ ರಾಜ್ಯಪಾಲರು ರಾಮರಾವ್ ಅವರಿಗೆ ವಿಧಾನಸಭೆಯಲ್ಲಿ ಬಹುಮತ ಇದೆ ಎಂಬುದನ್ನು ಅರಿತು ಅವರನ್ನು ಪುನಃ ಮುಖ್ಯಮಂತ್ರಿಯಾಗಿ ಪ್ರತಿಷ್ಠಾಪಿಸಿ ಪ್ರಮಾಣ ವಚನ ಬೋಧಿಸಿದರು. ಇನ್ನು ಎರಡನೇ ಪ್ರಕರಣದಲ್ಲಿ, ಕರ್ನಾಟಕದ ಮುಖ್ಯಮಂತ್ರಿಯಾಗಿದ್ದ ಎಸ್.ಆರ್.ಬೊಮ್ಮಾಯಿಯವರನ್ನು 1988ರಲ್ಲಿ ಹುದ್ದೆಯಿಂದ ವಜಾ ಮಾಡಿದ ಅಂದಿನ ಕರ್ನಾಟಕ ರಾಜ್ಯಪಾಲ ಪಿ.ವೆಂಕಟಸುಬ್ಬಯ್ಯನವರ ಪ್ರಜಾತಂತ್ರ ವಿರೋಧಿ ಕ್ರಮ ಇಡೀ ದೇಶಾದ್ಯಂತ ಕಟು ಟೀಕೆಗೆ ಗುರಿಯಾಯಿತು. ತಮ್ಮನ್ನು ವಜಾಗೊಳಿಸಿದ ಕ್ರಮವನ್ನು ಪ್ರಶ್ನಿಸಿ ಬೊಮ್ಮಾಯಿಯವರು ಸರ್ವೋಚ್ಚ ನ್ಯಾಯಾಲಯದ ಮೊರೆ ಹೋದರು. ಈ ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಿ, ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್, "ಬೊಮ್ಮಾಯಿ ಸರ್ಕಾರವನ್ನು ವಜಾ"ಗೊಳಿಸಿದ ಕ್ರಮ ಅಸಿಂಧುವೆಂದು ಘೋಷಿಸಿ, 'ಮುಖ್ಯಮಂತ್ರಿಯ ಬಲ ಪರೀಕ್ಷೆ ರಾಜ್ಯ ವಿಧಾನಸಭೆ ಅಂಗಳದಲ್ಲೇ ನಡೆಯಬೇಕೆಂಬ' ಚಾರಿತ್ರಿಕ ತೀರ್ಪು ನೀಡಿತು. ಮುಂದೆ ಇದು "ಬೊಮ್ಮಾಯಿ ಪ್ರಕರಣ" ಎಂದೇ ರಾಜಕೀಯ ಇತಿಹಾಸದಲ್ಲಿ ಹೆಸರುವಾಸಿಯಾಯಿತು.



ದೇಶದಲ್ಲಿ ಸಂಸದೀಯ ವ್ಯವಸ್ಥೆಯ ಸರ್ಕಾರ ಇರುವುದರಿಂದ (ಪಾರ್ಲಿಮೆಂಟರಿ ಫಾರಂ), ಕೇಂದ್ರದಲ್ಲಿ ರಾಷ್ಟ್ರಪತಿಗಳು ಇರುವ ಹಾಗೆ ಪ್ರತಿಯೊಂದು ರಾಜ್ಯಕ್ಕೂ ರಾಜ್ಯದ ಮುಖ್ಯಸ್ಥರಾಗಿ ರಾಜ್ಯಪಾಲರಿರುತ್ತಾರೆ (153ನೇ ವಿಧಿ). ಸಂವಿಧಾನದ 7ನೇ ತಿದ್ದುಪಡಿಯ ಅನುಸಾರ ಒಬ್ಬರನ್ನು ಎರಡು ಅಥವಾ ಹೆಚ್ಚು ಸ್ಥಾನಗಳಿಗೆ ರಾಜ್ಯಪಾಲರನ್ನಾಗಿ ನೇಮಿಸಬಹುದು.

ರಾಜ್ಯಪಾಲರಿಗೆ ಸಂವಿಧಾನದತ್ತವಾಗಿ ಹಲವಾರು ಅಧಿಕಾರ ಮತ್ತು ಕರ್ತವ್ಯಗಳು ಇರುತ್ತವೆ. ಆದರೆ, ತಮ್ಮ ವಿವೇಚನಾಧಿಕಾರಗಳನ್ನು ಹೊರತುಪಡಿಸಿ, ಉಳಿದ ಕರ್ತವ್ಯಗಳನ್ನು ಚಲಾಯಿಸುವಾಗ, ರಾಜ್ಯಪಾಲರು ಮುಖ್ಯಮಂತ್ರಿ ನೇತೃತ್ವದ ಸಚಿವ ಸಂಪುಟದ ಸಲಹೆಯಂತೆ ನಡೆದುಕೊಳ್ಳಬೇಕು.

ಕಾರ್ಯಾಂಗಾಧಿಕಾರಗಳು: ರಾಜ್ಯಪಾಲರು ರಾಜ್ಯದ ಮುಖ್ಯಸ್ಥರಾಗಿರುವುದರಿಂದ, ಅವರಿಗೆ ಕಾರ್ಯಾಂಗದ ಅಧಿಕಾರವನ್ನು ನೀಡಲಾಗಿದ್ದು, ಈ ಅಧಿಕಾರವನ್ನು ಅವರು ನೇರವಾಗಿ ಅಥವಾ ತಮಗೆ ಅಧೀನದಲ್ಲಿರುವ ಅಧಿಕಾರಿಗಳ ಮೂಲಕ ಚಲಾಯಿಸಬಹುದೆಂದು ಸಂವಿಧಾನದ 154(1) ವಿಧಿ ತಿಳಿಸುತ್ತದೆ. ರಾಜ್ಯಪಾಲರು ಶಾಸನ ಸಭೆಯ ಸದಸ್ಯರಲ್ಲದಿದ್ದರೂ, ರಾಜ್ಯ ಶಾಸನಸಭೆಯ ಭಾಗವೆಂದು 168ನೇ ವಿಧಿ ತಿಳಿಸುತ್ತದೆ. ಹೀಗಾಗಿ, ಶಾಸಕಾಂಗದ ಅಧಿವೇಶನವನ್ನು ಕರೆಯುವ ಹಾಗೂ ಮುಂದೂಡುವ ಅಧಿಕಾರ (174ನೇ ವಿಧಿ) ಮುಖ್ಯಮಂತ್ರಿಯ ನೇಮಕ, ವಿಧಾನಸಭೆಯ ವಿಸರ್ಜನೆ ಸೇರಿದಂತೆ ಹಲವಾರು ಅಧಿಕಾರಗಳನ್ನು ನೀಡಲಾಗಿದೆ.

ಆರ್ಥಿಕ ಅಧಿಕಾರಿಗಳು: ರಾಜ್ಯ ವಿಧಾನಮಂಡಲದಲ್ಲಿ ಬಜೆಟ್ ಮಂಡನೆಗೆ ಒಪ್ಪಿಗೆ ನೀಡುವುದು ಸೇರಿದಂತೆ, ರಾಜ್ಯಪಾಲರು ಹಲವು ಆರ್ಥಿಕ ಅಧಿಕಾರಗಳನ್ನು ಹೊಂದಿದ್ದಾರೆ (ಸಂವಿಧಾನದ 202(1)ನೇ ವಿಧಿ.

ನ್ಯಾಯಿಕ ಅಧಿಕಾರಿಗಳು: ಸಂವಿಧಾನದ 161ನೇ ವಿಧಿ ಪ್ರಕಾರ, ರಾಜ್ಯದೊಳಗೆ ಯಾವುದೇ ಅಪರಾಧಗಳಿಗೆ ಒಳಗಾದವರಿಗೆ ಕ್ಷಮಾಪಣೆ ನೀಡುವ, ಶಿಕ್ಷೆಯನ್ನು ಮುಂದಕ್ಕೆ ಹಾಕುವ ಅಥವಾ ಬೇರೆ ಶಿಕ್ಷೆಗೆ ಪರಿವರ್ತಿಸುವ ಅಧಿಕಾರವನ್ನು ರಾಜ್ಯಪಾಲರು ಹೊಂದಿದ್ದರೂ ಸಹ, ರಾಜ್ಯಪಾಲರಿಗೆ ಮರಣ ದಂಡನೆಯನ್ನು ರದ್ದುಗೊಳಿಸುವ ಅಧಿಕಾರವಿಲ್ಲ.

ವಿವೇಚನಾ ಅಧಿಕಾರಿಗಳು: ಮಂತ್ರಿ ಮಂಡಲದ ಸಲಹೆ ಇಲ್ಲದೆ ಚಲಾಯಿಸುವ ಅಧಿಕಾರಗಳು ರಾಜ್ಯಪಾಲರ ವಿವೇಚನಾ ಅಧಿಕಾರಗಳು. ಮುಖ್ಯಮಂತ್ರಿಯ ನೇಮಕ ಸೇರಿದಂತೆ ಕೆಲವು ಸೀಮಿತವಾದ ವಿಷಯಗಳಲ್ಲಿ ಮಾತ್ರ ರಾಜ್ಯಪಾಲರು ಇಂತಹ ಅಧಿಕಾರಗಳನ್ನು ಚಲಾಯಿಸಬಹುದು. ಇತ್ತೀಚಿನ ವರ್ಷಗಳಲ್ಲಿ ರಾಜ್ಯಪಾಲ ಹುದ್ದೆಯನ್ನು ದುರುಪಯೋಗಪಡಿಸಿಕೊಳ್ಳುತ್ತಿರುವ ಸಾಕಷ್ಟು ಉದಾಹರಣೆಗಳು ನಮ್ಮ ಮುಂದಿವೆ. ಕೇಂದ್ರದಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ರಾಜ್ಯಪಾಲರನ್ನು "ಕೇಂದ್ರ ಸರ್ಕಾರದ ಏಜೆಂಟ್," ಎಂದು ಕರೆಯುತ್ತಿದ್ದ ಭಾರತೀಯ ಜನತಾಪಕ್ಷ ತನ್ನ ಆಳ್ವಿಕೆಯಲ್ಲಿ ಕೂಡ ರಾಜ್ಯಪಾಲ ಹುದ್ದೆಯನ್ನು ದುರುಪಯೋಗ ಮಾಡಿಕೊಳ್ಳುತ್ತಿರುವ ಆರೋಪಗಳು ಕೇಳಿ ಬರುತ್ತಿವೆ. ಪ್ರಸ್ತುತ ಕೇರಳ, ತಮಿಳುನಾಡು ಹಾಗೂ ಪಶ್ಚಿಮ ಬಂಗಾಳದಲ್ಲಿ ನಡೆಯುತ್ತಿರುವ ವಿದ್ಯಮಾನಗಳು ಇದಕ್ಕೆ ಸಾಕ್ಷಿಯಾಗಬಲ್ಲವು.

ಉನ್ನತ ಶಿಕ್ಷಣದಲ್ಲಿ ರಾಜ್ಯಪಾಲರ ಹಸ್ತಕ್ಷೇಪ ಅನಗತ್ಯ ಎಂದು ಕಾಂಗ್ರೆಸ್‌ನವರೇ ಆದ ಪ್ರೊ.ಬಿ.ಕೆ.ಚಂದ್ರಶೇಖರ್ ಇತ್ತೀಚೆಗೆ ಸಮಾರಂಭವೊಂದರಲ್ಲಿ ಹೇಳಿದ್ದಾರೆ. ವಿಶ್ವವಿದ್ಯಾನಿಲಯಗಳ ಕುಲಪತಿಗಳ ನೇಮಕಾತಿಯ ವಿಚಾರದಲ್ಲಿ ರಾಜ್ಯಪಾಲರ ಪಾತ್ರದ ಬಗ್ಗೆ ಸಾಕಷ್ಟು ಟೀಕೆ ಟಿಪ್ಪಣಿಗಳು ವ್ಯಕ್ತವಾಗುತ್ತಿವೆ. ಕುಲಪತಿಗಳ ನೇಮಕಾತಿಯಲ್ಲಿ ರಾಜ್ಯಪಾಲರಿಗಿದ್ದ ಅಧಿಕಾರಗಳನ್ನು ಕೇರಳದಲ್ಲಿ ಈಗಾಗಲೇ ತೆಗೆದು ಹಾಕಲಾಗಿದೆ. ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯಗಳ ಆಡಳಿತ ನಿರ್ವಹಣೆಯಲ್ಲಿ ರಾಜ್ಯಪಾಲರ ಪಾತ್ರವನ್ನು ಪುನರ್ ಪರಿಶೀಲಿಸಲು ಅಗತ್ಯಕ್ರಮ ಕೈಗೊಳ್ಳಬೇಕಾಗಿದೆ.

ಕೆಲವು ಸೀಮಿತವಾದ ಸಂದರ್ಭಗಳಲ್ಲಿ ರಾಜ್ಯಪಾಲರು ತಮ್ಮ ವಿವೇಚನಾಧಿಕಾರಗಳನ್ನು ಚಲಾಯಿಸಬಹುದಾದರೂ ಅವರು ರಾಜ್ಯದ ಮುಖ್ಯಸ್ಥರೇ ಹೊರತು ಸರ್ಕಾರದ ಮುಖ್ಯಸ್ಥರಲ್ಲ. ರಾಷ್ಟ್ರಪತಿ ಆಡಳಿತವಿದ್ದಾಗ ಮಾತ್ರ ಅವರು ಸರ್ಕಾರದ ಮುಖ್ಯಸ್ಥರಂತೆ ಕಾರ್ಯನಿರ್ವಹಿಸಬಹುದು. ಹೀಗಾಗಿ, ಜನರಿಂದ ನೇರವಾಗಿ ಆಯ್ಕೆಯಾದ ಮುಖ್ಯಮಂತ್ರಿ ಹಾಗೂ ಅವರ ಸಚಿವ ಸಂಪುಟದ ಜೊತೆಗೆ ಸಂಘರ್ಷಕ್ಕೆ ಇಳಿಯದೇ ಸೌಹಾರ್ದ ರೀತಿಯಲ್ಲಿ ತಮ್ಮ ಕರ್ತವ್ಯಗಳನ್ನು ನಿರ್ವಹಿಸಬೇಕಾದ್ದು ರಾಜ್ಯಪಾಲರ ಜವಾಬ್ದಾರಿ. ಅದೇ ರೀತಿ ಯಾವುದೇ ಕಾರಣಕ್ಕೂ ಆಡಳಿತ ಪಕ್ಷ ರಾಜ್ಯಪಾಲರಿಗೆ ಅಗೌರವ ತೋರಿಸುವಂತಹ ಕೆಲಸ ಮಾಡಬಾರದು. ಸಂವಿಧಾನ ರಚನಾ ಸಭೆಯಲ್ಲಿ ಡಾ.ಅಂಬೇಡ್ಕರ್ ಮಾತನಾಡುತ್ತಾ, ರಾಜ್ಯಪಾಲರು ಮಂತ್ರಿಗಳನ್ನು ನೇಮಕ ಮಾಡುವ ಮತ್ತು ಮಂತ್ರಿ ಮಂಡಲಕ್ಕೆ ಸಲಹೆ ಮತ್ತು ಎಚ್ಚರಿಕೆ ನೀಡುವ ಎರಡು ಕರ್ತವ್ಯಗಳನ್ನು ಹೊಂದಿದ್ದಾರೆಯೇ ಹೊರತು, ಅಧಿಕಾರಗಳನ್ನು ಹೊಂದಿಲ್ಲ ಎಂದು ಹೇಳಿದ್ದರು. ಸರ್ವೋಚ್ಚ ನ್ಯಾಯಾಲಯವು ಸಹ, ಆರ್ ಕೆ ಕಪೂರ್ Vs ಪಂಜಾಬ್ ಮೊಕದ್ದಮೆಯಲ್ಲಿ ತನ್ನ ತೀರ್ಪು ನೀಡಿ, ರಾಜ್ಯಪಾಲರ ಸ್ಥಾನವನ್ನು ಇಂಗ್ಲೆಂಡಿನ ರಾಜನಿಗೆ ಹೋಲಿಸಿತು. ಮಂತ್ರಿ ಮಂಡಲವು ವಿಧಾನಸಭೆಗೆ ಜವಾಬ್ದಾರಿಯಾಗಿದೆಯೇ ಹೊರತು ರಾಜ್ಯಪಾಲರಿಗಲ್ಲ. ಈ ಹಿನ್ನೆಲೆಯಲ್ಲಿ ರಾಜ್ಯಪಾಲರು ಕೇವಲ ನಾಮಮಾತ್ರ ಕಾರ್ಯಾಧಿಕಾರಿಯಾಗಿದ್ದಾರೆ.

ಅದೇ ರೀತಿಯಲ್ಲಿ, ಸಾಧ್ಯವಾದಷ್ಟು ಮಟ್ಟಿಗೆ ಈ ಹುದ್ದೆಗೆ ರಾಜಕೀಯ ಹಿನ್ನೆಲೆ ಹೊಂದಿರುವಂತಹ ವ್ಯಕ್ತಿಗಳನ್ನು ನೇಮಿಸಬಾರದು. ಈ ಹುದ್ದೆಯನ್ನು ಪಕ್ಷ ರಾಜಕಾರಣದಿಂದ ಹೊರಗಿಟ್ಟು, ಅರ್ಹರನ್ನು ಮಾತ್ರ ನೇಮಿಸಬೇಕು. ದೇಶದಲ್ಲಿ ಈಗಾಗಲೇ ರಾಜ್ಯಪಾಲರ ಹುದ್ದೆಯನ್ನೇ ರದ್ದುಗೊಳಿಸಬೇಕೆಂಬ ಕೂಗು ಪ್ರಾರಂಭವಾಗಿದೆ. ಈ ವಿಚಾರದಲ್ಲಿ ಕೇಂದ್ರ ಸರ್ಕಾರ ಅಗತ್ಯ ಕ್ರಮಗಳನ್ನು ತೆಗೆದುಕೊಂಡು ರಾಜ್ಯಪಾಲರ ಹುದ್ದೆಯ ಘನತೆ ಗೌರವಗಳನ್ನು ರಕ್ಷಿಸಬೇಕಾಗಿದೆ. **–ಕೆ.ವಿ.ವಾಸು**

ಮೊಬೈಲ್: 9341731661

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಜ.21, 22 ಬೆಂಗಳೂರಲ್ಲಿ ಉತ್ತರ ಕರ್ನಾಟಕ ಉತ್ಸವ–2023

ಕಾರ್ಯಕ್ರಮದ ಲೋಗೋ ಬಿಡುಗಡೆ ಮಾಡಿದ ಸಿಎಂ ಬೊಮ್ಮಾಯಿ



ಬೆಂಗಳೂರು, ಜ.11(ಕೆಎಂಶಿ) – ಬೆಂಗಳೂರಿನಲ್ಲಿರುವ ಉತ್ತರ ಕರ್ನಾಟಕ ಸಂಘ ಸಂಸ್ಥೆಗಳ ಮಹಾ ಸಂಸ್ಥೆ ವತಿಯಿಂದ ಇದೇ ಜನವರಿ 21, 22ರಂದು ಆಯೋಜಿಸಿರುವ ಉತ್ತರ ಕರ್ನಾಟಕಉತ್ಸವ 2023 ಕಾರ್ಯಕ್ರಮದ ಲೋಗೋ ವನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಬಿಡುಗಡೆ ಮಾಡಿದರು.

ಉತ್ತರ ಕರ್ನಾಟಕ ಸಂಘ ಸಂಸ್ಥೆಗಳ ಮಹಾ ಸಂಸ್ಥೆಯು ಉತ್ತರ ಕರ್ನಾಟಕ ಉತ್ಸವ 2023 ಅನ್ನು ಬೆಂಗಳೂರಿನ ಅರಮನೆ ಮೈದಾನದ ಶೀಶ್ ಮಹಲ್ ಪ್ಯಾಲೇಸ್ ಗೇಟ್ ನಂಬರ್ 7ರಲ್ಲಿ ಕಾರ್ಯಕ್ರಮ ಹಮ್ಮಿಕೊಂಡಿದೆ.

ಉತ್ತರ ಕರ್ನಾಟಕ ಭಾಗದಿಂದ ವಿವಿಧ ಉದ್ಯೋಗ ಅರಸಿ ಬಂದು ಬೆಂಗಳೂರು ಮಹಾ ನಗರದಲ್ಲಿ ನೆಲೆಸಿ ನಮ್ಮ ಸಂಸ್ಕೃತಿ ಪರಂಪರೆಯನ್ನು ಉಳಿಸಿ ಬೆಳೆಸಿಕೊಂಡು ಹೋಗಲು ವಿವಿಧ ಬಡಾವಣೆಯಲ್ಲಿ ಸಂಘಗಳನ್ನು ಕಟ್ಟಿಕೊಂಡಿವೆ.

ಈ ಎಲ್ಲಾ ಸಂಸ್ಥೆಗಳು ಸೇರಿ "ಉತ್ತರ ಕರ್ನಾಟಕ ಸಂಘ ಸಂಸ್ಥೆಗಳ ಮಹಾ ಸಂಸ್ಥೆ"ಯನ್ನು ಕಟ್ಟಿಕೊಂಡು ಮತ್ತಷ್ಟು ಸಂಘಟಿತರಾಗಿದ್ದೇವೆ. ನಾವು ನಮ್ಮವರಿಗಾಗಿ ಕೈ ಜೋಡಿಸುತ್ತಾ ಎಲ್ಲರನ್ನು ಒಂದೆಡೆ ಸೇರಲು ಮತ್ತು ಬೆಳೆಯಲು ಒಬ್ಬರಿಗೊಬ್ಬರು ಮೆಟ್ಟಿಲಾಗಲು ಹಾಗೂ ನಮ್ಮ ಸಂಸ್ಕೃತಿ ಪರಂಪರೆಯನ್ನು ಮುಂದುವರೆಸಲು "ಉತ್ತರ ಕರ್ನಾಟಕ ಉತ್ಸವ 23" ಅನ್ನು ಬೆಂಗಳೂರು ಅರಮನೆ ಮೈದಾನದ ಶೀಶ್ ಮಹಲ್ ಪ್ಯಾಲೇಸ್‌ನಲ್ಲಿ ಬೃಹತ್ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದು ಉತ್ತರ ಕರ್ನಾಟಕ ಸಂಘ ಸಂಸ್ಥೆಗಳ ಮಹಾಸಂಸ್ಥೆ ತಿಳಿಸಿದೆ. ಈ ಕಾರ್ಯಕ್ರಮದಲ್ಲಿ ಉತ್ತರ ಕರ್ನಾಟಕ ಭಾಗದ ಸಂಸ್ಕೃತಿ ಪರಂಪರೆ, ಉಡುಗೆ ತೊಡುಗೆ ಆಹಾರ ಪದ್ಧತಿ ಎಲ್ಲವನ್ನು ಅನಾವರಣಗೊಳಿಸಲು 2023 ಜನವರಿ 21 ಮತ್ತು 22 ಶನಿವಾರ ಭಾನುವಾರ ಎರಡು ದಿನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಇದೇ ಸಂದರ್ಭದಲ್ಲಿ ಬೆಂಗಳೂರಿನಲ್ಲಿರುವ ಉತ್ತರ ಕರ್ನಾಟಕ ಭಾಗದ ಜನರ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ವಿವಿಧ ಸಾಮಾಜಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ರಾಜ್ಯ ಸರ್ಕಾರ 3.24 ಗುಂಟೆ ಜಮೀನು ಮಂಜೂರು ಮಾಡಿದ್ದರಿಂದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಹಾಗೂ ಅವರ ಸಚಿವ ಸಂಪುಟದ ಸದಸ್ಯರಿಗೆ ಅಭಿನಂದನೆ ಸಲ್ಲಿಸಲು ಗೌರವ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಪರಿಚಿತ ಮಹಿಳೆ ಶವ ಪತ್ತೆ

ಮೈಸೂರು,ಜ.11–ನಂಜನಗೂಡು ತಾಲೂಕಿನ ಶ್ರೀಕಂಠೇಶ್ವರ ದೇವಸ್ಥಾನದ ಬೈಕ್ ಪಾರ್ಕಿಂಗ್ ಬಳ್ಳಿ ಸುಮಾರು 55–60 ವರ್ಷದ ಮಹಿಳೆ ಮೃತಪಟ್ಟಿರುತ್ತಾರೆ ಎಂದು ನಂಜನಗೂಡು ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. 5.5 ಅಡಿ ಎತ್ತರ, ಧೃಡಕಾಯ ಶರೀರ ದುಂಡು ಮುಖ. ಬಿಳಿ ಮತ್ತು ಕಪ್ಪು ಗುಂಗುರು ತಲೆ ಕೂದಲು, ಕುಂಕುಮ ಬಣ್ಣದ ಬಿಳಿ ಬಣ್ಣದ ಚೌಕಳಿ ಇರುವ ನೈಟಿ ಧರಿಸಿರುತ್ತಾರೆ. ಇವರ ಬಗ್ಗೆ ಮಾಹಿತಿ ದೊರೆತಲ್ಲಿ ಕಂಟ್ರೋಲ್ ರೂಂ ನಂ: 0821–2444800, ಎಸ್‌ಪಿ ಕಚೇರಿ ದೂ.ಸಂ 0821–2520040, ನಂಜನಗೂಡು ಪೋಲಿಸ್ ಠಾಣೆ ದೂ.ಸಂ: 08221–228383 ಅನ್ನು ಸಂಪರ್ಕಿಸಿ

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಬೇಕಾಗಿದ್ದಾರೆ
ದಟ್ಟಗಳ್ಳಿ ರೋಟರಿ ಶಾಲೆಯ ಬಳಿ ವಾಸಿಸುವ ಒಬ್ಬ ಸದಸ್ಯರಿಗೆ ಅಡುಗೆಯವರು (Veg / N.Veg) (ಹತ್ತಿರ ವಾಸಿಸುವವರಿಗೆ ಆದ್ಯತೆ.) ವೇತನ: 4,000 (9 am to 10.30 am).
Call: 9845580417

ಶ್ರೀ ಮಹಾಲಕ್ಷ್ಮಿ ಟ್ರಾವೆಲ್ಸ್
8/2:– ಕಾಶಿ, ಗಂಗಾ, ಬುದ್ಧಗಂಗಾ, ಪ್ರಯಾಗ್‌ರಾಜ್, ಅಯೋಧ್ಯೆ.
11/2:– ಪುರಿ ಜಗನ್ನಾಥ್, ಕೋನಾರ್ಕ್ ಸೂರ್ಯ ದೇವಸ್ಥಾನ, ಭುವನೇಶ್ವರ್, ಚಂದ್ರಭಾಗ್ ಬೀಚ್.
21/2:– ದೆಹಲಿ, ವೈಷ್ಣೋದೇವಿ, ಧರ್ಮಶಾಲ, ಶಕ್ತಿ ಪೀಠ ಇತ್ಯಾದಿ.
9/3:– ನೇಪಾಳ ಮುಕ್ತಿನಾಥ್, ಪಶುಪತಿನಾಥ
9591017782
9964527782

40x60 ಸೈಟು S/F @ Rs. 34 ಲಕ್ಷ
MUDA Approved Layout
ಬ್ಯಾಂಕ್ ಲೋನ್ ಲಭ್ಯ / ತಕ್ಷಣ ನೋಂದಣಿ ಚಾಮುಂಡಿ ಬೆಟ್ಟದ ಹಿಂಭಾಗ, ಲಾಲ್ ಬಹದ್ದೂರ್ ಶಾಸ್ತ್ರಿ ನಗರದ ನಂತರ
9538583377

ಬೇಕಾಗಿದ್ದಾರೆ
ಟೆಲಿ ಮಾರ್ಕೆಟಿಂಗ್ ಮಾಡಲು ಬಿಕಾಂ, ಬಿಬಿಎಂ ಮಾಡಿರುವ ಮಹಿಳಾ ಅಭ್ಯರ್ಥಿಗಳು ಬೇಕಾಗಿದ್ದಾರೆ. ಸಂಪರ್ಕಿಸಿ:
7676841708
8722482661

ಸಂಪು ಕ್ಲೀನಿಂಗ್‌ಗಾಗಿ
ಸಂಪರ್ಕಿಸಿ:
8861612486

ಬೇಕಾಗಿದ್ದಾರೆ
ಅನುಭವವುಳ್ಳ ಅಡುಗೆ ಭಟ್ಟರು, ಹೆಲ್ಪರ್ಸ್, ದೋಸೆ ಮಾಸ್ಟರ್, ಚಾಟ್ಸ್ (ಮಸಾಲೆ ಪುರಿ, ಪಾನಿ ಪುರಿ ಇತರೆ.) ಚೈನೀಸ್ ಪರಿಣಿತರು (ಎಕ್ಸ್‌ಪರ್ಟ್) ಬೇಕಾಗಿದ್ದಾರೆ ಮತ್ತು ಕಬ್ಬಿನ ಹಾಲು ಪಾಪ್ಕಾರ್ನ್ ಮಷಿನ್ ಬೇಕಾಗಿದೆ. ಸಂಪರ್ಕಿಸಿ:
9743807271
9964644225

Join ASFT Fashion Design Courses
* Certification Course
* Diploma Course
* Advance Diploma Course
Alpha School of Fashion Technology & Interior Design
AT: SRIRAMPURA, GOKULAM, UDAYAGIRI, MYSORE
Mob: 7829937469, 9901803394

ಬೋಳು ತಲೆಯ ಸಮಸ್ಯೆಯೇ?

ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಪರ್ಧಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Anikethana Road, kuvempunagar, Mysuru
MYSURU 9611028523 MANGALORE 9343142258

LOANS
ಮನೆ ಸಾಲ – ನಿವೇಶನ ಸಾಲ
11ಎ ಮತ್ತು 11ಬಿ, ಮನೆ ಸಾಲ ಹಾಗೂ ಪ್ರಾಪರ್ಟಿ ಸಾಲ, ವ್ಯಾಪಾರ ಸಾಲ ಮಾಡಿಕೊಡಿಸಲಾಗುವುದು. ಬ್ಯಾಂಕ್‌ನಿಂದ ಮತ್ತೊಂದು ಬ್ಯಾಂಕಿಗೆ ವರ್ಗಾವಣೆ ಮಾಡಿಸಲಾಗುವುದು.
7975453083 / 7259784408

ಮಹಿಳಾ ಸಿಬ್ಬಂದಿ ಬೇಕಾಗಿದ್ದಾರೆ
ಚಿನ್ನ ಮತ್ತು ಬೆಳ್ಳಿ ಅಂಗಡಿಯಲ್ಲಿ ಕೆಲಸ ಮಾಡಲು ಮಹಿಳೆಯರಿಗೆ ಅವಕಾಶ. ವಿದ್ಯಾರಣ್ಯಪುರಂನಲ್ಲಿ ವಾಸಿಸುವವರಿಗೆ ಮೊದಲ ಪ್ರಾಮುಖ್ಯತೆ. ವಯಸ್ಸು 21–35 ರವರೆಗೆ
9900520298
8197393199

ಮನೆ ಭೋಗ್ಯಕ್ಕಿದೆ
ಮೈಸೂರು ಬಂಬೂ ಬಜಾರ್ ಮೊದಲನೇ ಮುಖ್ಯರಸ್ತೆ, ಮೇದರ್ ಬ್ಲಾಕ್, 2203/71 ನೇ ಮನೆಯ ಮೊದಲನೇ ಅಂತಸ್ತಿನ 2BHK ಭೋಗ್ಯಕ್ಕಿದೆ.
7710068901

ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್
ಜರ್ಮನ್ ಟೆಕ್ನಾಲಜಿ ಬಳಸಿ ಸಂಪು, ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್ ಮಾಡಲಾಗುತ್ತದೆ.
Mob: 9008711654

ಕೇವಲ 2000 ರೂಪಾಯಿಗೆ
ದಪ್ಪನೆಯ Double ಹಾಸಿಗೆ 2 ದಿಂಬು ಸಹ ಒಂದು ಬೆಡ್‌ಶೀಟ್ ಮತ್ತು 2 ದಿಂಬಿನ ಕವರ್ ಮತ್ತು ಒಂದು ಸೂಟ್‌ಕೇಸ್ ರಗ್ಗು ಸೇರಿ.
8884179981

COMPLETE SOLUTION FOR LITIGATION
M/s Legal Needs INC 24x7 (The Law Research Firm) Mysuru
9880309918

ಮನೆ ಭೋಗ್ಯಕ್ಕಿದೆ
ವಿಜಯನಗರ 2ನೇ ಹಂತ, #3032, Ground Floor, ಮೈಸೂರು, ವಿಜಯನಗರ ಪೋಲಿಸ್ ಸ್ಟೇಷನ್ ಹಿಂಭಾಗ 60x40 3 ಬೆಡ್ ರೂಂ ಸೌಲಭ್ಯದ ಮನೆ. Car Parking ವ್ಯವಸ್ಥೆ ಇರುತ್ತದೆ.
6363013421
9483507250

ಮನೆಯಿಂದಲೇ ಸಂಪಾದಿಸಿ
ಮನೆಯಿಂದಲೇ ಮೊಬೈಲ್, ಕಂಪ್ಯೂಟರ್ ಅಥವಾ ಕೈ ಬರವಣಿಗೆ ಮೂಲಕ ಉದ್ಯೋಗ ಮಾಡಿ 10,000 ರಿಂದ 30,000 ಸಂಪಾದಿಸಿ.
7795560970

ಬರವಣಿಗೆ ಕೆಲಸ
ಮನೆಯಿಂದಲೇ ಫಾರಂ ಭರ್ತಿಮಾಡುವ ಉದ್ಯೋಗ ಮಾಡಿ ಪ್ರತಿ 1 ಫಾರಂಗೆ 30 ರೂ.ಗಳನ್ನು ಪಡೆಯಿರಿ
9731891409

Sudarshan Saur SOLAR WATER HEATER

ATTRACTIVE OFFER
ಸೇಲ್ಸ್&ಸರ್ವೀಸ್
10 ವರ್ಷಗಳ ಗ್ಯಾರಂಟಿ
Bajaj Finserv Available
SUNZONE SOLAR SYSTEM
Vishwamanava Double Road, Kuvempunagar, Mysuru
9845175443

ಭೋಗ್ಯ / ಬಾಡಿಗೆಗೆ ಮನೆ ಬೇಕಾಗಿದೆ
ಕುವೆಂಪುನಗರ ಕಾಂಪ್ಲೆಕ್ಸ್ ಹತ್ತಿರದಲ್ಲಿ ಸಸ್ಯಹಾರಿ ಕುಟುಂಬಕ್ಕೆ 2BHK / 3BHK ಮನೆ ಭೋಗ್ಯ / ಬಾಡಿಗೆಗೆ ಬೇಕಾಗಿದೆ. ಮಧ್ಯವರ್ತಿಗಳು ಕ್ಷಮಿಸಿ
9686576399

WANTED
Blow Moulding Operator –– ITI / Diploma To work in a reputed company in Kadkola industrial area.
9019323999

ಬೇಕಾಗಿದ್ದಾರೆ
ಮನೆಯಲ್ಲೇ ಉಳಿದುಕೊಂಡು, ಮನೆ ಕೆಲಸ, ಅಡುಗೆ ಮತ್ತು ವೃದ್ಧ ದಂಪತಿಗಳ ಆರೈಕೆ ಮಾಡಲು ಮಹಿಳೆ ಬೇಕಾಗಿದ್ದಾರೆ. ಗ್ರಾಮೀಣ ಮಹಿಳೆಯರಿಗೆ ಮೊದಲ ಆದ್ಯತೆ. ಜಾತಿ ಭೇದವಿಲ್ಲ. ತಿಂಗಳಿಗೆ 2 ದಿನ ರಜಾ, ಸಂಬಳ: 10,000/– ಸಂಪರ್ಕಿಸಿ.
9980733384

SNS ENTERPRISES
ಉಚಿತ ತರಬೇತಿ ಬೇಸಿಕ್ ಕಂಪ್ಯೂಟರ್ C, C+ ಮತ್ತು ಜಾವ 3 ತಿಂಗಳ ಕಾಲ ಉಚಿತವಾಗಿ ಹೇಳಿಕೊಡಲಾಗುತ್ತದೆ.
ಸ್ಥಳ: ಒಂಟಿಕೊಪ್ಪಲ್, ಜಯನಗರ.
9880604416
9008604416

SHOP FOR RENT
Furnished Shop in 100 feet road, Near Ramaswamy Circle, Rent Price - 5000/-
7338078120
8553250846

ವಧು ಬೇಕಾಗಿದ್ದಾರೆ
ಬೆಂಗಳೂರಿನ 49 ವರ್ಷದ MNC ಯಲ್ಲಿರುವ ಉತ್ತಮ ವೇತನವಿರುವ ವಿಚ್ಛೇದಿತ ಬ್ರಾಹ್ಮಣ ವರನಿಗೆ ಬ್ರಾಹ್ಮಣ ವಧು ಬೇಕಾಗಿದ್ದಾರೆ. ಮದುವೆ ಖರ್ಚು ಕೊಡಲಾಗುವುದು.
9844408895
9538267942

ಬೇಕಾಗಿದ್ದಾರೆ
ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ. ಸಂಬಳ: 12,000/– ಮೇಟಗಳ್ಳಿ
9916089429
9606344248

ಬೇಕಾಗಿದ್ದಾರೆ
ಪೆಟ್ರೋಲ್ ಬಂಕ್ ಕೆಲಸಕ್ಕೆ ಹುಡುಗರು ಹಾಗೂ ಹುಡುಗಿಯರು ಬೇಕಾಗಿದ್ದಾರೆ. ಹಿನಕಲ್, ಮೈಸೂರು. ಕ್ಯಾಷಿಯರ್, ಹೆಲ್ಪರ್, ಏರ್‌ಬಾಯ್. ಸಂಪರ್ಕಿಸಿ:
8088393837
9380546330

ತಕ್ಷಣ ಬೇಕಾಗಿದ್ದಾರೆ
(AAL) ಹೂಟಗಳ್ಳಿ ಇಂಡಸ್ಟ್ರಿಯಲ್ ಏರಿಯಾದಲ್ಲಿ ಕೆಲಸ ಮಾಡಲು ಹುಡುಗರು ಬೇಕಾಗಿದ್ದಾರೆ. ವಿದ್ಯಾರ್ಹತೆ: SSLC & ITI (Any Trade)
7090309148

FOR SALE
1) 30x40 30x50 sites in Defence Apartment Near Kote Road
2) 2 Acr land tvs factory Near. 1 Acr Harohalli Hd Kote Road
3) Semi Commercial 40x45 s/w c RK Nagar I BLK
4) 40x60 KC Layout
5) 30x40 Duplex House Srirampura
6) 40x60 Jaipura HD Kote Road
PRAKRUTHI PROPERTIES
90359 90359 / 95386 90359

ಆದಿ ಕರ್ನಾಟಕ (SC) ವಿವಾಹ ಮಾಹಿತಿ ಕೇಂದ್ರ
BA, B.Sc, B.Com, MA, M.Com, M.Sc, MBA, MBBS, BE, M.Tech, B.Ed, D.Ed, M.Ed.
ವಿವಾಹ ನೊಂದಣಿಗೆ ಕರೆ ಮಾಡಿ (2nd Marriage also)
9164743059

ಬೇಕಾಗಿದ್ದಾರೆ
ರೆಡಿಮೇಡ್ ಕಿಚನ್ ಮತ್ತು ವಾರ್ಡ್ರೋಬ್ ಮಾರ್ಕೆಟಿಂಗ್ ಮಾಡಲು ಅನುಭವವುಳ್ಳವರು ಕೆಲಸಕ್ಕೆ ಬೇಕಾಗಿದ್ದಾರೆ. ಸಂಪರ್ಕಿಸಿ.
9880859614
7760827774

ಬೇಕಾಗಿದ್ದಾರೆ
ಮೈಸೂರಿನ ಮೇಟಗಳ್ಳಿ ಏರಿಯಾ, J K Tyres (ವಿಕ್ರಾಂತ್) KRS ರಸ್ತೆ ಹತ್ತಿರವಿರುವ ಕೆಮಿಕಲ್ ಕಾರ್ಖಾನೆಗೆ 3 ಪಾಳಿಯಲ್ಲಿ 8 hr Duty, ಹೆಲ್ಪರ್ (Helper) ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ. ವೇತನ ಮಾಸಿಕ 11,500 ರೂ., ESI, PF ಹಾಗೂ ವಾರದ ರಜಾ ಇರುತ್ತದೆ. ಸಂಪರ್ಕಿಸಿ:
9731976148

SITE FOR SALE
21x33 Plot, 9 and 11 a gramatanna Site, Yelwala Mysuru. Price - 13 Lakhs (Negotiable)
7975276174

ಬೇಕಾಗಿದ್ದಾರೆ
ವೆಜ್ ಹೋಟೆಲ್ ಕೆಲಸಕ್ಕೆ Helper ಹುಡುಗರು ಹಾಗೂ Supply ಮಾಡೋ ಹುಡುಗರು ಬೇಕಾಗಿದ್ದಾರೆ. ರೂಂ ವ್ಯವಸ್ಥೆಇದೆ. ಸಂಪರ್ಕಿಸಿ:
7795518038
8884208814

ತಕ್ಷಣ ಬೇಕಾಗಿದ್ದಾರೆ
ಅಪೋಲೊ ಆಸ್ಪತ್ರೆ ಮತ್ತು ಕುವೆಂಪುನಗರ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ವಿದ್ಯಾರ್ಹತೆ: SSLC ಮೇಲ್ಪಟ್ಟು, ಸಂಬಳ: 15,000/- ವಯೋಮಿತಿ: 50 ವರ್ಷದೊಳಗೆ, ESI, PF ಮತ್ತು ಊಟ, ತಿಂಡಿ ವ್ಯವಸ್ಥೆ ಇರುತ್ತದೆ. ಸಂಪರ್ಕಿಸಬೇಕಾದ ಸಂಖ್ಯೆಗಳು
9620667819
9880727819

ಬೇಕಾಗಿದ್ದಾರೆ
ಟೆಲಿಕಾಲಿಂಗ್ ಮಾಡಲು ಹುಡುಗಿಯರು ಬೇಕಾಗಿದ್ದಾರೆ. (ಕನ್ನಡ, ತೆಲುಗು, ಹಿಂದಿ) ಸ್ಥಳ: ಚಾಮುಂಡಿಪುರಂ ಮತ್ತು ಎನ್.ಆರ್.ಮೊಹಲ್ಲಾ, ಸಂಬಳ: 8000/–
8150005111

ಶ್ರೀ ರಾಘವೇಂದ್ರ ಕೊಳ್ಳೇಗಾಲ ಜ್ಯೋತಿಷ್ಯರು
ಜ್ಯೋತಿಷ್ಯ ರತ್ನ ಮೋಡಿ ಮಾಂತ್ರಿಕ ಪಂ|| ಎಸ್.ಕೆ. ಪ್ರಶಾಂತ್ ಆಚಾರ್ಯ
ಮೊ: 9740947045
ಸ್ತ್ರೀ ಪುರುಷ ಪ್ರೇಮ, ಸಂತಾನ, ವಿವಾಹ, ದಾಂಪತ್ಯ ಸಮಸ್ಯೆ, ನಾಗದೋಷ, ಕುಜದೋಷ, ದುಷ್ಟಶಕ್ತಿ, ಪ್ರೇತಬಾಧೆ, ಸಾಲ ಬಾಧೆ, ವ್ಯಾಪಾರದಲ್ಲಿ ತೊಂದರೆ ತನ್ನವರೆ ತನಗೆ ಶತ್ರು ನಿಮ್ಮ ಯಾವುದೇ ಗುಪ್ತ ಹಾಗೂ ಕಠಿಣವಾದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಮಾಡುತ್ತಾರೆ. ಸ್ಥಳ: ಹೋಟೆಲ್ ಗೋವರ್ಧನ, ಡಾ|| ರಾಜ್‌ಕುಮಾರ್ ಪಾರ್ಕ್ ಹತ್ತಿರ, ಶ್ರೀ ಹರ್ಷ ರಸ್ತೆ (ಹೋಟೆಲ್ ಪಾರ್ಕ್‌ಲೇನ್ ರಸ್ತೆ), ಮೈಸೂರು.

ತಕ್ಷಣ ಬೇಕಾಗಿದ್ದಾರೆ
Sri Sapthagiri Builders / Developers Mysore - 16.
Marketing Head - 1
Marketing Executive - 2
Receptionist -1
(Well educated - good in Accounting)
Driver -1(Automatic / Mannual)
7829959596 / 9591828444

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th, SSLC, PUC, ITI, Any Degree Pass / Fail ಆದ ಯುವಕ / ಯುವತಿಯರು ಇಂದೇ ಬೇಕಾಗಿದ್ದಾರೆ. ESI/PF ನೊಂದಿಗೆ ಊಟ, ವಸತಿಯಿರುತ್ತದೆ. ಸಂಬಳ+ಓಟಿ, 15,200–86000.
9740733021 / 9535028750

MUDA APPROVED SITE FOR SALE
Ready to Register Completely Developed site. Just off Bannur Road
0821-2541100

ನಿವೃತ್ತ ನೌಕರರಿಗೆ ಉದ್ಯೋಗವಕಾಶದ ಸೆಮಿನಾರ್
ಭಾರತದ ವಿಶ್ವಾಸಾರ್ಹ ಬ್ಯಾಂಕ್ ಸಮೂಹ ಸಂಸ್ಥೆಯಲ್ಲಿ ಉದ್ಯೋಗ ಮತ್ತು Business ಅವಕಾಶದ ಸೆಮಿನಾರ್ ಏರ್ಪಡಿಸಲಾಗಿದೆ. Benefits: 1) Fixed Salary + PF+ESI+ ಇತರೆ ಭತ್ಯೆಗಳು ಲಭ್ಯವಿರುತ್ತದೆ age above 35 years. ಬೇಕಾಗಿರುವ ದಾಖಲಾತಿಗಳು: 1) ಫೋಟೋ–2, (ಪಾಸ್‌ಪೋರ್ಟ್ ಸೈಜ್), 2) ಪಾನ್‌ಕಾರ್ಡ್, 3)ಆಧಾರ್ ಕಾರ್ಡ್, 4) ವಿದ್ಯಾರ್ಹತೆ ದಾಖಲೆಗಳು, 5) ಬ್ಯಾಂಕ್ ಪಾಸ್ ಪುಸ್ತಕ (1st Page), ಸ್ಥಳ: :- ಮೌರ್ಯ ರೆಡ್ಡಿ ಹರ್ಷ ರಸ್ತೆ, ಮೈಸೂರು. ದಿನಾಂಕ: 18–01–2023. Followed by Lunch.
7975980605

40x60 N/F ಸೈಟು @ Rs. 18 ಲಕ್ಷ
DTCP Approved Layout
ತಕ್ಷಣ ನೋಂದಣಿ / ಬ್ಯಾಂಕ್ ಲೋನ್ ಲಭ್ಯ. ಹುಣಸೂರು ಮೈನ್ ರೋಡ್‌ನಿಂದ 1 kms. ಇಲವಾಲ ಬಸ್ಸು ನಿಲ್ದಾಣ ದಿಂದ 6 kms
9538583377

ಮಾಂತ್ರಿಕ ಕೇರಳ ಶ್ರೀ ಭಗವತಿ ಜ್ಯೋತಿಷ್ಯರು
ಶ್ರೀ ಎಸ್.ಎಸ್.ಪ್ರಸಾದ್ ಪೊದುವಾಳ್
ಮೊ: 9731839596
ಇವರು ಕುಟ್ಟಿಚಾತನ್ ರುದ್ರಿಮಾರ್ತಾಂಡ ದೇವಿ ಭಗವತಿ ಮಲಯಾಳಿ ಮಾಂತ್ರಿಕ ಶಕ್ತಿಯಿಂದ ಸ್ತ್ರೀ ಪುರುಷ, ಪ್ರೇಮ, ದಾಂಪತ್ಯ ಸಮಸ್ಯೆ, ಸಂತಾನ, ದುಷ್ಟಶಕ್ತಿ, ಶತ್ರುಬಾಧೆ, ವ್ಯಾಪಾರ, ಅತ್ತೆ ಸೊಸೆ ಕಿರಿಕಿರಿ, ಸಾಲಬಾಧೆ, ಆರೋಗ್ಯ, ಮಾನಸಿಕ ಚಿಂತೆ, ನಿಮ್ಮ ಯಾವುದೇ ಗುಪ್ತ ಸಮಸ್ಯೆಗಳಿಗೆ ತಕ್ಷಣದಲ್ಲಿ ಪರಿಹಾರ ಶತಸಿದ್ಧ. ಖಾಯಂ ಮನೆ ವಿಳಾಸ:– ಮನೆ ನಂ.68, ಸತ್ಯ ಮಾರ್ಗ ಗೀತಾ ಸ್ಕೂಲ್ ಹಿಂಭಾಗ, ಹೊಸ ಡಿ.ಸಿ ಆಫೀಸ್ ಎದುರು, ಸಿದ್ಧಾರ್ಥನಗರ, ಮೈಸೂರು.

ಮಾಂತ್ರಿಕ ಕೊಳ್ಳೇಗಾಲದ ಜ್ಯೋತಿಷ್ಯರು
ಪಂ. ಎಸ್. ಕುಮಾರಸ್ವಾಮಿ
MOB: 9880583804
ಕೊಳ್ಳೇಗಾಲದ ಮೋಡಿ ಮಾಂತ್ರಿಕ ಅಘೋರಿಚರ ಶಕ್ತಿಯಿಂದ ಸ್ತ್ರೀ, ಪುರುಷ, ಪ್ರೇಮ, ಸಂತಾನ, ಶತ್ರುದೋಷ, ಸಾಲಬಾಧೆ, ಆರೋಗ್ಯ ಭೂಮಿ, ಕೋರ್ಟ್, ವ್ಯಾಪಾರ, ನಂಬಿದ ಜನರಿಂದ ಮೋಸ ನಿಮ್ಮ ಯಾವುದೇ ಜಟಿಲವಾದ ಸಮಸ್ಯೆಗಳಿಗೆ 2 ದಿನದಲ್ಲಿ ಪರಿಹಾರ ಶತಸಿದ್ಧ. ಕರೆಮಾಡಿ ಬನ್ನಿ.
ಖಾಯಂ ವಿಳಾಸ: ಎಟಿಎಂ ಪಕ್ಕ, ಟಿಕೆಟ್ ಬುಕ್ಕಿಂಗ್ ಕೌಂಟರ್ ಹತ್ತಿರ (ರಿಲಾಯನ್ಸ್ ಮಾಲ್) (ಕೆ.ಎಸ್.ಆರ್.ಟಿ.ಸಿ) ಸಬರ್ಬ್ ಬಸ್ ಸ್ಟ್ಯಾಂಡ್, ಮೈಸೂರು.

ಬೇಕಾಗಿದ್ದಾರೆ
ಮಡಿಕೇರಿ ಬಳಿ 'ಎಸ್ಟೇಟ್ ಹೋಂ ಸ್ಟೇ' ಅಲ್ಲಿ ಕೆಲಸ ಮಾಡಲು ದಂಪತಿಗಳಿಗೆ ಅವಕಾಶವಿದೆ. ಸಂಬಳ, ಊಟ ಮತ್ತು ವಾಸಕ್ಕೆ ವ್ಯವಸ್ಥೆ ಇದೆ. ಸಂಪರ್ಕಿಸಿ:
9844563757
7975959269

NUETECH SOLAR WATER HEATER

ಬಿಸಿ ನೀರಿನ ಸಮಸ್ಯೆಗೆ ಹಾಗೂ ದೀರ್ಘ ಕಾಲದ ಬಾಳಿಕೆಗಾಗಿ ಹಾಗೂ 10 ವರ್ಷ ವಾರಂಟಿ.
Company Super Stockist USHA KIRAN AGENCY
9844069190

ತಕ್ಷಣ ಬೇಕಾಗಿದ್ದಾರೆ
ಯಾದವಗಿರಿ ಮತ್ತು ಒಂಟಿಕೊಪ್ಪಲ್ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ವಿದ್ಯಾರ್ಹತೆ: SSLC ಮತ್ತು ಮೇಲ್ಪಟ್ಟು, ಸಂಬಳ: 15,000/- + W/o ಸಂಪರ್ಕಿಸಬೇಕಾದ ಸಂಖ್ಯೆಗಳು:
9880727819
9620667819

ಬೇಕಾಗಿದ್ದಾರೆ
ಮೈಸೂರು – ಕೊಡಗು – ಮಂಗಳೂರು ಮಾರ್ಗಗಳಲ್ಲಿ ಸಂಚರಿಸುವ ಲಾರಿಗಳಲ್ಲಿ ಪಾರ್ಸಲ್ ವಿತರಿಸಲು ದೃಢಕಾಯ ಯುವಕರು, ಡ್ರೈವರುಗಳು ಬೇಕಾಗಿದ್ದಾರೆ. 1) ಡೆಲಿವರಿ ಬಾಯ್ 10,000/–, 2) ಹೆವಿಡ್ರೈವರ್ 18,000/–, 3) ಟೆಂಪೋ ಡ್ರೈವರ್ 16,000/–. ಸಂಪರ್ಕಿಸಿ:
9740408488

ಹೊಸ ಮನೆ ಭೋಗ್ಯಕ್ಕೆ ಇದೆ
ಒಂದು BHK ಒಂದು ಮನೆ ಭೋಗ್ಯಕ್ಕೆ ಇದೆ. ಸೋಲಾರ್ & ಗೀಜರ್ ವ್ಯವಸ್ಥೆ ಇದೆ. 19ನೇ ಕ್ರಾಸ್, BMC ನಗರ, ಮೈಸೂರು
8368448384
9632370435

ವಾಹನಗಳು ಬೇಕಾಗಿದೆ
ಇಂಡಿಕಾ ವಾಹನಗಳು ಅಥವಾ ಹಳೆಯ ಮಾದರಿ ವಾಹನಗಳು ಬಾಡಿಗೆಗೆ ಬೇಕಾಗಿದೆ (3 ತಿಂಗಳಿಗೆ ಮಾತ್ರ). ತಕ್ಷಣ ಸಂಪರ್ಕಿಸಿ: ರಾಮಸ್ವಾಮಿ ಸರ್ಕಲ್, ಮೈಸೂರು ವಾರದ ಸಂಬಳ ಅಥವಾ ತಿಂಗಳ ಸಂಬಳ.
0821-4269122, 8317414184

Document Lost
Pramila M.C., W/o Purushothamakumar R., #81/A, 5th Main Road, 7th Cross, S.J.H. Road, Vidyaranyapuram, Mysore-570 008. I lost my site katha & kandaya letter of site No. 741, Lalbahadur Shastri Nagar, Mysore. Finders please contact:
Mob: 9620026810

SITE FOR SALE
JnanaBharathi Layout DadadaHalli, 30x40, "Raashtrotthaana Vidya Mandira" Road, East Facing, MUDA Khata, Price: 24 Lacs
9342123373

ಈ ತಕ್ಷಣವೇ ಬೇಕಾಗಿದ್ದಾರೆ
ಮೈಸೂರು ಹೆಬ್ಬಾಳಿನ ಕಂಪನಿಗಳಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಹಾಗೂ ಟೈಲರುಗಳು ಮತ್ತು ಹೆಲ್ಪರುಗಳು, ಹುಡುಗರು, ಹುಡುಗಿಯರು ಬೇಕಾಗಿದ್ದಾರೆ. ESI, PF, ವಾರದ ರಜೆ ಮತ್ತು ಬೋನಸ್ ಇರುತ್ತದೆ. ಸಂಪರ್ಕಿಸಿ:
7795285485
8105249880

ತಕ್ಷಣ ಬೇಕಾಗಿದ್ದಾರೆ
ಕಡಕೊಳ ಏರಿಯಾದ ಟಿವಿಎಸ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ವಿದ್ಯಾರ್ಹತೆ: SSLC ಮತ್ತು ಮೇಲ್ಪಟ್ಟು, ವಯೋಮಿತಿ: 45 ವರ್ಷದೊಳಗೆ, ಸಂಬಳ: 15,600/- 8hrs, 26 days, ESI, PF ಮತ್ತು ಊಟ, ತಿಂಡಿ ವಸತಿ ಸೌಲಭ್ಯವಿರುತ್ತದೆ.. ಸಂಪರ್ಕಿಸಬೇಕಾದ ಸಂಖ್ಯೆಗಳು:
9620777819
9538567819

15x30 EWS ಮನೆ
ಮಾರಾಟಕ್ಕಿದೆ (2 Floor) ಕುವೆಂಪುನಗರ 2ನೇ ಹಂತ, 'M' ಬ್ಲಾಕ್ ಸ್ಟಾಪ್ ಹತ್ತಿರ. ಸಂಪರ್ಕಿಸಿ:
Mob: 7899214181

SITE FOR SALE
40x50 North face site sale at Roopa Nagar. (Rs. 85 Lakhs).
Call: 9880273834

ಬೇಕಾಗಿದ್ದಾರೆ
ದೋಸೆ, ಸಮೋಸ, ಕಛೋರಿ, ವಡಾಪಾವ್ ಮಾಡಲು ಹುಡುಗರು ಮತ್ತು ಕೌಂಟರ್ ಕೆಲಸಕ್ಕೆ ಬೇಕಾಗಿದ್ದಾರೆ.
Mob: 9663450541

ಪ್ರಮಾಣ ಪತ್ರ
ಮೈಸೂರು ಜಿಲ್ಲೆ, ಪಿರಿಯಾಪಟ್ಟಣ ತಾಲ್ಲೂಕು, ರಾವಂದೂರು ಹೋಬಳಿ, ಕಂಪಲಾಪುರ ಗ್ರಾಮದಲ್ಲಿ ವಾಸವಾಗಿರುವ ಗೋಪಿ ಕೆ.ಎನ್. ಆದ ನಾನು ಪ್ರಮಾಣೀಕರಿಸುವುದೇನೆಂದರೆ ನನ್ನ ಎಲ್.ಐ.ಸಿ. ಬಾಂಡ್ (725835428) ನಲ್ಲಿ ನನ್ನ ಹೆಸರು ಗೋಪಿ ಕೆ.ಎನ್. ಎಂದು ನಮೂದಾಗಿರುತ್ತದೆ ಹಾಗೂ ನನ್ನ ಆಧಾರ್ ಕಾರ್ಡ್, ಪಾನ್ ಕಾರ್ಡ್, ಶಾಲಾ ದಾಖಲಾತಿ ಮತ್ತು ಬ್ಯಾಂಕ್ ಖಾತೆ ಪುಸ್ತಕದಲ್ಲಿ ನನ್ನ ಹೆಸರು ಗಣೇಶ ಕೆ.ಎನ್. ಎಂದು ನಮೂದಾಗಿರುತ್ತದೆ. ಆದ್ದರಿಂದ ಈ ದಾಖಲಾತಿಗಳ ಪ್ರಕಾರ ಈ ಮೇಲ್ಕಂಡ ಎಲ್.ಐ.ಸಿ. ಬಾಂಡ್‌ನಲ್ಲಿ ನನ್ನ ಹೆಸರನ್ನು ಗಣೇಶ ಕೆ.ಎನ್. ಎಂದು ತಿದ್ದುಪಡಿ ಮಾಡಲು ನೋಟರಿ ಸಿ.ಎಸ್. ಮಂಜುನಾಥಸ್ವಾಮಿ ರವರ ಎದುರು ಪ್ರಮಾಣೀಕರಿಸುತ್ತಿದ್ದೇನೆ.
ಸಹಿ/– ಗಣೇಶ ಕೆ.ಎನ್., ಕಂಪಲಾಪುರ

MOBILE ರಿಪೇರಿ ಟ್ರೈನಿಂಗ್
18 ವರ್ಷದಿಂದ Mobile, Electrical, Electronics ಮತ್ತು Computer Hardware ರಿಪೇರಿ ಹೇಳಿಕೊಡುತ್ತಿರುವ ಏಕೈಕ ಸಂಸ್ಥೆಯಲ್ಲಿ ಶೀಘ್ರದಲ್ಲಿ ಹೊಸ ಬ್ಯಾಚ್ ಪ್ರಾರಂಭ. ಯಾವುದೇ ವಿದ್ಯಾರ್ಹತೆ ಹಾಗೂ ವಯೋಮಿತಿಯ ಅಗತ್ಯವಿಲ್ಲ. PG ವ್ಯವಸ್ಥೆಯು ಇರುತ್ತದೆ. ಕೂಡಲೇ ಸಂಪರ್ಕಿಸಿ:
SMM Institute,
ಶ್ರೀ ವೀರಭದ್ರೇಶ್ವರಸ್ವಾಮಿ ದೇವಸ್ಥಾನದ ಎದುರು, ದಳವಾಯಿ ಶಾಲೆಯ ರಸ್ತೆ, ಕೆ.ಆರ್.ಮೊಹಲ್ಲಾ ಮೈಸೂರು.
Mob.: 9986926101

LAND FOR SALE
Agricultural farm land 1.16 acre, 4 km from Gundlupet Town. Bettahalli Main Road. Suitable for Poultry / Goat Farm with borewell 2 inch water with fencing and gate. Rate 40 lakhs negotiable.
Mob: 9480420666

SITE FOR SALE
40x60 site sale at Suvarna Layout, Bogadi (Near Rainbow School).
Call: 9945042875

ಹೆಸರು ಬದಲಾವಣೆ
ಶ್ರೀಮತಿ ಪಿ.ಯು. ಮಂಜುಳ, ಕೋಂ ಶ್ರೀ ತಿಮ್ಮಯ್ಯ ಟಿ.ಕೆ., ಮನೆ ನಂ. 32, 16ನೇ ಲೇಔಟ್ ಎಂ.ಎಂ.ಜಿ. ಗ್ರೀನ್, ಯಶಸ್ವಿನಿ ಲೇಔಟ್ ಪಕ್ಕ, ಬೋಗಾದಿ, ಮೈಸೂರು ಸಿಟಿ, ಆದ ನಾನು ನನ್ನ ಮಗನಾದ ಅಭಿಷೇಕ್ ತೀತಿಮಾಡ ಟಿ. ಎಂಬ ಹೆಸರಿನ ಬದಲಾಗಿ ಅಭಿಷೇಕ್ ಮುತ್ತಣ್ಣ ಟಿ. (Abhishek Muthanna T.) ಎಂಬ ಹೆಸರನ್ನು ಶ್ರೀ ಕೃಷ್ಣಮೂರ್ತಿ ನೋಟರಿ ಯವರ ಸಮ್ಮುಖದಲ್ಲಿ ಬದಲಾಯಿಸಿಕೊಂಡಿರುತ್ತೇವೆ ಎಂದು ತಿಳಿಯಪಡಿಸುತ್ತೇವೆ.
ಸಹಿ/– ಪಿ.ಯು. ಮಂಜುಳ

ಬೇಕಾಗಿದ್ದಾರೆ
ಅನುಭವಿರುವ (1) ದೋಸಾ ಚೆಫ್ Dosa Chef, (2) ಕೌಂಟರ್ Counter Parcel, (3) ಸಪ್ಲೈಯರ್ - Service - Waiter, (4) ಹೌಸ್ ಕೀಪಿಂಗ್ (Washing)... ಬೇಕಾಗಿದ್ದಾರೆ. K.D. ರೋಡ್‌ನ ರೆಸ್ಟೋರೆಂಟ್‌ನಲ್ಲಿ ಆಕರ್ಷಕ ಸಂಬಳ ಹಾಗೂ ಉತ್ತಮ ಸೌಲಭ್ಯಗಳನ್ನೂ ನೀಡಲಾಗುತ್ತದೆ. ಸಂಪರ್ಕಿಸಿ:
Mob: 78990 28086

ಬೇಕಾಗಿದ್ದಾರೆ
ವೃದ್ಧರು, ರೋಗಿಗಳನ್ನು ಆರೈಕೆ ಮಾಡಲು ನಮ್ಮ ಸಂಸ್ಥೆಯಲ್ಲೇ ಉಳಿದುಕೊಳ್ಳುವಂತಹ ಯುವಕ / ಯುವತಿಯರು, ಮಹಿಳೆಯರು, ವಿಧವೆ / ವಿಚ್ಛೇದಿತೆಯರು ಹೋಂ ನರ್ಸಿಂಗ್ ಕೆಲಸಕ್ಕಾಗಿ ತಕ್ಷಣ ಬೇಕಾಗಿದ್ದಾರೆ. (ಸರ್ಕಾರಿ ನೋಂದಾಯಿತ ಸಂಸ್ಥೆ) ಯಾವುದೇ ರೀತಿಯ ಶುಲ್ಕ ಇರುವುದಿಲ್ಲ (ನಮ್ಮಲ್ಲೇ ಉಳಿದುಕೊಳ್ಳುವವರಿಗೆ ಮಾತ್ರ ಅವಕಾಶ). ಸಂಬಳ 12000 ದಿಂದ 18000. (ESI, PF ಸೌಲಭ್ಯವಿರುತ್ತದೆ).
Mob: 8050699742

PART TIME WORK WORK FROM HOME
ಮನೆಯಲ್ಲಿಯೇ ಕುಳಿತು ಬಿಡುವಿನ ವೇಳೆಯಲ್ಲಿ ಕೆಲಸ / JOB. ತಿಂಗಳಿಗೆ ಸಂಬಳ 12,000 ದಿಂದ 18,000 ದವರೆಗೂ ಸಂಪಾದಿಸಿ. (ಕೊರಿಯರ್ ಸೌಲಭ್ಯವಿದೆ)
ಸಂಪರ್ಕಿಸಿ:
9148733213

ಇಂದೇ ಸಂಪರ್ಕಿಸಿ
ಹೆಬ್ಬಾಳ್, ಹೂಟಗಳ್ಳಿ, ಮೇಟಗಳ್ಳಿ, ಸರಸ್ವತಿಪುರಂ, ಎನ್.ಆರ್. ಮೊಹಲ್ಲಾ, J.P. Nagar, Vontikoppal ಮುಂತಾದ ಏರಿಯಾಗಳಲ್ಲಿನ ಕಂಪನಿ, ಆಫೀಸ್, ಶೋರೂಂಗಳಿಗೆ ಕೆಲಸ ಮಾಡಲು ಯುವಕ / ಯುವತಿಯರು ಬೇಕಾಗಿದ್ದಾರೆ. Any qualification (ESI+PF+OT) ಯೊಂದಿಗೆ ಸಂಬಳ 14,000 – 36,000. ಸಂಪರ್ಕಿಸಿ:
7676939277, 9980630131

ಕೇರಳ ಶ್ರೀ ಪ್ರಸಿದ್ಧ ಜ್ಯೋತಿಷ್ಯರು
Famous Astrologer
ಪಂಡಿತ್ ಸಂತೋಷ್. 9741250896
ಕಾಣತೊರ್ ನಾಲ್ವರ ದೈವ, ಕಲ್ಲುಟಿ ಭಗವತಿ ಶಕ್ತಿಯಿಂದ ದಾಂಪತ್ಯ ಸಮಸ್ಯೆ, ಲೈಂಗಿಕ ಸಮಸ್ಯೆ, ಸ್ತ್ರೀ ಪುರುಷ ಪ್ರೇಮ ವಿಚಾರ, ಶತ್ರು ಬಾಧೆ, ಹಣಕಾಸಿನ ತೊಂದರೆ, ಮಾನಸಿಕ ಚಿಂತೆ, ಪ್ರೇತ ಬಾಧೆ, ವಿದೇಶ ಪ್ರಯಾಣ ಇನ್ನೂ ಮುಂತಾದ ಯಾವುದೇ ಕಠಿಣ ಸಮಸ್ಯೆಗಳಿಗೆ 3 ದಿನದಲ್ಲಿ ಶಾಶ್ವತ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ವಿನಯ ಮಾರ್ಗ, ಶ್ರೀ ಸಿದ್ಧಿವಿನಾಯಕ ದೇವಸ್ಥಾನದ ಎದುರು, ಬ್ಯಾಂಕ್ ಆಫ್ ಬರೋಡ ಪಕ್ಕ, ಸಿದ್ಧಾರ್ಥ ನಗರ, ಮೈಸೂರು

ಕೇರಳ ಶ್ರೀ ಪ್ರಸಿದ್ಧ ಮಹಾ ಮಾಂತ್ರಿಕ ಜ್ಯೋತಿಷ್ಯರು, ನಂ.1 ಮೋಡಿ ತಜ್ಞರು
ಪಂಡಿತ್ ಕೆ.ಎಸ್.ಕೃಷ್ಣಮೂರ್ತಿ
ಮೊ.: 9741806990
ತಾಯಿ ಚಾಮುಂಡೇಶ್ವರಿ ಕಾಣತೊರೆ ನಾಲ್ವರ ದೈವ ಚೌಡಣ್ ಕರೆ ಭಗವತಿ ಮಹಾ ಮಾಂತ್ರಿಕ ಶಕ್ತಿಯಿಂದ ಲೈಂಗಿಕ, ದಾಂಪತ್ಯ, ಸ್ತ್ರೀ ಪುರುಷ ಪ್ರೇಮ ವಿಚಾರ, ಕೋರ್ಟ್ ಕಚೇರಿ, ಹಣಕಾಸಿನ ತೊಂದರೆ, ವಿವಾದ, ಮನೆಯಲ್ಲಿ ಅಶಾಂತಿ, ಮಾನಸಿಕ ಚಿಂತೆ, ಇನ್ನೂ ಮುಂತಾದ ಸಮಸ್ಯೆಗಳಿಗೆ 3 ದಿನದಲ್ಲಿ ಪರಿಹಾರ ಶತಸಿದ್ಧ. ಖಾಯಂ ವಿಳಾಸ ಸಬರ್ಬ್ ಬಸ್‌ಸ್ಟ್ಯಾಂಡ್ ಪಕ್ಕ, ಇರ್ವಿನ್ ರೋಡ್, ಆಂಧ್ರ ಶೈಲಿ ನಂದಿನಿ ಹೋಟೆಲ್ ಹಿಂಭಾಗ, ಮಾರುತಿ ಸುಜುಕಿ ಆಟೋ ಮೊಬೈಲ್ ಪಕ್ಕ ಮನೆಯಲ್ಲಿ ನೆಲೆಸಿದ್ದಾರೆ. ಹಳ್ಳಿಕೇರಿ, ಮೈಸೂರು ಇಲ್ಲಿ ಹೇಳುವ ವಿಚಾರಗಳನ್ನು ಗುಪ್ತವಾಗಿ ಇಡಲಾಗುತ್ತದೆ.

NAME CHANGE
I, RAMESH SIDDEGOWDA Son of Siddegowda aged 53 years residing at No. 130 Milk Dairy Road, Koorgalli, Mysuru - 570018, do hereby state on before Notary S.N.Hemalatha mysore Dt. 19.8.22 that previously my name was called RAMESHA.S. Now, my name was changed from RAMESHA S to RAMESH.S. here after my name is called RAMESH SIDDEGOWDA.

ಮೈಸೂರು ಮಿತ್ರ 43 ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮೈಸೂರು ಮಿತ್ರ ಗುರುವಾರ 12 ಜನವರಿ 2023

ಯುಪಿ ಸಿಎಂ ಯೋಗಿ ವಿರುದ್ಧ ಹೇಳಿಕೆ: ಸನಾತನ ಧರ್ಮಕ್ಕೆ ಅಪಮಾನ ಆರೋಪ

ಸಿ.ಎಂ. ಇಬ್ರಾಹಿಂ ವಿರುದ್ಧ ಮಂಡ್ಯ, ಮದ್ದೂರಲ್ಲಿ ಬಿಜೆಪಿ ಪ್ರತಿಭಟನೆ

ಮಂಡ್ಯ,ಜ.11– ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ಬಗ್ಗೆ ಲಘುವಾಗಿ ಮಾತನಾಡಿ, ಸನಾತನ ಧರ್ಮಕ್ಕೆ ಅಪಮಾನ ಮಾಡಿದ್ದಾರೆ ಎಂದು ಆರೋಪಿಸಿ, ಜೆಡಿಎಸ್ ರಾಜ್ಯಾಧ್ಯಕ್ಷ ಸಿ.ಎಂ. ಇಬ್ರಾಹಿಂ ವಿರುದ್ಧ ಹಿಂದೂ ಜಾಗರಣ ವೇದಿಕೆ ಹಾಗೂ ಬಿಜೆಪಿ ಕಾರ್ಯಕರ್ತರು ಮಂಡ್ಯ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ಜಯಚಾಮರಾಜೇಂದ್ರ ಒಡೆಯರ್ ವೃತ್ತದಿಂದ ಮೆರವಣಿಗೆ ಹಾಗೂ ಬೈಕ್ ರ‍್ಯಾಲಿ ಮೂಲಕ ಸಾವಿರಾರು ಹಿಂದೂಪರ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿ, ಇಬ್ರಾಹಿಂ ವಿರುದ್ಧ ಘೋಷಣೆ ಕೂಗಿದರು. ಜೊತೆಗೆ ಇಬ್ರಾಹಿಂ ಪ್ರತಿಕೃತಿ ದಹನ ಮಾಡಿ, ಜೆಡಿಎಸ್ ವರಿಷ್ಠ ಹೆಚ್.ಡಿ.ಕುಮಾರಸ್ವಾಮಿ ಇಬ್ರಾಹಿಂ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಹಿಂದೂ ಜಾಗರಣಾ ವೇದಿಕೆಯ ರಾಜ್ಯ ಸಂಚಾಲಕ ಎಚ್.ಎನ್.ಸಚಿನ್ ಚಂದ್ರಶೇಖರ್ ಮಾತನಾಡಿ, ಲವ್ ಜಿಹಾದ್ ಬಗ್ಗೆ ಬಸವರಾಜ ಬೊಮ್ಮಾಯಿ, ಶಿವರಾಜ್ ಸಿಂಗ್ ಚೌಹಾಣ್ ಸೇರಿದಂತೆ ಅನೇಕರು ಮಾತನಾಡಿದ್ದಾರೆ. ಆದರೆ ಇಬ್ರಾಹಿಂ ಟಾರ್ಗೆಟ್ ಮಾಡಿದ್ದು ಮಾತ್ರ ಯೋಗಿ ಆದಿತ್ಯನಾಥ್ ಅವರನ್ನು. ಇದರ ಹಿಂದೆ ದೊಡ್ಡ ಷಡ್ಯಂತ್ರವೇ ಇದೆ ಎಂದು ಆರೋಪಿಸಿದರು.



ಮಂಡ್ಯದ ಜಿಲ್ಲಾಡಳಿತ ಭವನದ ಮುಂದೆ ಬಿಜೆಪಿ ಪ್ರತಿಭಟನೆ.



ಮದ್ದೂರಲ್ಲಿ ಬಿಜೆಪಿಯಿಂದ ರಸ್ತೆ ತಡೆ.

ಮಂಡ್ಯ ಜಿಲ್ಲೆ ಸೇರಿದಂತೆ ರಾಜ್ಯದ ಎಲ್ಲಾ ಒಕ್ಕಲಿಗ ಸಮುದಾಯದವರು ನಾಥ ಪರಂಪರೆ, ಸನಾತನ ಧರ್ಮ ಹಾಗೂ ಆದಿಚುಂಚನಗಿರಿ ಮಠವನ್ನು ಗೌರವಿಸುತ್ತಾರೆ. ಆದರೆ ಸನಾತನ ಮಠವನ್ನು ಪ್ರತಿನಿಧಿಸುವ ಯೋಗಿ ಅವರ ಬಗ್ಗೆ ಲಘುವಾಗಿ ಮಾತನಾಡುವ ಮೂಲಕ ಇಬ್ರಾಹಿಂ ಸನಾತನ ಧರ್ಮ ಹಾಗೂ ಒಕ್ಕಲಿಗರಿಗೆ ಅಪಮಾನ ಮಾಡಿದ್ದಾರೆ. ಸನಾತನ ಧರ್ಮವನ್ನೇ ಟಾರ್ಗೆಟ್ ಮಾಡುವ ಮೂಲಕ ಹಿಂದೂ ಧರ್ಮಕ್ಕೆ ಅಪಮಾನ ಎಸಗಿರುವ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ವಿಧಾನಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್ ಮಾತನಾಡಿ, ಇಬ್ರಾಹಿಂ ನಾಲಿಗೆಗೆ ಹತೋಟಿ ಇಲ್ಲ. ಇಬ್ರಾಹಿಂ ಪಂಚೆ ಬಗ್ಗೆ ಮಾತನಾಡುತ್ತಾರೆ. ನಾನು, ಕುಮಾರಸ್ವಾಮಿ, ದೇವೇಗೌಡರು ಪಂಚೆ ಹಾಕುತ್ತೇವೆ. ಬಾಯಿಗೆ ಬಂದಂತೆ ಮಾತನಾಡುವ ಇಬ್ರಾಹಿಂರಿಂದ ಜೆಡಿಎಸ್ ಪಕ್ಷದ ಅವನತಿಯಾಗಲಿದ್ದು, ಕೂಡಲೇ ಕುಮಾರಸ್ವಾಮಿ, ಇಬ್ರಾಹಿಂ ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಪಿ. ಉಮೇಶ್, ಪಕ್ಷದ ಮುಖಂಡರಾದ ಚಂದಗಾಲು ಶಿವಣ್ಣ ಅಶೋಕ್ ಜಯರಾಮ್, ಡಾ.ಸಿದ್ದರಾಮಯ್ಯ, ಡಾ.ಇಂದ್ರೇಶ್, ಎಸ್.ಪಿ.ಸ್ವಾಮಿ, ಫೈಟರ್ ರವಿ, ಮಳವಳ್ಳಿ ಮುನಿರಾಜು, ಇಂಡುವಾಳು ಸಚ್ಚಿದಾನಂದ, ಪೀಹಳ್ಳಿ ರಮೇಶ್, ಸಂತೋಷ್ ಕುಮಾರ್, ಎಚ್.ಆರ್.ಅರವಿಂದ್, ಯಮದೂರು ಸಿದ್ದರಾಜು, ಸಿ.ಟಿ.ಮಂಜುನಾಥ್, ಹೊಸಹಳ್ಳಿ ನಾಗೇಶ್ ಸೇರಿದಂತೆ ಸಾವಿರಾರು ಮಂದಿ ಹಿಂದೂಪರ ಕಾರ್ಯಕರ್ತರು ಭಾಗವಹಿಸಿದ್ದರು.

ಮದ್ದೂರು ವರದಿ: ಜೆಡಿಎಸ್ ರಾಜ್ಯಾಧ್ಯಕ್ಷ ಸಿಎಂ ಇಬ್ರಾಹಿಂ ವಿರುದ್ಧ ಮನ್‌ಮುಲ್ ನಿರ್ದೇಶಕ ಹಾಗೂ ಬಿಜೆಪಿ ಮುಖಂಡ ಎಸ್.ಪಿ.ಸ್ವಾಮಿ ಅವರ ನೇತೃತ್ವದಲ್ಲಿ ಮದ್ದೂರಿನಲ್ಲಿ ಪ್ರತಿಭಟನೆ ಮಾಡಲಾಯಿತು.

ಪಟ್ಟಣದ ಮದ್ದೂರು ಮಳವಳ್ಳಿ ಹೆದ್ದಾರಿ ಸಂಚಾರ ತಡೆದು ಪ್ರತಿಭಟನೆ ನಡೆಸಿದ ಬಿಜೆಪಿ ಮುಖಂಡರು ಸಿಎಂ ಇಬ್ರಾಹಿಂ ಅವರು ಯೋಗಿ ಆದಿತ್ಯನಾಥ್ ಅವರನ್ನು ಕೂಡ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿ ಹೆದ್ದಾರಿ ಸಂಚಾರ ತಡೆ ಮಾಡಿ ಕಾರಣ ಸಂಚಾರ ಅಸ್ತವ್ಯಸ್ತಗೊಂಡಿತ್ತು.

ಮನ್‌ಮುಲ್ ನಿರ್ದೇಶಕ ಹಾಗೂ ಬಿಜೆಪಿ ಮುಖಂಡ ಎಸ್.ಪಿ. ಸ್ವಾಮಿ ಮಾತನಾಡಿ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯವರು ಇಂತಹ ಅವಹೇಳನಕಾರಿ ಹೇಳಿಕೆ ನೀಡಿ ಸಮಾಜದಲ್ಲಿ ಶಾಂತಿ ಕದಡುವ ರಾಜ್ಯಾಧ್ಯಕ್ಷರನ್ನು ಕೂಡಲೇ ವಜಾ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜಿಪಂ ಮಾಜಿ ಸದಸ್ಯ ಬೋರಯ್ಯ, ತಾಪಂ ಮಾಜಿ ಸದಸ್ಯ ಚಿಕ್ಕ ಮರಿಯಪ್ಪ, ಗ್ರಾಪಂ ಅಧ್ಯಕ್ಷ ಶಂಕರೇಗೌಡ, ಮುಖಂಡರಾದ ಹನುಂಮತ, ಡಾಬಾ ಕೆಟ್ಟಿ ಶಿವರಾಮು, ಸತೀಷ, ರವಿಕುಮಾರ, ಹಾಗಲಹಳ್ಳಿ ರಘು, ಮಧು, ಶಿವು, ಸುಧಾಕರ ಇದ್ದರು.

ಮೇಲುಕೋಟೆಯಲ್ಲಿ 'ಕೂಡಾರವೆಲ್ಲಂ' ಪಾಶುರ ಪಾರಾಯಣ

ಮೇಲುಕೋಟೆ, ಜ.11– ಇಲ್ಲಿನ ಲಕ್ಷ್ಮೀ ವರಾಹಸ್ವಾಮಿ ದೇವಾಲಯದಲ್ಲಿ ಬುಧವಾರ ದನುರ್ಮಾಸದ ಪ್ರಯುಕ್ತ "ಕೂಡಾರವೆಲ್ಲಂ" ಪಾಶುರ ಪಾರಾಯಣ ನೆರವೇರಿತು. ಭೂ ವರಾಹಸ್ವಾಮಿಗೆ 108 ಬಟ್ಟಲುಗಳಲ್ಲಿ ಸಕ್ಕರೆ ಪೊಂಗಲ್ ನೈವೇದ್ಯ ಮಾಡಿ ಮಹಾಮಂಗಳಾರತಿ ನೆರವೇರಿಸಲಾಯಿತು.



ಆಂಡಾಳ್ ರಂಗಮನ್ನಾರ್‌ಗೆ ವಿಶೇಷ ಅಲಂಕಾರ ಮಾಡಿ ಶಾತ್ತುಮೊರೈ ನೆರವೇರಿಸಲಾಯಿತು. ಬಳಿಕ ವರಾಹಸ್ವಾಮಿಗೆ ನೈವೇದ್ಯ ಮಾಡಿದ ಪ್ರಸಾದವನ್ನು ಬಟ್ಟಲಿನ ಸಮೇತ ಸರ್ಕಾರಿ ಹಿರಿಯ ಪ್ರಾಥಮಿಕ ಬಾಲಕರ ಶಾಲೆಯ ವಿದ್ಯಾರ್ಥಿಗಳಿಗೆ ವಿತರಿಸಿ, ಮಕ್ಕಳ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಲಾಯಿತು. ಧನುರ್ಮಾಸದ ವಿಶೇಷ ದಿನದ ನಿಮಿತ್ತ ದೇವಾಲಯದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ನೆರವೇರಿದವು. ಭೂ ವರಾಹಸ್ವಾಮಿ ದೇವಾಲಯದ ಮುಖ್ಯಸ್ಥೆ ಚಂದ್ರಮ್ಮ ಹಾಗೂ ಅರ್ಚಕರು ಭಾಗವಹಿಸಿದ್ದರು.

ಶ್ರೀ ನಂದಿ ಬಸವೇಶ್ವರ ಸ್ವಾಮಿ ದನಗಳ ಜಾತ್ರೆ ರದ್ದು

ಮದ್ದೂರು, ಜ.11– ತಾಲೂಕಿನಲ್ಲಿ ಜಾನುವಾರುಗಳಿಗೆ ಮಾರಕವಾಗಿ ಪರಿಣಮಿಸಿರುವ ಚರ್ಮಗಂಟು ರೋಗ ಕಾಣಿಸಿಕೊಳ್ಳುತ್ತಿರುವ ಹಿನ್ನೆಲೆಯಲ್ಲಿ ಪುರಾಣ ಪ್ರಸಿದ್ಧ ಶ್ರೀ ನಂದಿ ಬಸವೇಶ್ವರ ಸ್ವಾಮಿ ದನಗಳ ಜಾತ್ರಾ ಮಹೋತ್ಸವವನ್ನು ರದ್ದುಗೊಳಿಸಿ ತಹಸೀಲ್ದಾರ್ ಟಿ.ಎನ್. ನರಸಿಂಹಮೂರ್ತಿ ಆದೇಶ ಹೊರಡಿಸಿದ್ದಾರೆ.

ಶ್ರೀ ಕ್ಷೇತ್ರದಲ್ಲಿ ಜ.16 ರಿಂದ 25 ರವರೆಗೆ ನಡೆಯಬೇಕಿದ್ದ ದನಗಳ ಜಾತ್ರೆಯನ್ನು ಜಿಲ್ಲಾಧಿಕಾರಿಗಳು ಹಾಗೂ ಪಶು ಸಂಗೋಪನಾ ಇಲಾಖೆಯ ಅಧಿಕಾರಿಗಳ ಆದೇಶದಂತೆ ರದ್ದು ಪಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈಗಾಗಲೇ ರೈತರು ಜಾನುವಾರುಗಳನ್ನು ಕಟ್ಟಲು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಂಡಿದ್ದರು. ಹಲವು ಮಂದಿ ಅಂಗಡಿ ಮಾಲೀಕರು ಸಿಹಿ ತಿಂಡಿ, ಕೃಷಿ ಉಪಕರಣದ ಅಂಗಡಿಗಳು, ಹೋಟೆಲ್‌ಗಳನ್ನು ತೆರೆಯಲು ಸಿದ್ಧತೆ ಕಾರ್ಯದಲ್ಲಿ ತೊಡಗಿದ್ದರು. ಆದರೆ, ಏಕಾಏಕಿ ಜಾತ್ರೆಯನ್ನು ರದ್ದುಗೊಂಡಿರುವುದಕ್ಕೆ ರೈತರು ನಿರಾಸೆಗೊಂಡಿದ್ದಾರೆ.

ಗಂಗಾ ಕಲ್ಯಾಣ ಯೋಜನೆ ಫಲಾನುಭವಿಗಳ ಆಯ್ಕೆಯಲ್ಲಿ ತಾರತಮ್ಯ

ಸಿಎಂಗೆ ಶಾಸಕ ಡಿ.ಸಿ. ತಮ್ಮಣ್ಣ ಪತ್ರ



ಬಸವರಾಜ ಬೊಮ್ಮಾಯಿ



ಡಿ.ಸಿ. ತಮ್ಮಣ್ಣ

ಭಾರತೀನಗರ, ಜ.11– ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿ ಕೊರೆಯಲು ಫಲಾನುಭವಿ ಆಯ್ಕೆಗೆ 1 ಎಕರೆ 20 ಗುಂಟೆ ನಿಗದಿಪಡಿಸಿರುವ ಮಾನದಂಡವನ್ನು ತೆಗೆದು ಹಾಕಿ, 10 ಗುಂಟೆ ಮೇಲಿರುವ ಅರ್ಜಿದಾರರಿಗೆ ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯ ಕಲ್ಪಿಸಲು ಸೂಕ್ತ ಆದೇಶ ನೀಡುವಂತೆ ಒತ್ತಾಯಿಸಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವ ಕೋಟಾ ಶ್ರೀನಿವಾಸ ಪೂಜಾರಿ ರವರಿಗೆ ಶಾಸಕ ಡಿ.ಸಿ.ತಮ್ಮಣ್ಣ ಅವರು ಪತ್ರ ಬರೆದಿದ್ದಾರೆ.

ಈ ಭಾಗದಲ್ಲಿ ಶೇಕಡ 25 ರಷ್ಟು ಮಂದಿ ಮಾತ್ರ ಒಂದೂವರೆ ಎಕರೆ ಜಮೀನಿರುವವರಿದ್ದು, ಉಳಿದ ಶೇಕಡ 75 ರಷ್ಟು ಮಂದಿಗೆ ಒಂದು ಎಕರೆ ಜಮೀನಿಗಿಂತಲೂ ಕಡಿಮೆ ಜಮೀನಿರುತ್ತದೆ. ಇದರಿಂದಾಗಿ ಸರ್ಕಾರದ ನಿಯಮಾವಳಿಗಳಿಂದ ಸರ್ಕಾರದ ಜನೋಪಯೋಗಿ ಯೋಜನೆಗಳನ್ನು ಯಶಸ್ವಿಯಾಗಿ ಕಾರ್ಯಾಚರಣೆ ಮಾಡಲು ಸಾಧ್ಯವಾಗುತ್ತಿಲ್ಲ ಎಂದಿದ್ದಾರೆ.

ಪರಿಶಿಷ್ಟ ಜಾತಿಗೆ ಸೇರಿದವರಿಗೆ ಸರ್ಕಾರದಿಂದ ಭೂಒಡೆತನ ಯೋಜನೆಯಡಿ ಜಮೀನನ್ನು ಖರೀದಿ ಮಾಡಿಕೊಡಲು (20 ಲಕ್ಷ) ಯೋಜನೆ ರೂಪಿಸಿದ್ದು, ಇಂದಿನ ದರದಲ್ಲಿ ರೂ.20 ಲಕ್ಷಗಳ ಮೊತ್ತಕ್ಕೆ ಒಂದೂವರೆ ಎಕರೆ ಜಮೀನು ಖರೀದಿಸಲು ಸಾಧ್ಯವಾಗುತ್ತಿಲ್ಲ. ಮೊತ್ತೊಂದು ಕಡೆ ಸರ್ಕಾರ ಗಂಗಾಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿ ಕೊರೆಯಲು ಒಂದೂವರೆ ಎಕರೆ ಮಾನದಂಡ ನಿಗದಿಪಡಿಸಿದ್ದು, ಇಬ್ಬಗೆಯ ನೀತಿಯನ್ನು ಅನುಸರಿಸುತ್ತಿದೆ. ಹಾಗಾಗಿ ಮೇಲ್ಕಂಡ ಎಲ್ಲಾ ಕಾರಣಗಳಿಂದಾಗಿ ತಾವುಗಳು ಸದರಿ ವಿಚಾರವನ್ನು ಪರಿಶೀಲಿಸಿ, ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಆದಿಜಾಂಬವ ಅಭಿವೃದ್ಧಿ ನಿಗಮ ಹಾಗೂ ಬೋವಿ ಅಭಿವೃದ್ಧಿ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡವನ್ನು ಬದಲಾವಣೆ ಮಾಡಿ, ಕನಿಷ್ಠ 10 ಗುಂಟೆ ಮೇಲ್ಪಟ್ಟ ಅರ್ಜಿದಾರರಿಗೆ ಗಂಗಾಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿ ಕೊರೆಯಲು ಸರ್ಕಾರದಿಂದ ಸೂಕ್ತ ತಿದ್ದುಪಡಿ ಆದೇಶ ಮಾಡಿ, ಸರ್ಕಾರದ ಯೋಜನೆಗಳು ಜನಸಾಮಾನ್ಯರಿಗೆ ತಲುಪಲು ಸಹಕಾರಿಯಾಗಬೇಕೆಂದು ಶಾಸಕ ಡಿ.ಸಿ.ತಮ್ಮಣ್ಣ ಅವರು ಮುಖ್ಯಮಂತ್ರಿ ಮತ್ತು ಸಚಿವರಿಗೆ ಕೋರಿದ್ದಾರೆ.

ವಾಹನ ಡಿಕ್ಕಿ: ಯುವಕ ಸಾವು

ನಾಗಮಂಗಲ, ಜ.11– ಅಪರಿಚಿತ ವಾಹನವೊಂದು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಯುವಕನೊಬ್ಬ ಸ್ಥಳದಲ್ಲಿ ಮೃತಪಟ್ಟ ಘಟನೆ ತಾಲೂಕಿನ ಹೊಣಕೆರೆ ಹೋಬಳಿ ಕೊಣನೂರು ಗ್ರಾಮದ ಬಳಿ ನಡೆದಿದೆ. ಕೆಂಪನಕೊಪ್ಪಲು ಗ್ರಾಮದ ಋತ್ವಿಕ್ (22) ಮನೆಯಿಂದ ಬೈಕ್‌ನಲ್ಲಿ ಸ್ನೇಹಿತನ ಮನೆಗೆ ಹೋಗುತ್ತಿದ್ದ ಸಮಯದಲ್ಲಿ ಎದುರಿನಿಂದ ಬಂದ ವಾಹನವೊಂದು ಡಿಕ್ಕಿ ಹೊಡೆದಿದೆ ಋತ್ವಿಕ್ ಸ್ಥಳದಲ್ಲಿ ಮೃತಪಟ್ಟಿದ್ದಾನೆ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಆಕಸ್ಮಿಕ ಬೆಂಕಿಗೆ ಶೆಡ್ ಭಸ್ಮ

ಪಾಂಡವಪುರ, ಜ.11– ಪಟ್ಟಣದ ಹೇಮಾವತಿ ಹಿಂಭಾಗದ ಬಡಾವಣೆಯಲ್ಲಿ ಆಕಸ್ಮಿಕ ಬೆಂಕಿ ತಗುಲಿ ಶೆಡ್ ಸುಟ್ಟು ಭಸ್ಮವಾಗಿದೆ.

ಬಡಾವಣೆ ನಿವಾಸಿಯಾದ ಕಾಂತಮ್ಮ ಎಂಬುವರಿಗೆ ಸೇರಿದ ಶೆಡ್‌ಗೆ ಆಕಸ್ಮಿಕವಾಗಿ ಬೆಂಕಿ ತಲುಗಿದ್ದು ಸಂಪೂರ್ಣವಾಗಿ ಶೆಡ್ ಬೆಂಕಿಗೆ ಆಹುತಿಯಾಗಿದೆ. ಅದೃಷ್ಟವಶಾತ್ ಬೆಂಕಿ ತಗುಲಿದ ವೇಳೆ ಶೆಡ್‌ನಲ್ಲಿ ಯಾರೂ ಇಲ್ಲದಿದ್ದರಿಂದ ಅನಾಹುತ ತಪ್ಪಿದಂತಾಗಿದೆ. ಬೆಂಕಿ ತಗುಲಿದ್ದರಿಂದ ಶೆಡ್‌ನಲ್ಲಿದ್ದ ಎಲ್ಲಾ ದಾಖಲಾತಿಗಳು, ದಿನ ಬಳಕೆ ವಸ್ತುಗಳು, ಆಹಾರ ಧಾನ್ಯಗಳು ಸಂಪೂರ್ಣವಾಗಿ ಸುಟ್ಟುಭಸ್ಮವಾಗಿವೆ.



ವಿಷಯ ತಿಳಿದ ಶಾಸಕ ಸಿ.ಎಸ್.ಪುಟ್ಟರಾಜು ಅವರ ಪುತ್ರ ಸಿ.ಪಿ.ಶಿವರಾಜು ಅವರು ಸ್ಥಳಕ್ಕೆ ಭೇಟಿಕೊಟ್ಟು ಪರಿಶೀಲನೆ ನಡೆಸಿದರು. ಮನೆಕಳೆದುಕೊಂಡ ಕಾಂತಮ್ಮ ಅವರಿಗೆ ಸಾಂತ್ವಾನ ಹೇಳಿ ವೈಯುಕ್ತಿಕವಾಗಿ ಆರ್ಥಿಕ ನೆರವು ನೀಡಿದರು. ಪುರಸಭೆಯ ಸದಸ್ಯ ಶಿವಕುಮಾರ್ ಅವರು ತಂದಿದ್ದ ಆಹಾರ ಪದಾರ್ಥಗಳನ್ನು ಕಾಂತಮ್ಮ ಅವರಿಗೆ ವಿತರಣೆ ಮಾಡಿದರು. ಅಲ್ಲದೆ ಘಟನೆಯಿಂದ ಬೆಂಕಿಗೆ ಆಹುತಿಯಾಗಿರುವ ದಾಖಲಾತಿಗಳನ್ನು ಹೊಸದಾಗಿ ಮಾಡಿಸಿಕೊಡಲಾಗುವುದು, ಶಾಸಕ ಸಿ.ಎಸ್.ಪುಟ್ಟರಾಜು ಅವರ ಗಮನಕ್ಕೆ ತಂದು ಹೊಸದಾಗಿ ಮನೆ ನಿರ್ಮಿಸಿಕೊಡುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ವೀಣಾ, ಆರ್‌ಓ ಸಂತೋಷ್, ಪುರಸಭೆ ಸದಸ್ಯರಾದ ಶಿವಕುಮಾರ್, ಬಿ.ವೈ.ಬಾಬು, ಜೆಡಿಎಸ್ ಮುಖಂಡ ಚಿಕ್ಕಾಡೆ ಚೇತನ್, ರಾಜೇಶ್, ಬಾಲು, ಸ್ವಾಮಿ, ಈಶ್ವರ್ ಸೇರಿದಂತೆ ಹಲವರು ಹಾಜರಿದ್ದರು.

ಒಂದನೇ ಪುಟದಿಂದ

200 ಯೂನಿಟ್ ವಿದ್ಯುತ್ ಉಚಿತ

ಕಾಂಗ್ರೆಸ್ ಪಕ್ಷ ರಾಜ್ಯದ ಜನರ ಸಮಸ್ಯೆ, ನೋವು, ಅಭಿಪ್ರಾಯವನ್ನು ಸಂಗ್ರಹಿಸಿ ಅದರ ಪ್ರತಿಧ್ವನಿಯಾಗಿ ನಿಮಗೆ ಶಕ್ತಿ ನೀಡಲು, ನಿಮ್ಮ ಬದುಕಿಗೆ ಬೆಳಕು ನೀಡಲು ನಾವು ಇಲ್ಲಿಗೆ ಬಂದಿದ್ದೇವೆ. ಜನರ ಸಂಕಷ್ಟ ಪರಿಹಾರ ಮಾಡುವುದೇ ಈ ಪ್ರಜಾಧ್ವನಿ ಯಾತ್ರೆಯ ಉದ್ದೇಶ. ನಿಮ್ಮ ಮನೆಯಲ್ಲಿ ಕತ್ತಲು ಕಳೆದು ಬೆಳಕು ನೀಡಲು ಕಾಂಗ್ರೆಸ್ ಪಕ್ಷದ ಎಲ್ಲ ನಾಯಕರು ಸೇರಿ ಚರ್ಚೆ ಮಾಡಿ ಈ ಯಾತ್ರೆಯಲ್ಲಿ ಐದು ಭರವಸೆ ನೀಡುತ್ತಿದ್ದೇವೆ. ಅದರ ಪೈಕಿ ಮೊದಲ ಖಚಿತ ಭರವಸೆ ಪ್ರತಿ ಮನೆಗೂ 200 ಯುನಿಟ್ ಉಚಿತ ವಿದ್ಯುತ್ ನೀಡುವುದು. ಮಹಿಳೆಯರು, ಯುವಕರು, ರೈತರು 200 ಯೂನಿಟ್ ವರೆಗೂ ವಿದ್ಯುತ್ ದರ ಕಟ್ಟುವಂತಿಲ್ಲ. ನಾವು ನುಡಿದಂತೆ ನಡೆದಿದ್ದೇವೆ. ನಡೆಯುತ್ತೇವೆ. ನಾಡಿನ ಜನರ ಭವಿಷ್ಯಕ್ಕಾಗಿ ನಾವು ಅನೇಕ ಯೋಜನೆ ಹಮ್ಮಿಕೊಂಡಿದ್ದೇವೆ.

ಅಡುಗೆ ಅನಿಲದ ಬೆಲೆ 400 ರಿಂದ 1100 ರೂ. ಆಗಿದೆ. ರೈತರ ಆದಾಯ ಡಬಲ್ ಮಾಡುತ್ತೇವೆ ಎಂದು ಮೋದಿ ಸರ್ಕಾರ ವಚನ ನೀಡಿತ್ತು. ಯಾವುದಾದರೂ ರೈತನ ಆದಾಯ ಡಬಲ್ ಆಗಿದೆಯಾ, ಕಳೆದ ಚುನಾವಣೆ ಸಮಯದಲ್ಲಿ ನಿಮ್ಮ 1 ಲಕ್ಷದವರೆಗಿನ ಸಾಲ ಮನ್ನಾ ಮಾಡುತ್ತೇವೆ ಎಂದರು. ಸಾಲ ಮನ್ನಾ ಆಗಿದೆಯಾ? 10 ಹೆಚ್‌ಪಿ 10 ಗಂಟೆ ವಿದ್ಯುತ್ ನೀಡುತ್ತೇವೆ ಎಂದರು. ನೀಡಿದರಾ, ಬಂಗಾರಪ್ಪ ಅವರ ಕಾಲದಲ್ಲಿ ಕಾಂಗ್ರೆಸ್ ಸರ್ಕಾರ ರೈತರಿಗೆ ಉಚಿತ ವಿದ್ಯುತ್ ನೀಡಲು ಆರಂಭಿಸಿತು. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗ, ನಾನು ಇಂಧನ ಸಚಿವನಾಗಿದ್ದಾಗ ರೈತರಿಗೆ ವಿದ್ಯುತ್ ನೀಡುವ ಸಮಯವನ್ನು 6 ರಿಂದ 7 ಗಂಟೆಗೆ ಹೆಚ್ಚಿಸಿದೆವು.

ಈ ಸರ್ಕಾರದಲ್ಲಿ ಕೊಟ್ಟ ಮಾತು ಈಡೇರಿಸಿದರಾ, ನಿಮ್ಮ ಬದುಕಿನಲ್ಲಿ ಬೆಳಕು ಕೊಟ್ಟರಾ. ಹೀಗಾಗಿ ನಾವು ಬಿಜೆಪಿ ಪಾಪದ ಪುರಾಣ ಬಿಡುಗಡೆ ಮಾಡಿದ್ದೇವೆ. ಬಿಜೆಪಿಯ ಲಂಚಾವತಾರ, ಮಂಚಾವತಾರ ಬಿಡುಗಡೆ ಮಾಡಿದ್ದೇವೆ. ಈ ಸರ್ಕಾರ ಬಿ ರಿಪೋರ್ಟ್ ಸರ್ಕಾರ. ಮಂತ್ರಿಗಳು ಯಾವುದೇ ಪ್ರಕರಣದಲ್ಲಿ ಸಿಕ್ಕಿಬಿದ್ದರೂ ಅವರಿಗೆ ಬಿ ರಿಪೋರ್ಟ್ ಕೊಟ್ಟು, ಅವರು ಯಾವುದೇ ತಪ್ಪು ಕೆಲಸ ಮಾಡಿಲ್ಲ, ನಿರ್ದೋಷಿಯಾಗುತ್ತಾರೆ ಎಂದು ಮುಖ್ಯಮಂತ್ರಿಗಳು, ಗೃಹ ಸಚಿವರು ಸಂದೇಶ ನೀಡುತ್ತಾರೆ. ಈ ಸರ್ಕಾರ ಬೇಕಾ ಎಂದು ನೀವು ಆಲೋಚಿಸಿ. ಈ 40% ಕಮಿಷನ್ ಸರ್ಕಾರ ಈ ರಾಜ್ಯದಲ್ಲಿ ಕೋಮು ದ್ವೇಷದ ವಿಷ ಬೀಜವನ್ನು ಜನರ ಮನಸ್ಸಿನಲ್ಲಿ ಬಿತ್ತುತ್ತಿದ್ದಾರೆ. ಈ ಸರ್ಕಾರ ಹೊಟೇಲಿನಲ್ಲಿ ಮೆನು ಕಾರ್ಡ್ ಮಾದರಿಯಲ್ಲಿ ಭ್ರಷ್ಟಾಚಾರದ ರೇಟ್ ಕಾರ್ಡ್ ಹಾಕಿದ್ದಾರೆ. ಇದನ್ನು ಪತ್ರಿಕೆಗಳಲ್ಲಿ ಮುಖ್ಯಮಂತ್ರಿ ಹುದ್ದೆಗೆ 2500 ಕೋಟಿ, ಮಂತ್ರಿ ಹುದ್ದೆಗೆ 100 ಕೋಟಿ, ಆಯುಕ್ತರಿಗೆ 15 ಕೋಟಿ, ಕೋವಿಡ್ ಪೂರೈಕೆಗೆ ಶೇ.75, ಪಿಡಬ್ಲ್ಯೂಡಿ ಕಾಮಗಾರಿಗೆ 40%, ಮಠಗಳ ಅನುದಾನಕ್ಕೆ 40%, ಮೊಟ್ಟೆ ಪೂರೈಕೆಗೆ 30% ಕಮಿಷನ್ ನಿಗದಿ ಮಾಡಿದ್ದಾರೆ. ಈ ಬಗ್ಗೆ ಎರಡು ಲಕ್ಷ ಸದಸ್ಯರಿರುವ ಗುತ್ತಿಗೆದಾರರ ಸಂಘದವರು ಪ್ರಧಾನಮಂತ್ರಿಗಳಿಗೆ ಪತ್ರ ಬರೆದಿದ್ದಾರೆ.

ಫೆಬ್ರವರಿ 17ರಂದು ಬಜೆಟ್ ಮಂಡಿಸಿ ಆಗ ಇನ್ನಷ್ಟು ಆಶ್ವಾಸನೆ ನೀಡಲು ಹೊರಟಿದ್ದಾರೆ. ಬಿಜೆಪಿ ಅಧಿಕಾರದಲ್ಲಿದ್ದಾಗ ಜನರಿಗೆ ಕೊಡುಗೆ ನೀಡಲು ಆಗಿಲ್ಲ.

ನಿಮಗಾಗಿ ನಾವು ಕೆಲವು ಸಂಕಲ್ಪ ಮಾಡಿದ್ದೇವೆ. ಅದರ ಪೈಕಿ ಮೊದಲನೇ ಗ್ಯಾರಂಟಿ ಘೋಷಣೆಯನ್ನು ಪ್ರಕಟಿಸಿದ್ದೇವೆ. ನಿಮ್ಮ ಸೇವೆ ಮಾಡಲು, ನಿಮಗೆ ಬಲಿಷ್ಠ ಸರ್ಕಾರ ನೀಡಲು ಅಭಿವೃದ್ಧಿ ಕರ್ನಾಟಕ ನಿರ್ಮಾಣಕ್ಕೆ, ರಾಜ್ಯದ ಕಳಂಕ ತೊಳೆಯಲು ನೀವೆಲ್ಲರೂ ನಮಗೆ ಸಹಕಾರ ನೀಡಬೇಕು.

ಆದೇಶ ಪಾಲನೆ: ಕಾವೇರಿ ಪ್ರಾಧಿಕಾರ

ಹೋಗಿದೆ. ಹೀಗಾಗಿ ಸುಪ್ರೀಂಕೋರ್ಟ್ ನೀಡುವ ಆದೇಶದಂತೆ ನಡೆಯಲು ನಾವು ನಿರ್ಧರಿಸಿದ್ದೇವೆ. ಒಂದು ವೇಳೆ ಸುಪ್ರೀಂಕೋರ್ಟ್ ನಿರ್ಧಾರ ನಮ್ಮ ಕೈಗೆ ನೀಡಿದ್ದೇ ಆದರೆ, ನಾವು ಈ ಬಗ್ಗೆ ಚರ್ಚೆ ನಡೆಸುತ್ತೇವೆಂದು ಹೇಳಿದ್ದಾರೆ. ನ್ಯಾಯಾಲಯ ನಿರ್ಧಾರ ಅಧಿಕಾರ ನೀಡಿದ್ದೇ ಆದರೆ, ಸಿಡಬ್ಲ್ಯುಎಂಎ ಅಣೆಕಟ್ಟು ತೆರೆಯಲು ಕರ್ನಾಟಕಕ್ಕೆ ಅನುಮತಿ ನೀಡುತ್ತದೆಯೇ ಎಂಬ ಪ್ರಶ್ನೆಗೆ ಉತ್ತರಿಸಿ, ನದಿಗಳಿಗೆ ಸಂಬಂಧಿಸಿದಂತೆ ಸಿಡಬ್ಲ್ಯೂಸಿ ಮಾಪನ ಕೇಂದ್ರಗಳ ಮೇಲಿನ ಕುಂದುಕೊರತೆಗಳನ್ನು ಪರಿಶೀಲಿಸಲಾಗುವುದು ಎಂದು ತಿಳಿಸಿದರು. ಇದಕ್ಕೂ ಮುನ್ನ ಸಿಡಬ್ಲ್ಯುಎಂಎ–ಸಿಡಬ್ಲ್ಯುಆರ್‌ಸಿ ತಂಡ ಕಾರೈಕಲ್ ರೈತರ ಅಹವಾಲು ಆಲಿಸಿತು. ಈ ವೇಳೆ ಕಾರೈಕಲ್ ಪ್ರಾದೇಶಿಕ ರೈತರ ಕ್ಷೇಮಾಭಿವೃದ್ಧಿ ಸಂಘದ ಪ್ರತಿನಿಧಿ ಪಿ ರಾಜೇಂದ್ರನ್ ಮಾತನಾಡಿ, "ಕಾವೇರಿ ನದಿ ನಿರ್ವಹಣೆಯನ್ನು ಸಿಡಬ್ಲ್ಯುಎಂಎ ನಿಯಂತ್ರಿಸುವುದನ್ನು ಖಚಿತಪಡಿಸಿಕೊಳ್ಳಬೇಕು.

ಮತ್ತೆ ರೈತರ ಸಾಲ ಮನ್ನಾ

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರಸ್ವಾಮಿ, ಸ್ಯಾಂಟ್ರೋ ರವಿ ಬಿಜೆಪಿ ಸಕ್ರಿಯ ಕಾರ್ಯಕರ್ತ ಎಂದು ಪೊಲೀಸ್ ಠಾಣೆಗೆ ಮುಚ್ಚಳಿಕೆ ಬರೆದು ಕೊಟ್ಟಿದ್ದಾರೆ. ನಮ್ಮ ಪಕ್ಷದ ಶಾಸಕರು, ಸಚಿವರ ಜೊತೆ ನನಗೆ ಒಡನಾಟ ಇದೆ. ಹಾಗಾಗಿ ಹಲವು ಅಧಿಕಾರಿಗಳನ್ನು ವರ್ಗಾವಣೆ ಮಾಡಿದ್ದೇನೆ. ಪೊಲೀಸರ ಮುಂದೆ ಹೇಳಿಕೆ ಕೊಟ್ಟಿದ್ದಾನೆ. ಅಷ್ಟೇ ಅಲ್ಲ ಆ ಮುಚ್ಚಳಿಕೆಯಲ್ಲಿ ವರ್ಗಾವಣೆ ಮಾಡಿಸಿದ ಅಧಿಕಾರಿಗಳ ಪಟ್ಟಿ ಬರೆದಿದ್ದಾನೆ. ಇವರು ಪವಿತ್ರ ಕೇಸರಿ ಬಟ್ಟೆ ಇಟ್ಟುಕೊಂಡು ರಾಜಕಾರಣ ಮಾಡುತ್ತಿದ್ದಾರೆ. ಸ್ಯಾಂಟ್ರೋ ರವಿ, ಸೈಲೆಂಟ್ ಸುನಿಲ್, ಫೈಟರ್ ರವಿ ಅಂಥವರ ಹೆಗಲ ಮೇಲೆ ಕೇಸರಿ ಹಾಕಿದ್ದಾರೆ. ಪವಿತ್ರ ಕೇಸರಿ ಬಟ್ಟೆ ಹಾಕಿ ಅದರ ಪಾವಿತ್ರ್ಯತೆಯನ್ನು ಬಿಜೆಪಿ ಅವರು ಹಾಳುಮಾಡಿದ್ದಾರೆ ಎಂದರು.

ಮೈಸೂರಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ

ವಿಸ್ತಾರದ ಜಾಗವು ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣಕ್ಕೆ ಸೂಕ್ತ ಎಂದು ನಿರ್ಧರಿಸಿ ಮುಡಾ ಸಭೆಯಲ್ಲಿ ಜಾಗವನ್ನು ಕೆಎಸ್‌ಸಿಎಗೆ ಮಂಜೂರು ಮಾಡಬಹುದೆಂದು ತೀರ್ಮಾನ ಕೈಗೊಂಡಿತ್ತು.

ಪ್ರತಾಪ್ ಸಿಂಹ ಆಸಕ್ತಿ: ಈ ವಿಷಯ ಕುರಿತಂತೆ 2022ರ ಅ.28ರಂದು ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಸಮ್ಮುಖದಲ್ಲಿ ಸಂಸದ ಪ್ರತಾಪ ಸಿಂಹ, ಮುಡಾದ ಅಂದಿನ ಅಧ್ಯಕ್ಷ ಹೆಚ್.ವಿ. ರಾಜೀವ್, ಕೆಎಸ್‌ಸಿಎ ಪದಾಧಿಕಾರಿಗಳು ಹಾಗೂ ಮುಡಾ ಆಯುಕ್ತರು ಚರ್ಚೆ ನಡೆಸಿ ಹಂಚ್ಯಾ–ಸಾತಗಳ್ಳಿ 'ಬಿ' ವಲಯ ಬಡಾವಣೆಯ ಉದ್ಯಾನವನ ಮತ್ತು ಬಯಲು ಪ್ರದೇಶ ಒಳಗೊಂಡ 20.08 ಎಕರೆ ಜಾಗವು ಮಹಾ ಯೋಜನೆ–2031ರನ್ವಯ ಕ್ರೀಡಾಂಗಣಕ್ಕೆ ಸೂಕ್ತವಾಗಿದೆ ಎಂದು ಅಭಿಪ್ರಾಯಪಟ್ಟಿದ್ದರು.

ಕಟ್ಟೆ ಜಾಗವಿದೆ: ಉದ್ಯಾನವನ ಮತ್ತು ಬಯಲು ಪ್ರದೇಶಕ್ಕಾಗಿ ಮೀಸಲಿರಿಸಿದ್ದ ಜಾಗದಲ್ಲಿ ಸಾತಗಳ್ಳಿ ಗ್ರಾಮದ ಸರ್ವೆ ನಂಬರ್ 106ಕ್ಕೆ ಸೇರಿದ 2.20 ಎಕರೆ ಸರ್ಕಾರಿ ಕಟ್ಟೆಯೂ ಸೇರಿರುವುದರಿಂದ ಕಂದಾಯ ಇಲಾಖೆ ಅಧಿಕಾರಿಗಳು ಸರ್ಕಾರಿ ಕಟ್ಟೆ ಜಾಗವನ್ನು ಸ್ಥಳಾಂತರಿಸಿ ಕೊಡಬೇಕೆಂದು ಮುಡಾ ಅಧಿಕಾರಿಗಳು ಮನವಿ ಮಾಡಿದ್ದಾರೆ.

ಸರ್ಕಾರದ ಹಂತದಲ್ಲಿದೆ: ಕರ್ನಾಟಕ ರಾಜ್ಯ ಕ್ರಿಕೆಟ್ ಸಂಘಕ್ಕೆ ಸದರಿ ಜಾಗವನ್ನು ಮಂಜೂರು ಮಾಡುವ ಕುರಿತಂತೆ ಪ್ರಸ್ತಾವನೆ ಸರ್ಕಾರದ ಹಂತದಲ್ಲಿದ್ದು, ಈಗಾಗಲೇ ಟಿಪ್ಪಣಿ ಸಹ ಸಿದ್ಧವಾಗಿದೆ. ಮುಂದಿನ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನವಾಗಬೇಕಿದೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರೇ ವಿಶೇಷ ಆಸಕ್ತಿ ವಹಿಸಿರುವುದರಿಂದ ಅನುಮೋದನೆ ಸಿಗಲಿದ್ದು, ಶೀಘ್ರ ಜಾಗ ಹಸ್ತಾಂತರಿಸಿ ಕ್ರೀಡಾಂಗಣ ನಿರ್ಮಾಣ ಕಾಮಗಾರಿಗೆ ಮುಖ್ಯಮಂತ್ರಿಗಳಿಂದಲೇ ಗುದ್ದಲಿ ಪೂಜೆಯನ್ನೂ ನೆರವೇರಿಸಲಾಗುವುದು ಎಂದು ಮುಡಾ ಅಧ್ಯಕ್ಷ ಯಶಸ್ವಿ ಸೋಮಶೇಖರ್ ತಿಳಿಸಿದ್ದಾರೆ.

14 ಲಕ್ಷ ರೂ. ಕಾಮಗಾರಿಗೆ ಟೆಂಡರ್: ಉದ್ದೇಶಿತ ಜಾಗದಲ್ಲಿ ಬೆಳೆದಿರುವ ಗಿಡಗಂಟಿಗಳನ್ನು ತೆರವುಗೊಳಿಸಿ ಸಮತಟ್ಟು ಮಾಡುವ ಕಾಮಗಾರಿಗೆ (14 ಲಕ್ಷ ರೂ.) ನಿನ್ನೆಯಷ್ಟೇ ಟೆಂಡರ್ ಕರೆಯಲಾಗಿದ್ದು, ಸ್ವಚ್ಛವಾದ ನಂತರ ಸದರಿ ಜಾಗಕ್ಕೆ ಹದ್ದುಬಸ್ತು ಮಾಡಿ ಕ್ರಿಕೆಟ್ ಸಂಘಕ್ಕೆ ಹಸ್ತಾಂತರಿಸಲಾಗುವುದು ಎಂದು ಮುಡಾ ಆಯುಕ್ತ ಜಿ.ಟಿ. ದಿನೇಶ್‌ಕುಮಾರ್ ಸುದ್ದಿಗಾರರಿಗೆ ತಿಳಿಸಿದರು.

ವಿಶ್ವದರ್ಜೆ ಸೌಲಭ್ಯ: ಬೆಂಗಳೂರಿನಲ್ಲಿರುವ ಚಿನ್ನಸ್ವಾಮಿ ಕ್ರೀಡಾಂಗಣಕ್ಕಿಂತಲೂ ಹೆಚ್ಚು ದೊಡ್ಡದಾದ ಕ್ರಿಕೆಟ್ ಕ್ರೀಡಾಂಗಣ ಮೈಸೂರಲ್ಲಿ ನಿರ್ಮಾಣವಾಗಲಿದ್ದು, ವಿಶ್ವದರ್ಜೆಯ ಸೌಲಭ್ಯ ಒದಗಿಸಲು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಘ ಮುಂದಾಗಿದೆ. ಆ ಮೂಲಕ ಮೈಸೂರು ಪ್ರಾಂತ್ಯದ ಮೈಸೂರು, ಮಂಡ್ಯ, ಕೊಡಗು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಕ್ರೀಡಾ ಪ್ರತಿಭೆಗಳಿಗೆ ವಿಫುಲ ಅವಕಾಶ ಲಭ್ಯವಾಗಲಿದೆ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ.

ರಿಯಲ್ ಎಸ್ಟೇಟ್ ಉದ್ಯಮ ಚೇತರಿಕೆ: ವಿಟಿಯು ಬಳಿ ಅಂತರರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣವಾದಲ್ಲಿ ಹಂಚ್ಯಾ–ಸಾತಗಳ್ಳಿ ಸುತ್ತಮುತ್ತಲಿನ ಭೂಮಿ ಬೆಲೆ ಗಗನಕ್ಕೇರಲಿದ್ದು, ರಿಯಲ್ ಎಸ್ಟೇಟ್ ಉದ್ಯಮ ಚೇತರಿಸಿಕೊಳ್ಳಲಿದೆಯಲ್ಲದೆ, ವ್ಯಾಪಾರ, ವಹಿವಾಟು, ವಾಣಿಜ್ಯ ಚಟುವಟಿಕೆಗಳೂ ಸಹ ಗರಿಗೆದರಲಿವೆ. ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹೇಮಂತಕುಮಾರ್ ಗೌಡ, ಮುಡಾ ಸೂಪರಿಂಟೆಂಡಿಂಗ್ ಇಂಜಿನಿಯರ್ ಚೆನ್ನಕೇಶವ, ಎಕ್ಸಿಕ್ಯೂಟಿವ್ ಇಂಜಿನಿಯರ್ ಧರ್ಮೇಂದ್ರಕುಮಾರ್, ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಮೋಹನ, ಅಸಿಸ್ಟೆಂಟ್ ಇಂಜಿನಿಯರ್ ಪ್ರಸಾದ್ ಸ್ಥಳ ಪರಿಶೀಲನೆ ವೇಳೆ ಹಾಜರಿದ್ದರು.

ಸ್ಯಾಂಟ್ರೊ ರವಿ ಬಂಧನ?

ಮಾತನಾಡಿಕೊಳ್ಳಲಾಗುತ್ತಿತ್ತು. ವಿಪಕ್ಷಗಳೂ ಕೂಡ ಇಂತಹದ್ದೇ ಆರೋಪಗಳನ್ನು ಮಾಡುತ್ತಿದ್ದವು.

ಆದರೆ, ಕಾನೂನು–ಸುವ್ಯವಸ್ಥೆ ಎಡಿಜಿಪಿ ಅಲೋಕ್‌ಕುಮಾರ್ ಅವರ ನಿರ್ದೇಶನದಂತೆ ಸ್ಯಾಂಟ್ರೊ ರವಿ ಬಂಧನಕ್ಕೆ 4 ವಿಶೇಷ ತಂಡಗಳನ್ನು ರಚಿಸಲಾಗಿತ್ತು. ಆತ ವಿದೇಶಕ್ಕೆ ಪರಾರಿಯಾಗದಂತೆ ಏರ್‌ಪೋರ್ಟ್‌ಗಳಲ್ಲಿ ಲುಕ್ ಔಟ್ ನೋಟಿಸ್ ಜಾರಿಗೊಳಿಸಲಾಗಿತ್ತು. ಬೆಂಗಳೂರಿನ ರಾಜರಾಜೇಶ್ವರಿನಗರದಲ್ಲಿರುವ ಆತನ ಫ್ಲಾಟ್ ಮೇಲೂ ಪೊಲೀಸರು ದಾಳಿ ನಡೆಸಿ, ಮಹತ್ವದ ದಾಖಲೆಗಳೊಂದಿಗೆ ಆತನ ಚಲನವಲನದ ಬಗ್ಗೆ ಮಹತ್ವದ ಸುಳಿವನ್ನು ಪತ್ತೆ ಹಚ್ಚಿದ್ದರು. ತಮಗೆ ದೊರೆತ ಸುಳಿವುಗಳನ್ನಾಧರಿಸಿ ಕ್ಷಿಪ್ರ ಕಾರ್ಯಾಚರಣೆ ನಡೆಸಿದ ಪೊಲೀಸರ ವಿಶೇಷ ತಂಡ ಬುಧವಾರ ರಾತ್ರಿ ಅಜ್ಞಾತ ಸ್ಥಳವೊಂದರಲ್ಲಿ ಅಡಗಿದ್ದ ಸ್ಯಾಂಟ್ರೊ ರವಿಯನ್ನು ಬಂಧಿಸಿತು ಎಂದು ಹೇಳಲಾಗಿದೆ. ಗುರುವಾರ ಮುಂಜಾನೆಯಷ್ಟರಲ್ಲಿ ಆತನನ್ನು ಮೈಸೂರಿಗೆ ಕರೆತರಲಾಗುತ್ತದೆ ಎಂದು ಮೂಲಗಳು ತಿಳಿಸಿವೆ. ಸ್ಯಾಂಟ್ರೋ ರವಿಯಿಂದ ಅತ್ಯಾಚಾರಕ್ಕೊಳಗಾಗಿ ನಂತರ ಆತನನ್ನೇ ವಿವಾಹವಾಗಿದ್ದ ಯುವತಿ ಜನವರಿ 2ರಂದು ಮೈಸೂರಿನ ವಿಜಯನಗರ ಠಾಣೆಗೆ ದೂರು ಸಲ್ಲಿಸಿದ್ದಳು. ಈಕೆಗೆ ಒಡನಾಡಿ ಸೇವಾ ಸಂಸ್ಥೆ ಕಾನೂನು ನೆರವು ಹಾಗೂ ಆಶ್ರಯ ನೀಡುತ್ತಿತ್ತು. ಈಕೆಯ ವಿರುದ್ಧ ಬೆಂಗಳೂರಿನ ಕಾಟನ್‌ಪೇಟೆ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಾಗುವಂತೆ ಸ್ಯಾಂಟ್ರೊ ರವಿ ಮಾಡಿದ್ದ ಎಂದು ಆರೋಪಿಸಲಾಗಿತ್ತು. ಈತನ ಮಾತನ್ನು ಕೇಳಿ ಯುವತಿ ಹಾಗೂ ಆಕೆಯ ಸಹೋದರಿ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಿ, ಜೈಲಿಗೆ ಅಟ್ಟಿದ್ದ ಪೊಲೀಸ್ ಇನ್ಸ್‌ಪೆಕ್ಟರ್ ಪ್ರವೀಣ್‌ನನ್ನು ನಿನ್ನೆಯಷ್ಟೇ ಅಮಾನತುಪಡಿಸಲಾಗಿತ್ತು. ಅಲ್ಲದೇ, ಎಡಿಜಿಪಿ ಅಲೋಕ್‌ಕುಮಾರ್ ಅವರು ಸ್ವತಃ ಮಂಗಳವಾರ ಮೈಸೂರಿಗೆ ಆಗಮಿಸಿ, ಸ್ಯಾಂಟ್ರೊ ರವಿಯನ್ನು ಬಂಧಿಸುವ ಸಂಬಂಧ ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿದ್ದರಲ್ಲದೇ, ಸಂತ್ರಸ್ತ ಯುವತಿಯರಿಂದ ಮಾಹಿತಿ ಪಡೆದಿದ್ದರು.

ಆಸ್ತಿ ಮುಟ್ಟುಗೋಲು ಯಾರಿಂದಲೂ ಸಾಧ್ಯವಿಲ್ಲ



ಗಂಗಾವತಿ (ಕೊಪ್ಪಳ ಜಿಲ್ಲೆ), ಜ.11– ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಹೊಸ ಪಕ್ಷ ಸ್ಥಾಪಿಸಿ 16 ದಿನಗಳಾಗುವಷ್ಟರಲ್ಲಿಯೇ ಸಿಬಿಐ ಆಸ್ತಿ ಮುಟ್ಟುಗೋಲಿಗೆ ಮುಂದಾಗಿದ್ದು, ಇದು ಯಾರಿಂದಲೂ ಸಾಧ್ಯವಿಲ್ಲ ಎಂದು ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಸ್ಥಾಪಕ ಜನಾರ್ಧನ ರೆಡ್ಡಿ ಹೇಳಿದರು.

ಇಲ್ಲಿ ಬುಧವಾರ ಸುದ್ದಿಗಾರರ ಜೊತೆ ಮಾತನಾಡಿ ಪಕ್ಷ ಸಂಘಟನೆ ಬಗ್ಗೆ ಸಾಮಾಜಿಕ ತಾಣಗಳಲ್ಲಿ ಜನರಿಗೆ ಮಾಹಿತಿ ನೀಡುತ್ತಿದ್ದೇನೆ. ಕೆಲವರು ಅವುಗಳನ್ನೇ ಹ್ಯಾಕ್ ಮಾಡಿಸಿ ಚುನಾವಣಾ ತಯಾರಿಗೆ ಅಡ್ಡಿಪಡಿಸಲು ಪ್ರಯತ್ನಿಸುತ್ತಿದ್ದಾರೆ. ಜನರ ಪ್ರೀತಿ ಇರುವ ತನಕ ನನ್ನನ್ನು ಏನೂ ಮಾಡಲು ಆಗುವುದಿಲ್ಲ ಎಂದರು. ಬಂಧನದ ವೇಳೆ ಸಿಬಿಐ ನನ್ನಿಂದ ರೂ. 1,020ಕೋಟಿ ಜಪ್ತಿ ಮಾಡಿ ಪ್ರಕರಣ ದಾಖಲಿಸಿತ್ತು. ಸದ್ಯ ರೂ. 4 ಸಾವಿರ ಕೋಟಿ ಆಸ್ತಿ ಜಪ್ತಿಯಾಗಿದ್ದರೂ ಚುನಾವಣೆ ಖರ್ಚಿಗೆ ಯಾವುದೇ ಕಷ್ಟವಿಲ್ಲ ಎಂದರು.

ಯಾರನ್ನೂ ಹೆದರಿಸಿ ದುಡ್ಡು ಹೊಡೆದಿಲ್ಲ. ಸ್ವಂತ ಶ್ರಮದಿಂದ ಗಳಿಸಿದ ಆಸ್ತಿ ಅದು. ಜೈಲಿನಲ್ಲಿ ಕಿರಿದಾದ ಕೊಠಡಿಯಲ್ಲಿ ನಾಲ್ಕು ವರ್ಷ ವನವಾಸ ಕಳೆದು ಬಂದಿದ್ದು, ಯಾರಿಗೂ ಹೆದರುವುದಿಲ್ಲ. ಅಕ್ರಮ ಆಸ್ತಿ ಪ್ರಕರಣದ ಆರೋಪದಿಂದ ಮುಕ್ತನಾಗುವೆ. ನಂತರವೇ ಉಸಿರು ಬಿಡುವೆ ಎಂದು ಹೇಳಿದರು.

ಭಾರತೀಯ ಆಹಾರ ನಿಗಮದಲ್ಲಿ 'ಭ್ರಷ್ಟಾಚಾರ': 50 ಸ್ಥಳಗಳಲ್ಲಿ ಸಿಬಿಐ ದಾಳಿ; ಡಿಜಿಎಂ ಬಂಧನ

ನವದೆಹಲಿ: ಭಾರತೀಯ ಆಹಾರ ನಿಗಮ(ಎಫ್‌ಸಿಐ)ದಲ್ಲಿ ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ಬುಧವಾರ ನಿಗಮದ ಡಿಜಿಎಂ ಶ್ರೇಣಿಯ ಅಧಿಕಾರಿಯನ್ನು ಬಂಧಿಸಿದೆ ಮತ್ತು ಪಂಜಾಬ್, ಹರಿಯಾಣ ಮತ್ತು ದೆಹಲಿ ಸೇರಿದಂತೆ ದೇಶದ 50 ಸ್ಥಳಗಳಲ್ಲಿ ದಾಳಿ ನಡೆಸಿ ತೀವ್ರ ಶೋಧ ನಡೆಸುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಎಫ್‌ಸಿಐನಲ್ಲಿ ತಾಂತ್ರಿಕ ಸಹಾಯಕರಿಂದ ಕಾರ್ಯನಿರ್ವಾಹಕ ನಿರ್ದೇಶಕರವರೆಗಿನ ಎಲ್ಲಾ ಅಧಿಕಾರಿಗಳನ್ನು ಸಿಬಿಐ ವಿಚಾರಣೆಗೆ ಒಳಪಡಿಸುವ ಸಾಧ್ಯತೆ ಇದೆ ಎಂದು ಅವು ಹೇಳಿದ್ದಾರೆ.

ಎಫ್‌ಸಿಐನಲ್ಲಿ 50,000 ಲಂಚ ಪಡೆಯುತ್ತಿದ್ದ ಡೆಪ್ಯುಟಿ ಜನರಲ್ ಮ್ಯಾನೇಜರ್ (ಡಿಜಿಎಂ)ನನ್ನು ಸಿಬಿಐ ಬಂಧಿಸಿದ ನಂತರ 50 ಸ್ಥಳಗಳಲ್ಲಿ ಶೋಧ ಆರಂಭಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.



ನಂಜನಗೂಡು ತಾಲೂಕು ದೊಡ್ಡ ಕವಲಂದೆ ಗ್ರಾಮದಲ್ಲಿ ಬಿಜೆಪಿ ಪಕ್ಷದ ಬೂತ್ ವಿಜಯ ಅಭಿಯಾನ ಹಾಗೂ ಪೇಜ್ ಪ್ರಮುಖರ ನಾಮ ನಿರ್ದೇಶನ ಆಯ್ಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಗೋಪಾಲ್ ನಾಯ್ಕ, ಶಕ್ತಿ ಕೇಂದ್ರದ ಅಧ್ಯಕ್ಷ ರಂಗನಾಥ್, ಜಿಲ್ಲಾ ಎಸ್‌ಸಿ ಮೋರ್ಚಾ ಉಪಾಧ್ಯಕ್ಷ ಎಸ್. ನಾಗಣ್ಣ ಕವಲಂದೆ, ಬೂತ್ ಮಟ್ಟದ ಉಸ್ತುವಾರಿ (BLA-2) ರಾಹುಲ್, ಮಂಜುಳಾ, ಭರಣಯ್ಯ, ಗ್ರಾಮದ ಯಜಮಾನ ಸಿದ್ದಲಿಂಗಯ್ಯ, ಬಿಜೆಪಿ ಪಕ್ಷದ ಮುಖಂಡರಾದ ಜಿ.ಸುರೇಶ್, ಲಾಯರ್ ಮಹೇಶ್, ರಂಗಸ್ವಾಮಿ ಘಟ್ಟವಾಡಿ, ಸೋಮಯ್ಯ, ಪಕ್ಷದ ಮಹಿಳಾ ಸದಸ್ಯರು ಹಾಗೂ ಮುಖಂಡರು ಹಾಜರಿದ್ದರು.

ಮಾಸಾಂತ್ಯಕ್ಕೆ ಕೇಂದ್ರ ಸಂಪುಟ ಪುನರ್‌ರಚನೆ?

ನವದೆಹಲಿ: ರಾಷ್ಟ್ರೀಯ ಕಾರ್ಯಕಾರಿಣಿ ಸಭೆಗೆ ತಯಾರಿ ನಡೆಸುತ್ತಿರುವ ಬಿಜೆಪಿಯು ಮುಂಬರಲಿರುವ ಚುನಾವಣೆಗೂ ಸಿದ್ಧತೆ ಮಾಡಿಕೊಳ್ಳುತ್ತಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸಚಿವ ಸಂಪುಟ ಪುನರ್‌ರಚನೆಯನ್ನೂ ಈ ತಿಂಗಳ ಅಂತ್ಯದಲ್ಲಿ ಮಾಡಲಿದೆ ಎಂಬ ಮಾತುಗಳೂ ಬಲವಾಗಿ ಕೇಳಿಬರುತ್ತಿವೆ. ಸಚಿವರ ಕಾರ್ಯನಿರ್ವಹಣೆ ಸಾಮರ್ಥ್ಯದ ಆಧಾರದ ಮೇಲೆ ಸಂಪುಟ ಪುನರ್‌ರಚನೆ ನಡೆಯಲಿದೆ ಎನ್ನಲಾಗಿದೆ. ಜನವರಿ 31ರಿಂದ ಸಂಸತ್ತಿನ ಬಜೆಟ್ ಅಧಿವೇಶನ ಆರಂಭವಾಗಲಿದೆ. ಅಷ್ಟರ ಒಳಗೆ ಸಂಪುಟ ಪುನರ್‌ರಚನೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ. ಆದರೆ, ಈ ಕುರಿತು ಸರ್ಕಾರದಿಂದ ಯಾವುದೇ ಅಧಿಕೃತ ಪ್ರಕಟಣೆ ಹೊರಬಿದ್ದಿಲ್ಲ.

ಗುಜರಾತ್ ವಿಧಾನಸಭೆ ಚುನಾವಣೆಯ ಭಾರಿ ಗೆಲುವು, ಹಿಮಾಚಲ ಪ್ರದೇಶ ವಿಧಾನಸಭೆ ಚುನಾವಣೆಯ ಸೋಲು, ದೆಹಲಿ ಮಹಾನಗರ ಪಾಲಿಕೆ ಚುನಾವಣೆಯ ಸೋಲು ಮತ್ತು ಕರ್ನಾಟಕ ಸೇರಿ ಈ ವರ್ಷ ನಡೆಯಲಿರುವ ವಿಧಾನಸಭೆ ಚುನಾವಣೆಗಳು ಈ ಬಾರಿಯ ಸಂಪುಟ ಪುನರ್‌ರಚನೆ ಮೇಲೆ ಪ್ರಭಾವ ಬೀರಲಿವೆ ಎಂದು ಅಂದಾಜಿಸಲಾಗಿದೆ.

ಬಿಜೆಪಿ ಕಾರ್ಯಕರ್ತನ ಸಾವಿನ ಹಿಂದೆ ರಾಜಕೀಯ ಪಿತೂರಿಯಿಲ್ಲ

ಕಳ್ಳ ಬೇಟೆಗಾರರ ಗುಂಡಿಗೆ ಬಲಿಯಾಗಿದ್ದಾರೆ: ಪೊಲೀಸರು

ಹಾಸನ, ಜ.11– ಕಳ್ಳ ಬೇಟೆಗಾರರು ಹಾರಿಸಿದ ಗುಂಡಿಗೆ ಬಿಜೆಪಿ ಕಾರ್ಯಕರ್ತರೊಬ್ಬರು ಸಾವನ್ನಪ್ಪಿರುವ ಘಟನೆ ಸಕಲೇಶಪುರ ತಾಲೂಕಿನ ತಂಬಲಗೇರಿಯಲ್ಲಿ ಸೋಮವಾರ ಸಂಜೆ ನಡೆದಿದೆ. ಮೃತ ವ್ಯಕ್ತಿಯನ್ನು ನವೀನ್ (39) ಎಂದು ಗುರ್ತಿಸಲಾಗಿದೆ. ಘಟನೆಯಲ್ಲಿ ನವೀನ್ ಎದೆಗೆ ಗುಂಡು ತಗುಲಿ ಸ್ಥಳದಲ್ಲೇ ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ. ಅವರ ಜೊತೆಗಿದ್ದ ಮತ್ತಿಬ್ಬರಿಗೂ ಗಾಯಗಳಾಗಿವೆ ಎಂದು ತಿಳಿದುಬಂದಿದೆ.

ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಿರುವ ಹೇಮಾವತಿ ಜಲಾಶಯದ ಹಿನ್ನೀರಿನಲ್ಲಿ ದಯಾನಂದ ಮತ್ತು ಪದ್ಮನಾಭ ಎಂಬುವವರೊಂದಿಗೆ ನವೀನ್ ಮೀನುಗಾರಿಕೆ ನಡೆಸುತ್ತಿದ್ದರು. ಈ ವೇಳೆ ಹತ್ತು ಮಂದಿ ದುಷ್ಕರ್ಮಿಗಳು ಪ್ರಾಣಿಗಳನ್ನು ಬೇಟೆಯಾಡಲು ಗುಂಡು ಹಾರಿಸಿದ್ದಾರೆ. ಈ ಗುಂಡುಗಳು ಮೂವರಿಗೆ ಬಿದ್ದಿದೆ. ಗುಂಡಿನ ಸದ್ದು ಕೇಳಿದ ಕೂಡಲೇ ಸ್ಥಳಕ್ಕೆ ಗ್ರಾಮಸ್ಥರು ಧಾವಿಸಿದ್ದು, ಗಾಯಾಳುಗಳನ್ನು ಸ್ಥಳೀಯ ತಾಲೂಕು ಆಸ್ಪತ್ರೆಗೆ ದಾಖಲಿಸಿದ್ದಾರೆ. ಈ ವೇಳೆ ನವೀನ್ ಮೃತಪಟ್ಟಿದ್ದಾರೆ. ನವೀನ್ ಅವರು ಪತ್ನಿ ಹಾಗೂ ನಾಲ್ಕು ವರ್ಷದ ಮಗಳನ್ನು ಅಗಲಿದ್ದಾರೆ. ಈ ನಡುವೆ ಶ್ವಾನದಳ ಹಾಗೂ ಮೈಸೂರಿನ ಎಫ್‌ಎಸ್‌ಎಲ್ ತಂಡ ಸ್ಥಳಕ್ಕೆ ಭೇಟಿ ನೀಡಿದ್ದು, ಪರಿಶೀಲನೆ ನಡೆಸುತ್ತಿದೆ. ಘಟನೆ ಹಿಂದೆ ರಾಜಕೀಯ ಪಿತೂರಿ ಅಥವಾ ವೈಯಕ್ತಿಕ ದ್ವೇಷವಿಲ್ಲ. ಕಳ್ಳ ಬೇಟೆಗಾರರು ಹಾರಿಸಿದ ಗುಂಡಿನಿಂದ ನವೀನ್ ಸಾವನ್ನಪ್ಪಿದ್ದಾರೆ ಎಂದು ಎಸ್ಪಿ ಹರಿರಾಮ್ ಶಂಕರ್ ಹೇಳಿದ್ದಾರೆ. ಈ ಸಂಬಂಧ ಸ್ಥಳದಿಂದ ದೂರ ನಿಂತಿದ್ದ ರಾಜಾಚಾರಿ ಎಂಬಾತನನ್ನು ಪೊಲೀಸರು ವಿಚಾರಣೆ ನಡೆಸಿದ್ದಾರೆ. ಪ್ರಕರಣ ಸಂಬಂಧ ಈಗಾಗಲೇ ಪೊಲೀಸರು ಇಬ್ಬರನ್ನು ಬಂಧಿಸಿದ್ದಾರೆ, ಇಬ್ಬರ ಪೈಕಿ ಒಬ್ಬ ಈ ಪ್ರದೇಶದಲ್ಲಿ ಇದೇ ರೀತಿಯ ಘಟನೆಯಲ್ಲಿ ಭಾಗಿಯಾಗಿದ್ದ ಎನ್ನಲಾಗಿದೆ.

107 ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ

ಕುಡಿಯುವ ನೀರಿನ ಯೋಜನೆಗೆ 40 ಕೋಟಿ ರೂ. ಅನುದಾನ

ಕುಶಾಲನಗರ, ಜ.11– ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳ 107 ಮಂದಿ ಫಲಾನುಭವಿಗಳಿಗೆ ಶಾಸಕ ಅಪ್ಪಚ್ಚುರಂಜನ್ ಬುಧವಾರ ಹಕ್ಕುಪತ್ರ ವಿತರಿಸಿದರು.

ಇಲ್ಲಿನ ಪ್ರವಾಸಿ ಮಂದಿರದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಾಸಕರು ಹಕ್ಕುಪತ್ರ ವಿತರಿಸಿ ಮಾತನಾಡಿ, ತಮ್ಮ ಮನೆಯ ಹಕ್ಕುಪತ್ರಗಳಿಗೆ ಬ್ಯಾಂಕ್‌ನಲ್ಲಿ ಸಾಲಸೌಲಭ್ಯ ದೊರೆಯಲಿದ್ದು,ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಂಡು ಉತ್ತಮ ಮನೆ ನಿರ್ಮಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಯಾವುದೇ ಕಾರಣಕ್ಕೂ ಮನೆಗಳನ್ನು ಮಾರಾಟ ಮಾಡಬಾರದು. ಸರ್ಕಾರ ವಸತಿ ರಹಿತರಿಗಾಗಿ ಅನೇಕ ಯೋಜನೆಗಳನ್ನು ಕಾರ್ಯರೂಪಕ್ಕೆ ತಂದಿದೆ. ಈ ಎಲ್ಲಾ ಯೋಜನೆಗಳನ್ನು ಸದುಪಯೋಗ ಪಡಿಸಿಕೊಂಡು ಉತ್ತಮ ಬದುಕು ರೂಪಿಸಿಕೊಳ್ಳಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ಬಿ.ಜೈವರ್ಧನ್, ಯೋಜನಾ ಪ್ರಾಧಿಕಾರದ ಅಧ್ಯಕ್ಷ ಎಂ.ಎಂ.ಚರಣ್, ಕೂಡುಮಂಗಳೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಇಂದಿರಾ ರಮೇಶ್, ತಹಶೀಲ್ದಾರ್ ಪ್ರಕಾಶ್, ಉಪ ತಹಶೀಲ್ದಾರ್ ಮಧುಸೂದನ್ ಇದ್ದರು

ಕುಡಿಯುವ ನೀರಿನ ಯೋಜನೆಗೆ ರೂ.40 ಕೋಟಿ: ನೂತನ ತಾಲೂಕು ಕೇಂದ್ರ ಪುರಸಭೆಯಾಗಿ ಮೇಲ್ದರ್ಜೆಗೇರಿರುವ ಕುಶಾಲನಗರ ಪಟ್ಟಣದ ಜನತೆಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು 40 ಕೋಟಿ ರೂ. ಅನುದಾನ ಒದಗಿಸಲಾಗಿದೆ ಎಂದು ಶಾಸಕ ರಂಜನ್ ಇದೇ ವೇಳೆ ತಿಳಿಸಿದರು. ಪುರಸಭೆ ವ್ಯಾಪ್ತಿಯಲ್ಲಿ ಮುಖ್ಯಮಂತ್ರಿಗಳ ನಗರೋತ್ಥಾನ ಯೋಜನೆ ಹಾಗೂ 15 ನೇ ಹಣಕಾಸು ಯೋಜನೆಯಡಿ 5.64 ಕೋಟಿ ರೂ. ವೆಚ್ಚದಲ್ಲಿ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕರು ಚಾಲನೆ ನೀಡಿ ಮಾತನಾಡಿದರು. ಬಲಮುರಿ ದೇವಸ್ಥಾನ ಬಳಿ 3.75 ಲಕ್ಷ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಉದ್ದೇಶಿಸಿರುವ ಉದ್ಯಾನವನ ಹಾಗೂ ಶಿವಕುಮಾರ್ ಸ್ವಾಮೀಜಿ ವೃತ್ತಕ್ಕೆ ಭೂಮಿಪೂಜೆ ನೆರವೇರಿಸಿದರು. ಲಕ್ಷಾಂತರ ಮಕ್ಕಳಿಗೆ ಅನ್ನ ದಾಸೋಹ, ಅಕ್ಷರ ದಾಸೋಹವನ್ನು ನೀಡುವ ಮೂಲಕ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಿರುವ ಸಿದ್ದಗಂಗಾ ಶ್ರೀ ಹೆಸರಿನಲ್ಲಿ ವೃತ್ತ ನಿರ್ಮಾಣ ಮಾಡು ತ್ತಿರುವುದು ಸಂತೋಷ ತಂದಿದೆ ಎಂದರು.



ಪುರಸಭೆ ಅಧ್ಯಕ್ಷ ಬಿ.ಜೈವರ್ಧನ್ ಮಾತನಾಡಿ ಪುರಸಭೆ ವ್ಯಾಪ್ತಿಯ 16 ವಾರ್ಡ್‌ಗಳಲ್ಲಿ ರಸ್ತೆ ಚರಂಡಿ, ಸ್ಲಾಬ್, ಪಾದಚಾರಿ ರಸ್ತೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ಪುರಸಭೆ ವ್ಯಾಪ್ತಿಯ ಎಲ್ಲಾ ಬಡಾವಣೆಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದರು.

ಈ ಸಂದರ್ಭ ಕೊಡ್ಲಿಪೇಟೆ ಕಿರಿಕೊಡ್ಲಿ ಮಠದ ಸದಾಶಿವ ಸ್ವಾಮೀಜಿ, ಪುರಸಭೆ ಉಪಾಧ್ಯಕ್ಷೆ ಸುರೇಯಾಬಾನು, ಸದಸ್ಯರಾದ ಡಿ.ಕೆ.ತಿಮ್ಮಪ್ಪ, ಅಮೃತ್ ರಾಜ್, ಸುರೇಶ್, ಶೈಲಾ ಕೃಷ್ಣಪ್ಪ, ಎಂ.ಕೆ.ದಿನೇಶ್, ಯೋಜನಾ ಪ್ರಾಧಿಕಾರದ ಅಧ್ಯಕ್ಷ ಎಂ.ಎಂ. ಚರಣ್, ನಿರ್ದೇಶಕರಾದ ಪುಂಡಾರೀಕಾಕ್ಷ, ವೈಶಾಖ್, ಮಧುಸೂದನ್, ವೀರಶೈವ ಸಮಾಜದ ಅಧ್ಯಕ್ಷ ಬಿ.ಶಿವಪ್ಪ, ಪುರಸಭೆ ಆಯುಕ್ತ ಶಿವಪ್ಪ ನಾಯಕ್, ಆರೋಗ್ಯ ನಿರೀಕ್ಷಕ ಉದಯಕುಮಾರ್ ಇದ್ದರು.

ಹೆಚ್ಚುವರಿ ಕೊಠಡಿಗೆ ಭೂಮಿಪೂಜೆ ಸಮೀಪದ ನಂಜರಾಯಪಟ್ಟಣ ಪ್ರೌಢಶಾಲೆಯಲ್ಲಿ 5 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಹೆಚ್ಚುವರಿ ಕೊಠಡಿಗೆ ಬುಧವಾರ ಶಾಸಕ ಎಂ.ಪಿ.ಅಪ್ಪಚ್ಚುರಂಜನ್ ಭೂಮಿಪೂಜೆ ನೆರವೇರಿಸಿದರು. ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷೆ ಸವಿತಾ ಅಪ್ಪಣ್ಣ, ಕಾರ್ಯದರ್ಶಿ ಐಯಂಡ್ರ ಲೋಕನಾಥ್, ಬಸವನಹಳ್ಳಿ ಲ್ಯಾಂಪ್ಸ್ ಸೊಸೈಟಿ ಅಧ್ಯಕ್ಷ ಆರ್.ಕೆ.ಚಂದ್ರು, ಮುಖ್ಯ ಶಿಕ್ಷಕ ಎಚ್.ಪಿ. ಮೂರ್ತಿ, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕ ಚೇತನ್, ಶಾಲಾ ಅಭಿವೃದ್ಧಿ ಸಮಿತಿ ನಿರ್ದೇಶಕರು, ಶಿಕ್ಷಕ ವರ್ಗ ಹಾಗೂ ಸಿಬ್ಬಂದಿಗಳು ಇದ್ದರು.

ಪೊನ್ನಂಪೇಟೆಯ ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿಗೆ NAAC "ಎ" ಗ್ರೇಡ್ ಮಾನ್ಯತೆ

ಪೊನ್ನಂಪೇಟೆ, ಜ.11– ಕೊಡವ ಎಜುಕೇಶನ್ ಸೊಸೈಟಿಯ (KES) ಆಶ್ರಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು (CIT) ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿಯಿಂದ (NAAC) "ಎ" ಗ್ರೇಡ್ ಮಾನ್ಯತೆಯನ್ನು ಪಡೆದುಕೊಂಡಿದೆ.



ಈ ಸಂಬಂಧ ದಾಖಲೆಯನ್ನು ಸಿಐಟಿಯ ಕಾರ್ಯದರ್ಶಿ ಸಿ.ಪಿ. ರಾಕೇಶ್ ಪೂವಯ್ಯ, ಸಿಐಟಿಯ ಪ್ರಾಂಶುಪಾಲ ಡಾ.ಎಂ.ಬಸವರಾಜ್, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಸಮ್ಮುಖದಲ್ಲಿ ಬಿಡುಗಡೆ ಮಾಡಿದರು.

NAAC ಮಾರ್ಗಸೂಚಿಗಳಿಗೆ ಅನುಗುಣವಾಗಿ ಸಂಸ್ಥೆಯನ್ನು ಮೌಲ್ಯಮಾಪನ ಮಾಡಲು ಮೌಲ್ಯಮಾಪಕರ ತಂಡವು ಇತ್ತೀಚೆಗೆ ಸಿಐಟಿಯ ಹಲವಾರು ವಿಭಾಗಗಳಿಗೆ ಭೇಟಿ ನೀಡಿತ್ತು. ಯಶಸ್ಸಿಗೆ ಕಾರಣರಾದ ಪ್ರಾಚಾರ್ಯರು ಹಾಗೂ ಸಿಬ್ಬಂದಿಯನ್ನು ಶ್ಲಾಘಿಸಿದ ಕೆಇಎಸ್ ಅಧ್ಯಕ್ಷ ಡಾ.ಎಂ.ಸಿ. ಕಾರ್ಯಪ್ಪ ಮಾತನಾಡಿ, 'ಎ' ಗ್ರೇಡ್ ಮಾನ್ಯತೆಯಿಂದ ಸಿಬ್ಬಂದಿಯ ಜವಾಬ್ದಾರಿ ಹೆಚ್ಚಿದ್ದು, ಭವಿಷ್ಯದಲ್ಲಿ ಉನ್ನತ ಶ್ರೇಣಿಗೆ ಹೋಗಲು ಶ್ರಮಿಸುವಂತೆ ಮಾಡಿದೆ ಎಂದು ಹೇಳಿದರು.

ಡಾ. ಕಾರ್ಯಪ್ಪ ಅವರ ಅಭಿಪ್ರಾಯಗಳನ್ನು ಅನುಮೋದಿಸಿದ ಪೂವಯ್ಯ ಅವರು, ಸಿಬ್ಬಂದಿ ತಮ್ಮ ಪ್ರಯತ್ನಗಳನ್ನು ಕೈಬಿಡದೆ ಉನ್ನತ ಶ್ರೇಣಿ ಗಳಿಸಲು ಅದೇ ಹುರುಪಿನೊಂದಿಗೆ ಮುಂದುವರಿಯಬೇಕು ಮತ್ತು ದೇಶದ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆಯ ಮತ್ತೊಂದು ವಿಧಾನ ವಾದ ನ್ಯಾಷನಲ್ ಬೋರ್ಡ್ ಆಫ್ ಅಕ್ರೆಡಿ ಟೇಶನ್ (NBA) ಮಾನ್ಯತೆ ಪಡೆದು ಕೊಳ್ಳಬೇಕು ಎಂದು ಸಿಬ್ಬಂದಿಗೆ ಕಿವಿಮಾತು ಹೇಳಿದರು.

ಅಕಾಡೆಮಿಕ್ ಕೌನ್ಸಿಲ್ ಸದಸ್ಯರಾದ ಡಾ.ಪುಷ್ಪಾ ಕುಟ್ಟಣ್ಣ, ಡಾ.ಪೊನ್ನಮ್ಮ ಮಾಚಯ್ಯ ಮತ್ತು ಕೆ.ಎಸ್. ತಿಮ್ಮಯ್ಯ, ಸಿಐಟಿಯ ತಂಡಗಳಿಗೆ ತಯಾರಿ ನಡೆಸಲು ಮಾರ್ಗದರ್ಶನ ನೀಡಿದ್ದರು.

ಸಿಐಟಿಯ NAAC ಸಂಯೋಜಕ ಡಾ.ರಾಮಕೃಷ್ಣ ಆಂತರಿಕ ಗುಣಮಟ್ಟ ಭರವಸೆ ಕೋಶ (IQAC) ಸಂಯೋಜಕ, ಪ್ರೊ.ಬಿ.ಜೆ. ಕಿಶನ್ ಕರುಂಬಯ್ಯ ಹಾಗೂ ಎಲ್ಲ ವಿಭಾಗಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

NAAC ಉನ್ನತ ಶಿಕ್ಷಣ ಸಂಸ್ಥೆಗಳನ್ನು ಮೌಲ್ಯಮಾಪನ ಮಾಡುವ ಮತ್ತು ಮಾನ್ಯತೆ ನೀಡುವ ಸರ್ಕಾರಿ ಸಂಸ್ಥೆಯಾಗಿದೆ. ಶಿಕ್ಷಣದ ಗುಣಮಟ್ಟದ ಸ್ಥಿತಿಯ ಬಗ್ಗೆ ಸಂಸ್ಥೆಗಳಲ್ಲಿ ತಿಳುವಳಿಕೆ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ. NAAC ಮಾನ್ಯತೆ ಶಿಕ್ಷಣದ ಗುಣಮಟ್ಟವನ್ನು ಸುಧಾರಿಸುವುದರ ಮೇಲೆ ಕೇಂದ್ರೀಕರಿಸುತ್ತದೆ ಮತ್ತು ಕೌಶಲ್ಯ ಮತ್ತು ಜ್ಞಾನವನ್ನು ಬೆಳೆಸಲು ಸಹಾಯ ಮಾಡುವ ಮೂಲಕ ವಿದ್ಯಾರ್ಥಿಗಳ ಒಟ್ಟಾರೆ ಅಭಿವೃದ್ಧಿಯನ್ನು ಸುಧಾರಿಸುವ ಗುರಿಯನ್ನು ಹೊಂದಿದೆ.

ಕಳವು ಪ್ರಕರಣದಲ್ಲಿ ಪೌರಕಾರ್ಮಿಕ ಬಂಧನ

7.5 ಲಕ್ಷ ಮೌಲ್ಯದ ಚಿನ್ನಾಭರಣ, ರೂ. 2840 ನಗದು ವಶ



ಕುಶಾಲನಗರ, ಜ.11– ಕುಶಾಲನಗರ ತಾಲೂಕಿನ ಹೆಬ್ಬಾಲೆ ಗ್ರಾಮದಲ್ಲಿ ಹೆದ್ದಾರಿ ಬಳಿಯ ಮನೆಯೊಂದರಲ್ಲಿ ಜ.4 ರಂದು ಕಳ್ಳತನ ಮಾಡಿ ಲಕ್ಷಾಂತರ ಮೌಲ್ಯದ ಚಿನ್ನಾಭರಣ ಹಾಗೂ ನಗದು ದೋಚಿ ಪರಾರಿಯಾಗಿದ್ದ ಆರೋಪಿಯನ್ನು ಕುಶಾಲನಗರ ಪೊಲೀಸ್ ತಂಡ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಪಟ್ಟಣದ ಡಿವೈಎಸ್ಪಿ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿದ ಕೊಡಗು ಎಸ್ಪಿ ಕ್ಯಾಪ್ಟನ್ ಎಂ.ಎ.ಅಯ್ಯಪ್ಪ ಪ್ರಕರಣವನ್ನು ಯಶಸ್ವಿಯಾಗಿ ಬೇಧಿಸಿದ ಕುಶಾಲನಗರ ಪೊಲೀಸರನ್ನು ಪ್ರಶಂಶಿಸಿದರು.

ಕಳ್ಳತನ ನಡೆದ ವಾರದೊಳಗೆ ಪ್ರಕರಣ ಬೇಧಿಸಿದ ಡಿವೈಎಸ್ಪಿ ಗಂಗಾಧರ್, ಸಿಐ ಮಹೇಶ್ ಮತ್ತು ತಂಡಕ್ಕೆ ಎಸ್ಪಿ ಅಭಿನಂದನೆ ಸಲ್ಲಿಸಿದರು. ಹೆಬ್ಬಾಲೆಯಲ್ಲಿ ಮನೆ ಕಳ್ಳತನ ಮಾಡಿದ್ದ ಪ್ರಕರಣದಲ್ಲಿ ಗ್ರಾಪಂ ಪೌರಕಾರ್ಮಿಕ ಮಂಜುನಾಥ್ (32) ಬಂಧಿತ ಆರೋಪಿಯಾಗಿದ್ದಾನೆ. ಮೂಲತಃ ಕೆಆರ್ ನಗರದ ಲಕ್ಷ್ಮಣ ಎಂಬವರ ಪುತ್ರ ಮಂಜುನಾಥ್ ಹೆಬ್ಬಾಲೆ ಗ್ರಾಪಂ ನ ಪೌರಕಾರ್ಮಿಕ ಕೆಲಸ ಮಾಡುತ್ತಿದ್ದ. ಕಳೆದ ಜ.4 ರಂದು ಹೆಬ್ಬಾಲೆ ನಾರಾಯಣ ಎಂಬುವರ ಮನೆ ಕಳ್ಳತನ ಮಾಡಿ 7 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ನಗದು ಕದ್ದಿದ್ದ. ಮನೆಯ ಮಾಲೀಕ ನಾರಾಯಣ ಅವರು ಮನೆಯ ಮುಂದಿನ ಅಂಗಡಿಯಲ್ಲಿ ವ್ಯಾಪಾರ ಮಾಡುತ್ತಿರುವ ಸಂದರ್ಭ ಮುಂದಿನ ಬಾಗಿಲಿನ ಚಿಲಕ ತೆಗೆದು ಮನೆ ರೂಮಿಗೆ ನುಗ್ಗಿ ವಾರ್ಡ್ ರೂಬ್ ಬೀಗ ತೆಗೆದು ಲಾಕರ್‌ನಲ್ಲಿಟ್ಟಿದ್ದ ಚಿನ್ನಾಭರಣ, ನಗದು ಕಳವು ಮಾಡಲಾಗಿತ್ತು.

ಮಾಲೀಕ ನೀಡಿದ ದೂರಿನ ಮೇರೆಗೆ ಕುಶಾಲನಗರ ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿ, ಆತನಿಂದ ರೂ.7.5 ಲಕ್ಷ ರೂ. ಮೌಲ್ಯದ 177 ಗ್ರಾಂ ಚಿನ್ನಾಭರಣ ಹಾಗೂ ರೂ 2840 ವಶಪಡಿಸಿಕೊಳ್ಳಲಾಗಿದೆ.ಈತನ ಮೇಲೆ 2012 ರಲ್ಲಿ ಕೆಆರ್ ನಗರ ಪೊಲೀಸ್ ಠಾಣೆಯಲ್ಲಿ ಸರಗಳ್ಳತನ ಪ್ರಕರಣ ದಾಖಲಾಗಿತ್ತು. ಮೂರು ವರ್ಷ ಶಿಕ್ಷೆ ಅನುಭವಿಸಿ ಬಿಡುಗಡೆಗೊಂಡ ಮೇಲೆ ಹೆಬ್ಬಾಲೆ ಗ್ರಾಮ ಪಂಚಾಯಿತಿಯಲ್ಲಿ ಪೌರಕಾರ್ಮಿಕನಾಗಿ ಕೆಲಸ ಮಾಡುತ್ತಿದ್ದನು.

ಕಾರ್ಯಾಚರಣೆಯಲ್ಲಿ ಪಿಎಸ್ಐ ಚಂದ್ರಶೇಖರ್, ಭಾರತಿ, ಎಎಸ್ಐ ವೆಂಕಟೇಶ್, ಗೋಪಾಲ್, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಬಿಸಿಯೂಟದ ಅಕ್ಕಿಯಲ್ಲಿ ಪ್ಲಾಸ್ಟಿಕ್ ತುಂಡುಗಳು...

ಜಿಲ್ಲಾಡಳಿತಕ್ಕೆ ಎಸ್‌ಡಿಎಂಸಿ ಅಧ್ಯಕ್ಷರಿಂದ ದೂರು

ಮಡಿಕೇರಿ, ಜ.11– ಮಡಿಕೇರಿ ನಗರದ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳಿಗೆ ನೀಡಲಾಗುವ ಬಿಸಿಯೂಟದ ಅಕ್ಕಿಯಲ್ಲಿ ಪ್ಲಾಸ್ಟಿಕ್ ತುಂಡುಗಳು ಮಿಶ್ರಿತವಾಗಿದೆ ಎಂದು ಆರೋಪಿಸಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು ಜಿಲ್ಲಾಡಳಿತಕ್ಕೆ ದೂರು ಸಲ್ಲಿಸಿದ್ದಾರೆ.



ಪ್ಲಾಸ್ಟಿಕ್ ಮಿಶ್ರಿತ ಅಕ್ಕಿಯಿಂದ ವಿದ್ಯಾರ್ಥಿಗಳ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಬಹುದು ಎಂದು ಆತಂಕ ವ್ಯಕ್ತಪಡಿಸಿರುವ ಅಧ್ಯಕ್ಷ ಆರ್.ಪಿ.ಚಂದ್ರಶೇಖರ್ ಅಕ್ಕಿಯನ್ನು ಸರಬರಾಜು ಮಾಡಿರುವ ಗುತ್ತಿಗೆದಾರನ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು ಮತ್ತು ಶಾಲೆಗೆ ಗುಣಮಟ್ಟದ ಅಕ್ಕಿಯನ್ನು ಪೂರೈಸಬೇಕು ಎಂದು ಒತ್ತಾಯಿಸಿದ್ದಾರೆ. ತಪ್ಪಿದಲ್ಲಿ ವಿದ್ಯಾರ್ಥಿಗಳ ಪೋಷಕರ ಸಹಕಾರದೊಂದಿಗೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಬಿಸಿಯೂಟಕ್ಕಾಗಿ ದಾಸ್ತಾನಿರಿಸಿರುವ ಅಕ್ಕಿಯಲ್ಲಿ ಮಣಿಯ ರೂಪದ ಪ್ಲಾಸ್ಟಿಕ್ ತುಂಡುಗಳಿರುವುದು ಕಂಡು ಬಂದಿದೆ. ಅಕ್ಕಿಯನ್ನು ತೊಳೆಯುವಾಗ ನೀರಿನಲ್ಲಿ ತೇಲುತ್ತಿತ್ತು ಎಂದು ಚಂದ್ರಶೇಖರ್ ಅವರ ಜಿಲ್ಲಾಧಿಕಾರಿ ಡಾ.ನಂಜುಂಡೇಗೌಡ ಅವರ ಗಮನ ಸೆಳೆದರು. ಎಸ್‌ಡಿಎಂಸಿ ಸದಸ್ಯ ದಿನೇಶ್ ಈ ಸಂದರ್ಭ ಹಾಜರಿದ್ದರು.

ನ್ಯಾ.ಸದಾಶಿವ ಆಯೋಗದ ವರದಿ ಶಿಫಾರಸ್ಸಿಗೆ ಆಗ್ರಹಿಸಿ ಪ್ರತಿಭಟನೆ



ಮಡಿಕೇರಿ, ಜ.11– ನ್ಯಾಯಮೂರ್ತಿ ಸದಾಶಿವ ಆಯೋಗದ ವರದಿಯನ್ನು ತಕ್ಷಣವೇ ಕೇಂದ್ರಕ್ಕೆ ಶಿಫಾರಸ್ಸು ಮಾಡುವಂತೆ ಆಗ್ರಹಿಸಿ(ಪ್ರೊ.ಬಿ ಕೃಷ್ಣಪ್ಪ ಸ್ಥಾಪಿತ) ಕರ್ನಾಟಕ ದಲಿತ ಸಂಘರ್ಷ ಸಮಿತಿ ಮಡಿಕೇರಿಯಲ್ಲಿ ಪ್ರತಿಭಟನೆ ನಡೆಸಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಜಮಾಯಿಸಿದ ಸಮಿತಿಯ ಪ್ರಮುಖರು ಹಾಗೂ ಪದಾಧಿಕಾರಿಗಳು ಬೇಡಿಕೆಯ ಈಡೇರಿಕೆಗಾಗಿ ಆಗ್ರಹಿಸಿದರು. ಈ ಸಂದರ್ಭ ಸಮಿತಿಯ ಜಿಲ್ಲಾ ಸಂಚಾಲಕಿ ಗಾಯತ್ರಿ ನರಸಿಂಹ ಮಾತನಾಡಿ, ಸಾಮಾಜಿಕ ಪರಿವರ್ತನೆಗೆ ಹೋರಾಡಿದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಪರಿಶಿಷ್ಟರಲ್ಲೇ ಅತ್ಯಂತ ದುರ್ಬಲರಾದ ವರ್ಗಗಳಿಗೆ ವಿಶೇಷ ರಕ್ಷಣೆ ಹಾಗೂ ಮೀಸಲಾತಿ ಅಗತ್ಯತೆಗಳನ್ನು ಜನಸಂಖ್ಯೆ ಆಧಾರದಲ್ಲಿಯೂ ಮತ್ತು ಆರ್ಥಿಕ ಹಿಂದುಳಿದಿರುವಿಕೆಯನ್ನು ಆಧರಿಸಿ ಪ್ರತಿಪಾದಿಸಿದ್ದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ ಹಾಗೂ ಜನಪರ ಸಂಘಟನೆಗಳೆಲ್ಲಾ ಒಂದಾಗಿ ಪರಿಶಿಷ್ಟ ಒಳಮೀಸಲಾತಿ ಜಾರಿಯಾಗಬೇಕೆಂದು ಹೋರಾಟ ಮಾಡಿದ್ದರ ಪರಿಣಾಮ ಈ ಹಿಂದಿನ ಧರ್ಮಸಿಂಗ್ ನೇತೃತ್ವದ ಸರ್ಕಾರ ಒಂದು ಆಯೋಗವನ್ನು ರಚನೆ ಮಾಡಿ ಆ ಆಯೋಗದ ಅಧ್ಯಕ್ಷರನ್ನಾಗಿ ನ್ಯಾಯಮೂರ್ತಿ ಎ.ಜೆ.ಸದಾಶಿವ ಅವರನ್ನು ನೇಮಕ ಮಾಡಿತ್ತು. ನ್ಯಾಯಮೂರ್ತಿ ಸದಾಶಿವ ಅವರು 7 ವರ್ಷಕ್ಕೂ ಹೆಚ್ಚುಕಾಲ ಪರಿಶಿಷ್ಟ ಜಾತಿಗಳ ಸಾಮಾಜಿಕ ಶೈಕ್ಷಣಿಕ ಮತ್ತು ಉದ್ಯೋಗದ ಸ್ಥಿತಿಗತಿಗಳನ್ನು ಅಧ್ಯಯನ ಮಾಡಿ 2012ರಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿತ್ತು. ವರದಿ ಸಲ್ಲಿಕೆಯಾಗಿ 10 ವರ್ಷಗಳೇ ಕಳೆದರೂ ಸಹ ರಾಜ್ಯ ಸರ್ಕಾರಗಳು ವರದಿಯನ್ನು ಅಂಗೀಕರಿಸಿ, ಕೇಂದ್ರಕ್ಕೆ ಕಳುಹಿಸಿರುವುದಿಲ್ಲ ಎಂದು ಆರೋಪಿಸಿದರು. ಬೇಡಿಕೆಯ ಮನವಿ ಪತ್ರವನ್ನು ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ನಂಜುಂಡೇಗೌಡ ಅವರ ಮುಖಾಂತರ ಸರ್ಕಾರಕ್ಕೆ ಸಲ್ಲಿಸಲಾಯಿತು.

ಬಿಳಿಗಿರಿರಂಗನಬೆಟ್ಟದಲ್ಲಿ ಸಂಕ್ರಾಂತಿ ರಥೋತ್ಸವ

ಚಾಮರಾಜನಗರ, ಜ.11– ಯಳಂದೂರು ತಾಲೂಕಿನ ಬಿಳಿಗಿರಿರಂಗನಬೆಟ್ಟದಲ್ಲಿ ಬಿಳಿಗಿರಿರಂಗನಾಥಸ್ವಾಮಿಯ ಸಂಕ್ರಾಂತಿ ರಥೋತ್ಸವವು (ಚಿಕ್ಕಜಾತ್ರೆ) ಜ.16ರಂದು ನಡೆಯಲಿದ್ದು, ಇದರ ಅಂಗವಾಗಿ ಜ.13ರಿಂದ ವಿಶೇಷ ಉತ್ಸವಗಳು ನಡೆಯಲಿದೆ.

ಜನವರಿ 13ರಂದು ರಾತ್ರಿ ಕೊಠಾರೋತ್ಸವ ನಂತರ ಅಂಕುರಾರ್ಪಣ, 14ರಂದು ಹಗಲು ಸರ್ವತ್ರ ಅಭಿಷೇಕ ಧ್ವಜಾರೋಹಣ, ರಾತ್ರಿ ಕೊಠಾರೋತ್ಸವ, 15ರಂದು ರಾತ್ರಿ 7.30 ಗಂಟೆಗೆ ಸ್ವರ್ಗದ ಬಾಗಿಲು ತೆರೆಯುವುದು ನಂತರ ಕೊಠಾರೋತ್ಸವ ನಡೆಯಲಿದೆ.

ಜ.16ರಂದು ಬೆಳಿಗ್ಗೆ 10.46 ರಿಂದ 10.57 ಗಂಟೆ ಒಳಗೆ ಸಲ್ಲುವ ಶುಭ ಮೀನಾ ಲಗ್ನದ ಕನ್ಯಾಬುಧ ನವಾಂಶದ ಶುಭ ಮುಹೂರ್ತದಲ್ಲಿ ರಥಾರೋಹಣ ಮಹೋತ್ಸವ (ರಥೋತ್ಸವ) ನಡೆಯಲಿದೆ. ರಾತ್ರಿ ಸಂಧಾನೋತ್ಸವ ಪಾರುವಾಟೆ ಮಂಟಪೋತ್ಸವ, ಮೋಹಿನಿ ಅಲಂಕಾರ ಸೇವೆ ನಡೆಯಲಿದೆ. ಜ.17ರಂದು ಸೇವಾರ್ಥ ಗರುಡೋತ್ಸವ ರಾತ್ರಿ ರಂಗ ಮಂಟಪಪೋತ್ಸವ ಶಯನೋತ್ಸವ, ಜ.18ರಂದು ಸಂಧಾನ ಸೇವೆ, ಅವಭೃತಮಂಗಳಸ್ನಾನ ಧ್ವಜಾರೋಹಣ ಸೇವೆಗಳು ನೆರವೇರಲಿದೆ. ಜ.15ರವರೆಗೆ ಪ್ರತಿದಿನ ರಾತ್ರಿ ಕೊಠಾರೋತ್ಸವ ಸೇವೆ ನಡೆಯುತ್ತದೆ ಎಂದು ಪ್ರಕಟಣೆ ತಿಳಿಸಿದೆ.

ಸೇವಾ ಭಾರತಿ ಮಕ್ಕಳು ರಾಜ್ಯಮಟ್ಟಕ್ಕೆ ಆಯ್ಕೆ



ಚಾಮರಾಜನಗರ, ಜ.11– ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ನಗರದ ಜಿಲ್ಲಾ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಅಥ್ಲೆಟಿಕ್ ಕ್ರೀಡಾಕೂಟದಲ್ಲಿ ನಗರದ ಸೇವಾ ಭಾರತಿ ಆಂಗ್ಲ ಮಾಧ್ಯಮ ಶಾಲೆಯ ಇಬ್ಬರು ವಿದ್ಯಾರ್ಥಿಗಳು ಗೆದ್ದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಹರ್ಷಿತ್ ಎಂ. ಜಿ. ಎತ್ತರ ಜಿಗಿತದಲ್ಲಿ ದ್ವಿತೀಯ ಸ್ಥಾನ ಪಡೆದರೆ, ತೇಜಸ್ವಿನಿ ಎಸ್, ಗುಂಡು ಎಸೆತದಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಶಾಲೆಗೆ ಕೀರ್ತಿ ತಂದ ಈ ಇಬ್ಬರು ಮಕ್ಕಳನ್ನು ಸೇವಾ ಭಾರತಿ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಎಸ್. ರಮೇಶ್, ಖಜಾಂಚಿ ಮಂಜುನಾಥ್, ಮುಖ್ಯೋಪಾಧ್ಯಾಯ ಮಂಜುನಾಥ್, ಜಿ.ಎ. ದೈಹಿಕ ಶಿಕ್ಷಕ ರವಿ, ಆಡಳಿತ ಮಂಡಳಿ, ಶಿಕ್ಷಕ ವೃಂದ ಅಭಿನಂದಿಸಿದ್ದಾರೆ.

ಕಾರಿಗೆ ಲಾರಿ ಡಿಕ್ಕಿ: ಸಣ್ಣ–ಪುಟ್ಟ ಗಾಯಗಳೊಂದಿಗೆ ಅಯ್ಯಪ್ಪ ಭಕ್ತರು ಪಾರು



ಬೇಗೂರು(ಗುಂಡ್ಲುಪೇಟೆ), ಜ.11– ಸಮೀಪದ ರಾಘವಾಪುರ ಗೇಟ್ ಬಳಿ ಶಬರಿಮಲೆಗೆ ತೆರಳುತ್ತಿದ್ದ ಎರಟಿಗಾ ಕಾರಿಗೆ, ಈಚರ್ ಲಾರಿ ಡಿಕ್ಕಿ ಹೊಡೆದ ಪರಿಣಾಮ ಏಳು ಮಂದಿ ಅಯ್ಯಪ್ಪ ಯಾತ್ರಿಗಳು ಸಣ್ಣ–ಪುಟ್ಟ ಗಾಯಗಳೊಂದಿಗೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಬೇಗೂರು ಸಮೀಪದ ರಾಘವಾಪುರ ಗೇಟ್ ಬಳಿ ಗುಂಡ್ಲುಪೇಟೆ ಕಡೆಯಿಂದ ಬಂದ ಈಚರ್ ವಾಹನವು ಚಾಲಕನ ನಿಯಂತ್ರಣ ತಪ್ಪಿ ಕಾರಿಗೆ ಡಿಕ್ಕಿ ಹೊಡೆದು ಮಗುಚಿ ಬಿದ್ದಿತು. ಕಾರಿನಲ್ಲಿದ್ದ ಸೋಮಣ್ಣ ಪಾದಶೆಟ್ಟಿ(48), ರಮೇಶ್ (33), ಪ್ರಭುಮಡಿಗರ್ (38), ಶೇಷಪ್ಪ (35), ಬಸಪ್ಪ (57), ವೀರಪ್ಪ ಕಲ್ಲೂರು (48), ಸೋಮಪ್ಪ ನಾಗನೂರು (48) ಗಾಯಗೊಂಡಿದ್ದು, ಗಾಯಾಳುಗಳನ್ನು ಬೇಗೂರಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆಕೊಡಿಸಿ ಹೆಚ್ಚಿನ ಚಿಕಿತ್ಸೆಗೆ ಮೈಸೂರಿನ ಆಸ್ಪತ್ರೆಗೆ ಸೇರಿಸಲಾಗಿದೆ. ಬೇಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ದುಂಡಯ್ಯ ನಿಧನ



ಯಳಂದೂರು, ಜ.11– ತಾಲೂಕಿನ ಯರಗಂಬಳ್ಳಿ ನಿವಾಸಿ ದುಂಡಯ್ಯ (83)ನವರು ಬುಧವಾರ ಮಧ್ಯಾಹ್ನ ನಿಧನ ಹೊಂದಿದರು. ಇವರು ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದರು. ಮೃತರು ಭ್ರಷ್ಟಾಚಾರ ನಿರ್ಮೂಲನಾ ಸಮಿತಿಯ ಜಿಲ್ಲಾಧ್ಯಕ್ಷ ಪರಶಿವಮೂರ್ತಿ ಸೇರಿದಂತೆ ನಾಲ್ವರು ಪುತ್ರರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಗುರುವಾರ ಸ್ವಗ್ರಾಮದಲ್ಲಿ ನೆರವೇರಲಿದೆ ಎಂದು ಅವರ ಕುಟುಂಬದ ಮೂಲಗಳು ತಿಳಿಸಿವೆ.

ಕರ್ನಾಟಕ ಏಕೀಕರಣದ ಹೋರಾಟಗಾರರ ಸ್ಮರಣೆ ಅಗತ್ಯ



ಚಾಮರಾಜನಗರ, ಜ.11– ಕರ್ನಾಟಕ ಏಕೀಕರಣಕ್ಕಾಗಿ ಹೋರಾಟ ಮಾಡಿದ ಮಹನೀಯರನ್ನು ಸ್ಮರಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಜಿ.ಪಂ. ಸಿಇಒ ಕೆ.ಎಂ.ಗಾಯಿತ್ರಿ ತಿಳಿಸಿದರು.

ನಗರದ ಡಾ.ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಅಖಿಲ ಕರ್ನಾಟಕ ಕನ್ನಡ ಮಹಾಸಭಾ ರಾಜ್ಯ ಘಟಕದ ವತಿಯಿಂದ ನಡೆದ ಕರ್ನಾಟಕ ಏಕೀಕರಣ ಮಹೋತ್ಸವ ಹಾಗೂ ರಾಷ್ಟ್ರಕವಿ ಕುವೆಂಪು ಅವರ ನುಡಿ ನಮನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗಡಿ ಜಿಲ್ಲೆಯಲ್ಲಿ ವಿದ್ಯಾರ್ಥಿಗಳಿಗೆ ಕರ್ನಾಟಕ ಏಕೀಕರಣ ಮಹತ್ವ ಕುರಿತು ಹಾಗೂ ರಾಷ್ಟ್ರಕವಿ ಕುವೆಂಪು ಅವರ ವಿಚಾರಗಳನ್ನು ತಿಳಿಸುವ ಕಾರ್ಯಕ್ರಮ ಹಮ್ಮಿಕೊಂಡಿರುವುದು ಬಹಳ ಅರ್ಥಪೂರ್ಣವಾಗಿದೆ. ಇಂತಹ ಕಾರ್ಯಕ್ರಮಗಳಿಂದ ವಿದ್ಯಾರ್ಥಿಗಳು ಇತಿಹಾಸವನ್ನು ಮೆಲಕು ಹಾಕುತ್ತಾರೆ. ಯಾವಾಗ ಇತಿಹಾಸವನ್ನು ಮೆಲಕು ಹಾಕುತ್ತಾರೆ ಅವರು ಉತ್ತಮ ವ್ಯಕ್ತಿ, ಪ್ರಜೆಯಾಗಲು ಸಾಧ್ಯವಾಗುತ್ತದೆ ಎಂದರು.

ಸನ್ಮಾನ ಸ್ವೀಕರಿಸಿ ಅಮ್ಮನಪುರ ಮಲ್ಲೇಶ್ ಮಾತನಾಡಿ, ಅನ್ಯ ಭಾಷಿಗರಿಗೆ ಕನ್ನಡ ಕಲಿಸುವ ಕೆಲಸ ಮಾಡಿದರೆ ಕನ್ನಡ ಬೆಳೆಸಿದಂತಾಗುತ್ತದೆ. ವಾಟ್ಸಾಪ್‌ಗಳ ಮೂಲಕ ಕನ್ನಡದಲ್ಲಿ ಸಂದೇಶ ಕಳುಹಿಸಬೇಕು. ಅನ್ಯ ಭಾಷೆಯ ಸಿನಿಮಾಗಳನ್ನು ನೋಡುವ ಬದಲು ಕನ್ನಡ ಸಿನಿಮಾಗಳನ್ನು ಹೆಚ್ಚು ಹೆಚ್ಚು ನೋಡುವ ಮೂಲಕ ಕನ್ನಡ ಚಿತ್ರನಟ, ಕಲಾವಿದರಿಗೆ ಪ್ರೋತ್ಸಾಹ ತುಂಬಬೇಕು. ಬೇರೆಬೇರೆ ದೇಶಗಳಲ್ಲಿ ಅವರವರ ಭಾಷೆಗೆ ಒತ್ತು ನೀಡುತ್ತಾರೆ. ಇಂಗ್ಲೆಡ್‌ನಲ್ಲಿ ಮಾತ್ರ ಇಂಗ್ಲೀಷ್ ಭಾಷೆ ಇದೆ ಪಕ್ಕದ ದೇಶಗಳಲ್ಲಿ ಇಂಗ್ಲಿಷ್ ಇಲ್ಲ ಕನ್ನಡ ಭಾಷೆ ಒಂದು ವ್ಯವಹಾರಿಕ ಭಾಷೆ ಆದರೆ ಅನುಕೂಲವಾಗುತ್ತದೆ ಎಂದರು.

ಗ್ರಾಮೀಣ ಕೈಗಾರಿಕೆ ಹಾಗೂ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಉಪ ನಿರ್ದೇಶಕ ಕೆ.ಎ.ರಾಜೇಂದ್ರ ಪ್ರಸಾದ್ ವಿಚಾರ ಮಂಡನೆಯಲ್ಲಿ ರಾಮಾಯಣ, ಮಹಾಭಾರತದಲ್ಲಿ ಕನ್ನಡ ಉಲ್ಲೇಖ ಇದೆ. ಪ್ರಾಚೀನ ಭಾಷೆಯಾದ ಕನ್ನಡ ಭಾಷೆಗೆ 2500 ವರ್ಷಗಳ ಇತಿಹಾಸವನ್ನು ಹೊಂದಿದೆ. ಹಲ್ಮಿಡಿ ಶಾಸನವನ್ನು ಕನ್ನಡದಲ್ಲಿ ಬರೆಯಲಾಗಿದೆ. ಉತ್ಕೃಷ್ಟ, ಸಂಪದ್ಭರಿತ ಭಾಷೆಯಾದ ಕನ್ನಡ ಭಾಷೆಯಾಗಿದೆ. ಅನ್ಯ ಅನ್ಯಭಾಷೆಗಳ ಹಾವಳಿ ನಾಶಿಸಿ ಹೋಗುತ್ತಿರುವ ಕನ್ನಡ ಭಾಷೆ ಉಳಿಸಿ– ಬೆಳೆಸುವುದು ನಮ್ಮ ಆದ್ಯತೆ ಆಗಬೇಕು ಎಂದರು.

ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ: ಪಟ್ಟಣ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ ಸಿ ತಿಮ್ಮರಾಜು, ಕರ್ನಾಟಕ ರಾಜ್ಯ ಖನಿಜಗಳ ನಿಯಮಿತ ಸಂಸ್ಥೆ ಉಪ ಪ್ರಧಾನ ವ್ಯವಸ್ಥಾಪಕ ಆರ್.ನಿರ್ಮಲ್ ಕುಮಾರ್, ಡಾ.ವಿ.ಬಿಳಿಗಿರಿರಂಗ, ರಾಜ್ಯ ಉಪ್ಪಾರ ಎಸ್ಟಿ ಮೀಸಲಾತಿ ಹೋರಾಟ ಸಮಿತಿ ಅಧ್ಯಕ್ಷ ಬಾಗಳಿ ರೇವಣ್ಣ, ವಕೀಲರಾದ ಪ್ರಸನ್ನಕುಮಾರ್, ಪಶುಪಾಲನೆ ಸಹಾಯಕ ನಿರ್ದೇಶಕ ಡಾ.ಸುಗಂಧರಾಜ್, ಶರವಣ, ರೈತ ಮುಖಂಡ ಸಿ.ಸಿದ್ದರಾಜು, ಸುರೇಶ್‌ಗೌಡ, ಮಿಂಚುನಾಗೇಂದ್ರ, ಮಧು ಟಿ, ಪೊಲೀಸ್ ಇಲಾಖೆಯ ಶಿವಕುಮಾರ್, ಪ್ರಗತಿಪರ ರೈತ ಹೆಚ್.ಗೋವಿಂದ ರಾಜು, ಕಲಾವಿದ ರೇವಣ್ಣ ಅವರನ್ನು ಸನ್ಮಾನಿಸಲಾಯಿತು.

ಅಖಿಲ ಕರ್ನಾಟಕ ಕನ್ನಡ ಮಹಾಸಭಾದ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಪ್ರಾಸ್ತಾವಿಕ ಭಾಷಣ ಮಾಡಿದರು. ಗೌರವ ಅಧ್ಯಕ್ಷ ಶಾ.ಮುರಳಿ ಮುಖ್ಯಭಾಷಣ ಮಾಡಿದರು. ಗುಂಡ್ಲುಪೇಟೆ ತಹಸೀಲ್ದಾರ್ ಸಿ.ವಿ. ರವಿಶಂಕರ್ ಅಧ್ಯಕ್ಷತೆ ವಹಿಸಿದ್ದರು. ವಿದ್ಯಾ ವಿಕಾಸ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ವಿ. ಕವೀಶ್‌ಗೌಡ. ರಾಜ್ಯ ಒಕ್ಕಲಿಗರ ಸಂಘದ ಕಾರ್ಯಾಧ್ಯಕ್ಷ ಗಂಗಾಧರಗೌಡ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಿ.ಮಂಜುನಾಥಪ್ರಸನ್ನ, ಮೈಸೂರು ಮತ್ತು ಚಾ.ನಗರ ಒಕ್ಕಲಿಗರ ಸಂಘ ಗೌರವ ಅಧ್ಯಕ್ಷ ಆರ್.ಜಯರಾಮ ಆಲತ್ತೂರು, ನಿರ್ದೇಶಕ ಎ.ಕುಮಾರ್‌ವಡಗೆರೆ, ಮಹಾಸಭಾ ಪ್ರಧಾನ ಕಾರ್ಯದರ್ಶಿ ಚಾ.ವೆಂ. ರಾಜ್‌ಗೋಪಾಲ್, ಸಹ ಕಾರ್ಯದರ್ಶಿ ಪಣ್ಯದಹುಂಡಿ ರಾಜು, ನಿಜಧ್ವನಿಗೋವಿಂದ ರಾಜು, ಜಿಲ್ಲಾಧ್ಯಕ್ಷ ಸಾಗರ್‌ರಾವತ್, ತಾಲೂಕು ಅಧ್ಯಕ್ಷ ಚಾ.ಸಿ.ಸಿದ್ದರಾಜು, ಸಂಘಟನಾ ಕಾರ್ಯದರ್ಶಿ ಅರುಣ್ ಕುಮಾರ್ ಗೌಡ, ಗಡಿನಾಡು ಕನ್ನಡ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಚಾ.ರಾ.ಕುಮಾರ್ ಶ್ರೀಗಂಧ ಕನ್ನಡ ಯುವ ವೇದಿಕೆ ಜಿಲ್ಲಾಧ್ಯಕ್ಷ ರವಿಚಂದ್ರ ಪ್ರಸಾದ್ ಕಹಳೆ ಇತರರು ಹಾಜರಿದ್ದರು.

ಮಕ್ಕಳ ವ್ಯಾಸಂಗದಲ್ಲಿ ಕ್ರೀಡೆಯೂ ಒಂದು ಭಾಗವಾಗಲಿ



ಯಳಂದೂರು, ಜ.11– ಮಕ್ಕಳ ವ್ಯಾಸಂಗದಲ್ಲಿ ಕ್ರೀಡೆಯೂ ಒಂದು ಭಾಗ ವಾದರೆ ಅವರ ಮಾನಸಿಕ ಹಾಗೂ ದೈಹಿಕ ಸದೃಢತೆ ಮತ್ತಷ್ಟು ಬಲಗೊಳ್ಳುತ್ತದೆ ಎಂದು ಯುವಜನ ಮತ್ತು ಸೇವಾ ಇಲಾಖೆಯ ಸಹಾಯಕ ನಿರ್ದೇಶಕಿ ಆರ್. ಅನಿತ ತಿಳಿಸಿದರು.

ಪಟ್ಟಣದ ಎಸ್‌ಡಿವಿಎಸ್ ವಿದ್ಯಾಸಂಸ್ಥೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸಂಸ್ಥಾಪಕರ ದಿನಾಚರಣೆ, ಶ್ರೀಮತಿ ಸುಂದರಮ್ಮ ಸ್ಮಾರಕ ಪಾರಿತೋಷಕ ತಾಲೂಕು ಮಟ್ಟದ ಪ್ರೌಢಶಾಲಾ ಚರ್ಚಾ ಸ್ಪರ್ಧೆ, ಮಕ್ಕಳ ಸಂತೆ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಈ ಶಾಲೆಯಲ್ಲಿ ಮಕ್ಕಳು ಮಾಡಿರುವ ಮಾದರಿ ಶೈಕ್ಷಣಿಕ ಪರಿಕರಗಳ ವಸ್ತು ಪ್ರದರ್ಶನ ಇತರರಿಗೆ ಮಾದರಿಯಾಗಿದೆ. ಇಲ್ಲಿನ ವಿದ್ಯಾರ್ಥಿ ಕಬಡ್ಡಿಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿರುವುದು ಸಂತಸ ತಂದಿದೆ. ಅಲ್ಲದೆ ರಾಜ್ಯ ಮಟ್ಟಕ್ಕೂ ಹಲವರು ಕ್ರೀಡೆಯಲ್ಲಿ ಆಯ್ಕೆಯಾಗಿದ್ದಾರೆ. ಇಂತಹ ಮಕ್ಕಳಿಗೆ ನಮ್ಮ ಇಲಾಖೆಯ ವತಿಯಿಂದ ಪ್ರೋತ್ಸಾಹಧನವನ್ನು ನೀಡಲಾಗುತ್ತದೆ ಎಂದರು.

ವಸ್ತುಪ್ರದರ್ಶನವನ್ನು ಉದ್ಘಾಟಿಸಿದ ಉಪವಿಭಾಗಾಧಿಕಾರಿ ಗೀತಾಹುಡೇದ ಮಾತನಾಡಿ, ಮಕ್ಕಳಲ್ಲಿ ಅನೇಕ ಸುಪ್ತ ಪ್ರತಿಭೆಗಳಿರುತ್ತವೆ. ಇದನ್ನು ಹೆಕ್ಕುವ ಕೆಲಸವನ್ನು ಮಾಡಬೇಕು. ಈ ನಿಟ್ಟಿನಲ್ಲಿ ಎಸ್‌ಡಿವಿಎಸ್ ವಿದ್ಯಾಸಂಸ್ಥೆ ಈ ಭಾಗದಲ್ಲಿ ಪ್ರಸಿದ್ಧಿ ಪಡೆದುಕೊಂಡಿದೆ. ಇಲ್ಲಿ ವ್ಯಾಸಂಗ ಮಾಡಿದ ಮಕ್ಕಳು ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಇಲ್ಲಿನ ಮಕ್ಕಳು ತಯಾರಿಸಿರುವ ವೈಜ್ಞಾನಿಕ ಹಾಗೂ ಗಣಿತ ಮಾದರಿಗಳು ಆಕರ್ಷಕವಾಗಿವೆ ಎಂದು ಪ್ರಶಂಸಿದರು.

ಈ ಸಂದರ್ಭದಲ್ಲಿ ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಚರ್ಚಾ ಸ್ಪರ್ಧೆಯಲ್ಲಿ ಕೆಪಿಎಸ್ ಶಾಲೆಯ ಅಮೂಲ್ಯ, ಎಸ್‌ಡಿವಿಎಸ್ ಶಾಲೆಯ ಹರ್ಷಿತಾ, ಹೊನ್ನೂರಿನ ಡಾ. ಭೀಮ್‌ರಾವ್ ಶಾಲೆಯ ಸ್ಮಿತಾ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಧನ್ಯತಾನಾಯಕ್, ಜೆಎಸ್‌ಎಸ್ ಪ್ರೌಢಶಾಲೆಯ ಐಶ್ವರ್ಯ, ಎಂ. ಪ್ರೀತಿ ವಿಜೇತರಾದರು.

ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶ ಎಂ. ಆರ್ಷ್ ಸಮಾರೋಪ ನುಡಿಗಳನ್ನಾಡಿದರು. ಎಸ್‌ಡಿವಿಎಸ್ ವಿದ್ಯಾ ಸಂಸ್ಥೆಯ ಸಂಸ್ಥಾಪಕ ಪಿ. ವೀರಭದ್ರಪ್ಪ, ಬಿಇಒ ಕೆ. ಕಾಂತರಾಜು, ವಿ. ಮಲ್ಲಿ ಕಾರ್ಜುನಸ್ವಾಮಿ, ವಿಖ್ಯಾತ್ ಸೇರಿದಂತೆ ಅನೇಕರು ಹಾಜರಿದ್ದರು.

ವೃದ್ಧೆ ನಾಪತ್ತೆ



ಚಾಮರಾಜನಗರ, ಜ.11– ಗುಂಡ್ಲುಪೇಟೆ ತಾಲೂಕಿನ ಚಿರಕನಹಳ್ಳಿ ನಿವಾಸಿ ಮಹದೇವಮ್ಮ ಎಂಬುವವರು ಕಾಣೆಯಾಗಿದ್ದು, ತೆರಕಣಾಂಬಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 67 ವರ್ಷದ ಮಹದೇವಮ್ಮ 5 ಅಡಿ ಎತ್ತರ, ಸಾಧಾರಣ ಮೈಕಟ್ಟು ಎಣ್ಣೆಗೆಂಪು ಬಣ್ಣದುಂಡು ಮುಖ, ಕನ್ನಡ ಭಾಷೆ ಮಾತನಾಡುತ್ತಾರೆ. ಇವರ ಸುಳಿವು ದೊರೆತಲ್ಲಿ ತೆರಕಣಾಂಬಿ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿಜೆಪಿ ಬೂತ್ ವಿಜಯ ಅಭಿಯಾನಕ್ಕೆ ಚಾಲನೆ



ಗುಂಡ್ಲುಪೇಟೆ, ಜ.11– ಬಿಜೆಪಿಯ ಬೂತ್ ವಿಜಯ ಅಭಿಯಾನ ಕಾರ್ಯಕ್ರಮಕ್ಕೆ ಶಾಸಕ ಸಿ.ಎಸ್. ನಿರಂಜನ ಕುಮಾರ್ ಚಾಲನೆ ನೀಡಿದರು.

ತಾಲೂಕಿನ ಬರಗಿ ಮಹಾಶಕ್ತಿಕೇಂದ್ರದ ವ್ಯಾಪ್ತಿಯಲ್ಲಿ ಬರುವ ಮೂಖಹಳ್ಳಿ ಗ್ರಾಮದಲ್ಲಿ ಬೂತ್ ಅಧ್ಯಕ್ಷ ಸಂತೋಷ್ ಅವರ ಮನೆಯ ಮೇಲೆ ಬಿಜೆಪಿ ಧ್ವಜ ಹಾರಿಸುವ ಮುಖಾಂತರ ಅಭಿಯಾನಕ್ಕೆ ಚಾಲನೆ ನೀಡಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿ ನಮ್ಮ ವಿಧಾನಸಭಾ ಕ್ಷೇತ್ರದ ಎಲ್ಲಾ ಬೂತ್ ವ್ಯಾಪ್ತಿಯಲ್ಲೂ ಬೂತ್ ಅಭಿಯಾನ ನಡೆಯುತ್ತಿದೆ. ಈ ವೇಳೆ ಬೂತ್ ಮಟ್ಟದಲ್ಲಿ ಬಿಜೆಪಿಯು ರಾಜ್ಯ ಮತ್ತು ಕೇಂದ್ರದಲ್ಲಿ ಮಾಡುತ್ತಿರುವ ಅಭಿವೃದ್ಧಿ ಕಾರ್ಯಗಳನ್ನು ಜನತೆಗೆ ಅರಿವು ಮೂಡಿಸಲಾಗುತ್ತಿದೆ ಎಂದರು. ಈ ವೇಳೆ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಪ್ರಣಯ್, ಮಂಡಲಾಧ್ಯಕ್ಷ ಜಗದೀಶ್, ಮುಖಂಡ ಸಿ.ಮಹಾದೇವಪ್ರಸಾದ್ ಇತರರು ಇದ್ದರು.

ಇಂದು ರಾಷ್ಟ್ರೀಯ ಯುವ ದಿನ, ಯುವ ಸಪ್ತಾಹ ಉದ್ಘಾಟನೆ

ಚಾಮರಾಜನಗರ, ಜ.11– ನೆಹರು ಯುವ ಕೇಂದ್ರ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಎನ್‌ಎಸ್‌ಎಸ್, ರೆಡ್ ಕ್ರಾಸ್ ಸಂಸ್ಥೆ ಹಾಗೂ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಹಯೋಗದೊಂದಿಗೆ ಸ್ವಾಮಿ ವಿವೇಕಾನಂದರ 159ನೇ ಜಯಂತಿ ಅಂಗವಾಗಿ ರಾಷ್ಟ್ರೀಯ ಯುವ ದಿನ ಹಾಗೂ ರಾಷ್ಟ್ರೀಯ ಯುವ ಸಪ್ತಾಹ ಉದ್ಘಾಟನಾ ಸಮಾರಂಭವನ್ನು ಜ.12ರಂದು ಮಧ್ಯಾಹ್ನ 12 ಗಂಟೆಗೆ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಏರ್ಪಡಿಸಲಾಗಿದೆ. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ. ಶ್ರೀಧರ ಅವರು ಕಾರ್ಯಕ್ರಮ ಉದ್ಘಾಟಿ ಸುವರು. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಸಿ. ದೇವರಾಜ್ ಅವರು ಅಧ್ಯಕ್ಷತೆ ವಹಿಸುವರು. ಗ್ರಂಥಪಾಲಕ ಡಾ. ಜೈ ಕುಮಾರ್ ಅವರು ವಿಶೇಷ ಉಪನ್ಯಾಸ ನೀಡುವರು.

ಪ್ರಸಿದ್ಧ ಅರಸು ಬೋರ್ಡಿಂಗ್ ಶಾಲೆ ಈಗ ಶ್ರೀ ಚಾಮರಾಜೇಂದ್ರ ಸ್ಕೂಲ್ ಫಾರ್ ಎಕ್ಸೆಲೆನ್ಸ್ ನೂತನ ಶಾಲೆ

ಎನ್‌ಇಪಿ ಆಧಾರಿತ ಬೋಧನೆ; ರಾಜವಂಶಸ್ಥ ಯದುವೀರ್ ಮಾಹಿತಿ



ಮೈಸೂರು, ಜ.11(ಎಂಕೆ)– ನಗರದ ಕೃಷ್ಣರಾಜ ಬುಲೆವಾರ್ಡ್ ರಸ್ತೆಯಲ್ಲಿ ಎನ್‌ಇಪಿ(ರಾಷ್ಟ್ರೀಯ ಶಿಕ್ಷಣ ನೀತಿ) ಆಧಾರಿತ 'ಶ್ರೀ ಚಾಮರಾಜೇಂದ್ರ ಸ್ಕೂಲ್ ಫಾರ್ ಎಕ್ಸೆಲೆನ್ಸ್' ನೂತನ ಶಾಲೆ ಫೆ22ರಿಂದ ಆರಂಭವಾಗಲಿದೆ ಎಂದು ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು.

ಶ್ರೀ ಅರಸು ಬೋರ್ಡಿಂಗ್ ಶಾಲೆ ಸಭಾಂಗಣದಲ್ಲಿ ಬುಧವಾರ ಪತ್ರಿಕಾಗೋಷ್ಠಿ ನಡೆಸಿದ ಅವರು, ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ ಹೊಸ ಶಾಲೆ ಆರಂಭವಾಗಲಿದೆ. ಕೊರೊನಾ ಲಾಕ್‌ಡೌನ್ ಸಂದರ್ಭದಲ್ಲಿ ಸಂಪೂರ್ಣವಾಗಿ ಮುಚ್ಚಲಾಗಿದ್ದ ಶ್ರೀ ಅರಸು ಬೋರ್ಡಿಂಗ್ ಶಾಲೆಯ ಹೆಸರು ಬದಲಾವಣೆ ಮಾಡಿ 4 ವರ್ಷದ ಬಳಿಕ ಇದೇ ಸ್ಥಳದಲ್ಲಿ ಹೊಸ ಹೆಸರಿನೊಂದಿಗೆ ನೂತನ ಶಾಲೆ ಆರಂಭವಾಗಲಿದೆ ಎಂದರು. 1957ರಲ್ಲಿ ಸ್ಥಾಪನೆಗೊಂಡ ಶ್ರೀ ಜಯಚಾಮರಾಜ ಅರಸು ಎಜುಕೇಷನ್ ಟ್ರಸ್ಟ್ ವತಿಯಿಂದ ನೂತನ ಶಾಲೆ ಕಾರ್ಯನಿರ್ವಹಿಸಲಿದ್ದು, ಮೌಲ್ಯಾಧಾರಿತ ಶಿಕ್ಷಣ ನೀಡುವುದು ಟ್ರಸ್ಟ್‌ನ ಮುಖ್ಯ ಉದ್ದೇಶವಾಗಿದೆ. ನಜರ್‌ಬಾದ್‌ನಲ್ಲಿ ಹೆಣ್ಣು ಮಕ್ಕಳ ಶಾಲೆ, ಪಿಯು ಮತ್ತು ಪ್ರಥಮ ದರ್ಜೆ ಕಾಲೇಜು ಹಾಗೂ ಒಡೆಯರ್ ಸೆಂಟರ್ ಆಫ್ ಆರ್ಕಿಟೆಕ್ಚರ್ ಸಂಸ್ಥೆಯು ಟ್ರಸ್ಟ್ ವತಿಯಿಂದ ನಡೆಯುತ್ತಿದೆ. 9 ಎಕರೆ ವಿಸ್ತೀರ್ಣದಲ್ಲಿ 2023–24ನೇ ಶೈಕ್ಷಣಿಕ ಸಾಲಿನಿಂದ ಎನ್‌ಸಿಇಆರ್‌ಟಿ ಪಠ್ಯಕ್ರಮದೊಂದಿಗೆ ಎನ್‌ಇಪಿ ಆಧಾರಿತ 'ಶ್ರೀ ಚಾಮರಾಜೇಂದ್ರ ಸ್ಕೂಲ್ ಫಾರ್ ಎಕ್ಸೆಲೆನ್ಸ್' ಶಾಲೆ ಆರಂಭಗೊಳ್ಳಲಿದೆ ಎಂದು ಮಾಹಿತಿ ನೀಡಿದರು.

ನಗರದ ಕೇಂದ್ರ ಭಾಗದಲ್ಲಿರುವ ಶಾಲೆ ಬಹುತೇಕ ಬಡಾವಣೆಗಳಿಗೆ ಹತ್ತಿರವಾಗಿದೆ. ಹೊಸ ಶಾಲೆಯು ಪರಿಸರ ಸ್ನೇಹಿಯಾಗಿ ಮುನ್ನಡೆಯಲಿದ್ದು, ಪ್ಲಾಸ್ಟಿಕ್ ಮತ್ತು ಕಾರ್ಬನ್ ಮುಕ್ತ ಪ್ರದೇಶವಾಗಿರಲಿದೆ. ವಿದ್ಯಾರ್ಥಿಗಳ ಕಲಿಕೆಗೆ ಅನುಗುಣವಾಗಿ ನವೀನ ತಾಂತ್ರಿಕ ಹಾಗೂ ಶೈಕ್ಷಣಿಕ ಚಟುವಟಿಕೆಗಳನ್ನು ಶಾಲೆಯು ಹೊಂದಿರಲಿದೆ. ಶಾಲೆಯಲ್ಲಿ ಉತ್ತಮ ಶಿಕ್ಷಕರಿದ್ದು, ಅವರ ಮಾರ್ಗದರ್ಶನದ ಮೂಲಕ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟವನ್ನು ಹೆಚ್ಚಿಸಲಾಗುವುದು. ಹೊಸದಾಗಿ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆಯೂ ಸದ್ಯದಲ್ಲಿ ಆರಂಭವಾಗಲಿದೆ ಎಂದು ತಿಳಿಸಿದರು.

ವಿವಿಧ ಸ್ಪರ್ಧೆಗಳ ಆಯೋಜನೆ: ಜ.29 ರಂದು ಶಾಲಾ ಆವರಣದಲ್ಲಿ 3 ರಿಂದ 12 ವರ್ಷದ ಮಕ್ಕಳಿಗಾಗಿ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ. ಸ್ಪರ್ಧೆಯಲ್ಲಿ ಬಾಗವಹಿಸುವ ಮಕ್ಕಳಿಗೆ ಪ್ರಮಾಣ ಪತ್ರ ಹಾಗೂ ಆಕರ್ಷಕ ಬಹುಮಾನ ನೀಡಲಾಗುವುದು. ಹಿಂದಿನ ಶ್ರೀ ಚಾಮರಾಜ ಅರಸು ಬೋರ್ಡಿಂಗ್ ಸ್ಕೂಲಿನ ಸಂಸ್ಥಾಪಕರಾದ ಹತ್ತನೇ ಚಾಮರಾಜೇಂದ್ರ ಒಡೆಯರ್ ಅವರ ಹುಟ್ಟುಹಬ್ಬ(ಫೆ.22)ದ ದಿನದಿಂದ ನೂತನ ಶಾಲೆ ಆರಂಭಗೊಳ್ಳಲಿದೆ ಎಂದರು. ಸುಮಾರು ನೂರು ವರ್ಷಗಳ ಕಾಲ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಿದ್ದ ಶ್ರೀ ಅರಸು ಬೋರ್ಡಿಂಗ್ ಶಾಲೆಯನ್ನು ಕೊರೊನಾ ಲಾಕ್‌ಡೌನ್ ಸಂದರ್ಭದಲ್ಲಿ ಮುಚ್ಚಲಾಗಿತ್ತು. ನಗರದ ಕೇಂದ್ರಭಾಗದಲ್ಲಿ ಶಾಲೆ ಇರುವುದರಿಂದ ಶಾಲೆ ಬಂದ್ ಮಾಡುವುದು ಅವಶ್ಯವಾಗಿತ್ತು. ಈಗ ಮತ್ತೆ ಶಾಲೆ ಆರಂಭಿಸಿ, ಶೈಕ್ಷಣಿಕ ಸೇವೆ ನೀಡಲು ಎಲ್ಲಾ ರೀತಿಯ ಪೂರ್ವ ಸಿದ್ಧತೆ ನಡೆದಿದೆ. ಶಾಲೆಯ ಕಟ್ಟಡ ಪಾರಂಪರಿಕ ಕಟ್ಟಡವಾಗಿರುವುದರಿಂದ ಅಗತ್ಯಕ್ಕೆ ಅನುಗುಣವಾಗಿ ಸಣ್ಣಪುಟ್ಟ ಬದಲಾವಣೆಗಳನ್ನು ಮಾಡಲಾಗುವುದು ಎಂದು ತಿಳಿಸಿದರು. ಶ್ರೀ ಜಯಚಾಮರಾಜ ಅರಸು ಎಜುಕೇಷನ್ ಟ್ರಸ್ಟ್ ಉಪಾಧ್ಯಕ್ಷೆ ಭಾರತೀ ಶ್ರೀಧರ್ ರಾಜೇ ಅರಸ್, ಕಾರ್ಯದರ್ಶಿ ಮಹೇಶ್ ಎನ್.ಅರಸ್, ಜಂಟಿ ಕಾರ್ಯದರ್ಶಿ ಸರ್ದಾರ್ ಶ್ರೀಕಂಠ ರಾಜೇ ಅರಸ್, ಟ್ರಸ್ಟ್ ಸದಸ್ಯ ಬಿ.ಪಿ.ಬಾಲಚಂದ್ರ ಅರಸ್ ಉಪಸ್ಥಿತರಿದ್ದರು.

ಸರ್ಕಾರದ ನಿರ್ಧಾರಕ್ಕೆ ಸಮ್ಮತಿ...

ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯ ನಾಮಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಹೆದ್ದಾರಿಯ ಅಭಿವೃದ್ಧಿ ಕಾಮಗಾರಿ ಬೇಗ ಮುಗಿದು ಸಂಚಾರಕ್ಕೆ ಮುಕ್ತವಾಗುವುದು ಮುಖ್ಯವಾಗಿದೆ. ಹೆದ್ದಾರಿಗೆ ಸರ್ಕಾರ ಯಾವುದೇ ಹೆಸರಿಟ್ಟರೂ ಅದಕ್ಕೆ ನಮ್ಮ ಸಂಪೂರ್ಣ ಬೆಂಬಲವಿದೆ. ಚಾಮುಂಡಿ ಬೆಟ್ಟದ ಮೇಲೆ ನಡೆಯುತ್ತಿರುವ ದೇವಿಕೆರೆ ಅಭಿವೃದ್ಧಿ ಕಾಮಗಾರಿ ಸ್ಥಗಿತಗೊಂಡಿರುವ ಸಂಬಂಧ ರಾಜಮಾತೆ(ಪ್ರಮೋದಾದೇವಿ ಒಡೆಯರ್)ಅವರನ್ನೇ ಕೇಳಬೇಕು ಎಂದರು.

ಉಚಿತ ಆರೋಗ್ಯ ತಪಾಸಣಾ ಶಿಬಿರ

ಮೈಸೂರು, ಜ. 11– ಮೈಸೂರಿನ ನಟನ ರಂಗಶಾಲೆ ಮತ್ತು ಲಕ್ಷ್ಮೀಪುರಂನ ಸೆಕ್ಯೂರ್ ಆಸ್ಪತ್ರೆ ಸಹಯೋಗದಲ್ಲಿ ದಿ.ಎನ್.ಸುಬ್ರಹ್ಮಣ್ಯಂ ಸ್ಮರಣಾರ್ಥ (ನಟನ ರಂಗ ಶಾಲೆ ಮಾಜಿ ಅಧ್ಯಕ್ಷ) ಜ. 15 ರಂದು ಬೆಳಗ್ಗೆ 9.30 ರಿಂದ 1.30 ರವರೆಗೆ ರಾಮಕೃಷ್ಣನಗರದ ನಟನ ರಂಗಶಾಲೆಯಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 9886361343 ಸಂಪರ್ಕಿಸಬಹುದು.

ರೈಲ್ವೆ ಪಿಂಚಣಿದಾರರ ಸಂಘದ ಸಭೆ ನಾಳೆ

ಮೈಸೂರು, ಜ. 11– ಮೈಸೂರಿನ ರೈಲ್ವೆ ಪಿಂಚಣಿದಾರರ ಹಿತರಕ್ಷಣಾ ಸಂಘದ ಮಾಸಿಕ ಸಭೆಯನ್ನು ಸಂಘದ ಅಧ್ಯಕ್ಷ ಪಾರ್ಥಸಾರಥಿ ಅಧ್ಯಕ್ಷತೆಯಲ್ಲಿ ಜ.13 ರಂದು ಬೆಳಗ್ಗೆ 10.30 ಗಂಟೆಗೆ ಸಂಘದ ಕಚೇರಿಯಲ್ಲಿ ಏರ್ಪಡಿಸಲಾಗಿದೆ. ಸಂಘದ ಪ್ರಧಾನ ಕಾರ್ಯದರ್ಶಿ ಆರ್. ಬಸವರಾಜು ಸಭೆಯನ್ನು ಉದ್ದೇಶಿಸಿ ಮಾತನಾಡುವರು. ಸಂಘದ ಎಲ್ಲಾ ಸದಸ್ಯರು ತಪ್ಪದೇ ಮಾಸಿಕ ಸಭೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.

ಉಚಿತ ಯೋಗಾಸನ, ಪ್ರಾಣಾಯಾಮ ಶಿಬಿರ

ಮೈಸೂರು, ಜ. 11–ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ವತಿಯಿಂದ ಮೈಸೂರಿನ ಕುಂಬಾರಕೊಪ್ಪಲಿನ ಶ್ರೀ ಮಹದೇಶ್ವರ ದೇವಸ್ಥಾನದ ಆವರಣದಲ್ಲಿ 45 ದಿನಗಳ ಕಾಲ ಉಚಿತ ಯೋಗಾಸನ, ಪ್ರಾಣಾಯಾಮ, ಧ್ಯಾನ ತರಗತಿಗಳನ್ನು ಪ್ರತಿದಿನ ಬೆಳಗ್ಗೆ 6 ರಿಂದ 7 ರವರೆಗೆ ಜ. 18 ರಿಂದ ಪ್ರಾರಂಭಿಸಲಾಗುವುದು. ಹೆಚ್ಚಿನ ಮಾಹಿತಿಗೆ ಮೊ. 94480 45514, 98869 11785 ಸಂಪರ್ಕಿಸಬಹುದು.

ವೀರಶೈವ ಲಿಂಗಾಯಿತ ವಧು–ವರರ ಸಮಾವೇಶ

ಮೈಸೂರು, ಜ. 11– ಶ್ರೀ ಬಸವೇಶ್ವರ ವಧು–ವರರ ವಿವಾಹ ವೇದಿಕೆ ವತಿಯಿಂದ ಮೈಸೂರಿನ ಗನ್‌ಹೌಸ್ ಹತ್ತಿರವಿರುವ ಶ್ರೀ ವಿದ್ಯಾಭಾರತಿ ಕಲ್ಯಾಣ ಮಂಟಪದಲ್ಲಿ ಜ.29ರಂದು ಮಧ್ಯಾಹ್ನ 1 ರಿಂದ ಸಂಜೆ 5 ರವರೆಗೆ ವೀರಶೈವ ಲಿಂಗಾಯಿತ ವಧು–ವರರ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಮೈಸೂರು ಜಿಲ್ಲೆಯ ಎಲ್ಲಾ ತಾಲೂಕಿನ ಪದವಿ ವಿದ್ಯಾರ್ಹತೆ ಹಾಗೂ ಉತ್ತಮ ಕೆಲಸವುಳ್ಳ ವೀರಶೈವ ಲಿಂಗಾಯಿತ ವಧು–ವರರು ಇದನ್ನು ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ. ಆಸಕ್ತರು ಜ.28ರೊಳಗೆ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬೇಕು. ಮಾಹಿತಿಗೆ ಮೊ. 9686205346 ಸಂಪರ್ಕಿಸಬಹುದು.

ವಿವಿಧ ಬೇಡಿಕೆ ಈಡೇರಿಸಲು ಆಗ್ರಹಿಸಿ ಮೈಸೂರು ವಿವಿ ಸ್ವಚ್ಛತಾ, ಅಡುಗೆ ನೌಕರರ ಪ್ರತಿಭಟನೆ



ಮೈಸೂರು, ಜ.11(ಎಂಕೆ)–ಕನಿಷ್ಠ ವೇತನ, ಹಿಂಬಾಕಿ, ಪಿಎಫ್, ಇಎಸ್‌ಐ ಇನ್ನಿತರ ಸೌಲಭ್ಯಗಳಿಗೆ ಒತ್ತಾಯಿಸಿ ಮೈಸೂರು ವಿವಿ ಸ್ವಚ್ಛತಾ ಹಾಗೂ ಹಾಸ್ಟೆಲ್ ಅಡುಗೆ ನೌಕರರು ಆಲ್ ಇಂಡಿಯಾ ಯುನೈಟೆಡ್ ಟ್ರೇಡ್ ಯೂನಿಯನ್ ಸೆಂಟರ್(ಎಐಯುಟಿಯುಸಿ), ಕರ್ನಾಟಕ ರಾಜ್ಯ ಸಂಯುಕ್ತ ವಿಶ್ವವಿದ್ಯಾನಿಲಯ ಸ್ವಚ್ಛತಾ ಕಾರ್ಯ ನೌಕರರ ಸಂಘ, ಕರ್ನಾಟಕ ರಾಜ್ಯ ಸಂಯುಕ್ತ ವಸತಿ ನಿಲಯ ಕಾರ್ಮಿಕರ ಸಂಘದ ಸಹಯೋಗದೊಂದಿಗೆ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಿದ್ದಾರೆ.

ಮೈಸೂರು ವಿವಿ ಮಾನಸಗಂಗೋತ್ರಿಯ ಕುವೆಂಪು ಪ್ರತಿಮೆ ಎದುರು ಜಮಾವಣೆಗೊಂಡಿರುವ ವಿಶ್ವವಿದ್ಯಾನಿಲಯದ ನೌಕರರು ಕನಿಷ್ಠ ವೇತನ, ಹಿಂಬಾಕಿ ನೀಡುವುದು ಸೇರಿದಂತೆ ಕನಿಷ್ಠ ಸೌಲಭ್ಯಗಳನ್ನು ನೀಡದ ವಿವಿ ಆಡಳಿತದ ವಿರುದ್ಧ ಧಿಕ್ಕಾರ ಕೂಗಿ ಒತ್ತಾಯಿಸಿದರು. ಎಲ್ಲಾ ದಾಖಲೆಗಳನ್ನು ನೀಡಿದ್ದರೂ 2003 ಆಗಸ್ಟ್‌ನಿಂದ 2015ರ ಫೆಬ್ರವರಿವರೆಗಿನ ಪಿಎಫ್ ಹಣ ಕಾರ್ಮಿಕರ ಖಾತೆಗೆ ಪಾವತಿಯಾಗಿಲ್ಲ. ಕಳೆದ 4–5 ವರ್ಷಗಳಲ್ಲಿ ಅನಾರೋಗ್ಯದಿಂದ ಮರಣ ಹೊಂದಿದ ಕಾರ್ಮಿಕರ ಕುಟುಂಬಕ್ಕೆ ಯಾವುದೇ ಸಹಾಯ ನೀಡಿಲ್ಲ. 2016 ರಿಂದ 2019ರವರೆಗಿನ ವೇತನ ಪಾವತಿಯಾಗಿಲ್ಲ, ವೇತನ ಪಾವತಿಯಲ್ಲಿ ವಿಳಂಬ, ಸೇವಾ ಹಿರಿತನ ಪರಿಗಣಿಸಿ ವೇತನ ಪಾವತಿಸುವುದು. ಹಾಸ್ಟೆಲ್ ಅಡುಗೆ ನೌಕರರಿಗೆ ಕನಿಷ್ಠ ಸೌಲಭ್ಯ ನೀಡದಿರುವುದು, ಕೆಲಸ ನಿರಾಕರಣೆ, ಸಮವಸ್ತ್ರ ನೀಡದಿರುವುದು ಸೇರಿದಂತೆ ಹಲವಾರು ಬೇಡಿಕೆಗಳನ್ನು ವಿವಿ ಆಡಳಿತ ಈಡೇರಿಸಿಲ್ಲ ಎಂದು ದೂರಿದರು.

ಮನವಿ ವಿಫಲ: ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ಮೈಸೂರು ವಿವಿ ಇಂಜಿನಿಯರ್ ಪ್ರತಾಪ್ ಹಾಗೂ ಇನ್ನಿತರೆ ಅಧಿಕಾರಿಗಳು, ಪ್ರತಿಭಟನಾ ನಿರತ ನೌಕರರ ಮನವೊಲಿಸಲು ಪ್ರಯತ್ನಿಸಿದರಾದರೂ ಯಾವುದೇ ಪ್ರಯೋಜನವಾಗಲಿಲ್ಲ. ಭರವಸೆ ನೀಡುವ ಬದಲು ಬೇಡಿಕೆ ಈಡೇರಿಸಿ ಎಂದು ಪಟ್ಟುಹಿಡಿದಿರುವ ನೌಕರರು, ಪ್ರತಿಭಟನೆ ಮುಂದುವರೆಸಿದ್ದಾರೆ.

ಇಂದು ಸ್ವಾಮಿ ವಿವೇಕಾನಂದ 160ನೇ ವರ್ಷದ ಜಯಂತಿ

ಮೈಸೂರು, ಜ. 11–ಮೈಸೂರಿನ ಯುವ ಭಾರತ್ ಸಂಘಟನೆ ವತಿಯಿಂದ ಸ್ವಾಮಿ ವಿವೇಕಾನಂದ 160ನೇ ವರ್ಷದ ಜಯಂತಿ ಕಾರ್ಯಕ್ರಮವನ್ನು ನಾಳೆ (ಜ. 12) ಬೆಳಗ್ಗೆ 8.30 ಗಂಟೆಗೆ ಕರ್ನಾಟಕ ವಸ್ತು ಪ್ರದರ್ಶನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯ ಅತಿಥಿಗಳಾಗಿ ಮೇಯರ್ ಶಿವಕುಮಾರ್, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಅಧ್ಯಕ್ಷ ಮಿರ್ಲೆ ಶ್ರೀನಿವಾಸ್ ಗೌಡ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಯಶಸ್ವಿ ಸೋಮಶೇಖರ್, ಕರ್ನಾಟಕ ಮೃಗಾಲಯ ಪ್ರಾಧಿಕಾರ ಅಧ್ಯಕ್ಷ ಶಿವಕುಮಾರ್, ಹಿರಿಯ ಸಮಾಜ ಸೇವಕ ಕೆ ರಘುರಾಮ್ ವಾಜಪೇಯಿ ಹಾಗೂ ಇನ್ನಿತರರು ಭಾಗವಹಿಸಲಿದ್ದಾರೆ ಎಂದು ಯುವ ಭಾರತ್ ಸಂಘಟನೆಯ ಸಂಚಾಲಕ ಆನಂದ್ ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೇಮಕ



ಮೈಸೂರು, ಜ. 11–ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಯುವ ಜನತಾದಳದ ಅಧ್ಯಕ್ಷರನ್ನಾಗಿ ಜಯಪುರ ಗ್ರಾಮದ ಸಂತೋಷ್‌ಕುಮಾರ್ ಅವರನ್ನು ನೇಮಕ ಮಾಡಲಾಗಿದೆ.

ನ್ಯಾಕ್ ಸಮಿತಿ ಭೇಟಿ ಹಿನ್ನೆಲೆ ಮಹಾರಾಣಿ ಕಲಾ ಕಾಲೇಜಲ್ಲಿ ಅಭಿವೃದ್ಧಿ ಕಾರ್ಯ ಪರಿಶೀಲನೆ



ಮೈಸೂರು, ಜ.11(ಎಂಕೆ)–ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ಮಹಾರಾಣಿ ಕಲಾ ಕಾಲೇಜಿಗೆ ನ್ಯಾಕ್ ಸಮಿತಿ ಆಗಮಿಸುವ ಹಿನ್ನೆಲೆಯಲ್ಲಿ ಸಿಡಿಸಿ ಸಭೆ ನಡೆಸಿದ ಶಾಸಕ ಎಲ್.ನಾಗೇಂದ್ರ, ಕಾಲೇಜಿನಲ್ಲಿ ಆಗಬೇಕಾಗಿರುವ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ನಡೆಸಿದರು. ಕಾಲೇಜಿನಲ್ಲಿ ಇಂಟರ್‌ಲಾಕ್, ಪೇವಿಂಗ್, ಶೌಚಾಲಯ ದುರಸ್ತಿ, ಯುಜಿಡಿ ಕಾಮಗಾರಿ, ಲಾನ್ ನಿರ್ಮಾಣ, ಸ್ಕೂಟರ್ ಸ್ಟ್ಯಾಂಡ್ ನಿರ್ಮಾಣ ಕಾಮಗಾರಿಗಳನ್ನು ನಗರಪಾಲಿಕೆ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರದಿಂದ ಪೂರ್ಣಗೊಳಿಸುವಂತೆ ತಿಳಿಸಿದರು. ಮೇಯರ್ ಶಿವಕುಮಾರ್, ಮುಡಾ ಅಧ್ಯಕ್ಷ ಯಶಸ್ವಿ ಎಸ್. ಸೋಮಶೇಖರ್, ಆಯುಕ್ತ ದಿನೇಶ್ ಕುಮಾರ್, ನಗರ ಯೋಜನಾ ಸದಸ್ಯ ಶೇಷ, ಅಧೀಕ್ಷಕ ಇಂಜಿನಿಯರ್ ಚನ್ನಕೇಶವ, ಮೈಸೂರು ಮಹಾನಗರ ಪಾಲಿಕೆ ಅಧೀಕ್ಷಕ ಇಂಜಿನಿಯರ್ ಮಹೇಶ್, ಕಾರ್ಯಪಾಲಕ ಇಂಜಿನಿಯರ್ ಮಧುಸೂದನ್, ಲೋಕೋಪಯೋಗಿ ಇಲಾಖೆ ಇಂಜಿನಿಯರ್ ಗೌರೀಶ್‌ಗೌಡ, ಕಾಲೇಜು ಪ್ರಾಂಶುಪಾಲ ಪ್ರೊ.ಶ್ರೀನಿವಾಸ್, ಸಿಡಿಸಿ ಸಮಿತಿಯ ಸದಸ್ಯರು, ಬೋಧಕ ಸಿಬ್ಬಂದಿ ಉಪಸ್ಥಿತರಿದ್ದರು.

ಪೌರಕಾರ್ಮಿಕರ ಮಾದರಿ 130 ಸ್ಮಶಾನ ಕಾರ್ಮಿಕರ ನೇಮಕ

300 ಮಂದಿಯ ಸೇವೆ ಖಾಯಂ

ಬೆಂಗಳೂರು, ಜ.11(ಕೆಎಂಶಿ)–ಪೌರಕಾರ್ಮಿಕರ ಮಾದರಿಯಲ್ಲಿ 130 ಸ್ಮಶಾನ ಕಾರ್ಮಿಕರಿಗೆ ನೇಮಕ ಮಾಡಿಕೊಂಡಿದ್ದು, ರಾಜ್ಯದ ಇತರ ಜಿಲ್ಲೆಗಳಲ್ಲಿರುವ 300 ಜನರ ಸ್ಮಶಾನ ಕಾರ್ಮಿಕರ ಸೇವೆಯನ್ನು ಕಾಯಂ ಮಾಡಲು ಸಹ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಇಂದಿಲ್ಲಿ ತಿಳಿಸಿದ್ದಾರೆ.

ಅವರು ಇಂದು ತಮ್ಮ ರೇಸ್‌ಕೋರ್ಸ್ ರಸ್ತೆಯ ಅಧಿಕೃತ ನಿವಾಸದಲ್ಲಿ ಸ್ಮಶಾನ ಕಾರ್ಮಿಕರೊಂದಿಗೆ ಬೆಳಗಿನ ಉಪಾಹಾರ ಸ್ವೀಕರಿಸಿ ಮಾತನಾಡಿದ ಅವರು, ನಾನು ಒಂದು ಕಾರ್ಯಕ್ರಮಕ್ಕೆ ಹೋದಾಗ ಭೇಟಿಯಾದ ಸ್ಮಶಾನ ಕಾರ್ಮಿಕನ ಪರಿಸ್ಥಿತಿಯನ್ನು ತಿಳಿದುಕೊಂಡೆ. ಆಗಲೇ ಅವರಿಗೆ ಏನಾದರೂ ಮಾಡಬೇಕೆಂದು ಅಧಿಕಾರಿಗಳ ಜೊತೆ ಚರ್ಚಿಸಿ, 130 ಜನರಿಗೆ ಪೌರಕಾರ್ಮಿಕರ ರೀತಿಯಲ್ಲಿ ನೇಮಕ ಮಾಡಲಾಗಿದೆ. ರಾಜ್ಯದ ಇತರ ಜಿಲ್ಲೆಗಳಲ್ಲಿ ಇನ್ನೂ 300 ಜನ ಇದ್ದಾರೆ. ಅವರನ್ನೂ ಖಾಯಂ ಮಾಡುವ ಕೆಲಸ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಇದುವರೆಗೂ ಇವರನ್ನು ಯಾರೂ ಗಮನಿಸಿಲ್ಲ. ವ್ಯವಸ್ಥೆಯೇ ಇವರನ್ನು ತಿರುಗಿ ನೋಡಿಲ್ಲ. ರಾಜ್ಯ ಆಳುವವರಾಗಲಿ, ಅಧಿಕಾರಿಗಳಾಗಲೀ ಇವರನ್ನು ಗಮನಿಸಿಯೂ ಇಲ್ಲ. ಇವರೂ ನಮ್ಮ ಬದುಕು ಇಷ್ಟೆ ಎಂದು ನಂಬಿಕೊಂಡು ಬಂದಿದ್ದಾರೆ. ಈ ಸಮಾಜದ ಕಟ್ಟಕಡೆಯ ವ್ಯಕ್ತಿಯ ಕಣ್ಣೀರನ್ನು ಒರೆಸುವ ನಿರ್ಣಯ ಮಾಡಲಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯಾವ ಜನರಿಂದ ಆಯ್ಕೆಯಾಗುತ್ತೇವೆಯೋ ಅವರಿಗೆ ಸಂವೇದನಾಶೀಲವಾಗಿರಬೇಕೆಂಬ ಸರ್ಕಾರ ಬಂದರೆ, ಜನಪರ ಸರ್ಕಾರ ಇದ್ದಾಗ ಮಾತ್ರ ಈ ರೀತಿಯ ಆಲೋಚನೆ ಮಾಡಲು ಸಾಧ್ಯವಾಗುತ್ತದೆ. ರಾಜ್ಯದಲ್ಲಿ 30 ಸಾವಿರ ಪೌರ ಕಾರ್ಮಿಕರನ್ನು ಖಾಯಂಗೊಳಿಸಲಾಗುವುದು. ಈಗಾಗಲೇ ಪ್ರಕ್ರಿಯೆ ಪ್ರಾರಂಭಿಸಲಾಗಿದೆ. 40 ಸಾವಿರಕ್ಕಿಂತ ಹೆಚ್ಚು ಪೌರ ಕಾರ್ಮಿಕರ ಖಾಯಂಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಈಗಾಗಲೇ ಹನ್ನೊಂದು ಸಾವಿರ ಜನ ಮೊದಲ ಹಂತದಲ್ಲಿ ಖಾಯಂ ಮಾಡಲಾಗಿದೆ. ಇನ್ನೂ 2 ಹಂತಗಳಲ್ಲಿ ಎಲ್ಲರನ್ನೂ ಖಾಯಂಗೊಳಿಸಲಾಗುವುದು. ಈ ಕ್ರಮ ಕೈಗೊಂಡಾಗ ಅನೇಕ ಕಾನೂನು ತೊಡಕುಗಳು ಬಂದವು.ಬಹಳ ಚರ್ಚೆಯೂ ಆಯಿತು. ಇಂಥ ನಿರ್ಣಯ ಮಾಡಿದಾಗ ಪರ, ವಿರೋಧ ಟೀಕೆ ಟಿಪ್ಪಣಿ ಇರುತ್ತದೆ. ಹೊಸ ಕಾನೂನು ರೂಪಿಸಿ ನೇಮಕ ಮಾಡಿಕೊಳ್ಳಲಾಗಿದೆ. ನಮ್ಮ ನಗರದ ಹೊಲಸು ತೆಗೆದು ನಾಗರಿಕ ಬದುಕು ಬದುಕಲು ಅವರೇ ಕಾರಣ. ನಮ್ಮ ನಿರ್ಧಾರಗಳು ಮಾನವೀಯತೆಯಿಂದ ಇದ್ದಾಗ ಅಂತಿಮವಾಗಿ ಜಯ ಸಿಗುತ್ತದೆ ಎಂದರು. ಬದ್ಧತೆ, ಬಡವರ ಬಗ್ಗೆ ಕಳಕಳಿ, ಅವರ ಸಮಸ್ಯೆಗೆ ಪರಿಹಾರ ನೀಡುವ ಸರ್ಕಾರ ನಮ್ಮದು. ತಳ ಸಮುದಾಯಗಳ ವಿಚಾರದಲ್ಲಿ ಹತ್ತು ಹಲವು ನಿರ್ಣಯಗಳನ್ನು ತೆಗೆದುಕೊಳ್ಳಲಾಗಿದೆ ಎಂದರು.



ಮೈಸೂರಿನ ವಿಜಯನಗರದಲ್ಲಿರುವ ತಾಲೂಕು ಒಕ್ಕಲಿಗರ ಸಂಘದ ಕಚೇರಿಯಲ್ಲಿ ಸಂಘದ ವತಿಯಿಂದ ಮುಡಾ ಅಧ್ಯಕ್ಷ ಯಶಸ್ವಿ ಎಸ್.ಸೋಮಶೇಖರ್ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು. ಈ ವೇಳೆ ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಎಂ.ಮಹದೇವು, ಕಾರ್ಯಕಾರಿ ಸಮಿತಿಯ ಬಿ.ಜಿ.ಶ್ರೀನಿವಾಸ್, ಹೊನ್ನಗಿರಿಗೌಡ, ಎನ್.ಕೃಷ್ಣ, ಎಸ್.ಅರುಣ್‌ಕುಮಾರ್, ಎಂ.ಪುಟ್ಟೇಗೌಡ, ಎಸ್.ಸಿದ್ದೇಗೌಡ, ಹೇಮಂತ್ ಕುಮಾರ್‌ಗೌಡ, ಬಿ.ಕೆ.ಬಸವೇಗೌಡ, ಕೆ.ನಾಗರಾಜು, ಜಯರಾಮು ಇನ್ನಿತರರು ಉಪಸ್ಥಿತರಿದ್ದರು.



ಮೈಸೂರು ಫುಟ್ಬಾಲ್ ಅಸೋಸಿಯೇಷನ್ ವತಿಯಿಂದ ಮೈಸೂರು ವಿವಿ ಫುಟ್ಬಾಲ್ ಮೈದಾನದಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಕ್ಲಬ್ ಹಾಗೂ ಲಕ್ಕಿ ಇಲೆವೆನ್ ತಂಡದ ನಡುವೆ ಫುಟ್ಬಾಲ್ ಪಂದ್ಯಾವಳಿ ನಡೆಯಿತು. ಬಿಜೆಪಿ ಹಿರಿಯ ಮುಖಂಡ ವಿ.ರಾಮಸ್ವಾಮಿ ಪಂದ್ಯಾವಳಿಗೆ ಚಾಲನೆ ನೀಡಿದರು. ಇದೇ ವೇಳೆ ಮೈಸೂರು ಫುಟ್ಬಾಲ್ ಅಸೋಸಿಯೇಷನ್ ನೂತನ ಅಧ್ಯಕ್ಷರೂ ಆದ ನಗರಪಾಲಿಕೆ ಮಾಜಿ ಸದಸ್ಯ ಕುಶಲ್‌ಕುಮಾರ್, ಪ್ರಧಾನ ಕಾರ್ಯದರ್ಶಿ ಮಂಜುನಾಥ್ ಅವರನ್ನು ವಿ.ಶ್ರೀನಿವಾಸ್‌ಪ್ರಸಾದ್ ಅಭಿಮಾನಿ ಬಳಗದ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಯುವ ಮುಖಂಡರಾದ ಭರತ್ ರಾಮಸ್ವಾಮಿ, ಮುಡಾ ಮಾಜಿ ಸದಸ್ಯ ಸಿ.ಜಿ.ಶಿವಕುಮಾರ್ ಬಳಗದ ಶಾಂತರಾಮ್, ಗಿರೀಶ್ ರೈಲ್ವೆ, ಸಂತೋಷ್‌ಕುಮಾರ್ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಆರ್.ದಿನೇಶ್ ಅವರ ಹುಟ್ಟುಹಬ್ಬವನ್ನು ಸ್ನೇಹಿತರ ಬಳಗದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮೆಡಿಕಲ್ ಗಣೇಶ್, ವಕೀಲ ಹರದೂರು ಜವರೇಗೌಡ, ಮಹದೇವ್ (ಪಾಪು), ರಾಮಮೂರ್ತಿ, ಎಸ್.ಸಿದ್ದರಾಜು, ಶ್ರೀರಾಮಪುರ ಸಂತೋಷ್, ಚಂದ್ರು, ನಂದೀಶ್, ಸಂತೋಷ್, ಯೋಗೇಶ್, ಕುಮಾರ್ ಶೆಟ್ಟಿ ಉಪಸ್ಥಿತರಿದ್ದರು.

ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರ

ಮೈಸೂರು, ಜ. 11– ಮೈಸೂರಿನ ದಟ್ಟಗಳ್ಳಿಯಲ್ಲಿರುವ ನಯನ ಕುಮಾರ್ಸ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಜ. 18 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 9513310100, 9513310103 ಸಂಪರ್ಕಿಸಬಹುದು.

ಸಂಗೀತ ಸಂತ ಶ್ರೀ ತ್ಯಾಗರಾಜರ ಆರಾಧನೆ ಹಿನ್ನೆಲೆ

ಹಲವು ಸಂಗೀತ ಸಾಧಕರಿಗೆ ಸನ್ಮಾನ



ಮೈಸೂರು, ಜ.11(ಎಂಕೆ)–ನಾದಬ್ರಹ್ಮ ಸಂಗೀತ ಸಂತ ಶ್ರೀ ತ್ಯಾಗರಾಜರ 176ನೇ ಆರಾಧನಾ ಅಂಗವಾಗಿ ಯಾದವಗಿರಿಯಲ್ಲಿರುವ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಸಂಗೀತ ಸಾಧಕರನ್ನು ಸನ್ಮಾನಿಸಿ, ಅಭಿನಂದಿಸಲಾಯಿತು.

ಅಭಿನಂದನಾ ಕಾರ್ಯಕ್ರಮವನ್ನು ಉದ್ಘಾಟಿಸಿದ ಶಾಸಕ ಎಲ್.ನಾಗೇಂದ್ರ, ಸಂಗೀತ ಸಾಧಕರಾದ ವಿದ್ವಾನ್ ವಿ. ಕೃಷ್ಣಮೂರ್ತಿ(ನಾದಸ್ವರ), ವಿದ್ವಾನ್ ರಾಘವೇಂದ್ರ ಪ್ರಸಾದ್(ತಾಳವಾದ್ಯ), ಪಂಡಿತ್ ಭೀಮಾ ಶಂಕರ್ ಬಿದನೂರು(ತಬಲ ವಾದನ), ಎಂ.ಎಸ್.ಜಯರಾಂ(ಮೃದಂಗ), ರಾಜೇಶ್ ಪಡಿಯಾರ್ (ಗಾಯನ), ಎಂ.ಆರ್.ಮಂಜುನಾಥ್(ತಬಲ), ಜ್ಯೋತಿ(ವೀಣೆ), ವಿದುಷಿ ರೂಪಶ್ರೀ ಆನಂದ್(ಗಾಯನ) ಹಾಗೂ ಶ್ರೀ ಸಾಯಿ ಸತ್ಯ(ಗಾಯನ) ಅವರನ್ನು ಆತ್ಮೀಯವಾಗಿ ಅಭಿನಂದಿಸಿದರು.

ಬಳಿಕ ಮಾತನಾಡಿದ ಅವರು, ಸಂಗೀತ ಕ್ಷೇತ್ರದಲ್ಲಿ ಧಾರ್ಮಿಕತೆಯ ಭಕ್ತಿ ಸಂಸ್ಕಾರ ಬರಲು ತ್ಯಾಗರಾಜರ ಕೀರ್ತನೆಗಳು ಹೆಚ್ಚು ಪರಿಣಾಮಕಾರಿಯಾಗಿವೆ. ದೇಶ–ವಿದೇಶದಲ್ಲೂ ತ್ಯಾಗರಾಜರ ಆರಾಧನಾ ಪಂಚರತ್ನ ಕೀರ್ತನೆಗಳ ಸಮೂಹ ಗಾಯನಕ್ಕೆ ಸಹಸ್ರಾರು ಮಂದಿ ಸೇರುತ್ತಾರೆ. ಮಕ್ಕಳಲ್ಲಿ ಸಂಗೀತ ಕಲಿಕಾ ಚಟುವಟಿಕೆಗಳನ್ನು ಪೋಷಿಸಲು ಪೋಷಕರು ಮುಂದಾಗಬೇಕು ಎಂದರು. ಖ್ಯಾತ ವಯೋಲಿನ್ ವಾದಕ ಮೈಸೂರು ಮಂಜುನಾಥ್ ಮಾತನಾಡಿ, ಕರ್ನಾಟಕ ಶಾಸ್ತ್ರೀಯ ಸಂಗೀತ ಕ್ಷೇತ್ರದ ಆಧಾರಸ್ತಂಭವಾಗಿ ಮತ್ತು ಸಂಗೀತ ಕ್ಷೇತ್ರದಲ್ಲಿ ಧಾರ್ಮಿಕತೆಯ ಮನೋಭಾವ ಬೆಳೆಸುವಲ್ಲಿ ತ್ಯಾಗರಾಜರ ಕೊಡುಗೆ ಬಹಳಷ್ಟಿದೆ. ಬಹುಮುಖ್ಯವಾಗಿ ಅಂದಿನ ದಿನದಲ್ಲೇ ಶ್ರೀರಾಮನ ಅನುಗ್ರಹದಿಂದ ಕೀರ್ತನೆಗಳನ್ನು ಹಾಡುತ್ತಿದ್ದರು.

ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್ ಕುಮಾರ್, ಶ್ರೀ ಗುರು ರಾಘವೇಂದ್ರ ಸೇವಾ ಟ್ರಸ್ಟ್ ಅಧ್ಯಕ್ಷ ಎಸ್.ಬಿ.ವಾಸುದೇವಮೂರ್ತಿ, ನಗರ ಪಾಲಿಕೆ ಸದಸ್ಯ ಜಗದೀಶ್, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕಡಕೊಳ ಜಗದೀಶ್, ವಿಕ್ರಮ ಅಯ್ಯಂಗಾರ್, ಅಜಯ್ ಶಾಸ್ತ್ರಿ, ವಿನಯ್ ಕಣಗಾಲ್ ಮತ್ತಿತರಿದ್ದರು.

ಭೂಮಿಗಿರಿ ಪ್ರಕಾಶನ ಸಂಸ್ಥೆ ವತಿಯಿಂದ

ವಿವೇಕಾನಂದರ ಜಯಂತಿ ಆಚರಣೆ



ಮೈಸೂರು, ಜ.11(ಎಂಕೆ)– ಮೈಸೂರಿನ ವಿನಾಯಕನಗರ(ಪಡುವಾರಹಳ್ಳಿ)ದಲ್ಲಿ ಭೂಮಿಗಿರಿ ಪ್ರಕಾಶನ ಸಂಸ್ಥೆ ವತಿಯಿಂದ ಸ್ವಾಮಿ ವಿವೇಕಾನಂದರ 160ನೇ ಜಯಂತಿ ಆಚರಿಸಲಾಯಿತು. ಶಾಸಕ ಎಲ್.ನಾಗೇಂದ್ರ, ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ದೇಶದ ಯುವ ಜನತೆಯ ಸ್ಫೂರ್ತಿಯಾದ ಸ್ವಾಮಿ ವಿವೇಕಾನಂದರು, ಅಮೇರಿಕಾದ ಚಿಕಾಗೋ ನಗರದಲ್ಲಿ ಮಾಡಿದ ಭಾಷಣ ಇಡೀ ವಿಶ್ವವೇ ಭಾರತದತ್ತ ನೋಡುವಂತೆ ಮಾಡಿತು. 'ಏಳಿ ಎದ್ದೇಳಿ ಗುರಿ ಮುಟ್ಟುವ ತನಕ ನಿಲ್ಲದಿರಿ', 'ನಿಮ್ಮ ಏಳಿಗೆಗಾಗಿ ನೀವೇ ಶಿಲ್ಪಿಗಳು'–ವಿವೇಕಾನಂದರ ಈ ಮಾತುಗಳು ಸದಾ ಪ್ರಸ್ತುತವಾಗಿವೆ. ಅವರ ಆದರ್ಶಗಳನ್ನು ಯುವ ಸಮೂಹವು ಅಳವಡಿಸಿಕೊಂಡಾಗ ದೇಶದ ಸರ್ವತೋಮುಖ ಬೆಳವಣಿಗೆಗೆ, ಅಭಿವೃದ್ಧಿಗೆ ಸಹಕಾರಿ ಎಂದರು. ಬಿಜೆಪಿ ಮುಖಂಡ ಎಲ್. ಚೌಡಪ್ಪ, ದಿ ಮೈಸೂರು ಕೋಆಪರೇಟಿವ್ ಬ್ಯಾಂಕಿನ ಮಾಜಿ ಅಧ್ಯಕ್ಷ ಕೆ.ಉಮಾಶಂಕರ್, ಅಧ್ಯಕ್ಷ ಸಿ.ರೇವಣ್ಣ, ನಿರ್ದೇಶಕರಾದ ಪಡುವಾರಹಳ್ಳಿ ಎಂ.ರಾಮಕೃಷ್ಣ, ಹೆಚ್.ಹರೀಶ್ ಕುಮಾರ್, ಮಹಾನಗರಪಾಲಿಕೆ ಸದಸ್ಯ ಎಂ.ಚಿಕ್ಕವೆಂಕಟ್, ದಿ ಸಿಟಿ ಕೋ–ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಎಸ್.ಬಿ.ಶಿವು, ನಿರ್ದೇಶಕ ವಿ.ಮಧು, ಭೂಮಿಗಿರಿ ಪ್ರಕಾಶನದ ಎನ್.ಬೆಟ್ಟೇಗೌಡ, ಎಂ.ರಮೇಶ್, ಕೃಷ್ಣಕುಮಾರ್, ಬಿ.ಕುಮಾರ್, ಸುರೇಂದ್ರ, ಕೇಬಲ್ ಕಿಟ್ಟಿ, ಎಂ.ಶಿವಪ್ರಕಾಶ್ ಮತ್ತಿತರರಿದ್ದರು.

ಮೈಸೂರು ಮಿತ್ರ ಗುರುವಾರ 12 ಜನವರಿ 2023

ನರಸೀಪುರದಲ್ಲಿ ಕಮಲ ಅರಳಿಸಲು ಎಲ್ಲರೂ ದುಡಿಯೋಣ

ಬೂತ್ ವಿಜಯ ಅಭಿಯಾನ ಸಮಾರೋಪದಲ್ಲಿ ಮಾಜಿ ಎಂಎಲ್‌ಸಿ ಸಿ.ರಮೇಶ್

ತಿ.ನರಸೀಪುರ ಜ.11– ಜಗತ್ತೇ ಮೆಚ್ಚಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿಯವರ ಅಭಿಮಾನಿಗಳಾಗಿ ಹಾಗೂ ಬಿಜೆಪಿ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ನರಸೀಪುರ ಕ್ಷೇತ್ರದಲ್ಲಿ ಕಮಲವನ್ನು ಅರಳಿಸಲು ಪ್ರಾಮಾಣಿಕವಾಗಿ ಎಲ್ಲರೂ ಒಗ್ಗಟ್ಟಿನಿಂದ ದುಡಿಯುತ್ತೇವೆ ಎಂದು ಪಕ್ಷದ ಹಿರಿಯ ಮುಖಂಡ ವಿಧಾನಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ವಿಶ್ವಾಸವನ್ನು ವ್ಯಕ್ತಪಡಿಸಿದರು.



ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಬುಧವಾರ ನಡೆದ ಬೂತ್ ವಿಜಯ ಅಭಿಯಾನ ಸಮಾರೋಪದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಪ್ರಪಂಚದಲ್ಲೇ ಅತ್ಯಧಿಕ ಸಂಖ್ಯೆಯ ಸದಸ್ಯರನ್ನು ಹೊಂದಿರುವ ಬಿಜೆಪಿ ಕಾರ್ಯಕರ್ತರಾಗಿರುವ ನಾವು ಸದಾ ಕಾಲ ಪಕ್ಷದ ಸಂಘಟನೆ ಬಗ್ಗೆ ಚಿಂತಿಸುತ್ತಿರುತ್ತೇವೆ. ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೆ ಬರಲಿರುವ ಪಕ್ಷಕ್ಕೆ ನರಸೀಪುರ ಕ್ಷೇತ್ರವನ್ನು ಬಳುವಳಿಯಾಗಿ ನೀಡುತ್ತೇವೆ ಎಂದು ಭರವಸೆ ನೀಡಿದರು.

ಹಿಂದಿನ ಎರಡನೇ ಚುನಾವಣೆಯಲ್ಲಿ ನಾನು ಕೂಡ ಪಕ್ಷದ ಅಭ್ಯರ್ಥಿಯಾಗಿ ಕ್ಷೇತ್ರದಲ್ಲೇ ಸ್ಪರ್ಧಿಸಿದ್ದೆ, ಕಳೆದ ಚುನಾವಣೆಯಲ್ಲಿ ಅಭ್ಯರ್ಥಿಯಾಗಿದ್ದ ವ್ಯಕ್ತಿಯೇ ಕಡೆಗಳಿಗೆಯಲ್ಲಿ ನಾಪತ್ತೆಯಾಗಿದ್ದರಿಂದ ಪಕ್ಷಕ್ಕೆ ತೀವ್ರ ಹಿನ್ನಡೆಯಾಗಿತ್ತು. ಇದುವರೆಗೂ ಅಭ್ಯರ್ಥಿಯ ಘೋಷಣೆಯಾಗಿಲ್ಲ, ಹೈಕಮಾಂಡ್ ನನ್ನನ್ನಾಗಲಿ ಅಥವಾ ಯಾರನ್ನೇ ಆಗಲಿ ಪಕ್ಷದ ಅಭ್ಯರ್ಥಿಯಾಗಿ ಕಣಕ್ಕಿಳಿಸುವ ವ್ಯಕ್ತಿಯ ಗೆಲುವಿಗೆ ಶಕ್ತಿಮೀರಿ ದುಡಿಯುತ್ತೇವೆ. ಬೂತ್ ವಿಜಯ ಅಭಿಯಾನ ಶೇ.80 ರಷ್ಟು ಯಶಸ್ವಿಯಾಗಿ ನಡೆದಿದ್ದು, ಇಂದೂ ಹಾಗೂ ನಾಳೆ ಎಲ್ಲಾ ಬೂತ್ ಮಟ್ಟದಲ್ಲಿಯೂ ಪಕ್ಷದ ಬಾವುಟವನ್ನು ಕಟ್ಟಿ ವಿಜಯ ಪತಾಕೆಗೆ ಮುನ್ನುಡಿಯನ್ನು ಹಾಕುತ್ತೇವೆ ಎಂದು ರಮೇಶ್ ಭವಿಷ್ಯ ನುಡಿದರು.

ಅಭಿಯಾನದ ಉಸ್ತುವಾರಿಗಳಾದ ಬಿಜೆಪಿ ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಕೆ.ಎಸ್.ನಂಜುಂಡೇಗೌಡ ಮಾತನಾಡಿ, ಅಮೆರಿಕಾದ ಅಧ್ಯಯನದ ಪ್ರಕಾರ ಜಗತ್ತಿನ ಉತ್ತಮ ನಾಯಕರ ಪಟ್ಟಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮೊದಲಿಗರಾಗಿದ್ದಾರೆ. ದೇಶದಲ್ಲಿ ಜನರ ಬದುಕನ್ನು ಹಸನುಗೊಳಿಸಲು ಹಾಗೂ ಸೈನ್ಯವನ್ನು ಜಾಗತಿಕ ಮಟ್ಟದಲ್ಲಿ ಬಲಪಡಿಸುವಲ್ಲಿ ಪೂರಕವಾಗಿ ಕೆಲಸ ಮಾಡಿದ್ದಾರೆ. ರಷ್ಯಾದಿಂದಲೂ ತೈಲವನ್ನು ಕೋರಿಕೆ ಮಾಡಿಕೊಳ್ಳುವ ಮೂಲಕ ದೇಶದ ಜನರಿಗೆ ಕಡಿಮೆ ದರದಲ್ಲಿ ಪೆಟ್ರೋಲಿಯಂ ಉತ್ಪನ್ನಗಳು ಸಿಗುವಂತೆ ಮಾಡಿದ್ದಾರೆ. ಮೋದಿಯವರ ನಾಯಕತ್ವದಲ್ಲಿ ಭಾರತೀಯ ಜನತಾ ಪಕ್ಷವನ್ನು ಬಲವಾಗಿ ಬೂತ್ ಮಟ್ಟದಲ್ಲಿ ಕಟ್ಟುವ ಕೆಲಸವನ್ನು ಪಕ್ಷದ ಪ್ರತಿಯೊಬ್ಬ ಮುಖಂಡ ಹಾಗೂ ಕಾರ್ಯಕರ್ತರು ಮಾಡಬೇಕು. ಬೂತ್ ವಿಜಯ ಅಭಿಯಾನ ಯಶಸ್ವಿಗೊಳ್ಳಬೇಕು ಎಂದು ಕರೆ ನೀಡಿದರು.

ಮಾಜಿ ಶಾಸಕ ಡಾ.ಎನ್.ಎಲ್.ಭಾರತೀಶಂಕರ್, ಬಿಜೆಪಿ ಕ್ಷೇತ್ರಾಧ್ಯಕ್ಷ ಕೆ.ಸಿ.ಲೋಕೇಶ್, ವಿಸ್ತಾರಕ ವಿನೋದ್, ಸಿದ್ಧಮಲ್ಲಪ್ಪ, ಬಸವರಾಜು, ಪುರಸಭೆ ಸದಸ್ಯರಾದ ಎಸ್.ಕೆ.ಕಿರಣ್, ಎನ್.ಲೋಕೇಶ್, ಹಿಂ.ವರ್ಗಗಳ ಮೋರ್ಚಾದ ಅಧ್ಯಕ್ಷ ಗುಳಿ ಮಹೇಶ್ ಮೂಗೂರು ಶಕ್ತಿ ಕೇಂದ್ರದ ಅರವಿಂದ ಸೇರಿದಂತೆ ಮುಖಂಡರು ಹಾಗೂ ಕಾರ್ಯಕರ್ತರು ಹಾಜರಿದ್ದರು.

ಕಬ್ಬಿನ ಗದ್ದೆಗೆ ಆಕಸ್ಮಿಕ ಬೆಂಕಿ ಬಿದ್ದು ಸಂಪೂರ್ಣ ನಾಶ



ಹಂಪಾಪುರ, ಜ.11– ಎಚ್.ಡಿ. ಕೋಟೆ ತಾಲೂಕು ಹಂಪಾಪುರ ಹೋಬಳಿಗೆ ಸೇರಿದ ಹೊಮ್ಮರಗಳ್ಳಿ ಗ್ರಾಮದಲ್ಲಿ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯೆ ಶಾರದಮ್ಮ ಅವರಿಗೆ ಸೇರಿದ 5 ಎಕರೆ ಕಬ್ಬಿನ ಗದ್ದೆಗೆ ಆಕಸ್ಮಿಕ ಬೆಂಕಿ ಬಿದ್ದು ಸುಟ್ಟು ಕರಕಲಾಗಿದೆ. ವಿಷಯ ತಿಳಿದು ಅಗ್ನಿಶಾಮಕದಳ ಸ್ಥಳಕ್ಕೆ ಬಂದರೂ ಕೂಡ ಬೆಂಕಿ ನಂದಿಸಲು ಸಾಧ್ಯವಾಗಿಲ್ಲ. ಶಾರದಮ್ಮ ಅವರ ಮಗ ಕೃಷ್ಣಪ್ಪ ವ್ಯವಸಾಯ ಮಾಡುತ್ತಿದ್ದು, ಕಬ್ಬಿನ ಗದ್ದೆಗೆ ಬೆಂಕಿ ಬಿದ್ದಿರುವುದನ್ನು ಕಂಡು ಆತಂಕಗೊಂಡಿದ್ದಾರೆ. ನನಗೆ 8 ಲಕ್ಷ ನಷ್ಟವಾಗಿದೆ ಎಂದು ತಿಳಿಸಿದ್ದಾರೆ.

ಬೆಂಕಿ ಬಿದ್ದು ನಾಶವಾಗಿರುವ ಕಬ್ಬಿಗೆ ಸರ್ಕಾರದಿಂದ ತಾಲೂಕಿನ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ದೊರಕುವ ಪರಿಹಾರವನ್ನು ನೀಡಬೇಕೆಂದು ರೈತರಾದ ಶಾರದಮ್ಮ, ಕೃಷ್ಣಪ್ಪ, ಮಹೇಶ್ ಒತ್ತಾಯಿಸಿದ್ದಾರೆ.

ನಂ.ಗೂಡು ಉಪ ಕಾರಾಗೃಹ ಆವರಣದಲ್ಲಿ ಸಂದರ್ಶಕರ ಕೊಠಡಿ ಉದ್ಘಾಟನೆ

ನಂಜನಗೂಡು, ಜ. 11– ತಾಲೂಕು ಮಟ್ಟದ ಉಪ ಕಾರಾಗೃಹ ವ್ಯವಸ್ಥೆಯನ್ನು ಸುಧಾರಿಸುವ ನಿಟ್ಟಿನಲ್ಲಿ ಸಂದರ್ಶನ ಕೊಠಡಿ ನಿರ್ಮಿಸಿ ಬಂಧಿಗಳಿಗೆ ಉತ್ತಮ ವ್ಯವಸ್ಥೆ ಕಲ್ಪಿಸಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದು ಸಿವಿಲ್ ನ್ಯಾಯಾಧೀಶರಾದ ಅನುಪಮಾ ತಿಳಿಸಿದ್ದಾರೆ.



ನಗರದ ಉಪ ಕಾರಾಗೃಹ ಆವರಣದಲ್ಲಿ 13 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಸಂದರ್ಶಕರ ಕೊಠಡಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಅಪರಾಧವೆಸಗಿದ ಕೈದಿಗಳು ಪಶ್ಚಾತ್ತಾಪ ಪಡಬಹುದು. ಆ ಸಂದರ್ಭದಲ್ಲಿ ಬಂಧಿಗಳಿಗೆ ಸಾಂತ್ವನ ಬೇಕಾಗುತ್ತದೆ. ಅವರಿಗೆ ಆಪ್ತರು, ಆತ್ಮೀಯರು, ಕುಟುಂಬಸ್ಥರ ಭೇಟಿಯಿಂದ ಸಮಾಧಾನ ತರಬಹುದು. ಇದರಿಂದ ಬಂಧಿಗಳೂ ಸಹ ಮನಪರಿವರ್ತನೆಯಾಗಿ ಅಪರಾಧ ಪ್ರಕರಣಗಳು ಕಡಿಮೆಯಾಗಬಹುದು. ಈ ನಿಟ್ಟಿನಲ್ಲಿ ಸಂದರ್ಶನ ಕೊಠಡಿ ನಿರ್ಮಿಸಿರುವುದು ಅನುಕೂಲವಾಗಿದೆ ಎಂದರು.

ಉಪ ಕಾರಾಗೃಹ ಅಧೀಕ್ಷಕ ಶಿವಕುಮಾರ್ ಮಾತನಾಡಿ, ಈ ಮೊದಲು ಬಂಧಿಗಳನ್ನು ಭೇಟಿಯಾಗಲು ಬರುತ್ತಿದ್ದ ಕುಟುಂಬವರ್ಗದವರಿಂದ ಜನಸಂದಣಿ ಹೆಚ್ಚಾಗಿ ಅನಾನುಕೂಲವಾಗುತ್ತಿತ್ತು. ಈಗ ಸಂದರ್ಶನ ಕೊಠಡಿ ನಿರ್ಮಿಸಿ ಪ್ರತ್ಯೇಕವಾಗಿ 5 ಕ್ಯಾಬಿನ್ ನಿರ್ಮಿಸಲಾಗಿದೆ. ಈ ಕ್ಯಾಬಿನ್‌ಗಳ ಮೂಲಕ ಅವರು ನಿರಾತಂಕವಾಗಿ ಮಾತನಾಡಬಹುದು. ತಾಲೂಕು ಉಪ ಕಾರಾಗೃಹಗಳನ್ನು ಆಧುನೀಕರಣಗೊಳಿಸುವ ಮಾದರಿಗಳಲ್ಲಿ ಪ್ರಥಮವಾಗಿ ನಂಜನಗೂಡಿನಲ್ಲಿ ನಿರ್ಮಿಸಲಾಗಿದೆ. ಅಲ್ಲದೆ ಉಪ ಕಾರಾಗೃಹದಲ್ಲಿ 90 ಲಕ್ಷ ರೂ. ವೆಚ್ಚದಲ್ಲಿ ಉತ್ತಮ ಶೌಚಾಲಯ, ಬಂಧಿಖಾನೆಗಳನ್ನು ಉನ್ನತೀಕರಣಗೊಳಿಸಲಾಗಿದೆ ಎಂದು ಮಾಹಿತಿ ನೀಡಿದರು.

ನಂತರ ಬಂಧಿಖಾನೆಯೊಳಗಿನ ವ್ಯವಸ್ಥೆಗಳನ್ನು ಪರಿಶೀಲನೆ ನಡೆಸಿದ ನ್ಯಾಯಾಧೀಶರಾದ ಅನುಪಮಾ ಅವರು, ಬಂಧಿಗಳ ಯೋಗಕ್ಷೇಮವನ್ನು ವಿಚಾರಿಸಿದರು.

ಇದೇ ಸಂದರ್ಭದಲ್ಲಿ ನ್ಯಾಯಾಧೀಶರಾದ ಕಿಶೋರ್, ಡಿಐಜಿ ಸೋಮಶೇಖರ್, ಬಂಧಿ ಖಾನೆ ಮುಖ್ಯ ಅಧೀಕ್ಷಕರಾದ ಕೆ.ಸಿ.ದಿವ್ಯ, ಸಿಬ್ಬಂದಿಗಳಾದ ಶ್ರೀಕಂಠಮೂರ್ತಿ, ಪೂರ್ಣೇಶ್ ಅರಸ್ ಇದ್ದರು.

ಶೈಕ್ಷಣಿಕ ಪ್ರಗತಿಗೆ ಎಲ್ಲಾ ರೀತಿಯ ಸಹಕಾರ



ರಾವಂದೂರು, ಜ.11– ಮಕ್ಕಳ ಶೈಕ್ಷಣಿಕ ಪ್ರಗತಿ ಕುಂಠಿತವಾಗುತ್ತಿದೆ ಮಕ್ಕಳ ಕಲಿಕೆಯನ್ನು ಉತ್ತಮ ಪಡಿಸಲು ಎಲ್ಲಾ ರೀತಿಯ ಸಹಕಾರವನ್ನು ನೀಡುತ್ತೇನೆ ಎಂದು ಶಾಸಕ ಕೆ.ಮಹದೇವ್ ತಿಳಿಸಿದರು.

ಪಿರಿಯಾಪಟ್ಟಣ ತಾಲೂಕಿನ ಹಂಡಿತವಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ನೂತನ ಕಟ್ಟಡಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಈ ಗ್ರಾಮದಲ್ಲಿ ಮಕ್ಕಳ ಸಂಖ್ಯೆಗನುಗುಣವಾಗಿ ಕಟ್ಟಡಗಳ ಕೊರತೆ ಇದ್ದು ಇದನ್ನು ನೀಗಿಸಲು ಸುಮಾರು 15 ಲಕ್ಷರೂ. ವೆಚ್ಚದಲ್ಲಿ ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಂಡಿದ್ದು ಮುಂದಿನ ದಿನಗಳಲ್ಲಿ ಈ ಶಾಲೆಗೆ ಬೇಕಾದ ಎಲ್ಲಾ ರೀತಿಯ ಸೌಲಭ್ಯಗಳನ್ನು ನೀಡುವ ಮೂಲಕ ನಗರ ಪ್ರದೇಶದಲ್ಲಿ ಸಿಗುವ ಶಿಕ್ಷಣವನ್ನು ಗ್ರಾಮಾಂತರ ಪ್ರದೇಶದಲ್ಲಿ ಮಕ್ಕಳಿಗೆ ದೊರಕುವಂತೆ ಶ್ರಮಿಸುತ್ತೇನೆ ಎಂದರು.

ಸರ್ಕಾರಿ ಶಾಲೆಗಳಲ್ಲಿ ಪ್ರತಿಯೊಂದು ಸೌಲಭ್ಯಗಳು ನೀಡುತ್ತಿರುವುದರಿಂದ ಮಕ್ಕಳನ್ನು ಶಿಕ್ಷಣ ವಂಚಿತರಾಗಿ ಮಾಡದೆ ಶಿಕ್ಷಣ ಕೊಡಿಸಬೇಕು ಹಾಗೂ ಪ್ರತಿಯೊಬ್ಬ ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿದ್ದೇ ಆದರೆ ಮಕ್ಕಳಿಗೆ ಉತ್ತಮ ಭವಿಷ್ಯವನ್ನು ದೊರಕಿಸಿಕೊಟ್ಟಂತಾಗುತ್ತದೆ ಎಂದರು.

ತಾಲೂಕಿನ ಆರ್.ಹೊಸಹಳ್ಳಿ ಕೆಲ್ಲೂರು. ಹಾಗೂ ಮಾಕೋಡು ಗ್ರಾಮಗಳಿಗೆ ಭೇಟಿ ನೀಡಿ ಶಾಲೆಗಳ ನೂತನ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜು. ತಾಲೂಕು ಶಿಕ್ಷಣ ಸಂಯೋಜಕ ಗಣೇಶ್, ಗ್ರಾಪಂ ಸದಸ್ಯ ದೀಪು, ರಾಮಚಂದ್ರ ಶಿವಕುಮಾರ್, ವೆಂಕಟೇಶ್, ಗೋವಿಂದರಾಜು, ಮಂಜುನಾಥ್, ಸತೀಶ್, ಹಾಗೂ ಶಾಲೆಯ ಸಿಬ್ಬಂದಿ, ಗ್ರಾಮಸ್ಥರು ಹಾಜರಿದ್ದರು.



ರೋಟರಿ ಅಂತಾರಾಷ್ಟ್ರೀಯ ಸಂಸ್ಥೆ ಹಾಗೂ ರವಿ ಸಂತು ಬಳಗದ ಸಹಯೋಗದಲ್ಲಿ 2023ನೇ ಸಾಲಿನ 'ರಾಜ್ಯ ಸೇವಾ ರತ್ನ' ಪ್ರಶಸ್ತಿಯನ್ನು ತಿ.ನರಸೀಪುರದ ಸೇವಾಶ್ರಯ ಫೌಂಡೇಶನ್‌ನ ಅಧ್ಯಕ್ಷ ಆರ್.ಮಣಿಕಂಠರಾಜ್‌ಗೌಡ ಅವರಿಗೆ ನೀಡಿ ಅಭಿನಂದಿಸಲಾಯಿತು. ರೋಟರಿ ಸಂಸ್ಥೆ ನಿರ್ದೇಶಕ ಚಂದ್ರಶೇಖರ್, ಚಲನಚಿತ್ರ ನಿರ್ದೇಶಕ ಓಂಸಾಯಿ ಪ್ರಕಾಶ್, ನಟಿ ಭವ್ಯ, ಗಾಯಕಿ ಮಾನಸ ವಳ್ಳ, ರವಿ ಸಂತು ಬಳಗದ ಅಧ್ಯಕ್ಷ ರವಿಸಂತು ಇತರರು ಇದ್ದಾರೆ.

ಕಾಂಗ್ರೆಸ್ ತೊರೆದು ಜೆಡಿಎಸ್ ಸೇರ್ಪಡೆ



ಹಿರೀಕ್ಯಾತನಹಳ್ಳಿ, ಜ.11– ಹುಣಸೂರು ತಾಲೂಕಿನ ಮೋದೂರು ಗ್ರಾಮ ಪಂಚಾಯಿತಿ ಸದಸ್ಯರು ಕಾಂಗ್ರೆಸ್ ತೊರೆದು ಜಿ.ಡಿ.ಹರೀಶ್‌ಗೌಡರ ಸಮ್ಮುಖದಲ್ಲಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡರು. ಮೋದೂರು ಗ್ರಾಮ ಪಂಚಾಯಿತಿಯ ಒಟ್ಟು ಎಂಟು ಸದಸ್ಯರ ಪೈಕಿ 6 ಸದಸ್ಯರುಗಳಾದ ಉಪಾಧ್ಯಕ್ಷ ಭಾಸ್ಕರ್, ಶೇಖರ್, ಮಣಿ, ಗೌರಮ್ಮ ಸುರೇಶಚಾರಿ, ಹೇಮಂತ್ ಕುಮಾರ್, ರಾಮಚಂದ್ರ, ಪಕ್ಷ ಸೇರ್ಪಡೆಗೊಂಡರು.

ಈ ಸಂದರ್ಭದಲ್ಲಿ ತಾಲೂಕು ಜೆಡಿಎಸ್ ಮುಖಂಡರುಗಳಾದ ತಾಲೂಕು ಟಿಎಪಿಸಿಎಂಎಸ್ ಅಧ್ಯಕ್ಷ ಅಸ್ವಾಳು ಕೆಂಪೇಗೌಡ, ಜಿಪಂ ಮಾಜಿ ಸದಸ್ಯ ಸುರೇಂದ್ರ, ತಾಪಂ ಮಾಜಿ ಸದಸ್ಯ ಪ್ರಭು, ಮುಖಂಡರಾದ ಸಮಾಜ ಸೇವಕ ಹರವೆ ಶ್ರೀಧರ್, ಸುರೇಶ್ ಪರಮೇಶ್ ಹಾಗೂ ಹಲವಾರು ಮುಖಂಡರು ಹಾಜರಿದ್ದರು



ಸರಗೂರಿನ ಪ್ರವಾಸಿ ಮಂದಿರದಲ್ಲಿ ಶ್ರೀ ರತ್ನಾಕರ ವಾಲ್ಮೀಕಿ ಯುವ ವೇದಿಕೆ ದಿನದರ್ಶಿಕೆಯನ್ನು ಶಾಸಕ ಅನಿಲ್ ಚಿಕ್ಕಮಾದು ಬಿಡುಗಡೆಗೊಳಿಸಿದರು. ಈ ವೇಳೆ ಜೆಡಿಎಸ್ ಮುಖಂಡ ಜಯಪ್ರಕಾಶ್ ಚಿಕ್ಕಣ್ಣ, ವೇದಿಕೆ ಅಧ್ಯಕ್ಷ ರಾಜನಾಯಕ, ನಾಯಕ ಸಮಾಜದ ಹಿರಿಯ ಮುಖಂಡರಾದ ಶಂಭುಲಿಂಗನಾಯಕ, ಎಂ.ಸಿ.ದೊಡ್ಡನಾಯಕ, ಕೆ.ಚಿಕ್ಕವೀರನಾಯಕ, ಬಿಜೆಪಿ ಮುಖಂಡ ಡಾ.ಹೆಚ್.ಕೃಷ್ಣಸ್ವಾಮಿ, ಗೌರವಾಧ್ಯಕ್ಷ ವೆಂಕಟಾಚಲ, ಉಪಾಧ್ಯಕ್ಷ ಮೇಟಿಕುಪ್ಪೆ ವಿಜಯಪ್ರಕಾಶ ನಾಯಕ ಸೇರಿದಂತೆ ನಿರ್ದೇಶಕರು ಇನ್ನಿತರರಿದ್ದರು.

ಕಟ್ಟೆಮಳಲವಾಡಿ ತಾಲೂಕಿನಲ್ಲೇ ಮಾದರಿ ಗ್ರಾಮ: ಜಿ.ಡಿ.ಹರೀಶ್‌ಗೌಡ

ಹುಣಸೂರು, ಜ.11– ಕಟ್ಟೆಮಳಲವಾಡಿ ತಾಲೂಕಿನಲ್ಲೇ ಒಂದು ಮಾದರಿ ಗ್ರಾಮ ಎಂದು ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಹಾಗೂ ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಡಿ. ಹರೀಶ್‌ಗೌಡ ತಿಳಿಸಿದರು.

ಸೋಮವಾರ ಕಟ್ಟೆಮಳಲವಾಡಿ ಗ್ರಾಮ ಪಂಚಾಯಿತಿಗೆ ಖತೇಜಾ ಬೀ ಅವರು ನೂತನ ಅಧ್ಯಕ್ಷರಾಗಿ ಆಯ್ಕೆ ಸಂದರ್ಭದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು. ಕಟ್ಟೆಮಳಲವಾಡಿ ಗ್ರಾಮವು ತಾಲೂಕಿನಲ್ಲೇ ಅತೀ ದೊಡ್ಡ ಗ್ರಾಮವಾಗಿದ್ದು, ದಲಿತ ಸಮಾಜ ಸೇರಿದಂತೆ ಸುಮಾರು 20 ಸಮುದಾಯದವರು ವಾಸ ಮಾಡುತ್ತಿದ್ದಾರೆ.

ಇಂತಹ ದೊಡ್ಡ ಗ್ರಾಮವು ಶಾಂತಿ, ಸಾಮರಸ್ಯ, ಸಹಬಾಳ್ವೆಗೆ ಹೆಸರಾಗಿದೆ. ಈ ಗ್ರಾಮವನ್ನು ಅಂದಿನ ಸಾಮಾಜಿಕ ನ್ಯಾಯದ ಹರಿಕಾರರಾದ ಡಿ.ದೇವರಾಜ ಅರಸು ಅವರು ಬಹಳ ಪ್ರೀತಿಸುತ್ತಿದ್ದರು. ಅದರಂತೆ ನಮ್ಮ ತಂದೆಯವರು ಈ ಗ್ರಾಮದ ಬಗ್ಗೆ ಅಪಾರ ಕಾಳಜಿಯನ್ನು ಹೊಂದಿದ್ದರು ಎಂದರು.

ಈ ಗ್ರಾಮದಲ್ಲಿ ನಮ್ಮ ತಂದೆಯವರ ಹೆಸರಿನಲ್ಲೇ ಸುಮಾರು 78 ಬಡ ಕುಟುಂಬಗಳಿಗೆ ಅವರ ಅವಧಿಯಲ್ಲಿ ಜಿ.ಟಿ.ದೇವೇಗೌಡ ಬಡಾವಣೆಯನ್ನು ನಿರ್ಮಾಣ ಮಾಡಿರುವುದು ನಮ್ಮ ತಂದೆಯವರಿಗೆ ಈ ಗ್ರಾಮದ ಮೇಲೆ ಇರುವ ಕಾಳಜಿಯನ್ನು ತೋರಿಸುತ್ತದೆ. ಅದರಂತೆ ನಾನೂ ಸಹ ಈ ಗ್ರಾಮದ ಮೇಲೆ ವಿಶೇಷವಾದ ಪ್ರೀತಿ ಹೊಂದಿದ್ದೇನೆ. ಈ ಗ್ರಾಮವನ್ನು ಒಂದು ಮಾದರಿ ಗ್ರಾಮವನ್ನಾಗಿ ಮಾಡಲು ಇಚ್ಛೆ ಹೊಂದಿದ್ದೇನೆ. ಆದ್ದರಿಂದ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ನನಗೆ ತಮ್ಮ ಪ್ರೀತಿಯ ಆಶೀರ್ವಾದ, ಸಹಕಾರ ಬೇಕಾಗಿದ್ದು, ಕಟ್ಟೆಮಳಲವಾಡಿ ಗ್ರಾಮ ಪಂಚಾಯಿತಿಯ ಎಲ್ಲಾ ಸದಸ್ಯರು, ಗ್ರಾಮದ ಎಲ್ಲಾ ಕೋಮಿನ ಮುಖಂಡರು, ಪಕ್ಷಾತೀತವಾಗಿ ನನಗೆ ಸಹಕಾರ ಮಾಡಬೇಕೆಂದು ಮನವಿ ಮಾಡಿದರು.



ಜಿಪಂ ಮಾಜಿ ಸದಸ್ಯ ನಾಗರಾಜ್ ಮಲ್ಲಾಡಿ ಮಾತನಾಡಿ, ನಾನು ಬಿಜೆಪಿ ಪಕ್ಷದಲ್ಲಿದ್ದೇನೆ. ಆದರೆ ಹರೀಶ್‌ಗೌಡ ಅವರ ಗುಣ, ನಡತೆ ನನಗೆ ಬಹಳ ಇಷ್ಟವಾಗಿದೆ. ಆದ್ದರಿಂದ ಈ ಸಭೆಗೆ ಬರಲು ಕಾರಣವಾಯಿತು. ಇವರನ್ನು ನಮ್ಮ ಗ್ರಾಮದ ಜನರು ಪಕ್ಷಾತೀತವಾಗಿ ಬೆಂಬಲಿಸಬೇಕೆಂದು ಮನವಿ ಮಾಡಿದರು.

ಶ್ರೀಮತಿ ಖತೇಜಾ ಬೀ ಮಾತನಾಡಿ, ಹರೀಶ್ ಗೌಡರ ಸಹಕಾರದಿಂದ ನನ್ನನ್ನು ಕಟ್ಟೆಮಳಲವಾಡಿ ಗ್ರಾಮ ಪಂಚಾಯ್ತಿಗೆ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ಅವರ ಆಶಯದಂತೆ ಗ್ರಾಮದ ಅಭಿವೃದ್ಧಿಗೆ ಪಕ್ಷಾತೀತವಾಗಿ ಶ್ರಮಿಸುತ್ತೇನೆ ಎಂದರು.

ಮಾಜಿ ಅಧ್ಯಕ್ಷ ನಟರಾಜ್ ಮಾತನಾಡಿ, ನಮ್ಮ ಕಟ್ಟೆಮಳಲವಾಡಿ ಗ್ರಾಮ ಪಂಚಾಯಿತಿಯಲ್ಲಿ 16 ಜನ ಸದಸ್ಯರಿದ್ದು, ಅವರಲ್ಲಿ 10 ಸದಸ್ಯರು ಹರೀಶ್ ಗೌಡ ಅವರ ನಾಯಕತ್ವವನ್ನು ಒಪ್ಪಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡಿದ್ದೇವೆ. ಮುಂದಿನ ಚುನಾವಣೆಯಲ್ಲಿ ಹರೀಶ್‌ಗೌಡ ಗೆಲುವಿಗೆ ಶ್ರಮಿಸುತ್ತೇವೆ ಎಂದರು.

ದಸಂಸ ಮುಖಂಡ ನಿಂಗರಾಜ್ ಮಲ್ಲಾಡಿ ಮಾತನಾಡಿದರು. ಗ್ರಾಮದ ಮುಖಂಡರಾದ ಪುಟ್ಟರಾಜು, ದೇವರಾಜ, ಸಂತೋಷ, ದಸಂಸದ ದೇವೇಂದ್ರ, ದಲಿತ ಮುಖಂಡರಾದ ಬಸವಲಿಂಗಯ್ಯ, ವಾಸೇಗೌಡ, ಹರವೆ ಶ್ರೀಧರ್, ಸತೀಶ್ ಪಾಪಣ್ಣ, ಜಾಬಗೆರೆ ತಿಮ್ಮನಾಯಕ, ಚಿಕ್ಕಮಾದು ಅವರ ಪುತ್ರಿ ರಂಜಿತಾ ಚಿಕ್ಕಮಾದು, ಮಹದೇವಮ್ಮ, ಹಜರತ್ ಜಾನ್ ಪುತ್ರ ಬಿಳಿಗೆರೆ ಮಹದೇವು, ಎಲ್ಲಾ ಗ್ರಾಪಂ ಸದಸ್ಯರು, ಎಲ್ಲಾ ಕೋಮಿನ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

ನಾಯಕ ಸಮಾಜದ ವಿದ್ಯಾರ್ಥಿಗಳ ಶಿಕ್ಷಣ ಮಾಹಿತಿ ಅಗತ್ಯ

ನಾಯಕರ ಕ್ಷೇಮಾಭಿವೃದ್ಧಿ ಸಂಘದ ಸಭೆಯಲ್ಲಿ ಚರ್ಚೆ



ಹೆಚ್.ಡಿ.ಕೋಟೆ, ಜ.11– ತಾಲೂಕು ನಾಯಕರ ಕ್ಷೇಮಾಭಿವೃದ್ಧಿ ಸಂಘದ ಪೂರ್ವಭಾವಿ ಸಭೆ ಪಟ್ಟಣದ ಅತಿಥಿಗೃಹದಲ್ಲಿ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರುಗಳ ಸಮ್ಮುಖದಲ್ಲಿ ನಡೆಯಿತು.

ಸಭೆಯಲ್ಲಿ ಸಂಘದ ಅಧ್ಯಕ್ಷ ಕ್ಯಾತನಹಳ್ಳಿ ನಾಗರಾಜ್ ಮಾತನಾಡಿ, ಜನಾಂಗದ ಸಮಸ್ಯೆಗಳ ಬಗ್ಗೆ ಸುದೀರ್ಘವಾಗಿ ಚರ್ಚೆ ಮಾಡಿ ಹಳ್ಳಿಯಿಂದ ಬರುವ ರೈತರ ಸಮಸ್ಯೆ ಕೇಳಿ ತಾಲೂಕು ಕಚೇರಿಯಲ್ಲಿ ಕೆಲಸಗಳನ್ನು ಮಾಡಿಸಲು ಮುಂದಾಗಬೇಕು ಎಂದರು.

ನಮ್ಮ ಸಮಾಜದ ವಿದ್ಯಾರ್ಥಿಗಳಿಗೆ ಅನುಕೂಲವಾಗಲು ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಸರಿಯಾದ ಮಾಹಿತಿ ನೀಡಬೇಕು. ಮೀಸಲಾತಿ ಶೇ.3ರಿಂದ 7 ರಷ್ಟು ಹೆಚ್ಚಳವಾಗಲು ಶ್ರೀ ಪ್ರಸನ್ನನಂದಾಸ್ವಾಮೀಜಿರವರು 256 ದಿನ ಹೋರಾಟವೇ ಕಾರಣ. ಸ್ವಾಮೀಜಿಯವರ ಹೋರಾಟಕ್ಕೆ ಜಯ ಸಿಕ್ಕಿದೆ ಎಂದು ತಿಳಿಸಿದರು. ಗೌರವ ಪೂರ್ವಕವಾಗಿ ಸ್ವಾಮೀಜಿಯವರನ್ನು ಸಭೆಯಲ್ಲಿ ಅಭಿನಂದಿಸಲಾಯಿತು. ಶ್ರೀಗಳು ಕೈಗೊಳ್ಳುವ ಯಾವುದೇ ಹೋರಾಟದಲ್ಲಿ ಸಂಘದ ಪದಾಧಿಕಾರಿಗಳು, ಸದಸ್ಯರು ನಿಲ್ಲಲು ಸಮ್ಮತಿಸಲಾಯಿತು.

ಸಭೆಯಲ್ಲಿ ಉಪಾಧ್ಯಕ್ಷ ಚಲುವಕೃಷ್ಣನಾಯಕ, ಪ್ರಧಾನ ಕಾರ್ಯದರ್ಶಿ ಜಿನ್ನಹಳ್ಳಿ ರಾಜನಾಯಕ, ಕಾರ್ಯದರ್ಶಿ ರವಿ, ಖಜಾಂಚಿ ನಾಗರಾಜು, ಸಂಘಟನಾ ಕಾರ್ಯದರ್ಶಿ ನಾಗರಾಜು, ನಿರ್ದೇಶಕರಾದ ನಾಗನಾಯಕ, ಸಿಂಗನಾಯಕ, ಜಯರಾಮನಾಯಕ, ಕಾಲೋನಿ ದೇವಣ್ಣ, ನಿಂಗನಾಯಕ, ಸುರೇಶ್, ಎಂ.ರವಿಶಂಕರ, ರವಿ ರಾಜೇಂದ್ರ, ಚಂದ್ರು, ಮಹಿಳಾ ಪ್ರತಿನಿಧಿ ಲಾವಣ್ಯ, ಬೆಟ್ಟನಾಯಕ, ಗೋವಿಂದರಾಜು, ಸಣ್ಣಸ್ವಾಮಿ ನಾಯಕ, ಕುಮಾರ, ಬೆಟ್ಟನಾಯಕ, ರಾಮನಾಯಕ, ಬೆಟ್ಟನಾಯಕ, ಈರನಾಯಕ, ಚಿಕ್ಕಣ್ಣ, ದೇವನಾಯಕ, ಭೈರನಾಯಕ, ಮಹದೇವನಾಯಕ, ಉಮೇಶ್, ಮುಂತಾದವರು ಭಾಗವಹಿಸಿದರು.

ಸ್ಯಾಂಟ್ರೋ ರವಿ ಬಂಧನಕ್ಕೆ ಆಗ್ರಹಿಸಿ ದಲಿತ ಸಂಘಟನೆಗಳ ಪ್ರತಿಭಟನೆ

ತಿ.ನರಸೀಪುರ, ಜ.11– ದಲಿತ ಯುವತಿಯ ಮೇಲೆ ಅತ್ಯಾಚಾರವೆಸಗಿ, ದೌರ್ಜನ್ಯ ನಡೆಸಿ, ವಂಚಿಸುತ್ತಿರುವ ಸ್ಯಾಂಟ್ರೋ ರವಿ ಅಲಿಯಾಸ್ ಕೆ.ಎಸ್.ಮಂಜುನಾಥನನ್ನು ಬಂಧಿಸಬೇಕು. ಸರ್ಕಾರದ ಮಟ್ಟದಲ್ಲೇ ತಲ್ಲಣ ಸೃಷ್ಟಿಸಿರುವ ಹೈಟೆಕ್ ವೇಶ್ಯಾವಾಟಿಕೆ ದಂಧೆ ಹಾಗೂ ಭ್ರಷ್ಟಾಚಾರವನ್ನು ಸಿಬಿಐ ತನಿಖೆ ನಡೆಸಿ, ಶಾಮೀಲಾಗಿರುವ ಪ್ರಭಾವಿ ರಾಜಕಾರಣಿಗಳು ಹಾಗೂ ಅಧಿಕಾರಿಗಳ ಮೇಲೂ ಕಾನೂನು ಕ್ರಮ ಜರುಗಿಸುವಂತೆ ಆಗ್ರಹಿಸಿ ಪಟ್ಟಣದ ತಾಲೂಕು ಕಚೇರಿ ಮುಂಭಾಗ ದಲಿತ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರು ಹಾಗೂ ಮುಖಂಡರು ಪ್ರತಿಭಟನೆ ನಡೆಸಿದರು.



ತಾಲೂಕು ಕಚೇರಿ ಎದುರು ಜಮಾವಣೆಗೊಂಡಿದ್ದ ತಾಲೂಕು ದಲಿತ ಸಂಘಟನೆಗಳ ಒಕ್ಕೂಟದ ಪದಾಧಿಕಾರಿಗಳು ವ್ಯಾಪಕ ಹೈಟೆಕ್ ವೇಶ್ಯಾವಾಟಿಕೆಯಲ್ಲಿ ಭಾಗಿಯಾಗಿ ವ್ಯಾಪಕ ಭ್ರಷ್ಟಾಚಾರ ನಡೆಸುತ್ತಿರುವ ಸರ್ಕಾರದ ವಿರುದ್ಧ ಧಿಕ್ಕಾರ ಘೋಷಣೆ ಕೂಗುತ್ತಾ ಪ್ರತಿಭಟನಾ ಧರಣಿಯನ್ನು ಪ್ರಾರಂಭಿಸಿ, ದಲಿತ ಯುವತಿಯೊಬ್ಬರ ಮೇಲೆ ಅತ್ಯಾಚಾರವೆಸಗಿ, ದೌರ್ಜನ್ಯ ನಡೆಸಿ, ವಂಚಿಸಿರುವ ಸ್ಯಾಂಟ್ರೋ ರವಿಯನ್ನು ಬಂಧಿಸಿ ಕಠಿಣ ಕಾನೂನು ಕ್ರಮವನ್ನು ಜರುಗಿಸುವಂತೆ ಒತ್ತಾಯಿಸಿದರು.

ಪ್ರತಿಭಟನೆಯ ನೇತೃತ್ವವನ್ನು ವಹಿಸಿದ್ದ ಒಕ್ಕೂಟದ ಸಂಚಾಲಕ ಎಸ್.ಆರ್.ಶಶಿಕಾಂತ್ ಸೋಸಲೆ ಮಾತನಾಡಿ, ವೇಶ್ಯಾವಾಟಿಕೆಯ ಕಿಂಗ್‌ಪಿನ್ ಸ್ಯಾಂಟ್ರೋ ರವಿ ಅಲಿಯಾಸ್ ಕೆಎಸ್.ಮಂಜುನಾಥ್ ದಲಿತ ಯುವತಿ ಮೇಲೆ ಅತ್ಯಾಚಾರ, ದೌರ್ಜನ್ಯ ನಡೆಸಿ ನಿರಂತರವಾಗಿ ವಂಚಿಸಿರುವ ಬಗ್ಗೆ ಕಳೆದ ಜನವರಿ ಒಂದರಂದು ಮೈಸೂರು ನಗರದ ವಿಜಯನಗರ ಪೊಲೀಸ್ ಠಾಣೆಯಲ್ಲಿ ಆಕೆಯೇ ದೂರು ದಾಖಲಿಸಿದ್ದರೂ ಆರೋಪಿಯನ್ನ ಇದುವರೆಗೂ ಬಂಧಿಸಿಲ್ಲ ಎಂದರು.

ನಂತರ ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಪತ್ರವನ್ನು ಉಪ ತಹಶೀಲ್ದಾರರಿಗೆ ನೀಡಲಾಯಿತು. ಪ್ರತಿಭಟನೆಯಲ್ಲಿ ನಿಕಟಪೂರ್ವ ಸಂಚಾಲಕ ಆಲಗೂಡು ಡಾ.ಎಸ್.ಚಂದ್ರಶೇಖರ್, ಭಾರತೀಯ ಪರಿವರ್ತನಾ ಸಂಘದ ಜಿಲ್ಲಾಧ್ಯಕ್ಷ ಕೆ.ಎನ್.ಪ್ರಭುಸ್ವಾಮಿ, ಡಿಜೆಪಿಎಸ್ ಜಿಲ್ಲಾಧ್ಯಕ್ಷ ತುಂಬಲ ಮಂಜುನಾಥ್, ದಸಂಸ ಜಿಲ್ಲಾ ಸಂಚಾಲಕರಾದ ಬನಹಳ್ಳಿ ಸೋಮಣ್ಣ ಸೋಸಲೆ ರಾಜಶೇಖರಮೂರ್ತಿ, ಸಂಘಟನಾ ಸಂಚಾಲಕರಾದ ನಿಂಗರಾಜು, ಸುರೇಶ್, ಆಲಗೂಡು ಶಿವಣ್ಣ, ಎಡದೊರೆ ಮಹದೇವಯ್ಯ, ಎಸ್.ನಂಜುಂಡಯ್ಯ, ಕೆ.ಎಂ.ಮಂಜುನಾಥ್, ತಾಯೂರು ಮಧುಸೂದನ್, ಕನ್ನಾಯಕನಹಳ್ಳಿ ಮರಿಸ್ವಾಮಿ, ಕೆ.ಮಹೇಶ್, ಸಿದ್ದರಾಜು, ಬೆನಕನಹಳ್ಳಿ ಸುನಿಲ್, ಹೊಸಕೋಟೆ ಕುಮಾರ್, ಗವಿಸಿದ್ದಯ್ಯ, ಶಾಂತಕುಮಾರ್, ಮಂಟೇಸ್ವಾಮಿ, ಪಿ.ಮಹದೇವಯ್ಯ, ಸಂಭ್ರಮ್, ಸಂಪತ್ ಸೇರಿದಂತೆ ನೂರಾರು ಮಂದಿ ಭಾಗವಹಿಸಿದ್ದರು.

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ತುನಿವು (ತ): ಬೆ.10.05ಕ್ಕೆ, ಮ.1ಕ್ಕೆ, ರಾ.7.15ಕ್ಕೆ, ರಾ.10.10ಕ್ಕೆ, ವಾರಿಸು (ತ): ಸಂ.4ಕ್ಕೆ.
ಸ್ಕ್ರೀನ್ 2	ತುನಿವು (ತ): ಬೆ.8ಕ್ಕೆ, ಸಂ.4.05ಕ್ಕೆ, ವೇದ (ಕ): ಮ.1.05ಕ್ಕೆ, ವಾರಿಸು (ತ): ರಾ.7.10ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 3	ವಾರಿಸು (ತ): ಬೆ.8.30ಕ್ಕೆ, ಮ.1.05ಕ್ಕೆ, ವೇದ (ಕ): ಸಂ.4.20ಕ್ಕೆ, ರಾ.10.20ಕ್ಕೆ, ತುನಿವು (ತ): ರಾ.7.30ಕ್ಕೆ.
ಸ್ಕ್ರೀನ್ 4	ವಾರಿಸು (ತ): ಬೆ.7.30ಕ್ಕೆ, ಬೆ.11.15ಕ್ಕೆ, ಸಂ.6.40ಕ್ಕೆ, ರಾ.10ಕ್ಕೆ, ಅವತಾರ್: ದಿ ವೇ ಆಫ್ ವಾಟರ್ (3ಡಿ)(ಇಂ): ಮ.2.40ಕ್ಕೆ.

ಐನಾಕ್ಸ್ ಮೂವೀಸ್
LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಮಿಸ್ಟರ್ ಬ್ಯಾಚುಲರ್ (ಕ): ಬೆ.10.30ಕ್ಕೆ, ಸಂ.4.35ಕ್ಕೆ, ರಾ.10.20ಕ್ಕೆ, ವೇದ (ಕ): ಮ.1.25ಕ್ಕೆ, ಕಾಕ್ಟೇಲ್ (ಕ): ರಾ.7.35ಕ್ಕೆ.
ಸ್ಕ್ರೀನ್ 2	ಅವತಾರ್: ದಿ ವೇ ಆಫ್ ವಾಟರ್ (3ಡಿ)(ಇಂ): ಬೆ.10.40ಕ್ಕೆ, ಮ.2.30ಕ್ಕೆ, ಸಂ.6.20ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 3	ಸ್ಪೂಕಿ ಕಾಲೇಜ್ (ಕ): ಬೆ.10ಕ್ಕೆ, ಥಗ್ ಆಫ್ ರಾಮಘಡ (ಕ): ಮ.12.50ಕ್ಕೆ, ಮಿಸ್ ನಂದಿನಿ (ಕ): ಮ.3.25ಕ್ಕೆ, ಬೇಡಿಯಾ (ಹಿಂ): ಸಂ.6ಕ್ಕೆ, ಅವತಾರ್: ದಿ ವೇ ಆಫ್ ವಾಟರ್ (3ಡಿ)(ಇಂ): ರಾ.9.10ಕ್ಕೆ.
ಸ್ಕ್ರೀನ್ 4	ವೈಶಂಪಾಯನ ತೀರ (ಕ): ಬೆ.11.30ಕ್ಕೆ, ಸ್ಪೂಕಿ ಕಾಲೇಜ್ (ಕ): ಮ.1.55ಕ್ಕೆ, ರಾ.7.10ಕ್ಕೆ, ಲವ್‌ಸ್ಟೋರಿ 1998 (ಕ): ಸಂ.4.45ಕ್ಕೆ, ವೇದ (ಕ): ರಾ.10ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಓ (ಕ): ಬೆ.10.30ಕ್ಕೆ, ಯಶೋಧಾ (ತೆ): ಮ.1.15ಕ್ಕೆ, ರಾಣಾ (ಕ): ಸಂ.4ಕ್ಕೆ, ಲವ್ ಟುಡೆ (ತ): ಸಂ.6.30ಕ್ಕೆ, ಯೆಲ್ಲೋ ಗ್ಯಾಂಗ್ಸ್ (ಕ): ರಾ.9.30ಕ್ಕೆ.
ಸ್ಕ್ರೀನ್ 2	ಹುಬ್ಬಳ್ಳಿ ಡಾಬಾ (ಕ): ಬೆ.10.15ಕ್ಕೆ, ಕಾಂತಾರ (ಕ): ಮ.12.45ಕ್ಕೆ, ಸಂ.6.35ಕ್ಕೆ, ದಿಲ್ ಪಸಂದ್ (ಕ): ಮ.3.40ಕ್ಕೆ, ಗಂಧದಗುಡಿ (ಕ): ರಾ.9.30ಕ್ಕೆ.
ಸ್ಕ್ರೀನ್ 3	ಕಾಂತಾರ (ಕ): ಬೆ.10.30ಕ್ಕೆ, ಮ.3.25ಕ್ಕೆ, ಗಂಧದ ಗುಡಿ (ಕ): ಮ.1.25ಕ್ಕೆ, ಬ್ಲಾಕ್ ಪ್ಯಾಂಥರ್ (3ಡಿ)(ಇಂ): ಸಂ.6.20ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ದಿಲ್ ಪಸಂದ್ (ಕ): ಬೆ.10.40ಕ್ಕೆ, ಬನಾರಸ್ (ಕ): ಮ.1.45ಕ್ಕೆ, ಮಿರಲ್ (ತ): ಸಂ.4.45ಕ್ಕೆ, ಗಂಧದ ಗುಡಿ (ಕ): ರಾ.7.15ಕ್ಕೆ, ಲವ್ ಟುಡೆ (ತ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ವೇದ (ಕ): ಬೆ.11.25ಕ್ಕೆ, ಮ.3.30ಕ್ಕೆ, ಸಂ.6.40ಕ್ಕೆ, ರಾ.9.30ಕ್ಕೆ, ಒನ್ಸ್ ಅಪಾನ್ ಟೈಂ ಇನ್ ಜಮಾಲಿಗುಡ್ಡ (ಕ): ಬೆ.10.30ಕ್ಕೆ, ಮ.12.50ಕ್ಕೆ, ಸಂ.6.50ಕ್ಕೆ, ರಾ.10.10ಕ್ಕೆ, ಕಾಂತಾರ (ಕ): ಮ.1.20ಕ್ಕೆ, ನಾನು ಅದು ಮತ್ತು ಸರೋಜ (ಕ): ರಾ.7.25ಕ್ಕೆ, ಪದವಿ ಪೂರ್ವ (ಕ): ಸಂ.4.30ಕ್ಕೆ, ಮೇಡ್ ಇನ್ ಬೆಂಗಳೂರು (ಕ): ಸಂ.6.25ಕ್ಕೆ, ಸರ್ಕಸ್ (ಹಿಂ): ಮ.12ಕ್ಕೆ, ಅವತಾರ್: ದಿ ವೇ ಆಫ್ ವಾಟರ್ (3ಡಿ)(ಇಂ): ಬೆ.9.45ಕ್ಕೆ, ಬೆ.10.45ಕ್ಕೆ, ಮ.1.40ಕ್ಕೆ, ಮ.2.40ಕ್ಕೆ, ಸಂ.5.35ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ, ರಾ.10.30ಕ್ಕೆ, ಅವತಾರ್: ದಿ ವೇ ಆಫ್ ವಾಟರ್ (ಇಂ): ಮ.2.45ಕ್ಕೆ, ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ವಾರಿಸು (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕಾಂತಾರ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಒನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಲಡ್ಕಿ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ತುನಿವು (ತ)	4 ಪ್ರದರ್ಶನಗಳು
ಗಾಯಿತ್ರಿ	
ತುನಿವು (ತ)	4 ಪ್ರದರ್ಶನಗಳು
ರಾಜ್‌ಕಮಲ್	
ತುನಿವು (ತ)	4 ಪ್ರದರ್ಶನಗಳು
ಸಂಗಂ	
ವಾರಿಸು (ತ)	4 ಪ್ರದರ್ಶನಗಳು
ಲಿಡೋ	
ಥಗ್ ಆಫ್ ರಾಮಘಡ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ವಾರಿಸು (ತ)	4 ಪ್ರದರ್ಶನಗಳು
ಪ್ರಭಾ	
ಲವ್ ಸ್ಟೋರಿ (ಕ) ಕಾಕ್ಟೇಲ್ (ಕ)	2 ಪ್ರದರ್ಶನಗಳು

ಭೇರ್ಯ ಬಳಿ ಬೈಕ್‌ಗಳ ಡಿಕ್ಕಿ: ಸವಾರ ಸಾವು




ಭೇರ್ಯ, ಜ.11– ಬೈಕ್‌ಗಳ ಮುಖಾಮುಖಿ ಡಿಕ್ಕಿಯಿಂದ ವ್ಯಕ್ತಿಯೋರ್ವ ಸ್ಥಳದಲ್ಲಿ ಮೃತಪಟ್ಟಿರುವ ಘಟನೆ ಸಮೀಪದ ಮುಂಜನಹಳ್ಳಿ ಗ್ರಾಮದ ತೋಟದ ಮನೆ ಹೋಟೆಲ್ ಬಳಿ ಹಾಸನ–ಮೈಸೂರು ಹೆದ್ದಾರಿಯಲ್ಲಿ ಇಂದು ಸಂಭವಿಸಿದೆ.

ಸಾಲಿಗ್ರಾಮ ತಾಲೂಕು ಮುಂಜನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಗುಳುವಿನ ಅತ್ತಿಗುಪ್ಪೆ ಗ್ರಾಮದ ಶಿಕ್ಷಕ ರಮೇಶ್ ಎಂಬುವರ ಮಗ ಗೋಪಿನಾಥ್(30) ಮೃತ ದುರ್ದೈವಿ. ಈತನಿಗೆ ಪತ್ನಿ ಹಾಗೂ ಓರ್ವ ಪುತ್ರ, ಪುತ್ರಿ ಇದ್ದಾರೆ. ಗುಳುವಿನ ಅತ್ತಿಗುಪ್ಪೆ ಗ್ರಾಮದಿಂದ ಗೋಪಿನಾಥ್ ಭೇರ್ಯ ಗ್ರಾಮಕ್ಕೆ ಹೋಗುವಾಗ ಭೇರ್ಯ ಗ್ರಾಮದ ಕಡೆಯಿಂದ ಹಾಸನಕ್ಕೆ ಬರುತ್ತಿದ್ದ ಬೈಕ್ ಗೋಪಿನಾಥ್ ಬೈಕ್‌ಗೆ ಡಿಕ್ಕಿ ಹೊಡೆದಿದ್ದರ ಪರಿಣಾಮ ಗೋಪಿನಾಥ್ ಸ್ಥಳದಲ್ಲಿ ಮೃತಪಟ್ಟಿದ್ದಾನೆ. ಮತ್ತೊಂದು ಬೈಕ್‌ನವರು ಬೈಕ್ ಬಿಟ್ಟು ಪರಾರಿಯಾಗಿದ್ದಾರೆ. ಸ್ಥಳಕ್ಕೆ ಸಾಲಿಗ್ರಾಮ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಕುಮುದ ಭೇಟಿ ನೀಡಿ ಪರಿಶೀಲನೆ ನಡೆಸಿ ದೂರು ದಾಖಲಿಸಿಕೊಂಡಿದ್ದಾರೆ.

ಚಳಿಗಾಲದಲ್ಲಿ ಆರೋಗ್ಯದತ್ತ ಕಾಳಜಿ ಅವಶ್ಯ

ಬೆಳ್ಳಂಬೆಳಗ್ಗೆ ಬದಲು ಬಿಸಿಲು ಬಂದ ನಂತರ ವಾಕಿಂಗ್ ಸೂಕ್ತ : ಹೃದ್ರೋಗ ತಜ್ಞರ ಸಲಹೆ




ಡಾ.ಅರುಣ್ ಶ್ರೀನಿವಾಸ್ ಡಾ.ಕೆ.ಎಸ್.ಸದಾನಂದ

"ಕಾನ್ಪುರದಲ್ಲಿ ವರದಿಯಾದ 98 ಸಾವುಗಳಲ್ಲಿ 44 ಜನರು ಆಸ್ಪತ್ರೆಯಲ್ಲಿ ಸಾವನ್ನಪ್ಪಿದರೆ, ಉಳಿದ 54 ಮಂದಿ ಚಿಕಿತ್ಸೆಗೆ ಮುಂಚೆಯೇ ಕೊನೆಯುಸಿರೆಳೆದಿದ್ದಾರೆ ಎಂಬ ಮಾಹಿತಿಯನ್ನು ಇನ್‌ಸ್ಟಿಟ್ಯೂಟ್ ಆಫ್ ಕಾರ್ಡಿಯಾಲಜಿ ನೀಡಿದೆ. ಲಕ್ಷ್ಮೀಪತ್ ಸಿಂಘಾನಿಯಾ ಇನ್‌ಸ್ಟಿಟ್ಯೂಟ್ ಆಫ್ ಕಾರ್ಡಿಯಾಲಜಿ ಮತ್ತು ಕಾರ್ಡಿಯಾಕ್ ಸರ್ಜರಿ ಬಿಡುಗಡೆ ಮಾಡಿದ ಮಾಹಿತಿಯಂತೆ, ಕಳೆದೊಂದು ವಾರದಲ್ಲಿ 723 ಹೃದ್ರೋಗಿಗಳು ಆಸ್ಪತ್ರೆಯ ತುರ್ತು ನಿಗಾ ಘಟಕ ಮತ್ತು ಹೊರ ರೋಗಿ ವಿಭಾಗದಲ್ಲಿ ದಾಖಲಾಗಿದ್ದಾರೆ. ಆಘಾತಕಾರಿ ಸಂಗತಿ ಎಂದರೆ, ತೀವ್ರ ಶೀತದಿಂದ ಹದಿನಾಲ್ಕು ಮಂದಿ ಹೃದಯಾಘಾತದಿಂದ ಒಂದೇ ದಿನ ಮೃತಪಟ್ಟಿರೆ, ಹೃದ್ರೋಗ ಸಂಸ್ಥೆಯಲ್ಲಿ ಶಸ್ತ್ರಚಿಕಿತ್ಸೆ ವೇಳೆ ಆರು ಮಂದಿ ಸಾವನ್ನಪ್ಪಿದ್ದಾರೆ.



ಮೈಸೂರು,ಜ.11(ಜಿಎ)–ಚಳಿಗಾಲದಲ್ಲಿ ದೇಹವನ್ನು ಬೆಚ್ಚಗಿಟ್ಟುಕೊಳ್ಳುವ ಮೂಲಕ ಅನೇಕ ಆರೋಗ್ಯ ಸಮಸ್ಯೆಗಳಿಗೆ ಕಡಿವಾಣ ಹಾಕಬಹುದು ಎಂದು ವೈದ್ಯರು ಸಲಹೆ ನೀಡಿದ್ದಾರೆ. ಇಡೀ ವಿಶ್ವವೇ ಸಾಂಕ್ರಾಮಿಕ ಕೊರೊನಾ 3 ಅಲೆಗಳಿಂದ ತತ್ತರಿಸಿದ್ದು, ಈಗ ಚಳಿಗಾಲವಿರುವುದರಿಂದ ಕೊರೊನಾ ಜೊತೆ ಇತರೆ ಆರೋಗ್ಯ ಸಮಸ್ಯೆಗಳಿಂದ ದೂರವಿರಲು ಸೂಕ್ತ ಕ್ರಮಗಳನ್ನು ಅನುಸರಿಸಬೇಕಿದ್ದು, ಅದರಲ್ಲೂ ಅಸ್ತಮಾ, ನ್ಯುಮೋನಿಯಾ, ಹೃದಯ ಸಂಬಂಧಿತ ಕಾಯಿಲೆಗಳಿಂದ ಬಳಲುತ್ತಿರುವವರು ಜೀವನ ಶೈಲಿ ಬದಲಿಸಿಕೊಂಡು ದೇಹವನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳವುದು ಒಳಿತು ಎಂದು ತಿಳಿಸಿದ್ದಾರೆ.

ಎಚ್ಚರಿಕೆ ಮುಖ್ಯ : ಉತ್ತರ ಭಾರತದ ಹಲವೆಡೆ ಹೆಚ್ಚು ಶೀತಗಾಳಿ ಇರುವುದರಿಂದ ಅಲ್ಲಿ ಅನೇಕ ಆರೋಗ್ಯ ಸಮಸ್ಯೆಗಳು ಕಂಡು ಬರುತ್ತಿವೆ. ವಾಯುವಾಲಿನ್ಯ ಮತ್ತು ಶೀತಗಾಳಿಯಿಂದ ಚಳಿಗಾಲದಲ್ಲಿ ಕೊರೊನಾ ಸೇರಿದಂತೆ ಇತರೆ ಸಾಂಕ್ರಾಮಿಕ ರೋಗಗಳು ಹೆಚ್ಚಾಗುತ್ತವೆ. ಆದರೆ, ದಕ್ಷಿಣ ಭಾರತದಲ್ಲಿ ಈ ರೀತಿ ಸಮಸ್ಯೆ ಕಂಡು ಬಂದಿಲ್ಲ. ಆದರೂ ಎಚ್ಚರಿಕೆ ವಹಿಸುವುದು ಬಹಳ ಮುಖ್ಯವಾಗಿದೆ ಎಂದು ಶ್ರೀ ಜಯದೇವ ಹೃದ್ರೋಗ ವಿಜ್ಞಾನಗಳ ವೈದ್ಯಕೀಯ ಅಧೀಕ್ಷಕ ಡಾ.ಕೆ.ಎಸ್.ಸದಾನಂದ ಅವರು ಸಲಹೆ ನೀಡಿದ್ದಾರೆ.

'ಮೈಸೂರು ಮಿತ್ರ'ನೊಂದಿಗೆ ಮಾತನಾಡುತ್ತಿದ್ದ ಅವರು, ಚಳಿಗಾಲದಲ್ಲಿ ಶ್ವಾಸಕೋಶದ ಸೋಂಕಿನ ಸಮಸ್ಯೆಗಳು ಹೆಚ್ಚಾಗಿ ಕಂಡು ಬರುತ್ತವೆ. ನ್ಯುಮೋನಿಯಾ ಸೇರಿದಂತೆ ಈಗಾಗಲೇ ಹೃದಯ ಸಂಬಂಧಿತ ಕಾಯಿಲೆಗಳು ಇರುವವರಿಗೆ ಹೃದಯಾಘಾತವಾಗುವ ಸಾಧ್ಯತೆ ಹೆಚ್ಚಿರುತ್ತದೆ. ಉಸಿರಾಟ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗಿದ್ದವರಿಗೆ ಸೋಂಕು ಹೆಚ್ಚಾದಾಗ ಹೃದಯ ಕಾರ್ಯನಿರ್ವಹಿಸುವುದಿಲ್ಲ. ಇಂತಹ ಸಂದರ್ಭಗಳಲ್ಲಿ ಹೃದಯಾಘಾತವಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ಇಂತಹ ಸಂದರ್ಭಗಳಲ್ಲಿ ದೇಹವನ್ನು ಹೆಚ್ಚು ಬೆಚ್ಚಗೆ ಇಟ್ಟುಕೊಳ್ಳಬೇಕು. ಮುಂಜಾನೆ ಬದಲು ಸ್ವಲ್ಪ ಬಿಸಿಲು ಬಂದ ನಂತರ ವಾಕ್ ಮಾಡುವುದು ಸೂಕ್ತ ಎಂದರು.

ಜೀವನ ಶೈಲಿ ಕಾರಣ: ಇತ್ತೀಚಿನ ದಿನಗಳಲ್ಲಿ ಅನೇಕ ಆರೋಗ್ಯ ಸಮಸ್ಯೆಗಳಿಗೆ ಮುಖ್ಯ ಕಾರಣ ನಮ್ಮ ಬದಲಾದ ಜೀವನ ಶೈಲಿಯಾಗಿದೆ ಅದರಲ್ಲೂ ನಾವು ತಿನ್ನುವ ಆಹಾರದಲ್ಲಿ ಕೊಬ್ಬು, ಸಕ್ಕರೆ, ಮುಖ್ಯವಾಗಿ ಎಣ್ಣೆಯಲ್ಲಿ ಕರಿದ ಆಹಾರವನ್ನು ಹೆಚ್ಚು ಸೇವಿಸುವುದರಿಂದ ಹೃದಯಕ್ಕೆ ಒತ್ತಡ ಹೆಚ್ಚಾಗಿ ಈ ರೀತಿ ಸಮಸ್ಯೆಗಳು ಎದುರಾಗುತ್ತಿವೆ. ಮುಂಜಾಗ್ರತೆಯಾಗಿ ನ್ಯುಮೋನಿಯಾ ವ್ಯಾಕ್ಸಿನ್ ತೆಗೆದುಕೊಳ್ಳಬೇಕು. ಪ್ರತಿವರ್ಷ ಈ ವ್ಯಾಕ್ಸಿನ್ ಪಡೆದುಕೊಳ್ಳುವುದು ಉತ್ತಮ ಎಂದು ಸಲಹೆ ನೀಡಿದ್ದರು.

ಬೆಳಗ್ಗೆ 3ರಿಂದ 7 ಹೆಚ್ಚು : ಚಳಿಗಾಲದಲ್ಲಿ ಶ್ವಾಸಕೋಶದಲ್ಲಿ ನೀರು ಅಥವಾ ಕಫ ಸೇರಿಕೊಂಡು ಉಸಿರಾಟ ಸಮಸ್ಯೆ ಹೆಚ್ಚಾಗುತ್ತದೆ. ಹೃದಯದಲ್ಲಿ ಬ್ಲಾಕ್ಸ್ ಇರುವವರಿಗೆ ಹೃದಯಾಘಾತ ಆಗುವ ಸಾಧ್ಯತೆ ಹೆಚ್ಚಿರುತ್ತದೆ. ಅದರಲ್ಲೂ ಬೆಳಗಿನ ಜಾವ 3ರಿಂದ 7 ಗಂಟೆ ಸಂದರ್ಭದಲ್ಲಿ ಹೃದಯಾಘಾತವಾಗಿ ಆಸ್ಪತ್ರೆಗೆ ಬರುವವರ ಸಂಖ್ಯೆ ಹೆಚ್ಚಾಗಿದೆ. ಅಸ್ತಮಾ ಇರುವವರಿಗೂ ಉಸಿರಾಟ ಸಮಸ್ಯೆಗಳು ಹೆಚ್ಚಾಗುತ್ತವೆ. ಈ ಸಮಯದಲ್ಲಿ ನ್ಯುಮೋನಿಯಾ, ಅಸ್ತಮಾ, ಎದೆ ನೋವು ಮತ್ತು ಹೃದಯ ಸಮಸ್ಯೆ ಇರುವವರು ವಾಕಿಂಗ್‌ಗೆ ಹೋಗಬಾರದು. ಚಳಿಯಲ್ಲಿ ಮೆಟ್ಟಿಲುಗಳ ಹತ್ತಿಳಿಯುವುದು, ಕಡಿದಾದ ರಸ್ತೆಗಳಲ್ಲಿ ಹೋಗಬಾರದು. ಸಾಧ್ಯವಾದಷ್ಟು ರಕ್ತದೊತ್ತಡ ಸಮತೋಲನದಲ್ಲಿ ಇಟ್ಟುಕೊಳ್ಳಬೇಕು ಎಂದು ಅಪೋಲೋ ಮುಖ್ಯ ಇಂಟರ್ವೆನ್ಷನಲ್ ಕಾರ್ಡಿಯಾಲಜಿಸ್ಟ್ ಮತ್ತು ಅಪೊಲೊ ಹಾರ್ಟ್ ಇನ್‌ಸ್ಟಿಟ್ಯೂಟ್ ಮುಖ್ಯಸ್ಥ ಡಾ.ಅರುಣ್ ಶ್ರೀನಿವಾಸ್ ತಿಳಿಸಿದ್ದಾರೆ.

TOYOTA PALACE TOYOTA

WE ARE HIRING

1. ASSISTANT ACCOUNTS MANAGER (Tally, ERP9, TDS, GST)
2. SENIOR ACCOUNTS EXECUTIVE (Tally, ERP9, TDS, GST)
3. SALES MANAGER (4 -5 Yrs Experience)
4. USED CAR MANAGER (4 -5 Yrs Experience)
5. INSURANCE MANAGER (4 -5 Yrs Experience)
6. HR EXECUTIVE for Mandya Branch (Well-versed in HR Activities)

Location - Mysore (Hootagalli)
Call: 95388 74915

ಎರಡನೇ ವರ್ಷದ ಸವಿನೆನಪು



ಸಂತೋಷ್.ಎಸ್

ನೀವು ನಮ್ಮನ್ನಗಲಿ ಇಂದಿಗೆ ಎರಡು ವರ್ಷ ಕಳೆದರೂ ನಿಮ್ಮ ನೆನಪಿನಲ್ಲಿರುವ
ತಂದೆ: ಕೆ ಸುರೇಶ್, ತಾಯಿ: ಗೀತಾ ಹಾಗೂ ಲಕ್ಷ್ಮಮ್ಮ ಲೇಟ್ ಕಾಡಯ್ಯ
ಕುಟುಂಬವರ್ಗದವರು, ಶ್ರೀರಾಂಪುರ 2ನೇ ಹಂತ, ಶಿವಪುರ,
ಹೆಚ್.ಡಿ ಕೋಟೆ ರೋಡ್, ಮೈಸೂರು

ಪಡುವಣ ರಸ್ತೆ ಕಾಮಗಾರಿ ನೆನೆಗುದಿಗೆ



ಮೈಸೂರು, ಜ.11(ಎಸ್‌ಪಿಎನ್)– ಹಲವು ದಿನಗಳ ಹಿಂದೆ ಆರಂಭವಾಗಿರುವ ಕುವೆಂಪುನಗರದ ಪಡುವಣ ರಸ್ತೆ ಕಾಮಗಾರಿ ಅಪೂರ್ಣಗೊಂಡು, ಈ ಮಾರ್ಗದ ನಿವಾಸಿಗಳ ಓಡಾಟಕ್ಕೆ ತೀವ್ರ ತೊಂದರೆಯಾಗುತ್ತಿದ್ದು, ಕೂಡಲೇ ಕಾಮಗಾರಿ ಪೂರ್ಣಗೊಳಿಸುವಂತೆ ಅಧಿಕಾರಿಗಳಲ್ಲಿ ಇಲ್ಲಿನ ನಿವಾಸಿಗಳು ಮನವಿ ಮಾಡಿದ್ದಾರೆ.

ಪಡುವಣ ರಸ್ತೆಯ ಕವಿತಾ ಸ್ಟೋರ್‌ನಿಂದ ರಾಮಕೃಷ್ಣನಗರದ (ವಿಶ್ವಮಾನವ ರಸ್ತೆ) ರಸ್ತೆಯವರೆಗೆ ರಸ್ತೆ ಕಾಮಗಾರಿ ಅಪೂರ್ಣಗೊಂಡಿದೆ. ರಾಮಕೃಷ್ಣನಗರ, ಟಿ.ಕೆ.ಬಡಾವಣೆ, ರಾಮಕೃಷ್ಣನಗರ 'ಎ' ಅಂಡ್ 'ಡಿ' ಬ್ಲಾಕ್, ಕೃಷ್ಣಮೂರ್ತಿ ನಗರ, ಗಂಗೋತ್ರಿ ಬಡಾವಣೆ ಸೇರಿದಂತೆ ಇತರೆ ರಸ್ತೆಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಯಾಗಿದೆ.

ಕಳೆದ 2–3 ತಿಂಗಳಿಂದ ಈ ರಸ್ತೆ ಸಂಪೂರ್ಣ ಬಂದ್ ಆಗಿರುವುದರಿಂದ ಈ ಮಾರ್ಗದ ವಾಹನ ಸವಾರರ ಓಡಾಟಕ್ಕೆ ತೀವ್ರ ತೊಂದರೆಯಾಗಿದೆ. ಈ ಕೂಡಲೇ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಇಲ್ಲಿನ ನಿವಾಸಿ ಎನ್.ಜಿ.ಗಿರೀಶ್ ಪತ್ರಿಕೆ ಮೂಲಕ ಸಂಬಂಧಪಟ್ಟ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

ಕಿಡಿಗೇಡಿಗಳಿಂದ ಬೆಂಕಿ: ಚಾಮುಂಡಿಬೆಟ್ಟದಲ್ಲಿ ನಾಲ್ಕು ಎಕರೆಯಷ್ಟು ಕುರುಚಲು ಗಿಡ ನಾಶ

ಮೈಸೂರು, ಜ.11– ಚಾಮುಂಡಿ ಬೆಟ್ಟದ ಉತ್ತನಹಳ್ಳಿ ಸಮೀಪ ಕಿಡಿಗೇಡಿಗಳು ಹಚ್ಚಿದ ಬೆಂಕಿಗೆ 4 ಎಕರೆಗೂ ಹೆಚ್ಚು ಪ್ರದೇಶದಲ್ಲಿದ್ದ ಹುಲ್ಲು, ಕುರುಚಲು ಗಿಡಗಳು ಬೆಂಕಿ ಆಹುತಿಯಾಗಿದೆ. ಮಂಗಳವಾರ ಸಂಜೆ 7.30ರ ವೇಳೆಯಲ್ಲಿ ಚಾಮುಂಡಿಬೆಟ್ಟದ ಉತ್ತನಹಳ್ಳಿ ಬಳಿ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದು, ಈ ಘಟನೆ ಸಂಭವಿಸಿದೆ. ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ 24 ಮತ್ತು ಅರಣ್ಯ ಇಲಾಖೆಯ 20 ಮಂದಿ ಸಿಬ್ಬಂದಿ, ಕಾರ್ಯಾಚರಣೆಯನ್ನು ರಾತ್ರಿ 10.30ರವರೆಗೂ ನಡೆಸಿ ಬೆಂಕಿಯನ್ನು ಹತೋಟಿಗೆ ತಂದಿದ್ದಾರೆ. ಸುಮಾರು ನಾಲ್ಕು ಅಗ್ನಿಶಾಮಕ ವಾಹನಗಳು ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದವು.

ಸಂಕ್ರಾಂತಿ ಪ್ರಯುಕ್ತ ಕವಿತಾ ಕಾರ್ಯಕ್ರಮ

ಮೈಸೂರು, ಜ.11– ಸಂಕ್ರಾಂತಿ ಹಬ್ಬದ ಪ್ರಯುಕ್ತ 'ರವಿ ಕಾಣದ್ದನ್ನು ಕವಿ ಕಂಡ–ಕವಿತೆಗಳ ಓದು' ಕಾರ್ಯಕ್ರಮವನ್ನು ಜ.15 ರಂದು ಭಾನುವಾರ ಬೆಳಗ್ಗೆ 10.30ಕ್ಕೆ ಕುವೆಂಪು ನಗರದ ಕಲಾಸುರಚಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಕಲಾವಿದೆ ವಿಜಯಾ ಸಿಂಧುವಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುವ ಬರಹಗಾರ ಯತೀಶ್ ಕೊಳ್ಳೇಗಾಲ ನೇತೃತ್ವದಲ್ಲಿ ಕವಿಗೋಷ್ಠಿ ನಡೆಯಲಿದ್ದು, ಕವಿತೆಗಳನ್ನು ಆಸ್ವಾದಿಸುವುದು ಹೇಗೆ ಪಿಸುಮಾತಿನಲಿ ಓದುವುದು ಸೇರಿದಂತೆ ನಾನಾ ಬಗೆಯಲ್ಲಿ ಕವಿತೆಗಳ ವಾಚನ ಶೈಲಿಗಳನ್ನು ಈ ಕಾರ್ಯಕ್ರಮದಲ್ಲಿ ಅಳವಡಿಸಿರುವುದು ವಿಶಿಷ್ಟ ಎಂದು ತಿಳಿಸಿದ್ದಾರೆ.

ಇಂದು ರಾಷ್ಟ್ರೀಯ ಯುವ ದಿನಾಚರಣೆ

ಮೈಸೂರಿನಲ್ಲಿ ಸಾವಿರಾರು ವಿದ್ಯಾರ್ಥಿಗಳಿಂದ ಮೆರವಣಿಗೆ

ಮೈಸೂರು, ಜ.11– ರಾಷ್ಟ್ರೀಯ ಯುವ ದಿನಾಚರಣೆಯ ಅಂಗವಾಗಿ ನಾಳೆ(ಜ.12) ಮೈಸೂರಿನಲ್ಲಿ ನಡೆಯಲಿರುವ ಮೆರವಣಿಗೆಯಲ್ಲಿ ನಗರದ ವಿವಿಧ ಶಾಲೆಯ ಸಾವಿರಾರು ವಿದ್ಯಾರ್ಥಿಗಳು ಹೆಜ್ಜೆ ಹಾಕಲಿದ್ದಾರೆ.

ಮೈಸೂರಿನ ಶ್ರೀರಾಮಕೃಷ್ಣ ಆಶ್ರಮ, ಶ್ರೀ ರಾಮಕೃಷ್ಣ ನೈತಿಕ ಮತ್ತು ಆಧ್ಯಾತ್ಮಿಕ ಶಿಕ್ಷಣ ಹಾಗೂ ರಾಮಕೃಷ್ಣ ವಿದ್ಯಾಸಂಸ್ಥೆಗಳ ಸಹಭಾಗಿತ್ವದಲ್ಲಿ ಗುರುವಾರ ಅದ್ದೂರಿಯಾಗಿ ರಾಷ್ಟ್ರೀಯ ಯುವ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಈ ಕಾರ್ಯಕ್ರಮದಲ್ಲಿ ಮೈಸೂರಿನ ವಿವಿಧ ಪ್ರೌಢಶಾಲೆಗಳಿಂದ ಸುಮಾರು ಒಂದು ಸಾವಿರದ ಐದುನೂರು ವಿದ್ಯಾರ್ಥಿಗಳು ತಮ್ಮ ಶಾಲಾ ಶಿಕ್ಷಕರುಗಳೊಂದಿಗೆ ಮಧ್ಯಾಹ್ನ 3.15ಕ್ಕೆ ರಾಮಕೃಷ್ಣ ಆಶ್ರಮದಲ್ಲಿ ಜಮಾಯಿಸಲಿದ್ದು, ಅಲ್ಲಿಂದ ಮೆರವಣಿಗೆಯ ಮೂಲಕ ಆಕಾಶವಾಣಿ ಎದುರಿನ ಚಲುವಾಂಬ ಉದ್ಯಾನವನದಲ್ಲಿನ ಸ್ವಾಮಿ ವಿವೇಕಾನಂದರ ಪುತ್ಥಳಿಗೆ ಮಾಲಾರ್ಪಣೆ ಮತ್ತು ಆರತಿ ಮಾಡಿದ ನಂತರ ಸಂಜೆ 3.45ಕ್ಕೆ ರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಮುಕ್ತಿದಾನಂದ ಜೀ ಮಹಾರಾಜ್ ಮೆರವಣಿಗೆಗೆ ವಿಧ್ಯುಕ್ತ ಚಾಲನೆ ನೀಡಲಿದ್ದಾರೆ.

ಮೆರವಣಿಗೆಯು ಒಂಟಿಕೊಪ್ಪಲ್ ರಸ್ತೆಯಲ್ಲಿ ಮುಂದುವರೆದು, ಮಾತೃಮಂಡಳಿ ವೃತ್ತವನ್ನು ಬಳಸಿ ವಿ.ವಿ. ಮೊಹಲ್ಲಾ ಅಂಚೆಕಚೇರಿ ರಸ್ತೆ ಮೂಲಕ ಸಾಗಿ ಶ್ರೀರಾಮಕೃಷ್ಣ ವಿದ್ಯಾಶಾಲೆ ತಲುಪಲಿದ್ದು ಅಲ್ಲಿ ಸಾರ್ವತ್ರಿಕ ಸಭೆ ನಡೆದ ನಂತರ ಸಮಾರಂಭ ಮುಕ್ತಾಯವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VILLA PLOTS At Bannur Road
Nr. Jalmahal Resort & DPS
Yesh 9538885813

ಹಸಿರು ನಮ್ಮ ಉಸಿರು

43 ಮೈಸೂರು ಮಿತ್ರ

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸ ಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತು ದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಮೊದಲನೇ ವರ್ಷದ ಪುಣ್ಯಸ್ಮರಣೆ



ಸದಾ ನಿಮ್ಮ ನೆನಪಿನಲ್ಲಿರುವ ನಿಮ್ಮ ಪತ್ನಿ ಭಾಗ್ಯ ಎಸ್, ಮಕ್ಕಳು ಮತ್ತು ಕುಟುಂಬವರ್ಗದವರು ಬೇಬಿನಹಳ್ಳಿ ಗ್ರಾಮ, ಕೇತುಪುರ ಪೋಸ್ಟ್, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ

ದಿ|| ಪಟೇಲ್ ಶಿವಸ್ವಾಮಿ.ಬಿ

ನಿಧನ: 12.01.2022

ವಿದೇಶ ಪ್ರವಾಸ



12.01.2023 ರಂದು ಶ್ರೀಲಂಕಾ ದೇಶದ ಪ್ರವಾಸಕ್ಕೆ ತೆರಳುತ್ತಿರುವ ರವಿ.ಟಿ.ಆರ್ ರವರಿಗೆ ಶುಭಾಶಯಗಳು

ಶುಭಕೋರುವವರು: ತಾಯಿ ರಾಜಮ್ಮ, ಹೆಂಡತಿ ಶ್ರೀಮತಿ ಮಮತ ಹಾಗೂ ಕುಟುಂಬವರ್ಗ ತಲಕಾಡು: 9739315391

ಬೇಕಾಗಿದ್ದಾರೆ

ಮಾರ್ಕೆಟಿಂಗ್ EXE (Office) / ಸೆಕ್ರೆಟರಿ/ಸಂಯೋಜಕರು

ತಕ್ಷಣದ ನೇಮಕಾತಿಗಾಗಿ ಕೊಲಂಬಿಯಾ ಏಷ್ಯಾ ಆಸ್ಪತ್ರೆಯಿಂದ ಕೇವಲ 4 ಕಿಮೀ. ದೂರದಲ್ಲಿ ನೆಲೆಗೊಂಡಿರುವ ಪ್ರತಿಷ್ಠಿತ ಕಂಪನಿಗೆ

Email:info@nectarfreshfoods.com
Ph: 9448283983

ವಿದೇಶ ಪ್ರವಾಸ



12.01.2023 ರಂದು ಶ್ರೀಲಂಕಾ ದೇಶದ ಪ್ರವಾಸಕ್ಕೆ ತೆರಳುತ್ತಿರುವ ಶ್ರೀ ಮಲ್ಲಪ್ಪಾ ಬಾಳಪ್ಪಾ ಭಜಂತ್ರಿ ರವರಿಗೆ ಶುಭಾಶಯಗಳು

ಶುಭಕೋರುವವರು: ಲಕ್ಷ್ಮಿ: ಹೆಂಡತಿ, ಗಂಗವ್ವಾ-ತಾಯಿ, ಸಾನ್ವಿ, ಸಮೀಕ್ಷಾ -ಮಕ್ಕಳು, ಐಐಎಫ್ ಎಲ್ ಸಿಬ್ಬಂದಿ ಹಾಗೂ ಕುಟುಂಬವರ್ಗ, ಪಾಮಲದಿನ್ನಿ, ಬೆಳಗಾವಿ. 9108812452

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು.

ಝಾನ್ಸಿಲಕ್ಷ್ಮೀಬಾಯಿ ರಸ್ತೆ, ಮೈಸೂರು–570005

ಸಂಖ್ಯೆ:ಮೈನಪ್ರಾ:ನಯೋಶಾ:ಭೂಉಬ:ನಯೋ–1:2022–23 ದಿನಾಂಕ: 09.01.2023

ಸಾರ್ವಜನಿಕ ಪ್ರಕಟಣೆ

ಕರ್ನಾಟಕ ನಗರ ಮತ್ತು ಗ್ರಾಮ ಯೋಜನಾ ಕಾಯ್ದೆ 1961ರ ಪ್ರಕರಣ 14(ಎ)ರನ್ವಯ

ಮೈಸೂರು ತಾಲ್ಲೂಕು, ವರುಣ ಹೋಬಳಿ, ವಾಜಮಂಗಲ ಗ್ರಾಮದ ಸರ್ವೆ ನಂ. 211/1ರಲ್ಲಿ 00 ಎಕರೆ 21 ಗುಂಟೆ ವಿಸ್ತೀರ್ಣದ ಜಮೀನಿನ ಭೂ ಉಪಯೋಗವನ್ನು ಕೆ.ಟಿ.ಸಿ.ಪಿ ಕಾಯ್ದೆ 1961ರ ಪ್ರಕರಣ 14(ಎ)ರನ್ವಯ **ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ** ಭೂ ಉಪಯೋಗ ಬದಲಾವಣೆ ಮಾಡುವಂತೆ ಶ್ರೀ ಎಸ್.ಬಿ.ಮುದಪ್ಪ ಇವರು ಅರ್ಜಿ ಸಲ್ಲಿಸಿರುತ್ತಾರೆ. ಭೂ ಉಪಯೋಗ ಬದಲಾವಣೆಯಿಂದ **"ಈ ಜಮೀನುಗಳಲ್ಲಿ ವಿನ್ಯಾಸ ಅಭಿವೃದ್ಧಿಪಡಿಸುವುದರಿಂದ ಬಡವರು ಮತ್ತು ಮಧ್ಯಮ ವರ್ಗದವರಿಗೆ ಹಾಗೂ ಸಾರ್ವಜನಿಕರಿಗೆ ಅಗತ್ಯ ಸೌಲಭ್ಯ ದೊರೆಯುತ್ತದೆ. ವಿನ್ಯಾಸ ಅಭಿವೃದ್ಧಿ ಕಾಮಗಾರಿಗಳು ನಡೆಯುವ ಸಂದರ್ಭದಲ್ಲಿ ಕೂಲಿ ಕಾರ್ಮಿಕರಿಗೆ ಉದ್ಯೋಗ ದೊರಕುತ್ತದೆ ಮತ್ತು ಈ ವಿನ್ಯಾಸ ಅಭಿವೃದ್ಧಿಯಿಂದ ಸುತ್ತಲಿನ ಪ್ರದೇಶದ ಅಭಿವೃದ್ಧಿ ಹೊಂದುತ್ತದೆ"** ಎಂದು ಸಾರ್ವಜನಿಕ ಹಿತಾಸಕ್ತಿ ಕುರಿತು ಮನವಿಯಲ್ಲಿ ತಿಳಿಸಿರುತ್ತಾರೆ. ಸದರಿ ಜಮೀನಿನ ಭೂ ಉಪಯೋಗದ ಬದಲಾವಣೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಸಾರ್ವಜನಿಕರು ಈ ಪ್ರಕಟಣೆಯು ಪತ್ರಿಕೆಯಲ್ಲಿ ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ನಗರ ಯೋಜಕ ಸದಸ್ಯರು, ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು–570005 ಇವರಿಗೆ ಮುದ್ದಾಂ ಅಥವಾ ನೋಂದಾಯಿತ ಅಂಚೆ ಮೂಲಕ ತಲುಪಿಸಬಹುದಾಗಿದೆ.



ಸಹಿ/– ನಗರ ಯೋಜಕ ಸದಸ್ಯರು, ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಷೆಡ್ಯೂಲ್‌ನಲ್ಲಿ ವಿವರಿಸಿರುವ ಸ್ವತ್ತಿನ ಮಾಲೀಕರಾದ ಶ್ರೀ. ನಾರಾಯಣ ಎಂ., ರವರ ಮಗ ಶ್ರೀ. ಸುಮಂತ್ ಕುಮಾರ್ ಎಂ. ಎನ್., ರವರು ಷೆಡ್ಯೂಲ್ ಸ್ವತ್ತನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಒಪ್ಪಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ–ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 7 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ತಪ್ಪಿದ್ದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿ ನಂತರ ಬರುವ ಆಕ್ಷೇಪಣೆ, ತಂಟೆ–ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ:ಮೈಸೂರು ಸಿಟಿ, ವಿಜಯನಗರ 4ನೇ ಹಂತ 2ನೇ ಫೇಸ್ ಬಡಾವಣೆಯಲ್ಲಿರುವ ನಿವೇಶನ ಸಂಖ್ಯೆ 9371, ಮುಡಾ ಪಿಐಡಿ ನಂ. 76580ರ ವಿಸ್ತೀರ್ಣ ಪೂರ್ವ ಪಶ್ಚಿಮ: 12.00 ಮೀಟರ್ ಮತ್ತು ಉತ್ತರ ದಕ್ಷಿಣ: 09 ಮೀಟರ್, ಒಟ್ಟು 108.00 ಚದರ ಮೀಟರ್‌ಗಳುಳ್ಳ ಸ್ವತ್ತಿಗೆ ಚಕ್ಕುಬಂದಿ ಪೂರ್ವಕ್ಕೆ: 09 ಮೀಟರ್ ರಸ್ತೆ, ಪಶ್ಚಿಮಕ್ಕೆ: ನಿವೇಶನ ಸಂಖ್ಯೆ 9361, ಉತ್ತರಕ್ಕೆ: ನಿವೇಶನ ಸಂಖ್ಯೆ 9372, ದಕ್ಷಿಣಕ್ಕೆ: ನಿವೇಶನ ಸಂಖ್ಯೆ 9370.

ಸಹಿ/– ಶ್ರೀಲತಾ ದೀಕ್ಷಿತ್
ವಕೀಲರು,ಎಸ್.ಎಲ್.ಡಿ. ಲಾ ಫರ್ಮ್,
ನಂ. 1458/ಎ, ನಾರಾಯಣಶಾಸ್ತ್ರಿ ರಸ್ತೆ, ಸಪ್ನ ಬುಕ್ ಹೌಸ್ ಹತ್ತಿರ, ಮೈಸೂರು.ಮೊ: 9844640641
email: sldlawfirm2021@gmail.com

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು

ಜೆ.ಎಲ್.ಬಿ ರಸ್ತೆ, ಮೈಸೂರು–570005, ದೂರವಾಣಿ/ಫ್ಯಾಕ್ಸ್:0821–2420624

ಸಂಖ್ಯೆ: ಮೈನಾಪ್ರಾ/ಅಅ/ಪಿಬಿ/ಟಿಎನ್/16/2022–23 ದಿನಾಂಕ: 09.01.2023

ಅಲ್ಪಾವಧಿ ಇ-ಟೆಂಡರ್ ಪ್ರಕಟಣೆ

(ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಮಾತ್ರ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದ್ಯಾದೇಶ 1999–2000ರ ಪ್ರಕಾರ ಆಕ್ಟ್ 2000ರ ನಿಯಮದಂತೆ ಸ್ಟಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ ನಿಯಮದನ್ವಯ ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ರೂ.4.99 ಲಕ್ಷದಿಂದ ರೂ.500.00 ಲಕ್ಷಗಳ ಅಂದಾಜು ಮೊತ್ತದ ಒಟ್ಟು 10 ಸಂಖ್ಯೆ ವಿವಿಧ ಕಾಮಗಾರಿಗಳಿಗೆ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಕ್ರಮ ಸಂಖ್ಯೆ 01 ರಿಂದ 07ರ ಕಾಮಗಾರಿಗಳಿಗೆ ಇ–ಪೋರ್ಟಲ್‌ನಲ್ಲಿ ದಿನಾಂಕ: 11.01.2023ರಿಂದ ಪಡೆಯಬಹುದಾಗಿದ್ದು, ಟೆಂಡರ್ ಸಲ್ಲಿಸಲು ದಿನಾಂಕ:18.01.2023ರ ಸಂಜೆ 4.00 ಗಂಟೆಯವರೆಗೆ ಸಮಯವನ್ನು ನಿಗಧಿಪಡಿಸಲಾಗಿದ್ದು, ತಾಂತ್ರಿಕ ಮತ್ತು ಆರ್ಥಿಕ ಬಿಡ್ಡನ್ನು ದಿನಾಂಕ: 19.01.2023ರ ಸಂಜೆ 4.30ರ ನಂತರ ತೆರೆಯಲಾಗುವುದು.

ಕ್ರಮ ಸಂಖ್ಯೆ 08 ರಿಂದ 10 ರ ಕಾಮಗಾರಿಗಳಿಗೆ ಇ–ಪೋರ್ಟಲ್‌ನಲ್ಲಿ ದಿನಾಂಕ: 12.01.2023 ರಿಂದ ಪಡೆಯಬಹುದಾಗಿದ್ದು, ಟೆಂಡರ್ ಸಲ್ಲಿಸಲು ದಿನಾಂಕ 27.01.2023ರ ಸಂಜೆ 4.00 ಗಂಟೆಯವರೆಗೆ ಸಮಯವನ್ನು ನಿಗದಿಪಡಿಸಲಾಗಿದ್ದು, ತಾಂತ್ರಿಕ ಬಿಡ್ಡನ್ನು ದಿನಾಂಕ: 30.01.2023ರ ಸಂಜೆ 4.30ರ ನಂತರ ತೆರೆಯಲಾಗುವುದು.

ಅರ್ಹ ನೋಂದಾಯಿತ ವಿದ್ಯುತ್ ಮತ್ತು ಸಿವಿಲ್ ಗುತ್ತಿಗೆದಾರರು ಕಾಮಗಾರಿಗಳಿಗೆ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ http://eproc.karnataka.gov.in ಮುಖಾಂತರ ನಿಯಮಾವಳಿಯಂತೆ ಟೆಂಡರ್ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಈ ಕಛೇರಿಯ ದೂರವಾಣಿ ಸಂಖ್ಯೆ 0821–2420624 ರಿಂದ ಹಾಗೂ ಪ್ರಾಧಿಕಾರದ ವೆಬ್‌ಸೈಟ್ www.mudamysore.gov.in ನಲ್ಲಿ ಪ್ರಕಟಣೆಯ ಮಾಹಿತಿಯನ್ನು ಪಡೆಯಬಹುದು.

ಸಹಿ/–ಅಧೀಕ್ಷಕ ಅಭಿಯಂತರರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರಾದ ಮೈಸೂರು ಸಿಟಿ, ದೇವಾಂಬ ಅಗ್ರಹಾರ, ಸೀತಾ ಕಲ್ಯಾಣ ಮಂಟಪದ ಎದುರು, ಹೊಸ ನಂ. ಕೆ. **12/1**, ನಂ. **419** ರಲ್ಲಿ ಇರುವ ಭೂಲಕ್ಷ್ಮಿ ಗೃಹ ನಿರ್ಮಾಣ ಸಹಕಾರ ಸಂಘ ನಿ., ಸಂಘದ ಪರ ಅಧ್ಯಕ್ಷರಾದ ಶ್ರೀ ಹೆಚ್.ಕೆ. ಮಧುಚಂದ್ರ ಇವರ ಇರಾದೆ ಮೇರೆಗೆ ನೀಡುತ್ತಿರುವ ಸಮಸ್ತ ಸಾರ್ವಜನಿಕರಿಗೆ ತಿಳಿಯಪಡಿಸುತ್ತಿರುವ ಸಾರ್ವಜನಿಕ ನೋಟೀಸ್ / ಪ್ರಕಟಣೆ.

ನಮ್ಮ ಕಕ್ಷಿದಾರರಿಗೂ ಹಾಗೂ ಮೈಸೂರು ಸಿಟಿ, ಗಿರಿಯಬೋವಿಪಾಳ್ಯ, ಇಲ್ಲಿ ವಾಸವಾಗಿರುವ ಶ್ರೀ ಟಿ. ಗೋಪಾಲ್ ಮತ್ತು ಇವರ ಧರ್ಮಪತ್ನಿ ಶ್ರೀಮತಿ ಧನಲಕ್ಷ್ಮಿ ಇವರಿಗೂ ಮತ್ತು ನಮ್ಮ ಕಕ್ಷಿದಾರರ ನಡುವೆ ಭೂ ಅಭಿವೃದ್ಧಿ ಕರಾರು ಷೆಡ್ಯೂಲ್ ಸ್ವತ್ತಿನ ಸಂಬಂಧ ಈಗಾಗಲೇ ಜಿಲ್ಲಾ ನ್ಯಾಯಾಧೀಶ ನ್ಯಾಯಾಲಯ ಹಾಗೂ ಮಧ್ಯಸ್ಥಗಾರಿಕೆ ನ್ಯಾಯಾಲಯ, ಬೆಂಗಳೂರು **(Arbitration)** ಇಲ್ಲಿ ನಿವೃತ್ತ ಉಚ್ಚ ನ್ಯಾಯಾಲಯ ನ್ಯಾಯಮೂರ್ತಿಗಳಾದ ಶ್ರೀ ಅಜೀತ್ ಜೆ ಗುಂಜಾಲ್ ಇವರ ಸಮಕ್ಷಮದಲ್ಲಿ ಮಧ್ಯಸ್ಥಗಾರಿಕೆ ನ್ಯಾಯಾಲಯದಲ್ಲಿ ನಮ್ಮ ಕಕ್ಷಿದಾರರ ಸಂಘದ ಪರ ಆದೇಶವಾಗಿದ್ದು, ಸದರಿ ಆದೇಶದಂತೆ ಷೆಡ್ಯೂಲ್ ಸ್ವತ್ತಿನಲ್ಲಿ **30x40** ಅಡಿ ಅಳತೆಯ **170** ನಿವೇಶನಗಳನ್ನು ಹಾಗೂ **40x60** ಅಡಿ ಅಳತೆಯ **30** ನಿವೇಶನ ಒಟ್ಟು **200** ನಿವೇಶನಗಳನ್ನು ನೀಡಲು ಆದೇಶವಾಗಿದ್ದು, ಈ ಆದೇಶದ ಅನುಪಾಲನೆಗೆ ಪ್ರಕರಣ ಬಾಕಿ ಇದ್ದು, ಈ ಹಂತದಲ್ಲಿ ಷೆಡ್ಯೂಲ್ ಸ್ವತ್ತಿನ ಸಂಬಂಧ ಸಮಸ್ತ ಸಾರ್ವಜನಿಕರು ಯಾವುದೇ ರೀತಿಯ ಕ್ರಯಪತ್ರ, ಭೋಗ್ಯ, ಆಧಾರ, ಕರಾರು, ಅಭಿವೃದ್ಧಿ ಕರಾರು, ಜಿ.ಪಿ.ಎ., ಎಂ.ಓ.ಯು ಇತ್ಯಾದಿ ಯಾವುದೇ ರೀತಿಯ ವ್ಯವಹಾರವನ್ನು ಶ್ರೀ ಟಿ. ಗೋಪಾಲ್ ಮತ್ತು ಶ್ರೀಮತಿ ಧನಲಕ್ಷ್ಮಿ ರವರೊಂದಿಗೆ ಮಾಡಬಾರದೆಂದು ತಿಳಿಯಪಡಿಸಲಾಗಿದೆ. ಒಂದು ವೇಳೆ ಈ ಪ್ರಕಟಣೆ ಇದ್ದಾಗ್ಯೂ ಕ್ರಮ ವಹಿಸಿದ್ದಲ್ಲಿ, ಮುಂದಿನ ವ್ಯವಹಾರ ಸಾರ್ವಜನಿಕರಾದ ನಿಮ್ಮ ವ್ಯವಹಾರ ಕಾನೂನುಬಾಹಿರ ಮತ್ತು ಅಸಿಂಧುವಾಗಿರುತ್ತದೆ ಎಂದು ಈ ಮೂಲಕ ತಿಳಿಯಪಡಿಸುತ್ತಿದ್ದೇವೆ.

ಷೆಡ್ಯೂಲ್

1) ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಹಂಚ್ಯಾ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್ 211/1 ರ ವಿಸ್ತೀರ್ಣ 2 ಎಕರೆ 20 ಗುಂಟೆ.
2) ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಹಂಚ್ಯಾ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್ 211/1 ರ ವಿಸ್ತೀರ್ಣ 4 ಎಕರೆ 38 ಗುಂಟೆ.
3) ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಹಂಚ್ಯಾ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್ 211/2 ರ ವಿಸ್ತೀರ್ಣ 2 ಎಕರೆ.
4) ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಹಂಚ್ಯಾ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್ 211/1 ರ ವಿಸ್ತೀರ್ಣ 2 ಎಕರೆ 20 ಗುಂಟೆ.
5) ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಹಂಚ್ಯಾ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್ 211/2 ರ ವಿಸ್ತೀರ್ಣ 2 ಎಕರೆ 20 ಗುಂಟೆ.
6) ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಹಂಚ್ಯಾ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್ 219/2 ರ ವಿಸ್ತೀರ್ಣ 1 ಎಕರೆ 6.08 ಗುಂಟೆ ($6^1/_2$ ಗುಂಟೆ).

ಸಹಿ/– ಕೆ.ಆರ್. ಶಿವಶಂಕರ್, ಬಿ.ಎಸ್ಸಿ, ಎಲ್.ಎಲ್.ಎಂ.
ವಕೀಲರು, ನಂ. 1466/1, 3ನೇ ಕ್ರಾಸ್, ತ್ಯಾಗರಾಜ ರಸ್ತೆ, ಮೈಸೂರು
ಮೊ: 9448413041

ದಿನಾಂಕ:
ಸ್ಥಳ: ಮೈಸೂರು